ಸಂಪುಟ: 05 ಸಂಚಿಕೆ: 299 ಪುಟಗಳು: 08 ಸೋಮವಾರ 12 ಜನವರಿ 2026 www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ಸುಳ್ಳು ಹೇಳಿ ಮನಸ್ಸು ಸಮಾಧಾನ ಪಡಿಸುವ ಕಲೆ ಹಲವರಿಗೆ ಕರಗತವಾಗಿರುತ್ತದೆ...!! ಆದರೆ ತಮ್ಮನ್ನು ವಿರೋಧಿಸಿದರೂ ಪರವಾಗಿಲ್ಲ ಸತ್ಯ ಹೇಳುವ ತಾಕತ್ತು ಕೆಲವರಿಗೆ ಮಾತ್ರ ಇರುತ್ತದೆ...!!

## ಅಕ್ಕಪಕ್ಕದಲ್ಲಿ ಇರುವವರೇ ನಿಮಗೆ ಮೋಸ ಮಾಡುತ್ತಾರೆ, ಎಚ್ಚರ: ಡಿಕೆಶಿ

• ಉದಯವಾಹಿನಿ, ಬೆಂಗಳೂರು

ನಾನು ರಾಜಕೀಯ ಹಿನ್ನೆಲೆಯ ಕುಟುಂಬದಿಂದ ಬಂದವನಲ್ಲ. ಆದರೂ ಈ ಮಟ್ಟಕ್ಕೆ ಬಂದಿದ್ದೇನೆ. ಮುಂದೆಯೂ ನನ್ನ ಬಗ್ಗೆ ಪಕ್ಷದವರು ತೀರ್ಮಾನ ಮಾಡುತ್ತಾರೆ ಎಂಬ ನಂಬಿಕೆ, ಆತ್ಮವಿಶ್ವಾಸವಿದೆ ಎಂದು ಡಿಸಿಎಂ ಡಿಕೆ ಶಿವಕುಮಾರ್ ಅವರು ವಿಶ್ವಾಸ ವ್ಯಕ್ತಪಡಿಸಿದರು.

ಅಧಿವೇಶನದಲ್ಲಿ ಒಮ್ಮೆ ಯಡಿಯೂರಪ್ಪ ಅವರಿಗೆ ಯಶಸ್ಸಿನ ಬಗ್ಗೆ ಒಂದು ಮಾತು ಹೇಳಿದ್ದೆ. ನಾವು ಬದುಕಿನಲ್ಲಿ ಯಶಸ್ಸು ಸಾಧಿಸಬೇಕಾದರೆ ನಮ್ಮಲ್ಲಿ ಧರ್ಮರಾಯನ ಧರ್ಮತ್ವ, ಕರ್ಣನ ದಾನತ್ವ, ಅರ್ಜುನನ ಗುರಿ, ವಿಧುರನ ನೀತಿ, ಭೀಮನ ಬಲ, ಕೃಷ್ಣನ ತಂತ್ರ ಇರಬೇಕು. ಆಗ ಯಶಸ್ಸು ಸಾಧಿಸಲು ಸಾಧ್ಯ. ನಾನು ರಾಜಕೀಯವಾಗಿ ಅನೇಕ ಏಟು ತಿಂದಿದ್ದೇನೆ. ನನ್ನನ್ನು ಬಂಡೆ ಎನ್ನುತ್ತಾರೆ. ಬಂಡೆ ಪ್ರಕೃತಿ, ಕಡಿದರೆ ಆಕೃತಿ, ಪೂಜಿಸಿದರೆ ಸಂಸ್ಕೃತಿ. ಚಿನ್ನಕ್ಕೆ ಹೆಚ್ಚು ಶಾಖ ಕೊಟ್ಟು ಕರಗಿಸಿದಾಗ ಮಾತ್ರ ಆಭರಣ ಮಾಡಬಹುದು. ನೀವು ಯಾವತ್ತೂ ನಿಷ್ಪ್ರಯೋಜಕ, ಸಣ್ಣವ ಎಂದು ಭಾವಿಸಬೇಡಿ. ನೀವು ನಿಮ್ಮ ಕರ್ತವ್ಯ ಮಾಡಿ. ಯಾರು ಯಾವಾಗ ಬೇಕಾದರೂ ಏನಾದರೂ ಆಗಬಹುದು. ನಾನು ರಾಜಕೀಯ ಹಿನ್ನೆಲೆಯ ಕುಟುಂಬದಿಂದ ಬಂದವನಲ್ಲ. ಆದರೂ ಈ ಮಟ್ಟಕ್ಕೆ ಬಂದಿದ್ದೇನೆ ಎಂದು ಹೇಳಿದರು.

## ಬಸವರಾಜ ರಾಯರೆಡ್ಡಿ ನಡೆ ಪಕ್ಷಕ್ಕೆ ಒಳ್ಳೆಯದಲ್ಲ, ಬಸವರಾಜ್ ಶಿವಗಂಗಾ ಗರಂ

• ಉದಯವಾಹಿನಿ, ಬೆಂಗಳೂರು

2028 ರವರೆಗೆ ಸಿದ್ದರಾಮಯ್ಯ ಅವರು ಸಿಎಂ ಆಗಲಿ ಎಂದು ಶಾಸಕ ಬಸವರಾಜ ರಾಯರೆಡ್ಡಿ ಪತ್ರ ಬರೆದಿರುವುದು ಪಕ್ಷಕ್ಕೆ ಒಳ್ಳೆಯದಲ್ಲ ಎಂದು ಡಿಕೆ ಶಿವಕುಮಾರ್ ಆಪ್ತ ವಲಯದಲ್ಲಿ ಗುರುತಿಸಿಕೊಂಡ ಶಾಸಕ ಬಸವರಾಜ್ ಶಿವಗಂಗಾ ಆಕ್ರೋಶ ವ್ಯಕ್ತಪಡಿಸಿದ್ದಾರೆ. ಈ ಕುರಿತಾಗಿ ಅವರು ಬೆಂಗಳೂರಿನಲ್ಲಿ ಮಾತನಾಡಿ, ಬಸವರಾಜ ರಾಯರೆಡ್ಡಿ ಹಿರಿಯರಿದ್ದಾರೆ, ಅವರ ಮಾತನ್ನು ಹೈಕಮಾಂಡ್ ಗಮನಿಸಬೇಕಾಗಿದೆ ಎಂದರು. ಪಕ್ಷದ ಆಂತರಿಕ ಬೆಳವಣಿಗೆಗಳ ಬಗ್ಗೆ ಯಾರೂ ಮಾತನಾಡಬೇಡಿ ಎಂದು ಹೈಕಮಾಂಡ್ ಸೂಚನೆ ನೀಡಿದೆ. ನಾವು ಹೈ ಕಮಾಂಡ್ ತೀರ್ಮಾನಕ್ಕೆ ಬದ್ದ. ಹಾಗಿರುವಾಗ ರಾಯರೆಡ್ಡಿ ಹೇಳಿಕೆ ಪರಿಗಣಿಸೋದು ಬೇಡ. ಹೈ ಕಮಾಂಡ್ ಕೂಡಾ ಇದನ್ನು ಗಮನಿಸಬೇಕಾಗಿದೆ. ಇದು ಪಕ್ಷದ ಹಿತದೃಷ್ಟಿಯಿಂದ ಒಳ್ಳೆಯದಲ್ಲ ಎಂದರು.

## 2ಎ ಪ್ರವರ್ಗಕ್ಕೆ ನಾಮಧಾರಿ ಒಕ್ಕಲಿಗರು: ಪ್ರಾಮಾಣಿಕ ಪ್ರಯತ್ನ: ಹೆಚ್‌ಡಿಕೆ

• ಉದಯವಾಹಿನಿ, ಬೆಂಗಳೂರು

ಅತ್ಯಂತ ಸಣ್ಣ ಪ್ರಮಾಣದಲ್ಲಿರುವ ನಾಮಧಾರಿ ಒಕ್ಕಲಿಗ ಸಮುದಾಯವನ್ನು 2ಎ ಪ್ರವರ್ಗಕ್ಕೆ ಸೇರಿಸುವ ಪ್ರಯತ್ನಕ್ಕೆ ನಾನು ಪ್ರಾಮಾಣಿಕವಾಗಿ ಬೆಂಬಲ ನೀಡುತ್ತೇನೆ. ನಿಮ್ಮೊಂದಿಗೆ ನಾನು ಪ್ರಯತ್ನ ಮಾಡುತ್ತೇನೆ ಎಂದು ಕೇಂದ್ರದ ಬೃಹತ್ ಕೈಗಾರಿಕೆ ಮತ್ತು ಉಕ್ಕು ಖಾತೆ ಸಚಿವ ಹೆಚ್.ಡಿ.ಕುಮಾರಸ್ವಾಮಿ ಭರವಸೆ ನೀಡಿದರು. ಕೆ.ಆರ್. ನಗರದಲ್ಲಿ ನಾಮಧಾರಿ ಸಮುದಾಯ ಭವನದ ಬೆಳ್ಳಿಹಬ್ಬದ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಮಾತನಾಡಿದ ಕೇಂದ್ರ ಸಚಿವರು, ಈ ಬಗ್ಗೆ ನೀವು ಸಂಪೂರ್ಣ ಮಾಹಿತಿ ತೆಗೆದುಕೊಂಡು ಬನ್ನಿ. ಹಿಂದುಳಿದ ವರ್ಗಗಳ ಆಯೋಗಕ್ಕೆ, ರಾಜ್ಯ ಸರ್ಕಾರಕ್ಕೆ ನೀಡಿರುವ ಅರ್ಜಿ, ಇನ್ನಿತರ ಬೇಡಿಕೆಗಳ ಮಾಹಿತಿ ಜತೆ ನನ್ನ ಬಳಿಗೆ ಬನ್ನಿ. ನಾನು ಈ ನಿಟ್ಟಿನಲ್ಲಿ ಪ್ರಾಮಾಣಿಕವಾಗಿ ಪ್ರಯತ್ನ ಮಾಡುತ್ತೇನೆ ಎಂದರು.

## ಕುರ್ಚಿ ಕಾಳಗ ವದಂತಿ ಸಿದ್ದು ಸಿಡಿಮಿಡಿ

• ಉದಯವಾಹಿನಿ ಮಂಗಳೂರು

ರಾಜ್ಯದಲ್ಲಿ ಕುರ್ಚಿಗಾಗಿ ಯಾವುದೇ ಕಾಳಗ ನಡೆಯುತ್ತಿಲ್ಲ. ಈ ವಿಚಾರವಾಗಿ ಅನಗತ್ಯವಾದ ಚರ್ಚೆಗಳು ನಡೆಯುತ್ತಿವೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಖಾರವಾಗಿ ಪ್ರತಿಕ್ರಿಯಿಸಿದ್ದಾರೆ.ಮಂಗಳೂರಿನಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿರುವ ಅವರು, ಕುರ್ಚಿ ಕಾಳಗ ಎಂಬುದೇ ಇಲ್ಲ. ಎಲ್ಲಿ ? ಯಾರು ? ಕಿತ್ತಾಡುತ್ತಿದ್ದಾರೆ ಎಂಬುದನ್ನು ತೋರಿಸಿ. ಅನಗತ್ಯವಾಗಿ ಈ ವಿಚಾರ ಕುರಿತು ವದಂತಿ ಹರಡಬಾರದು ಎಂದರು. ಬಿಜೆಪಿ ಸಾಮಾಜಿಕ ಜಾಲತಾಣದಲ್ಲಿ ಸಂಕ್ರಾಂತಿಯ ನಂತರ ಕುರ್ಚಿ ಕಾಳಗ ಭಾಗ-2 ಆರಂಭವಾಗುತ್ತದೆ ಎಂದಿರುವುದಕ್ಕೆ ಕಾಳಗ ಎಲ್ಲಿದೆ ತೋರಿಸಿ ಎಂದು ಸವಾಲು ಹಾಕಿದರು. ದ್ವೇಷ ಭಾಷಣ ಮಸೂದೆಯನ್ನು ವಿಧಾನಮಂಡಲದಲ್ಲಿ ಅಂಗೀಕರಿಸಲಾಗಿದೆ. ರಾಜ್ಯಪಾಲರು ಅದನ್ನು ಅಂಗೀಕಾರವನ್ನೂ ಮಾಡಿಲ್ಲ, ತಿರಸ್ಕರಿಸಿಯೂ ಇಲ್ಲ ಅಥವಾ ವಾಪಸ್ ಕಳುಹಿಸಿಲ್ಲ. ರಾಜ್ಯಪಾಲರು ನಮ್ಮನ್ನು ಯಾವಾಗ ಕರೆಯುತ್ತಾರೆ ಎಂದು ಕಾಯುತ್ತಿದ್ದೇವೆ. ಕರೆದರೆ ಹೋಗಿ ರಾಜ್ಯಪಾಲರನ್ನು ಭೇಟಿ ಮಾಡಿ ಮಸೂದೆಯ ಬಗ್ಗೆ ವಿವರಣೆ ನೀಡುತ್ತೇವೆ ಎಂದರು. ಪರಿಶಿಷ್ಟ ಜಾತಿಗಳಲ್ಲಿನ ಒಳ ಮೀಸಲಾತಿ ಮತ್ತು ಚಾಮುಂಡೇಶ್ವರಿ ಅಭಿವೃದ್ಧಿ ಪ್ರಾಧಿಕಾರ ರಚನೆ ವಿಧೇಯಕಕ್ಕೆ ರಾಜ್ಯಪಾಲರು ಕೆಲ ಸ್ಪಷ್ಟನೆಗಳನ್ನು ಕೇಳಿದ್ದಾರೆ. ಆ ಮಸೂದೆಗಳ ವಿಷಯವಾಗಿ ರಾಜ್ಯಪಾಲರಿಗೆ ಅಗತ್ಯವಾದ ಮಾಹಿತಿಯನ್ನು ನೀಡಲಾಗುವುದು ಎಂದರು.

# ವಿಕಸಿತ ಭಾರತ ನಮೋ ಸೋಮನಾಥ



## ಸೋಮನಾಥ ದೇಗುಲದ ಮೇಲೆ ಧ್ವಜ ಹಾರಾಡುತ್ತಿದೆ

ಸಾವಿರ ವರ್ಷಗಳ ನಂತರವೂ, ಸೋಮನಾಥ ದೇಗುಲದ ಮೇಲೆ ಧ್ವಜ ಹಾರಾಡುತ್ತಿದೆ. ಇದು ಭಾರತದ ಶಕ್ತಿ ಮತ್ತು ಆತ್ಮವನ್ನು ಜಗತ್ತಿಗೆ ನೆನಪಿಸುತ್ತದೆ. ಸೋಮನಾಥ ದೇಗುಲವನ್ನು ನಾಶಮಾಡಲು ಬಂದವರು ಇಂದು ಇತಿಹಾಸದ ಕೆಲವು ಪುಟಗಳಿಗೆ ಸೀಮಿತರಾಗಿದ್ದಾರೆ. ಸೋಮನಾಥ, ವಿಶಾಲವಾದ ಸಮುದ್ರದ ಪಕ್ಕದಲ್ಲಿ ಇನ್ನೂ ಗಟ್ಟಿಯಾಗಿ ನಿಂತಿದೆ. ಅದರ ನಂಬಿಕೆಯ ಎತ್ತರದ ಧ್ವಜವು ಎತ್ತರದಲ್ಲಿ ಹಾರಾಡುತ್ತಿದೆ ಎಂದರು. ಪ್ರಧಾನಿ ಮೋದಿ ಸೋಮನಾಥವನ್ನು ಭಾರತದ ಶಕ್ತಿ ಮತ್ತು ಸಾಂಸ್ಕೃತಿಕ ಮುಂದುವರಿಕೆಯ ಸಂಕೇತ ಎಂದು ಬಣ್ಣಿಸಿದರು. ವಿಭಜನೆಯಿಂದ ಲಾಭ ಪಡೆಯುವ ಶಕ್ತಿಗಳ ಬಗ್ಗೆ ಎಚ್ಚರಿಕೆ ನೀಡಿದರು. ಶೌರ್ಯ ಯಾತ್ರೆಯು 108 ಕುದುರೆಗಳ ಮೆರವಣಿಗೆ ಒಳಗೊಂಡಿತ್ತು. ಇದು ವೀರತೆ ಮತ್ತು ತ್ಯಾಗವನ್ನು ಸಂಕೇತಿಸುತ್ತದೆ.



1. ಗುಜರಾತ್‌ನ ಸೋಮನಾಥ ದೇಗುಲದಲ್ಲಿ ಪ್ರಧಾನಿ ಮೋದಿ ಶೌರ್ಯ ಯಾತ್ರೆ
2. ಸೋಮನಾಥವು ಭಾರತದ ಧೈರ್ಯ, ಸ್ಥಿತಿಸ್ಥಾಪಕತೆ ಮತ್ತು ಆಧ್ಯಾತ್ಮಿಕ ಶಕ್ತಿಯ ಜೀವಂತ ಸಾಕ್ಷಿ
3. ಸೋಮನಾಥ ದೇಗುಲದ ಮೇಲೆ ಧ್ವಜ ಇನ್ನೂ ಹಾರಾಡುತ್ತಿದೆ

• ಉದಯವಾಹಿನಿ, ದೆಹಲಿ

ಸ್ವಾತಂತ್ರ್ಯದ ನಂತರ ಸೋಮನಾಥ ದೇವಾಲಯ ಪುನರ್ ನಿರ್ಮಾಣ ಕಾರ್ಯ ವಿರೋಧಿಸಿದ ಶಕ್ತಿಗಳು ಇನ್ನೂ ಸಕ್ರಿಯವಾಗಿವೆ. ಭಾರತವು ಅವರನ್ನು ಸೋಲಿಸಲು ಜಾಗರೂಕರಾಗಿರಬೇಕು. ಒಗ್ಗಟ್ಟಾಗಿರಬೇಕು ಮತ್ತು ಶಕ್ತಿಶಾಲಿಯಾಗಿರಬೇಕು ಎಂದು ಪ್ರಧಾನಿ ಮೋದಿ ಕರೆ ನೀಡಿದರು. ಕ್ರಿ.ಶ. 1026ರಲ್ಲಿ ಘಜ್ನಿ ಮಹಮ್ಮದ್ ಸೋಮನಾಥ ದೇವಾಲಯದ ಮೇಲೆ ಆಕ್ರಮಣ ಮಾಡಿದ್ದಕ್ಕೆ 1000 ವರ್ಷ ಕಳೆದ ಹಿನ್ನೆಲೆ ಭಾನುವಾರ ನಡೆದ ಸೋಮನಾಥ ಸ್ವಾಭಿಮಾನ್ ಪರ್ವ್‌ನಲ್ಲಿ ಮಾತನಾಡಿ, ಸೋಮನಾಥದ ಇತಿಹಾಸವು ವಿನಾಶ ಮತ್ತು ಸೋಲಿನದ್ದಲ್ಲ, ಬದಲಾಗಿ ಗೆಲುವು ಮತ್ತು ನವೀಕರಣದದ್ದಾಗಿದೆ. ಮೂಲಭೂತವಾದಿ ಆಕ್ರಮಣಕಾರರು ಈಗ ಇತಿಹಾಸದ ಪುಟಗಳಿಗೆ ಸೀಮಿತವಾಗಿರುವ ಕಾಲಚಕ್ರ ಇದು. ಸೋಮನಾಥ ದೇವಾಲಯವು ಇನ್ನೂ ಎತ್ತರವಾಗಿ ನಿಂತಿದೆ ಎಂದರು. 1026ರಲ್ಲಿ ಸೋಮನಾಥ ದೇವಾಲಯದ ಮೇಲೆ ದಾಳಿ ಮಾಡಿದ ಮೊದಲ ವ್ಯಕ್ತಿ ಘಜ್ನಿ ಮಹಮ್ಮದ್. ಆತ ಸೋಮನಾಥವನ್ನು ಕುಗ್ಗಿಸಿದ್ದೇವೆ ಎಂದು ಭಾವಿಸಿದ್ದ. ಆದರೆ ವರ್ಷಗಳಲ್ಲಿ ಅದನ್ನು ಪುನರ್ ನಿರ್ಮಾಣ ಮಾಡಲಾಯಿತು. 12ನೇ ಶತಮಾನದಲ್ಲಿ, ರಾಜ ಕುಮಾರ್‌ಪಾಲ್ ಭವ್ಯವಾದ ದೇವಾಲಯ ನಿರ್ಮಿಸಿದರು ಎಂದು ತಿಳಿಸಿದರು. 13ನೇ ಶತಮಾನದಲ್ಲಿ, ಅಲ್ಲಾವುದ್ದೀನ್ ಖಿಲ್ಜಿ ಸೋಮನಾಥದ ಮೇಲೆ ದಾಳಿ ಮಾಡಿದ. 14ನೇ ಶತಮಾನದ ಆರಂಭದಲ್ಲಿ, ಜುನಾಗಢ್ ರಾಜ ಅದನ್ನು ಪುನರ್ ನಿರ್ಮಿಸಿದರು. ನಂತರ 14ನೇ ಶತಮಾನದ ಆರಂಭದಲ್ಲಿ, ಮುಜಫರ್ ಖಾನ್ ಸೋಮನಾಥದ ಮೇಲೆ ದಾಳಿ ಮಾಡಿದನು. ಆದರೆ ನಾಶ ಮಾಡಲು ವಿಫಲನಾದನು. 15ನೇ ಶತಮಾನದಲ್ಲಿ, ಸುಲ್ತಾನ್ ಅಹ್ಮದ್ ಶಾ ದೇವಾಲಯದ ನಾಶಕ್ಕೆ ಪ್ರಯತ್ನಿಸಿದನು ಮತ್ತು ಅವನ ಮೊಮ್ಮಗ ಅದನ್ನು ಮಸೀದಿಯಾಗಿ ಪರಿವರ್ತಿಸಲು ಪ್ರಯತ್ನಿಸಿದನು. ಮಹಾದೇವನ ಆಶೀರ್ವಾದದಿಂದ ದೇವಾಲಯವು ಮತ್ತೆ ಮೇಲೇರಿತು ಎಂದು ಪ್ರಧಾನಿ ಇತಿಹಾಸದ ಘಟನೆಗಳ ಬಗ್ಗೆ ಹೇಳಿದರು. ಔರಂಗಜೇಬ ಅಪವಿತ್ರಗೊಳಿಸಲು ಪ್ರಯತ್ನಿಸಿದನು, ಆದರೆ ಅಹಲ್ಯಾಬಾಯಿ ಹೋಳ್ಕರ್ ದೇವಾಲಯವನ್ನು ಪುನರ್ ನಿರ್ಮಿಸಿದರು. ಸೋಮನಾಥದ ಇತಿಹಾಸವು ವಿನಾಶ ಮತ್ತು ಸೋಲಿನದ್ದಲ್ಲ. ಆದರೆ ಗೆಲುವು, ಪುನಃಸ್ಥಾಪನೆ ಮತ್ತು ನಮ್ಮ ಪೂರ್ವಜರ ಶೌರ್ಯ ಮತ್ತು ತ್ಯಾಗದ ಇತಿಹಾಸವಾಗಿದೆ. ಧಾರ್ಮಿಕ ಭಯೋತ್ಪಾದನೆ ದಾಳಿ ಮಾಡುತ್ತಲೇ ಇತ್ತು, ಆದರೂ ಪ್ರತಿ ಯುಗದಲ್ಲೂ ಸೋಮನಾಥವು ಉದಯಿಸುತ್ತಲೇ ಇತ್ತು ಎಂದರು.

ಶತಮಾನಗಳಿಂದ ಸೋಮನಾಥ ದೇವಾಲಯ ನಾಶಕ್ಕೆ ಪದೇ ಪದೇ ಪ್ರಯತ್ನಗಳು ನಡೆದಿದ್ದರೂ ಸ್ಥಿತಿಸ್ಥಾಪಕತ್ವ, ನಂಬಿಕೆ ಮತ್ತು ರಾಷ್ಟ್ರೀಯ ಹೆಮ್ಮೆಯ ಪ್ರಬಲ ಸಂಕೇತವಾಗಿ ನಿಂತಿದೆ. ಸಾಮೂಹಿಕ ಸಂಕಲ್ಪ ಮತ್ತು ಅದನ್ನು ಅದರ ಪ್ರಾಚೀನ ವೈಭವ ಪುನಃ ಸ್ಥಾಪಿಸುವ ಪ್ರಯತ್ನಗಳು. ದ್ವೇಷ, ದೌರ್ಜನ್ಯ ಮತ್ತು ಭಯೋತ್ಪಾದನೆಯ ನಿಜವಾದ ಇತಿಹಾಸ ನಮ್ಮಿಂದ ಮರೆಮಾಡಲಾಗಿದೆ ಮತ್ತು ದಾಳಿಯು ದೇವಾಲಯ ಲೂಟಿ ಮಾಡುವ ಪ್ರಯತ್ನ ಎಂದು ನಮಗೆ ಕಲಿಸಲಾಯಿತು ಎಂದು ಹೇಳಿದರು.

ಸ್ವಾತಂತ್ರ್ಯದ ನಂತರ, ಸರ್ದಾರ್ ವಲ್ಲಭಭಾಯಿ ಪಟೇಲ್ ಸೋಮನಾಥ ದೇವಾಲಯವನ್ನು ಪುನರ್ ನಿರ್ಮಿಸುವ ಸಂಕಲ್ಪ ತೊಟ್ಟಾಗ, ಅವರ ಹಾದಿಗೆ ಅಡ್ಡಿ ಉಂಟಾಯಿತು. ತುಷ್ಟೀಕರಣದಲ್ಲಿ ತೊಡಗಿರುವವರು ಉಗ್ರಗಾಮಿ ಮನಸ್ಥಿತಿಯ ಜನರ ಮುಂದೆ ಮಂಡಿಯೂರಿದರು ಎಂದು ಮೋದಿ ಟೀಕಿಸಿದರು. ಸೋಮನಾಥನ ಕಥೆ ಭಾರತದ ಕಥೆಯಾಗಿದೆ. ವಿದೇಶಿ ಆಕ್ರಮಣಕಾರರು ಈ ದೇವಾಲಯದಂತೆ ಭಾರತವನ್ನು ಹಲವು ಬಾರಿ ನಾಶಮಾಡಲು ಪ್ರಯತ್ನಿಸಿದರು. ದಾಳಿಕೋರರು ದೇವಾಲಯವನ್ನು ನಾಶಮಾಡುವ ಮೂಲಕ ಗೆದ್ದಿದ್ದೇವೆ ಎಂದು ಭಾವಿಸಿದ್ದರು. 1,000 ವರ್ಷಗಳ ನಂತರವೂ ಸೋಮನಾಥದ ಧ್ವಜ ಇನ್ನೂ ಎತ್ತರಕ್ಕೆ ಹಾರುತ್ತಿದೆ. ಸಾವಿರ ವರ್ಷಗಳ ಈ ಹೋರಾಟವು ವಿಶ್ವ ಇತಿಹಾಸದಲ್ಲಿ ಯಾವುದೇ ಸಮಾನತೆ ಹೊಂದಿಲ್ಲ ಎಂದು ಹೇಳಿದರು.

## ಪ್ರಧಾನಿ ಮೋದಿಗೆ ಅವಾಚ್ಯ ನಿಂದನೆ: ವಿಡಿಯೋ ವೈರಲ್

ಸಾರ್ವಜನಿಕರು ಪ್ರಶ್ನೆ ಮಾಡಿದ ವೇಳೆ ಉದ್ಧಟತನ ಪ್ರದರ್ಶಿಸಿದ ಇಮ್ತಿಯಾಜ್ ಚಿಂಚಲಿ, ನೇರವಾಗಿ ದೇಶದ ಪ್ರಧಾನಿ ನರೇಂದ್ರ ಮೋದಿ ಅವರ ಹೆಸರನ್ನು ಎಳೆದು ತಂದಿದ್ದಾನೆ. ನಿನಗೆ ದಮ್ಮಿದ್ದರೆ ಹೋಗಿ ಮೋದಿಗೆ ಹೇಳು' ಎನ್ನುತ್ತಾ ಪ್ರಧಾನಿ ಮೋದಿಯವರ ವಿರುದ್ಧ ಅತ್ಯಂತ ಕೆಟ್ಟ ಪದಗಳನ್ನು ಬಳಸಿ ಸಾರ್ವಜನಿಕರ ಮುಂದೆಯೇ ನಿಂದಿಸಿದ್ದಾನೆ. ಈ ಇಡೀ ಘಟನೆಯನ್ನು ಅಲ್ಲಿರುವವರು ಮೊಬೈಲ್‌ನಲ್ಲಿ ಸೆರೆಹಿಡಿದಿದ್ದು, ಸದ್ಯ ಸಾಮಾಜಿಕ ಜಾಲತಾಣಗಳಲ್ಲಿ ಈ ವಿಡಿಯೋ ವೈರಲ್ ಆಗಿದೆ.

## ಮೋದಿಯಿಂದ ಓಂಕಾರ ಮಂತ್ರ ಪಠಣ

ಪ್ರಧಾನಮಂತ್ರಿ ನರೇಂದ್ರ ಮೋದಿ ಅವರು ಸೋಮನಾಥ ದೇವಾಲಯಕ್ಕೆ ಭೇಟಿ ನೀಡಿದ ಸಂದರ್ಭದಲ್ಲಿ ಅತ್ಯಂತ ಭಕ್ತಿಯಿಂದ ಓಂಕಾರ ಮಂತ್ರ ಪಠಣದಲ್ಲಿ ಭಾಗಿಯಾದರು. ಈ ಸಂದರ್ಭದಲ್ಲಿ ಅವರು ರಾಷ್ಟ್ರದ ಏಳಿಗೆಗಾಗಿ ದೇವಾಲಯದಲ್ಲಿ ವಿಶೇಷ ಪೂಜೆ ಮತ್ತು ಪ್ರಾರ್ಥನೆಗಳನ್ನು ಸಲ್ಲಿಸಿದರು. ಈ ಒಂದು ಸಹಸ್ರಮಾನದ ನೆನಪಿಗಾಗಿ ಮತ್ತು ಅಡೆತಡೆಗಳ ನಡುವೆಯೂ ಭಾರತೀಯ ಸಂಸ್ಕೃತಿ ಮತ್ತು ನಂಬಿಕೆ ಅಚಲವಾಗಿ ಉಳಿದಿರುವುದನ್ನು ಸಂಭ್ರಮಿಸಲು ಈ ಕಾರ್ಯಕ್ರಮವನ್ನು ಆಯೋಜಿಸಲಾಗಿದೆ. ಶತಮಾನಗಳಿಂದ ನಡೆದ ಸತತ ದಾಳಿ ಮತ್ತು ವಿನಾಶದ ಪ್ರಯತ್ನಗಳ ಹೊರತಾಗಿಯೂ, ಸೋಮನಾಥ ದೇವಾಲಯವು ಇಂದು ಭಾರತದ ಸ್ಥಿತಿಸ್ಥಾಪಕತ್ವ, ಅಚಲ ನಂಬಿಕೆ ಮತ್ತು ರಾಷ್ಟ್ರೀಯ ಹೆಮ್ಮೆಯ ಶಕ್ತಿಶಾಲಿ ಸಂಕೇತವಾಗಿ ಅಚಲವಾಗಿ ನಿಂತಿದೆ. ಸಾಮೂಹಿಕ ಸಂಕಲ್ಪ ಮತ್ತು ದೇವಾಲಯವನ್ನು ಅದರ ಪುರಾತನ ವೈಭವಕ್ಕೆ ಮರಳಿ ತರಲು ನಡೆಸಿದ ನಿರಂತರ ಪ್ರಯತ್ನಗಳೇ ಈ ಪುನರುತ್ಥಾನಕ್ಕೆ ಕಾರಣವೆಂದು ಬಣ್ಣಿಸಲಾಗಿದೆ.

## ಸೋಮನಾಥ ಸ್ವಾಭಿಮಾನ ಪರ್ವ


ಸೋಮನಾಥ ಸ್ವಾಭಿಮಾನ ಪರ್ವವು ಕೇವಲ ನಾಶದ ಸ್ಮರಣೆಯಲ್ಲ, ಬದಲಿಗೆ ಭಾರತದ ಶಾಶ್ವತ ಅಸ್ತಿತ್ವದ ಆಚರಣೆಯಾಗಿದೆ. ಇದು ಸಾವಿರ ವರ್ಷಗಳ ಪಯಣದ ಹಬ್ಬ. ಇದು ಭಾರತದ ಅಸ್ತಿತ್ವ ಮತ್ತು ಸ್ವಾಭಿಮಾನದ ಹಬ್ಬ ಕೂಡ ಎಂದರು. ಮಹಮ್ಮದ್ ಘಜ್ನಿ ಕಾಲದಿಂದ ಔರಂಗಜೇಬನ ಕಾಲದವರೆಗಿನ ದೇಗುಲದ ಮೇಲಿನ ಪದೇ ಪದೇ ನಡೆದ ದಾಳಿಗಳನ್ನು ಉಲ್ಲೇಖಿಸಿ, ಧಾರ್ಮಿಕ ಮೂಲಭೂತವಾದದಿಂದ ಪ್ರೇರಿತರಾದವರು ಸೋಮನಾಥದಲ್ಲಿ ಅಡಗಿರುವ ಆಧ್ಯಾತ್ಮಿಕ ಕಲ್ಪನೆಯನ್ನು ಅರ್ಥಮಾಡಿಕೊಳ್ಳಲು ವಿಫಲರಾದರು. ಸೋಮನಾಥವು ಅಮೃತದ, ಅಮರತ್ವದ ಕಲ್ಪನೆಯನ್ನು ಮತ್ತು ಸದಾಶಿವ ಮಹಾದೇವನ ಜೀವಂತ ಉಪಸ್ಥಿತಿಯನ್ನು ಹೊಂದಿದೆ. ಇದು ಕರುಣೆ ಅಪಾರ ಶಕ್ತಿ ಎರಡರ ಮೂಲವಾಗಿದೆ ಎಂಬುದನ್ನು ಅವರು ಅರಿತುಕೊಳ್ಳಲಿಲ್ಲ ಎಂದರು.

## ವರದಾ, ಬೇಡ್ತಿ ನದಿ ಜೋಡಣೆ: ಮಠಾಧೀಶರು, ಜನಪ್ರತಿನಿಧಿಗಳ ಜನಜಾಗೃತಿ ಸಭೆ

• ಉದಯವಾಹಿನಿ, ಬೆಂಗಳೂರು

ವರದಾ, ಬೇಡ್ತಿ ನದಿ ಯೋಜನೆ ಜಾರಿಗೆ ಜನಜಾಗೃತಿ ಮೂಡಿಸಲು ಹಾವೇರಿ ಜಿಲ್ಲೆಯಲ್ಲೂ ಮಠಾಧೀಶರು, ಜನಪ್ರತಿನಿಧಿಗಳ ನೇತೃತ್ವದಲ್ಲಿ ಜನರನ್ನು ಸೇರಿಸಿ ಜಾಗೃತಿ ಸಮಾವೇಶ ಮಾಡಲಾಗುವುದು. ಗೊಂದಲ ನಿವಾರಣೆಗೆ ರಾಜ್ಯ ಸರ್ಕಾರ ಸಭೆ ಕರೆಯಲಿ ಎಂದು ಮಾಜಿ ಮುಖ್ಯಮಂತ್ರಿ ಹಾಗೂ ಸಂಸದ ಬಸವರಾಜ ಬೊಮ್ಮಾಯಿ ಹೇಳಿದರು. ಉತ್ತರ ಕನ್ನಡ ಜಿಲ್ಲೆಯಲ್ಲಿ ಪಶ್ಚಿಮ ಘಟ್ಟಗಳನ್ನು ಉಳಿಸಿ, ವರದಾ, ಬೇಡ್ತಿ ವಿರೋಧಿಸಿ ಅಭಿಯಾನ ನಡೆಸುತ್ತಿರುವ ಕುರಿತು ಪ್ರತಿಕ್ರಿಯಿಸಿದ ಅವರು, ವರದಾ ಬೇಡ್ತಿ ನದಿ ಜೋಡಣೆ ಯೋಜನೆ ಇಂದಿನದಲ್ಲ. 1994ರಿಂದಲೇ ಇದೆ. ಹೊಸದಾಗಿ ಏನೂ ಯೋಜನೆ ಮಾಡುತ್ತಿಲ್ಲ. ಅಂದಿನ ಯೋಜನೆಗೂ ಇಂದಿನ ಯೋಜನೆಗೂ ವ್ಯತ್ಯಾಸ ಇದೆ. ಈಗ ಪರಿಸರ ಹಾನಿ, ಅರಣ್ಯ ನಾಶ ಏನೂ ಆಗುವುದಿಲ್ಲ. ಬೇಡ್ತಿ ನದಿಯಿಂದ ಕಡಿಮೆ ನೀರನ್ನು ಎತ್ತುತ್ತಿದ್ದೇವೆ, ಯಾವುದೇ ನೀರಿನ ನಷ್ಟ ಆಗುವುದಿಲ್ಲ. ರಾಜ್ಯ ಸರ್ಕಾರ ಆ ಭಾಗದಲ್ಲಿಸ್ವಾಮೀಜಿಗಳ ನೇತೃತ್ವದಲ್ಲಿ ನಡೆದಿರುವ ಹೋರಾಟಕ್ಕೆ ಮನವರಿಕೆ ಮಾಡಿಕೊಡಲಿ ಎಂದು ಹೇಳಿದರು.

**ಚರ್ಚೆಗೆ ಸಿದ್ಧ:** ಈ ವಿಚಾರವಾಗಿ ಮುಕ್ತವಾಗಿ ಚರ್ಚಿಸಲು ವಾಟರ್ ಎಕ್ಸಪರ್ಟ್, ಪರಿಸರ



ವಿಜ್ಞಾನಿಗಳನ್ನು ಕರೆಯಲಿ, ಸೌಹಾರ್ದಯುತ ನಿರ್ಣಯ ತೆಗೆದುಕೊಳ್ಳಬೇಕು. ನಮ್ಮ ಕಡೆ ಬರಗಾಲ ಇದೆ. ಮಳೆಗಾಲದಲ್ಲಿ ನೀರು ಸಂಗ್ರಹ ಮಾಡಿದರೆ ನಮ್ಮ ಭಾಗಕ್ಕೆ ಅನುಕೂಲ ಆಗುತ್ತದೆ. ಇದನ್ನು ಭಾವನಾತ್ಮಕವಾಗಿ ನೋಡಬಾರದು. ಯಾರಿಗೂ ತೊಂದರೆ ಆಗದಂತೆ ಯೋಜನೆ ಮಾಡಬೇಕಿದೆ. ರಾಜ್ಯ ಸರ್ಕಾರ ಡಿಪಿಆರ್ ಮಾಡಲು ಒಪ್ಪಿಗೆ ಕೊಟ್ಟಿದೆ. ಡಿಪಿಆರ್ ಆದ ಬಳಿಕ ರಾಜ್ಯ ಸರ್ಕಾರ ಸಭೆ ಕರೆಯಲಿ. ಯಾವುದೇ ನದಿ ನಿಂತ ನೀರಲ್ಲ. ಕೃಷ್ಣಾ ನದಿ ಮಹಾರಾಷ್ಟ್ರದಲ್ಲಿ ಹುಟ್ಟಿ ಆಂಧ್ರಪ್ರದೇಶ, ಕರ್ನಾಟಕದಲ್ಲಿ ಹರಿಯುತ್ತದೆ. ಬರಿ ಮಹಾರಾಷ್ಟ್ರಕ್ಕೆ ಮಾತ್ರ ಅಲ್ಲ. ವರದಾ ಬೇಡ್ತಿ ಯೋಜನೆ ಆಗಲೇಬೇಕಿದೆ, ಯಾವುದೇ ರೀತಿಯ ಚರ್ಚೆಗೆ ನಾವು ಸಿದ್ಧ. ಗೊಂದಲವನ್ನು ಮಾತುಕತೆ ಮೂಲಕ ಬಗೆಹರಿಸಬೇಕು. ಅದಕ್ಕಾಗಿ ನಾವು ಹಾವೇರಿಯಲ್ಲಿ ಮಠಾಧೀಶರು, ರಾಜಕೀಯ ನಾಯಕರು ಎಲ್ಲರನ್ನೊಳಗೊಂಡ ಸಭೆ ಕರೆಯುತ್ತೇವೆ. ಜನ ಜಾಗೃತಿ, ಜನಾಭಿಪ್ರಾಯ, ಸಮಾವೇಶ ಮಾಡುವ ಮೂಲಕವೂ ಮಾಡುತ್ತೇವೆ ಎಂದು ಹೇಳಿದರು.

# ಸಿದ್ದರಾಮಯ್ಯನವರ ದಾಖಲೆಯ 17ನೇ ಬಜೆಟ್ ಮಂಡನೆಗೆ ಮುಹೂರ್ತ ಫಿಕ್ಸ್..?

## • ಪ್ರತಿ ವರ್ಷ ಫೆಬ್ರವರಿಯಲ್ಲಿ ಕೇಂದ್ರ ಸರ್ಕಾರ ತನ್ನ ಬಜೆಟ್ ಮಂಡಿಸಲಿದೆ, ಆನಂತರ ರಾಜ್ಯ ಬಜೆಟ್ ಮಂಡನೆಯಾಗುವ ಸಾಧ್ಯತೆ ಇದೆ

• ಉದಯವಾಹಿನಿ, ಬೆಂಗಳೂರು

ಅಧಿಕಾರ ಹಂಚಿಕೆಯ ನಡುವೆಯೂ ಅಧಿಕಾರ ಹಂಚಿಕೆಯ ಗೊಂದಲದ ನಡುವೆ ಮುಖ್ಯಮಂತ್ರಿ ಸಿದ್ದರಾಮಯ್ಯ ಮಾರ್ಚ್ ತಿಂಗಳಿನಲ್ಲಿ ತಮ್ಮ ದಾಖಲೆಯ 17ನೇ ಬಜೆಟ್ ಮಂಡನೆಗೆ ಸರ್ವಸಿದ್ಧತೆಗಳನ್ನು ಆರಂಭಿಸಿದ್ದಾರೆ. ಸಂಕ್ರಾಂತಿಯ ನಂತರ ನಾಯಕತ್ವ ಬದಲಾವಣೆಯಾಗಲಿದೆ. ಡಿ.ಕೆ.ಶಿವಕುಮಾರ್ ಮುಖ್ಯಮಂತ್ರಿಯಾಗಲಿದ್ದಾರೆ, ಸಿದ್ದರಾಮಯ್ಯ ಅಧಿಕಾರ ಕಳೆದುಕೊಳ್ಳುತ್ತಾರೆ ಎಂಬೆಲ್ಲ ಚರ್ಚೆಗಳು ಕಳೆದ ಸೆಪ್ಟೆಂಬರ್ ನಿಂದಲೂ ನಡೆಯುತ್ತಲೇ ಇವೆ. ರಾಜಕೀಯವಾದ ಕ್ರಾಂತಿಯ ಈ ಚರ್ಚೆಗಳು ನಾಲ್ಕು ತಿಂಗಳಾದರೂ ತಾರ್ಕಿಕ ಅಂತ್ಯಕ್ಕೆ ಬಂದಿಲ್ಲ.

**ಹಣಕಾಸಿನ ವಿವರ ಕಲೆ ಹಾಕುವಂತೆ ಸಲಹೆ**

ಡಿ.ಕೆ.ಶಿವಕುಮಾರ್ ಅವರ ಬಣದ ಶಾಸಕರು ದೆಹಲಿ ಯಾತ್ರೆ ನಡೆಸಿ ತಮ್ಮ ನಾಯಕರನ್ನು ಮುಖ್ಯಮಂತ್ರಿ ಮಾಡಿ ಎಂದು ಒತ್ತಡ ಹಾಕಿದ್ದರು. ಸಿದ್ದರಾಮಯ್ಯ ಅವರ ಬಣದ ಶಾಸಕರು ಮುಖ್ಯಮಂತ್ರಿಯಾಗಿ ಸಿದ್ದರಾಮಯ್ಯ ಅವಧಿ ಪೂರೈಸಬೇಕು ಎಂದು ಪಟ್ಟು ಹಿಡಿದ್ದಾರೆ. ಡಿ.ಕೆ.ಶಿವಕುಮಾರ್ ಮಾಡಿದ ಕೆಲಸಕ್ಕೆ ಕೂಲಿ ಕೊಡಿ ಕೆಲ ಶಾಸಕರು ಒತ್ತಡ ಹಾಕುತ್ತಿದ್ದಾರೆ. ಇದೆಲ್ಲದರ ನಡುವೆ ನಾಯಕತ್ವ ಮುಂದುವರಿಯಲಿದೆಯೋ ಇಲ್ಲವೋ ಎಂಬ ಗೊಂದಲಗಳು ಬಾರಿ ಚರ್ಚೆಗೆ ಗ್ರಾಸವಾಗಿವೆ.

ಅಂತಹ ಸಂದರ್ಭದಲ್ಲಿ ಎಐಸಿಸಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಖರ್ಗೆ ಅವರು ನಾಯಕತ್ವದ ಗೊಂದಲಗಳನ್ನು ಹೈಕಮಾಂಡ್ ಸೃಷ್ಟಿಸಿಲ್ಲ. ಸ್ಥಳೀಯ ನಾಯಕರೇ ಗೊಂದಲ ಮಾಡಿ ಕೊಂಡಿದ್ದಾರೆ. ಅವರೇ ಬಗೆಹರಿಸಿಕೊಳ್ಳಬೇಕು ಎಂದಿದ್ದರು. ಅಲ್ಲಿಗೆ ಡಿ.ಕೆ. ಶಿವಕುಮಾರ್ ಬಣದ ಉತ್ಸಾಹಕ್ಕೆ ತಣ್ಣೀರು ಎರಚಿದಂತಾಯಿತು. ಸಿದ್ದರಾಮಯ್ಯ ಅವರು ನಿರಾಳರಾಗಿ ತಮ್ಮ ಕೆಲಸವನ್ನು ಮುಂದುವರಿಸಲು ಆರಂಭಿಸಿದ್ದಾರೆ. ಪ್ರತಿ ವರ್ಷ ಫೆಬ್ರವರಿಯಲ್ಲಿ ಕೇಂದ್ರ ಸರ್ಕಾರ ತನ್ನ ಬಜೆಟ್ ಮಂಡಿಸಲಿದೆ. ಆನಂತರ ರಾಜ್ಯ ಬಜೆಟ್ ಮಂಡನೆಯಾಗುವ ಸಾಧ್ಯತೆ ಇದೆ. ಗ್ರೇಟರ್ ಬೆಂಗಳೂರು ವ್ಯಾಪ್ತಿಯ 5 ಪಾಲಿಕೆಗಳು ಸೇರಿದಂತೆ ರಾಜ್ಯದ ನಗರ ಹಾಗೂ ಸ್ಥಳೀಯ ಸಂಸ್ಥೆಗಳ ಚುನಾವಣೆ ಮುಂದಿನ ಏಪ್ರಿಲ್ ಅಥವಾ ಮೇ ನಲ್ಲಿ ಘೋಷಣೆಯಾಗುವ ಸಾಧ್ಯತೆ ಇದೆ. ಅದಕ್ಕಾಗಿ ಬಜೆಟ್‌ನಲ್ಲಿ ಜನಪರ ಯೋಜನೆಗಳನ್ನು ಘೋಷಿಸಲು ಸಿದ್ದರಾಮಯ್ಯ ನಿರ್ಧರಿಸಿದ್ದಾರೆ. ಮಾರ್ಚ್ ಎರಡರಿಂದ ಜಂಟಿ ವಿಧಾನ ಮಂಡಲ ಅಧಿವೇಶನ ಆರಂಭವಾಗಲಿದೆ. ಆರಂಭದ ದಿನದಂದು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಜಂಟಿ ಅಧಿವೇಶನವನ್ನು ಉದ್ದೇಶಿಸಿ ಮಾತನಾಡಲಿದ್ದಾರೆ. ಆ ವಾರ ನಾಲ್ಕು ದಿನಗಳ ಕಾಲ ರಾಜ್ಯಪಾಲರ ಭಾಷಣದ ಮೇಲಿನ ವಂದನಾ ನಿರ್ಣಯದ ಮೇಲೆ ಚರ್ಚೆ ಮತ್ತು ಉತ್ತರ ನಡೆಯಲಿದೆ. ಮಾರ್ಚ್ 6ರಂದು ಶುಕ್ರವಾರ ಮುಖ್ಯಮಂತ್ರಿಯವರು ತಮ್ಮ ಬಜೆಟ್ ಮಂಡಿಸಲಿದ್ದಾರೆ. ಈಗಾಗಲೇ 16 ಬಜೆಟ್‌ಗಳನ್ನು ಮಂಡಿಸಿರುವ ಸಿದ್ದರಾಮಯ್ಯ ಅವರು 17ನೇ ದಾಖಲೆಯ ಬಜೆಟ್ ಮಂಡಿಸುವ ಸಾಧ್ಯತೆ ಇದೆ.





## ಬಜೆಟ್ ಪೂರ್ವ ಮಾಹಿತಿ ಕಲೆ ಹಾಕಲು ಆದೇಶ

ಮೂಲಗಳ ಪ್ರಕಾರ ಮಾರ್ಚ್ 6 ರಂದು ಹಣಕಾಸು ಖಾತೆಯನ್ನು ಹೊಂದಿರುವ ಸಿದ್ದರಾಮಯ್ಯ ಬಜೆಟ್ ಮಂಡಿಸುವ ಸಾಧ್ಯತೆ ಇದೆ. ಇದಕ್ಕಾಗಿ ಈಗಾಗಲೇ ಸಿದ್ದರಾಮಯ್ಯ ಅವರು ಪೂರ್ವ ತಯಾರಿಗಳನ್ನು ಆರಂಭಿಸಿದ್ದಾರೆ. ಎಲ್ಲಾ ಇಲಾಖೆಗಳ ಪ್ರಧಾನ ಕಾರ್ಯದರ್ಶಿಗಳಿಗೂ ಬಜೆಟ್ ಪೂರ್ವ ಮಾಹಿತಿ ಕಲೆ ಹಾಕಲು ಆದೇಶ ನೀಡಿದ್ದಾರೆ. ಕಳೆದ ಬಜೆಟ್‌ನಲ್ಲಿ ಘೋಷಿಸಲಾಗಿದ್ದ ಯೋಜನೆಗಳೆಷ್ಟು, ಎಷ್ಟು ಜಾರಿಗೆ ಬಂದಿವೆ. ಬಾಕಿ ಉಳಿದಿರುವುದೆಷ್ಟು ಬಜೆಟ್ ನಲ್ಲಿ ಮಂಜೂರಾದ ಅನುದಾನದಲ್ಲಿ ಖರ್ಚಾಗಿರುವುದು ಮತ್ತು ಖರ್ಚಾಗದೇ ಇರುವ ಹಣಕಾಸಿನ ವಿವರ ಕಲೆ ಹಾಕುವಂತೆಯೂ ಸಲಹೆ ನೀಡಿದ್ದಾರೆ. ಜೊತೆಗೆ ಮುಂದಿನ ಬಜೆಟಿನಲ್ಲಿ ಘೋಷಿಸಬೇಕಾದ ಹೊಸ ಯೋಜನೆಗಳ ಬಗ್ಗೆಯೂ ಮಾಹಿತಿ ನೀಡುವಂತೆ ತಾಕಿತು ಮಾಡಿದ್ದಾರೆ.

**ಈ ದಿನದ ದರ** ಪೆಟ್ರೋಲ್: 102.90 ₹/L | ಡೀಸೆಲ್ : 90.99 ₹/L | ಬಂಗಾರ: ₹14,046/Gram(24ct) ₹12,875/Gram(22ct) | ಬೆಳ್ಳಿ: ₹260.00/Gram



## ಸಿದ್ಧಸೂಕ್ತಿ

ಡಾ ಆರೂಢಭಾರತೀ ಸ್ವಾಮೀಜಿ
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ
ರಾಮೋಹಳ್ಳಿ

### ಹಿಂದುಧರ್ಮ ದೋಷ - 2

ಹಿಂದುಧರ್ಮದಲ್ಲಿ ಹದಿನಾರು ಸಂಸ್ಕಾರ. ಪ್ರಧಾನ ಉಪನಯನ. ಇದಿಲ್ಲದೇ ವಿದ್ಯಾಭ್ಯಾಸವಿಲ್ಲ. ಅಂದು ವಿದ್ಯೆ ವೇದವಿದ್ಯೆ. ಇದು ಶೂದ್ರ ಹಾಗೂ ಮಹಿಳೆಗೆ ನಿಷಿದ್ಧ. ಹಿಂದುಧರ್ಮದ ಮೂಲ ವೇದಗಳನ್ನು ಶೂದ್ರ ಹಾಗೂ ಮಹಿಳೆ ಓದುವಂತಿಲ್ಲ. ವ್ಯಾಸರ ಬ್ರಹ್ಮಸೂತ್ರಗಳ ಅಪಶೂದ್ರಾಧಿಕರಣದಲ್ಲಿ ಅಭೇದ ಅದ್ವೈತ ಸಿದ್ಧಾಂತ ಪ್ರತಿಪಾದಕ ಶಂಕರಾಚಾರ್ಯರು ಶೂದ್ರನು ವೇದ ಓದುವಂತಿಲ್ಲ, ಆತ ವೇದ ಹೇಳಿದರೆ ನಾಲಿಗೆ ಸೀಳಬೇಕು. ವೇದ ಕೇಳಿಸಿಕೊಂಡರೆ ಕಿವಿಯಲ್ಲಿ ಕಾದ ಸೀಸ ಹುಯ್ಯಬೇಕು ಎಂದಿದ್ದಾರೆ. ಬೆಂಕಿ ಮುಟ್ಟಿದವನನ್ನು ಸುಡುವಂತೆ ವೇದ ಹೇಳಿದವನನ್ನು ಪವಿತ್ರಗೊಳಿಸುವುದು ಹೊರತು ವೇದ ಅಪವಿತ್ರವಾಗದು. ಶೂದ್ರನಿಗೆ ವೇದ ಅಂಟದಿದ್ದರೂ ವಿಶೇಷ ಸಂಸ್ಕಾರ ಲಾಭವುಂಟು ಹೊರತು ನಷ್ಟವಿಲ್ಲ. ಹುಟ್ಟಿನಿಂದ ಪ್ರತಿಯೊಬ್ಬ ಶೂದ್ರ ಸಂಸ್ಕಾರದಿಂದ ಮಾತ್ರ ದ್ವಿಜ ಎಂಬಂಥ ಮಾತು ತಾಳೆಯಾಗುವುದಿಲ್ಲ. ಸಂಸ್ಕಾರಪೂರ್ವದಲ್ಲಿ ಶೂದ್ರ, ಶೂದ್ರನಿಗೆ ಸಂಸ್ಕಾರ ವಿಲ್ಲ, ಬ್ರಾಹ್ಮಣ ಕ್ಷತ್ರಿಯ ವೈಶ್ಯನಿಗೆ ಸಂಸ್ಕಾರ ಎನ್ನುವುದು ಹೇಗೆ? ಬ್ರಾಹ್ಮಣನಿಗೆ ಸಂಸ್ಕಾರವಾದ ಬಳಿಕವೂ ಬ್ರಾಹ್ಮಣನೇ? ಇಂಥ ಅವೈಜ್ಞಾನಿಕ ಸಂಸ್ಕಾರಕ್ರಮವನ್ನು ಧಿಕ್ಕರಿಸಿಯೇ ಬಸವಣ್ಣನವರು ವೇದವಿಮುಖರಾಗಿ ಕನ್ನಡ ವಚನಕ್ಕಿಳಿದರು.

# ಕನ್ನಡ ಚಲನಚಿತ್ರ ನಿರ್ಮಾಪಕರ ಸಂಘದ ಅಧ್ಯಕ್ಷರಾಗಿ ಎಂ.ಜಿ ರಾಮಮೂರ್ತಿ ಆಯ್ಕೆ

• ಉದಯವಾಹಿನಿ, ಬೆಂಗಳೂರು

ಕನ್ನಡ ಚಲನಚಿತ್ರ ನಿರ್ಮಾಪಕರಾದ 2026-28ನೇ ಸಾಲಿನ ಚುನಾವಣೆಯಲ್ಲಿ ಅಧ್ಯಕ್ಷರಾಗಿ ಎಂ.ಜಿ.ರಾಮಮೂರ್ತಿರವರು ಆಯ್ಕೆಯಾಗಿದ್ದಾರೆ. ಈ ಸಂದರ್ಭದಲ್ಲಿ ಮುಖ್ಯ ಚುನಾವಣೆ ಅಧಿಕಾರಿಗಳು ಸಂಜೀವ್ ಸಹಾಯಕ ಚುನಾವಣೆ ಅಧಿಕಾರಿ ಶ್ರೀನಿವಾಸ್ ರವರು ಪ್ರಮಾಣಪತ್ರ ನೀಡಿದರು. ಅಧ್ಯಕ್ಷರಾದ ಎಂ.ಜಿ.ರಾಮಮೂರ್ತಿ. ನಂದಿಯಾಳ್ ಎಸ್ ಜೆ. ಬಾಮ ಗಿರೀಶ್. ಆರ್ ಎಸ್ ಗೌಡ್ರು. ರಮೇಶ್ ಯಾದವ್ ರವರು ಉಪಸ್ಥಿತರಿದ್ದರು. ಇದೇ ಸಂದರ್ಭದಲ್ಲಿ ಎಂ.ಜಿ.ರಾಮಮೂರ್ತಿರವರು ಮಾತನಾಡಿ ಕನ್ನಡ ಚಲನಚಿತ್ರ ಮೇರುನಟ ಡಾ||ರಾಜ್



ಉದಯವಾಹಿನಿ ಚಿತ್ರ

ಕುಮಾರ್ ರವರು ನಿರ್ಮಾಪಕರನ್ನ ಅನ್ನದಾತರು ಎಂದು ಕರೆಯುತ್ತಿದ್ದಾರೆ. ನಿರ್ಮಾಪಕ ಉಳಿದರೆ ಕನ್ನಡ ಚಿತ್ರರಂಗ ಉಳಿಯುತ್ತದೆ. ನಿರ್ಮಾಪಕ ಹಾಕಿದ ಹಣ ವಾಪಸ್ಸು ಬರಬೇಕು. ಕೆಲವು ನಿರ್ಮಾಪಕರು ಆರ್ಥಿಕವಾಗಿ ಸಂಕಷ್ಟದಲ್ಲಿ ಇದ್ದಾರೆ ಅವರನ್ನ ಗುರುತಿಸಿ ನಿರ್ಮಾಪಕರ ಸಂಘದಿಂದ ಆರ್ಥಿಕವಾಗಿ

**ಆರ್ಥಿಕವಾಗಿ ಸಹಾಯ ಮಾಡಬೇಕು ಎಂಬ ಉದ್ದೇಶ**

ಸಹಾಯ ಮಾಡಬೇಕು ಎಂಬ ಉದ್ದೇಶವಿದೆ. ಕನ್ನಡ ಚಲನಚಿತ್ರ ಅನ್ಯ ಭಾಷೆಗಳ ನಡುವೆ ಪೈಪೋಟಿ ಇದೆ, ಕನ್ನಡ ಚಿತ್ರಗಳಿಗೆ ಜನರು ಚಿತ್ರಮಂದಿರಕ್ಕೆ ಬಂದು ನೋಡಿ, ನಿರ್ಮಾಪಕ, ನಿರ್ದೇಶಕ ಮತ್ತು ನಟ, ನಟಿ ಕಲಾವಿದರಿಗೆ ಪ್ರೋತ್ಸಾಹ ನೀಡಬೇಕು ಎಂದು ಹೇಳಿದರು.

## ನಮ್ಮ ಮೆಟ್ರೋ ಗುಲಾಬಿ ಮಾರ್ಗದಲ್ಲಿ ಪರೀಕ್ಷಾರ್ಥ ರೈಲು ಸಂಚಾರ ಶುರು

**ವರ್ಷಾಂತ್ಯದೊಳಗೆ ಈ ಮಾರ್ಗದಲ್ಲಿ ವಾಣಿಜ್ಯ ಕಾರ್ಯಾಚರಣೆ ಶುರು ಮಾಡಲು ಬಿಎಂಆರ್‌ಸಿಎಲ್ ಸಿದ್ಧತೆ**

• ಉದಯವಾಹಿನಿ, ಬೆಂಗಳೂರು

ಬನ್ನೇರುಘಟ್ಟ ರಸ್ತೆಯ ಕಾಳೇನ ಅಗ್ರಹಾರದಿಂದ ತಾವರೆಕೆರೆವರೆಗಿನ 7.5 ಕಿ.ಮೀ. ಉದ್ದದ ಗುಲಾಬಿ ಮಾರ್ಗದಲ್ಲಿ ಪರೀಕ್ಷಾರ್ಥ ಮೆಟ್ರೋ ರೈಲು ಸಂಚಾರವು ಭಾನುವಾರದಿಂದ ಆರಂಭವಾಗಲಿದೆ. ವರ್ಷಾಂತ್ಯದೊಳಗೆ ಈ ಮಾರ್ಗದಲ್ಲಿ ವಾಣಿಜ್ಯ ಕಾರ್ಯಾಚರಣೆ ಶುರು ಮಾಡಲು ಬೆಂಗಳೂರು ಮೆಟ್ರೋ ರೈಲು ನಿಗಮ ನಿಯಮಿತ (ಬಿಎಂಆರ್‌ಸಿಎಲ್) ಸಿದ್ಧತೆ ನಡೆಸಿದೆ.

**ಏಪ್ರಿಲ್‌ವರೆಗೆ ಪರೀಕ್ಷಾರ್ಥ ರೈಲು ಸಂಚಾರ**

ಈ ಮಾರ್ಗದಲ್ಲಿ ಏಪ್ರಿಲ್‌ವರೆಗೆ ಪರೀಕ್ಷಾರ್ಥ ರೈಲು ಸಂಚಾರ ನಡೆಯಲಿದೆ. ಈ ಅವಧಿಯಲ್ಲಿ ಟ್ರ್ಯಾಕ್ಷನ್, ಬ್ರೇಕ್, ಆಸಿಲೇಷನ್, ಸಿಗ್ನಲಿಂಗ್, ವಿದ್ಯುತ್ ಮತ್ತು ದೂರ ಸಂಪರ್ಕ ವ್ಯವಸ್ಥೆ ಸೇರಿದಂತೆ ಇನ್ನಿತರೆ ಹಲವು ಪರೀಕ್ಷೆಗಳನ್ನು ನಡೆಸಲಾಗುತ್ತದೆ. ಬಳಿಕ ಆರ್‌ಡಿಎಸ್‌ಒ, ಸಿಎಂಆರ್‌ಎಸ್ ತಜ್ಞರ ತಂಡಗಳು ಪರಿಶೀಲನೆ ನಡೆಸಿ ವರದಿ ಸಲ್ಲಿಸಲಿವೆ. ಈ ವರದಿ ಆಧರಿಸಿ ಕೇಂದ್ರ ರೈಲು ಮಂಡಳಿಯು ಸುರಕ್ಷತಾ ಪ್ರಮಾಣಪತ್ರ ನೀಡಲಿದ್ದು, ಆನಂತರವೇ ವಾಣಿಜ್ಯ ಸಂಚಾರ ಆರಂಭಿಸಲಾಗುತ್ತದೆ. ಕಾಳೇನ ಅಗ್ರಹಾರದಿಂದ ನಾಗವಾರವರೆಗಿನ 21.56 ಕಿ.ಮೀ. ಉದ್ದದ ಮೆಟ್ರೋ ಮಾರ್ಗ ನಿರ್ಮಾಣ ಕಾಮಗಾರಿಯನ್ನು ಐದು ಪ್ಯಾಕೇಜ್‌ಗಳಲ್ಲಿ ಕೈಗೊಳ್ಳಲಾಗಿದೆ.


ಉದಯವಾಹಿನಿ ಚಿತ್ರ

**ಕಾಳೇನ ಅಗ್ರಹಾರ, ಹುಳಿಮಾವು, ಐಐಎಂಬಿ, ಜೆ.ಪಿ. ನಗರ 4ನೇ ಹಂತ, ತಾವರೆಕೆರೆ ಮೆಟ್ರೋ ಸುರಂಗ ಮಾರ್ಗದಲ್ಲಿ ಬರುವ ನಿಲ್ದಾಣಗಳು: ಡೇರಿ ಸರ್ಕಲ್, ಲಕ್ಕಸಂದ್ರ, ಲ್ಯಾಂಗ್‌ಫೋರ್ಡ್, ರಾಷ್ಟ್ರೀಯ ಮಿಲಿಟರಿ ಶಾಲೆ, ಎಂ.ಜಿ. ರಸ್ತೆ, ಶಿವಾಜಿನಗರ, ಕಂಟೋನ್ಮೆಂಟ್ ನಿಲ್ದಾಣ, ಪಾಟರಿ ಟೌನ್, ಟ್ಯಾನರಿ ರಸ್ತೆ, ವೆಂಕಟೇಶಪುರ, ಕಾಡುಗೊಂಡನಹಳ್ಳಿ, ನಾಗವಾರ**

> **ಸದ್ಯ ಕಾಳೇನ ಅಗ್ರಹಾರದಿಂದ ತಾವರೆಕೆರೆವರೆಗಿನ ಎತ್ತರಿಸಿದ ಮಾರ್ಗದ ನಿರ್ಮಾಣ ಕಾಮಗಾರಿಯು ಬಹುತೇಕ ಪೂರ್ಣಗೊಂಡಿದೆ. ಹೀಗಾಗಿ ಈ ಮಾರ್ಗದಲ್ಲಿ ಇದೀಗ ಪರೀಕ್ಷಾರ್ಥ ಸಂಚಾರ ಶುರುವಾಗಿದೆ. ಈ ಮಾರ್ಗದಲ್ಲಿ ಒಟ್ಟು 5 ನಿಲ್ದಾಣಗಳು ಇವೆ. ಪರೀಕ್ಷಾರ್ಥ ಸಂಚಾರ ಮುಗಿದ ಬಳಿಕ ಸುರಕ್ಷತಾ ಪ್ರಮಾಣಪತ್ರ ಲಭಿಸಿದ ಕೂಡಲೇ ಈ ಮಾರ್ಗದಲ್ಲಿ ವಾಣಿಜ್ಯ ಕಾರ್ಯಾಚರಣೆ ಆರಂಭವಾಗಲಿದೆ**
>
> **ಬೆಂಗಳೂರು ಮೆಟ್ರೋ ರೈಲು ನಿಗಮ ನಿಯಮಿತದ ಅಧಿಕಾರಿಗಳು**

ಇದರಲ್ಲಿ 7.5 ಕಿ.ಮೀ. ಎತ್ತರಿಸಿದ ಮಾರ್ಗವಿದ್ದು, ಉಳಿದ 13 ಕಿ.ಮೀ. ಸುರಂಗ ಮಾರ್ಗವಾಗಿದೆ. ಈ ಮಾರ್ಗವು ಒಟ್ಟು 17 ನಿಲ್ದಾಣಗಳನ್ನು ಒಳಗೊಂಡಿದೆ. ತಾವರೆಕೆರೆಯಿಂದ ನಾಗವಾರವರೆಗಿನ 13 ಕಿ.ಮೀ. ಉದ್ದದ ಸುರಂಗ ಮಾರ್ಗದಲ್ಲಿ 12 ನಿಲ್ದಾಣಗಳು ನಿರ್ಮಾಣವಾಗಲಿವೆ. ಈ ಮಾರ್ಗದಲ್ಲಿ ಸುರಂಗ ಮಾರ್ಗ ಪೂರ್ಣಗೊಂಡ ನಂತರವೇ ಪರೀಕ್ಷಾರ್ಥ ಸಂಚಾರ ಕೈಗೊಳ್ಳಲಾಗುತ್ತದೆ.

## ವಿಚ್ಛೇದಿತ ಮಹಿಳೆಗೆ ರೂ.36 ಲಕ್ಷ ವಂಚನೆ: ಆರೋಪಿ ಪರಾರಿ

• ಉದಯವಾಹಿನಿ, ಬೆಂಗಳೂರು

ವಿಚ್ಛೇದಿತ ಮಹಿಳೆ ಯನ್ನು ಮದುವೆಯಾಗಿ ರೂ.36 ಲಕ್ಷ ಪಡೆದುಕೊಂಡು ವಂಚಿಸಿರುವ ಆರೋಪದಡಿ ವ್ಯಕ್ತಿಯೊಬ್ಬರ ವಿರುದ್ಧ ಬನಶಂಕರಿ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಾಗಿದೆ. ಬನಶಂಕರಿಯ ನಿವಾಸಿ ಮೋಹನ್ ರಾಜ್ ವಂಚನೆ ಆರೋಪ ಎದುರಿಸುತ್ತಿರುವ ವ್ಯಕ್ತಿ. 10 ವರ್ಷಗಳಿಂದ ಮೋಹನ್ ರಾಜ್ ಪರಿಚಯವಿದ್ದು, 2022ರಲ್ಲಿ ಇಬ್ಬರ ನಡುವೆ ಮದುವೆ ನಡೆದಿತ್ತು. 2023ರ ಫೆಬ್ರುವರಿಯಲ್ಲಿ ಮಗು ಜನಿಸಿತ್ತು.



ಕಳೆದ ವರ್ಷ ಆತ ಮನೆ ಬಿಟ್ಟು ಹೋಗಿದ್ದಾನೆ ಎಂದು ಸಂತ್ರಸ್ತೆ ಅಳಲು ತೋಡಿಕೊಂಡಿದ್ದಾರೆ. ಹೊಸ ಮನೆ ಕಟ್ಟೋಣ ಎಂದು ಮೋಹನ್ ರಾಜ್ ನಂಬಿಸಿದ್ದ.

ಆತನ ಮಾತು ನಂಬಿ ಚಿನ್ನಾಭರಣ ಅಡವಿಟ್ಟು ರೂ.36 ಲಕ್ಷ ಸಾಲ ಪಡೆದು ಆತನಿಗೆ ನೀಡಿದ್ದೆ. ಆ ಹಣವನ್ನು ತೆಗೆದುಕೊಂಡು ಪರಾರಿಯಾಗಿದ್ದಾನೆ ಎಂದು ಸಂತ್ರಸ್ತೆ ಆರೋಪಿಸಿದ್ದಾರೆ. ನ್ಯಾಯ ಕೇಳಲು ಹೋದರೆ ನನ್ನ ಮೇಲೆ ಹಲ್ಲೆನಡೆಸಿದ್ದ. ನಾಲ್ಕು ಬಾರಿ ಪೊಲೀಸ್ ಠಾಣೆಗೆ ಹೋಗಿದ್ದರೂ ನ್ಯಾಯ ದೊರೆಯುತ್ತಿಲ್ಲ. ಮತ್ತೆ ದೂರು ನೀಡಿದರೆ ನನ್ನ ಮೇಲೆಯೇ ಕ್ರಮ ತೆಗೆದುಕೊಳ್ಳುವುದಾಗಿ ಪೊಲೀಸರು ಬೆದರಿಕೆ ಹಾಕಿದ್ದರು ಎಂದು ಮಹಿಳೆ ಅಳಲು ತೋಡಿಕೊಂಡಿದ್ದಾರೆ.

## LPG ಗ್ಯಾಸ್ ಸಿಲಿಂಡರ್ ಸ್ಫೋಟ: ಐವರು ಕಾರ್ಮಿಕರಿಗೆ ಗಾಯ

• ಉದಯವಾಹಿನಿ, ಬೆಂಗಳೂರು

ಅಡುಗೆ ಅನಿಲ ಸೋರಿಕೆಯಾಗಿ ಸಿಲಿಂಡರ್ ಸ್ಫೋಟಗೊಂಡ ಪರಿಣಾಮ ಐವರು ಕಾರ್ಮಿಕರು ಗಾಯಗೊಂಡಿರುವ ಘಟನೆ ಪೀಣ್ಯ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ. ಅಂಶುರಾಜ್ ಚೌದರಿ (18), ಹುಸೇನ್ ಖಾನ್ (21), ಮುಜಾಫರ್ ಹುಸೇನ್ (19), ಆರಬೇಗ್ ಆಲಂ (26) ಮತ್ತು ರೋಹಿತ್ ಚೌದರಿ(20) ಗಾಯಗೊಂಡ ಬಿಹಾರ ಮೂಲದ ಕಾರ್ಮಿಕರಾಗಿದ್ದಾರೆ. ಪೀಣ್ಯ ಪೊಲೀಸ್ ಠಾಣೆ ವ್ಯಾಪ್ತಿಯ ನೇತಾಜಿ ನಗರದ 3ನೇ ಕ್ರಾಸ್‌ನಲ್ಲಿರುವ ಮನೆಯೊಂದರಲ್ಲಿ ಐವರು ಕಾರ್ಮಿಕರು ವಾಸವಿದ್ದರು. ಅಡುಗೆ ಅನಿಲ ಸೋರಿಕೆಯಾಗಿರುವುದನ್ನು ಗಮನಿಸದೆ ಶುಕ್ರವಾರ ಬೆಳಗ್ಗೆ 7 ಗಂಟೆ ಸುಮಾರಿಗೆ ಅಂಶುರಾಜ್ ಚೌದರಿ ಎಂಬುವವರು ಕರೆಂಟ್ ಸ್ವಿಚ್ ಆನ್ ಮಾಡಿದ ತಕ್ಷಣ ಸಿಲಿಂಡರ್ ಸ್ಫೋಟಗೊಂಡಿದೆ. ಘಟನೆಯಲ್ಲಿ ಐವರು ಕಾರ್ಮಿಕರು ಗಂಭೀರವಾಗಿ ಗಾಯಗೊಂಡಿದ್ದಾರೆ. ಬಳಿಕ ಸ್ಥಳೀಯರು 112 ಗೆ ಕರೆ ಮಾಡಿ ಮಾಹಿತಿ ನೀಡಿದ್ದು, ಸ್ಥಳಕ್ಕೆ ಧಾವಿಸಿದ ಪೊಲೀಸರು ಗಾಯಾಳುಗಳನ್ನು ವಿಕ್ಟೋರಿಯಾ ಆಸ್ಪತ್ರೆಗೆ ದಾಖಲಿಸಿದ್ದಾರೆ. ಐವರಿಗೆ ಮುಖ ಮತ್ತು ಕೈಗಳಿಗೆ ಸುಟ್ಟಗಾಯಗಳಾಗಿವೆ. ಚಿಕಿತ್ಸೆ ಮುಂದುವರಿದಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ. ಸ್ಫೋಟದ ತೀವ್ರತೆಗೆ ಗೋಡೆ ಗಳು ಬಿರುಕು ಬಿಟ್ಟಿದ್ದು, ಮನೆಯಲ್ಲಿದ್ದ ವಸ್ತುಗಳೆಲ್ಲಾ ಚೆಲ್ಲಾಪಿಲ್ಲಿಯಾಗಿ ಬಿದ್ದಿವೆ. ಪೀಣ್ಯ ಠಾಣೆಯಲ್ಲಿ ಕೇಸ್ ದಾಖಲಾಗಿದೆ.

## ಕೌಟುಂಬಿಕ ಹಿಂಸಾಚಾರ ಸಂತ್ರಸ್ಥರಿಗೆ ಬೆಂಗಳೂರಿನಲ್ಲಿ ಅಣಬೆ ಕೃಷಿ ತರಬೇತಿ

• ಉದಯವಾಹಿನಿ, ಬೆಂಗಳೂರು

ಮಹತ್ವದ ಬೆಳವಣಿಗೆಯಲ್ಲಿ ಕೌಟುಂಬಿಕ ಹಿಂಸಾಚಾರಕ್ಕೆ ತುತ್ತಾದ ಸಂತ್ರಸ್ಥರಿಗೆ ಬೆಂಗಳೂರಿನಲ್ಲಿ ಅಣಬೆ ಕೃಷಿ ತರಬೇತಿ ನೀಡಲಾಗುತ್ತಿದೆ. ಬೆಂಗಳೂರು ನಗರ ಪೊಲೀಸರ ಒಂದು ವಿಭಾಗವಾದ ಪರಿಹಾರ್‌ನ ಕೌಶಲ್ಯ ಅಭಿವೃದ್ಧಿ ಕೇಂದ್ರವು, ಕೌಟುಂಬಿಕ ಹಿಂಸಾಚಾರದಿಂದ ಬದುಕುಳಿದವರು, ಹಿಂದುಳಿದ ಮಹಿಳೆಯರು ಸುಸ್ಥಿರ ಜೀವನೋಪಾಯದ ಮೂಲಕ ಆರ್ಥಿಕ ಸ್ವಾತಂತ್ರ್ಯವನ್ನು ಸಾಧಿಸಲು ಅನುವು ಮಾಡಿಕೊಡಲು ಈ ತಿಂಗಳ ಅಂತ್ಯದ ವೇಳೆಗೆ ಅಣಬೆ ಕೃಷಿ ಕಾರ್ಯಕ್ರಮವನ್ನು ಜಾರಿಗೆ ತರಲು ಸಜ್ಜಾಗಿದೆ. ಪರಿಹಾರ್‌ನ ಉಸ್ತುವಾರಿ ವಹಿಸಿಕೊಂಡಿರುವ ಜಂಟಿ ಕಾರ್ಯದರ್ಶಿ ಡಾ. ಬಿಂದ್ಯಾ ಯೋಹನ್ನನ್, ಈ ಉಪಕ್ರಮವನ್ನು ಕೇಂದ್ರದ ಅಸ್ತಿತ್ವದಲ್ಲಿರುವ ಕೌಶಲ್ಯ ಅಭಿವೃದ್ಧಿ ಕೋರ್ಸ್‌ಗಳಿಗೆ ಸೇರಿಸಲಾಗುವುದು ಎಂದು ಹೇಳಿದರು. ಇದರಲ್ಲಿ ಮಹಿಳೆಯರಿಗೆ ಆದಾಯ ಗಳಿಸುವ ಕೌಶಲ್ಯಗಳನ್ನು ಸಜ್ಜುಗೊಳಿಸುವ ಗುರಿಯನ್ನು ಹೊಂದಿದೆ. ಮಹಿಳೆಯರಿಗೆ ಆಟೋ ಚಾಲನೆಯಲ್ಲಿ ತರಬೇತಿ ನೀಡುವ ಕಾರ್ಯಕ್ರಮದೊಂದಿಗೆ ಕೇಂದ್ರವು ಯಶಸ್ಸನ್ನು ಕಂಡಿದೆ ಎಂದು ಅವರು ಗಮನಿಸಿದರು. ಮಹಿಳೆಯರಿಗೆ ಸ್ಮಾರ್ಟ್‌ಫೋನ್‌ಗಳು ಮತ್ತು ಜಿಪಿಎಸ್-ಸಕ್ರಿಯಗೊಳಿಸಿದ ಡ್ಯಾಶ್ ಕ್ಯಾಮೆರಾಗಳಂತಹ ತರಬೇತಿ ಮತ್ತು ಸುರಕ್ಷಾ ಸಾಧನಗಳೊಂದಿಗೆ ಇ-ಆಟೋಗಳನ್ನು ಒದಗಿಸಲಾಗಿದೆ. ನಮ್ಮ ತರಬೇತುದಾರರು ಪ್ರಸ್ತುತ ಅಣಬೆ ಕೃಷಿಯಲ್ಲಿ ತರಬೇತಿ ಪಡೆಯುತ್ತಿದ್ದಾರೆ. ಪೊಲೀಸ್ ಕ್ವಾರ್ಟರ್ಸ್‌ನ ಬಳಕೆಯಾಗದ ಆವರಣದಲ್ಲಿ ಫಾರ್ಮ್‌ಗಳನ್ನು ಸ್ಥಾಪಿಸಲು ನಾವು ಯೋಜಿಸಿದ್ದೇವೆ ಎಂದು ಡಾ. ಬಿಂದ್ಯಾ ಹೇಳಿದರು.

## ಸರ್ಕಾರಿ ಶಾಲೆ ಮುಚ್ಚುವುದು ಸರಿಯಲ್ಲ: ನಟ ರಿಷಬ್ ಶೆಟ್ಟಿ ಹೇಳಿಕೆ

• ಉದಯವಾಹಿನಿ, ಬೆಂಗಳೂರು

ಮಕ್ಕಳ ಸಂಖ್ಯೆ ಇಲ್ಲ ಎಂಬ ಕಾರಣಕ್ಕೆ ಸರ್ಕಾರಿ ಶಾಲೆಗಳನ್ನು ಮುಚ್ಚುತ್ತಿರುವುದು ಸರಿಯಲ್ಲ ಎಂದು ಯೂತ್ ಫಾರ್ ಸೇವಾದ ರಾಯಭಾರಿಯೂ ಆಗಿರುವ ಚಿತ್ರನಟ ರಿಷಬ್ ಶೆಟ್ಟಿ ಹೇಳಿದರು. ಯೂತ್ ಫಾರ್ ಸೇವಾ ಆಯೋಜಿಸಿದ್ದ ಅಂತರರಾಷ್ಟ್ರೀಯ ಸ್ವಯಂಸೇವಕ ವರ್ಷದ ಉದ್ಘಾಟನಾ ಸಮಾರಂಭದಲ್ಲಿ ಮಾತನಾಡಿದರು. ಸರ್ಕಾರಿ ಶಾಲೆಗಳಲ್ಲಿ ಮಕ್ಕಳು ಏಕೆ ಇಲ್ಲ? ಅಲ್ಲಿ ಬೇಕಾಗಿ ರುವ ವ್ಯವಸ್ಥೆ, ಶಿಕ್ಷಕರ ಕೊರತೆ ಸರಿಪಡಿಸಬೇಕು.

ಸರ್ಕಾರಿ ಶಾಲೆಗಳಲ್ಲಿ ನೀಡುವ ಶೇಕಡ 100ರಷ್ಟು ಗುಣಮಟ್ಟದ ಶಿಕ್ಷಣ ಪಡೆದವರು ಸಮಾಜದಲ್ಲಿ ದೊಡ್ಡ ಸಾಧನೆ ಮಾಡಿದ್ದಾರೆ. ನಾನು ಸೇರಿದಂತೆ, ಹಲವಾರು ಐಎಎಸ್, ಐಆರ್‌ಎಸ್ ಅಧಿಕಾರಿಗಳು ಸಹ ಸರ್ಕಾರಿ ಶಾಲೆಯಲ್ಲಿ ಓದಿ ಸಮಾಜದ ಉನ್ನತ ಹುದ್ದೆಗೇರಿದ್ದಾರೆ ಎಂದರು.

## ಪೈಪ್‌ಲೈನ್ ಕಾಮಗಾರಿ ಕೈಗೆತ್ತಿಕೊಂಡ ಬಿಡಬ್ಲ್ಯುಎಸ್‌ಎಸ್‌ಬಿ ಶಾಂತಿ ನಗರದಲ್ಲಿ ಮುಂದಿನ 1 ತಿಂಗಳು ಸಂಚಾರಕ್ಕೆ ಅಡ್ಡಿ!

• ಉದಯವಾಹಿನಿ, ಬೆಂಗಳೂರು

ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಶಾಂತಿನಗರ ವಿಧಾನಸಭೆ ಕ್ಷೇತ್ರದಲ್ಲಿ ಸುಮಾರು ರೂ.40 ಕೋಟಿ ಮೌಲ್ಯದ ಹಳೆಯ ಪೈಪ್‌ಲೈನ್ ಜಾಲವನ್ನು ಬದಲಿಸುವ ಕಾರ್ಯವನ್ನು ಕೈಗೆತ್ತಿಕೊಂಡಿರುವುದರಿಂದ ಶಾಂತಿನಗರ ಡಬಲ್ ರಸ್ತೆ, ನಂಜಪ್ಪ ರಸ್ತೆ ಮತ್ತು ಕ್ಷೇತ್ರದ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಮುಂದಿನ 30 ರಿಂದ 40 ದಿನಗಳವರೆಗೆ ಸಂಚಾರ ವ್ಯತ್ಯಯವಾಗಲಿದೆ.

ಹಳೆಯ ನೀರಿನ ಮಾರ್ಗಗಳನ್ನು ಬದಲಿಸುವ ಗುತ್ತಿಗೆ ಪಡೆದಿರುವ ಖಾಸಗಿ ಸಂಸ್ಥೆಯ ಹಿರಿಯ ಸೈಟ್ ಎಂಜಿನಿಯರ್ ಸುರೇಂದ್ರ ರೆಡ್ಡಿ ಪ್ರಕಾರ, ಇಲ್ಲಿ 120 ಕಿ.ಮೀ ಪೈಪ್‌ಲೈನ್ ಜಾಲವನ್ನು ಬದಲಾಯಿಸಬೇಕಾಗಿದೆ. ಅಸೆಂಬ್ಲಿಯ ಆರಂಭಿಕ ಸ್ಥಳವು ಹಲಸೂರು ವಾರ್ಡ್‌ನ ಜೋಗುಪಾಳ್ಯದಲ್ಲಿದೆ. ಹಲಸೂರು ಬಳಿ ಹೆಚ್ಚಿನ


ಉದಯವಾಹಿನಿ ಚಿತ್ರ

ಕೆಲಸಗಳು ಈಗಾಗಲೇ ಪೂರ್ಣಗೊಂಡಿವೆ.

ಕಳೆದ ವಾರ ಶಾಂತಿನಗರ ವಾರ್ಡ್‌ನ ನಂಜಪ್ಪ ರಸ್ತೆಯಲ್ಲಿ ಫೀಡರ್ ಲೈನ್ ಅನ್ನು ಕೈಗೆತ್ತಿಕೊಳ್ಳಲಾಗಿದ್ದು, ಒಂದು ವಾರದೊಳಗೆ ಪೂರ್ಣಗೊಳ್ಳಲಿದೆ.

ಇದಲ್ಲದೆ, ಲಕ್ಷ್ಮಿ ರಸ್ತೆ, ಬಸಪ್ಪ ರಸ್ತೆಯ ಕೆಲಸವನ್ನು ಸಹ ಕೈಗೆತ್ತಿಕೊಳ್ಳಲಾಗುವುದು. ಈ ಸಮಯದಲ್ಲಿ, ಕಲುಷಿತ ತಪಾಸಣೆ ಮತ್ತು ಇತರ ಪರೀಕ್ಷೆಯನ್ನು ಕೈಗೊಳ್ಳಲಾಗುತ್ತದೆ ಮತ್ತು ಸಂಪೂರ್ಣ ಪ್ರಕ್ರಿಯೆಯು ಸುಮಾರು 45 ದಿನಗಳನ್ನು ತೆಗೆದುಕೊಳ್ಳುವ ನಿರೀಕ್ಷೆಯಿದೆ' ಎಂದು ಹೇಳಿದರು.

ಬಿಡಬ್ಲ್ಯುಎಸ್‌ಎಸ್‌ಬಿ ಅಧಿಕಾರಿಗಳ ಪ್ರಕಾರ, ಬೆಂಗಳೂರು ಸೆಂಟ್ರಲ್ ಸಿಟಿ ಕಾರ್ಪೊರೇಷನ್ ಡಬಲ್ ರೋಡ್ ವಿಭಾಗದಲ್ಲಿ ವೈಟ್ ಟಾಪಿಂಗ್ ಯೋಜನೆಯನ್ನು ಪ್ರಾರಂಭಿಸಲು ಸಜ್ಜಾಗಿರುವುದರಿಂದ ಕೆಲಸವು ಭರದಿಂದ ಸಾಗುತ್ತಿದೆ. 300mm ಡಯಾಮೀಟರ್, 200mm ಡಯಾಮೀಟರ್ ಪೈಪ್‌ಗಳನ್ನು ಫೀಡರ್ ಮುಖ್ಯ ಮಾರ್ಗಗಳಾಗಿ ಅಳವಡಿಸಲಾಗುತ್ತದೆ ಮತ್ತು ಮನೆ ಸಂಪರ್ಕಕ್ಕಾಗಿ ಉಪ-ರಸ್ತೆಗಳಲ್ಲಿ 100mm ಡಯಾಮೀಟರ್ ಪೈಪ್‌ಗಳನ್ನು ಅಳವಡಿಸಲಾಗುತ್ತಿದೆ. ಇದರಿಂದ ನೀರು ಕಲುಷಿತವಾಗುವುದನ್ನು ತಡೆಯಲಾಗುತ್ತದೆ' ಎಂದರು.

## ಬೆಂಗಳೂರಲ್ಲಿ ಮಕ್ಕಳ ವಚನ ಮೇಳ: ಪ್ರಶಸ್ತಿ ಪ್ರದಾನ

• ಉದಯವಾಹಿನಿ, ಬೆಂಗಳೂರು

ಕನ್ನಡದ ಸಾಂಸ್ಕೃತಿಕ ಸಂಪತ್ತು ವಚನಗಳ ಮೂಲಕ ಮಕ್ಕಳಲ್ಲಿ ಸಂಸ್ಕೃತಿಯ ಬಿತ್ತನೆ ಮಾಡುತ್ತಿರುವ ಮಕ್ಕಳ ವಚನ ಮೇಳವು ಸಂಸ್ಕೃತಿಯ ಉತ್ಸವ ಎಂದು ಉದ್ಯಮಿ ಎಸ್. ಷಡಕ್ಷರಿ ಹೇಳಿದರು. ವಚನಜ್ಯೋತಿ ಬಳಗವು ರವೀಂದ್ರ ಕಲಾಕ್ಷೇತ್ರದಲ್ಲಿ ಆಯೋಜಿಸಿದ್ದ ಮಕ್ಕಳ ವಚನ ಮೇಳ ಪ್ರಶಸ್ತಿ ಪ್ರದಾನ ಸಮಾರಂಭದಲ್ಲಿ ಅವರು ಮಾತನಾಡಿದರು.

ಸ್ಪರ್ಧಾತ್ಮಕ ಜಗತ್ತಿನಲ್ಲಿ ಮೂಲೆ ಗುಂಪಾಗುತ್ತಿರುವ ಕನ್ನಡದ ಉಳಿವಿಗೆ ವಚನ ಮೇಳಗಳು ಅಗತ್ಯ ಎಂದರು.

ಕನ್ನಡ ಸಂಸ್ಕೃತಿ ಜಂಟಿ ನಿರ್ದೇಶಕ ಬಲವಂತರಾವ್ ಪಾಟೀಲ್ ಮಾತನಾಡಿ, ಇಲ್ಲಿ ಸೇರಿರುವ ಅಪಾರಸ್ತೋಮ ವಚನಪ್ರೀತಿಗೆ ಸಾಕ್ಷಿಯಾಗಿದೆ. ಬಸವಣ್ಣನವರ ಆದರ್ಶಗಳನ್ನು ಮಕ್ಕಳಿಗೆ ಮುಟ್ಟಿಸುವ ಕೆಲಸವನ್ನು ಅತ್ಯಂತ ಸಮರ್ಪಕವಾಗಿ ಮಾಡುತ್ತಿರುವ ವಚನಜ್ಯೋತಿ ಬಳಗದ ಕಾರ್ಯ ಅನುಕರಣೀಯ ಎಂದು ಪ್ರಶಂಸಿದರು.

ನಗರಾಭಿವೃದ್ಧಿ ಇಲಾಖೆಯ ಹೆಚ್ಚುವರಿ ಕಾರ್ಯದರ್ಶಿ ನಾಗೇಂದ್ರ ಹೊನ್ನಳ್ಳಿ ಮಾತನಾಡಿ, ಮಕ್ಕಳನ್ನು ಮೊಬೈಲು ಗೀಳಿನಿಂದ ಹೊರತರಲು ಮಕ್ಕಳ ವಚನ ಮೇಳಗಳು



ಉದಯವಾಹಿನಿ ಚಿತ್ರ

ಹೆಚ್ಚೆಚ್ಚು ನಡೆಯಬೇಕು ಎಂದರು. ಏಳು ದಿನ, ನಾಲ್ಕು ವೇದಿಕೆಗಳಲ್ಲಿ 12 ಪ್ರಕಾರಗಳಲ್ಲಿ ನಡೆದ ಮಕ್ಕಳ ವಚನ ಮೇಳದಲ್ಲಿ 150ಕ್ಕೂ ಹೆಚ್ಚು ಶಾಲೆಗಳ ನಾಲ್ಕು ಸಾವಿರಕ್ಕೂ ಅಧಿಕ ವಿದ್ಯಾರ್ಥಿಗಳು ಭಾಗವಹಿಸಿದ್ದರು ಎಂದು ವಚನಜ್ಯೋತಿ ಬಳಗದ ಅಧ್ಯಕ್ಷ ಪಿನಾಕಪಾಣಿ ತಿಳಿಸಿದರು. ಬೇಲಿಮಠದ ಶಿವರುದ್ರಸ್ವಾಮೀಜಿ, ವಿಶ್ವಬಂಧು ಫೌಂಡೇಷನ್‌ನ ಸಿದ್ದಯ್ಯ ಗುರೂಜಿ, ಬಸವ ಸಮಿತಿಯ ಉಪಾಧ್ಯಕ್ಷ ಪ್ರಭುದೇವ ಚಿಗಟೇರಿ, ಮಧು, ಶಿವಪ್ರಕಾಶ್, ಗಂಗಾಧರ್, ಡಾ. ರುದ್ರೇಶ ಅದರಂಗಿ, ವಿಶಾಲ್, ಸುರೇಶ್ ಭಾಗವಹಿಸಿದ್ದರು.

## 13 ವರ್ಷ ಆಯ್ತು, 1,000ಕ್ಕೂ ಹೆಚ್ಚು ಕುಟುಂಬಗಳಿಗೆ ಕನಸಾಗಿಯೇ ಉಳಿದ PMAY ಮನೆ

• ಉದಯವಾಹಿನಿ, ಬೆಂಗಳೂರು

ಪ್ರಧಾನ ಮಂತ್ರಿ ಆವಾಸ್ ಯೋಜನೆ ಅಡಿಯಲ್ಲಿ ಅರ್ಹ ನಗರ ಪ್ರದೇಶಗಳ ಕುಟುಂಬಗಳಿಗೆ 1,336 ಮನೆಗಳನ್ನು ನಿರ್ಮಿಸಿ ಹಾಗೂ ಪಕ್ಕಾ ಮನೆಯನ್ನು ಖಚಿತ ಪಡಿಸಿಕೊಳ್ಳುವ ಯೋಜನೆಯು 13 ವರ್ಷಗಳ ನಂತರವೂ, ಉಪ ಮುಖ್ಯಮಂತ್ರಿ ಡಿ. ಕೆ. ಶಿವಕುಮಾರ್ ಪ್ರತಿನಿಧಿಸುವ ಕನಕಪುರ ವಿಧಾನಸಭಾ ಕ್ಷೇತ್ರದೊಳಗಿನ ಕನಕಪುರ ನಗರ ಪುರಸಭೆಯ ವ್ಯಾಪ್ತಿಯಲ್ಲಿರುವ ಬಿಜಿಎಸ್ ಲೇಔಟ್‌ನಲ್ಲಿ ಕಾರ್ಯರೂಪಕ್ಕೆ ಬಂದಿಲ್ಲ. ಡಿಸೆಂಬರ್ 19 ರಂದು ಉಪ ಲೋಕಾಯುಕ್ತ ನ್ಯಾಯಮೂರ್ತಿ ಕೆ.ಎನ್. ಫಣೀಂದ್ರ ಅವರು ಕನಕಪುರ ಪಟ್ಟಣಕ್ಕೆ ಅನಿರೀಕ್ಷಿತ ಭೇಟಿ ನೀಡಿದಾಗ ಇದು ಬೆಳಕಿಗೆ ಬಂದಿತು.

2013 ರಲ್ಲಿ ನಿರ್ಮಾಣ ಪ್ರಾರಂಭವಾದರೂ ಕೆಲವೇ ಮನೆಗಳು ಪೂರ್ಣಗೊಂಡಿವೆ ಎಂದು ಗಮನಕ್ಕೆ ಬಂದಿದೆ. ಅರ್ಧಕ್ಕೆ ನಿಂತ ಮನೆಗಳು ಶಿಥಿಲಗೊಂಡಿವೆ. ಅವುಗಳ ಸುತ್ತಲೂ ಕಳೆಗಳು ಮತ್ತು ಪೊದೆಗಳು ಬೆಳೆದಿವೆ. ಕೆಲವೇ ಬೀದಿ ದೀಪಗಳು ಮಾತ್ರ ಇವೆ. ಪೂರ್ಣಗೊಂಡ ಮನೆಗಳಲ್ಲಿ ವಾಸಿಸುವ ಜನರು ಹಾವು ಮತ್ತು ಇತರ ಸರೀಸೃಪಗಳು ಮನೆಯೊಳಗೆ ನುಗ್ಗುವ ಭೀತಿಯಲ್ಲಿದ್ದಾರೆ. ಒಳಚರಂಡಿ ವ್ಯವಸ್ಥೆ ಸರಿಯಾಗಿಲ್ಲದೆ ಘನತ್ಯಾಜ್ಯ ನಿರ್ವಹಣಾ ಘಟಕದಿಂದ ಹೊರಹೊಮ್ಮುವ ದುರ್ವಾಸನೆಯಿಂದ ನಿವಾಸಿಗಳಿಗೆ ವಾಸಿಸಲು ಕಷ್ಟವಾಗುತ್ತಿದೆ. ನೊಣಗಳ ಹಿಂಡು ಮತ್ತು ಸೊಳ್ಳೆಗಳ ಉತ್ಪತ್ತಿಯಿಂದಾಗಿ ಮಕ್ಕಳು ಮತ್ತು ವೃದ್ಧರು ಆಗಾಗ್ಗೆ ಅನಾರೋಗ್ಯಕ್ಕೆ ಒಳಗಾಗುತ್ತಿದ್ದಾರೆ


ಉದಯವಾಹಿನಿ ಚಿತ್ರ

ಎಂದು ಸ್ಥಳೀಯರು ಉಪ ಲೋಕಾಯುಕ್ತಕ್ಕೆ ತಿಳಿಸಿದ್ದಾರೆ.

ಯೋಜನೆ ಅನುಷ್ಠಾನದಲ್ಲಿನ ವಿಳಂಬದ ಬಗ್ಗೆ ಕೇಳಿದಾಗ, ರಾಜೀವ್ ಗಾಂಧಿ ಗ್ರಾಮೀಣ ವಸತಿ ನಿಗಮ ಲಿಮಿಟೆಡ್ 1,336 ಮನೆಗಳನ್ನು ನಿರ್ಮಿಸುವ ಯೋಜನೆಯನ್ನು ಕರ್ನಾಟಕ ರಾಜ್ಯ ಆವಾಸಸ್ಥಾನ ಕೇಂದ್ರ PMAY ಕ್ಕೆ ವಹಿಸಿದೆ ಎಂದು ಅಧಿಕಾರಿಗಳು ತಿಳಿಸಿದರು. 6 ತಿಂಗಳೊಳಗೆ ಮನೆಗಳನ್ನು ಪೂರ್ಣಗೊಳಿಸಲು ಅದು 2013 ರಲ್ಲಿ ಕೆಲಸದ ಆದೇಶವನ್ನು ನೀಡಿತು. ಪ್ರತಿ ಮನೆಯ ವೆಚ್ಚವನ್ನು 1,80 ಲಕ್ಷ ರೂ. ಎಂದು ಅಂದಾಜಿಸಲಾಗಿದೆ. ರಾಜ್ಯ ಮತ್ತು ಕೇಂದ್ರವು ತಲಾ 75,000 ರೂ. ಗಳನ್ನು ಬಿಡುಗಡೆ ಮಾಡಬೇಕು ಮತ್ತು ಫಲಾನುಭವಿಯು 30,000 ರೂ.ಗಳನ್ನು ಭರಿಸಬೇಕಾಗುತ್ತದೆ. ಅದರಂತೆ, 419 ಮನೆಗಳ ನಿರ್ಮಾಣ ಪ್ರಾರಂಭವಾಯಿತು.

ಉಳಿದ 917 ಮನೆಗಳ ನಿರ್ಮಾಣಕ್ಕಾಗಿ ಪುರಸಭೆಯು 2018 ರಲ್ಲಿ ಕರ್ನಾಟಕ ರಾಜ್ಯ ಹಜ್ ಸಮಿತಿ-PMAYಗೆ ಕೆಲಸದ ಆದೇಶವನ್ನು ನೀಡಿತು. ಪ್ರತಿ ಘಟಕದ ವೆಚ್ಚ 3.05 ಲಕ್ಷ ರೂ.ಗಳಾಗಿತ್ತು. ಇದರಲ್ಲಿ, ಕೇಂದ್ರವು 1.50 ಲಕ್ಷ ರೂಪಾಯಿಗಳನ್ನು, ರಾಜ್ಯವು 1.20 ಲಕ್ಷ ರೂಪಾಯಿಗಳನ್ನು ಮತ್ತು ಫಲಾನುಭವಿಯು 35,000 ರೂಪಾಯಿಗಳನ್ನು ಬಿಡುಗಡೆ ಮಾಡಬೇಕು. ಕೆಲವು ಫಲಾನುಭವಿಗಳು ಮನೆಗಳನ್ನು ನಿರ್ಮಿಸಲು ತಮ್ಮ ಪಾಲನ್ನು ಭರಿಸಲು ಸಿದ್ಧರಿಲ್ಲ. ಸ್ಥಳೀಯ ಶಾಸಕರು ಮನೆಗಳಿಗೆ ಕಬ್ಬಿಣದ ಕಿಟಕಿಗಳು, ಬಾಗಿಲುಗಳು ಮತ್ತು ಸಿಮೆಂಟ್ ನೆಲದ ಬದಲಿಗೆ ಮರದ ಕಿಟಕಿಗಳು, ಬಾಗಿಲುಗಳು ಮತ್ತು ಟೈಲ್ಸ್‌ಗಳನ್ನು ಬಳಸಲು ನಿರ್ಧರಿಸಿದರು. ಫಲಾನುಭವಿಯಿಂದ 35,000 ರೂ.ಗಳ ಬದಲಿಗೆ ತಲಾ 63,000 ರೂ.ಗಳನ್ನು ಸಂಗ್ರಹಿಸಲು ನಿರ್ಧರಿಸಲಾಯಿತು. 10 ತಿಂಗಳೊಳಗೆ ಪೂರ್ಣಗೊಳಿಸಲು ಕೆಲಸದ ಆದೇಶವನ್ನು ನೀಡಲಾಯಿತು, ಆದರೆ ಇಲ್ಲಿಯವರೆಗೆ, ಯೋಜನೆ ಪೂರ್ಣಗೊಂಡಿಲ್ಲ. ನಿರ್ಗತಿಕರಿಗೆ ಮನೆಗಳನ್ನು ಹಸ್ತಾಂತರಿಸದಿರುವುದು ಸಂವಿಧಾನದ 21 ನೇ ವಿಧಿಯ ಅಡಿಯಲ್ಲಿ ಜೀವಿಸುವ ಹಕ್ಕಿನ ಉಲ್ಲಂಘನೆಯಾಗಿದೆ.

# ಬಿಲ್ಡರ್‌ಗಳು ಪ್ರತಿವರ್ಷ ಆಡಿಟ್ ವರದಿ ಸಲ್ಲಿಸದಿದ್ದರೆ ಕೆ-ರೇರಾ ದಂಡಾಸ್ತ್ರಕ್ಕೆ ನಿರ್ಧಾರ!

**ಕೆಲವು ಬಿಲ್ಡರ್‌ಗಳು ತಮ್ಮ ಮನಸ್ಸಿಗೆ ಬಂದಾಗ ವರದಿಗಳನ್ನು ಸಲ್ಲಿಸುತ್ತಾರೆ ಇದು ಪ್ರಾಧಿಕಾರಕ್ಕೂ ದೊಡ್ಡ ಸಮಸ್ಯೆಯಾಗಿದೆ**

• ಉದಯವಾಹಿನಿ, ಬೆಂಗಳೂರು

ರಿಯಲ್ ಎಸ್ಟೇಟ್ ನಿಯಂತ್ರಣ ಕಾಯಿದೆ ಅನ್ವಯ ವಸತಿ ಯೋಜನೆಗಳ ವಾರ್ಷಿಕ ಲೆಕ್ಕ ಪರಿಶೋಧನಾ ವರದಿಗಳನ್ನು ಸಲ್ಲಿಸದ ಬಿಲ್ಡರ್‌ಗಳ ವಿರುದ್ಧ ದಂಡಾಸ್ತ್ರ ಪ್ರಯೋಗಿಸಲು ಕರ್ನಾಟಕ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರ (ಕೆ-ರೇರಾ) ಮುಂದಾಗಿದೆ.

ಬಿಲ್ಡರ್‌ಗಳಿಗೆ 2024-25ನೇ ಸಾಲಿನ ಹಣಕಾಸು ವರ್ಷದ ಲೆಕ್ಕ ಪರಿಶೋಧನಾ ವರದಿ ಸಲ್ಲಿಕೆಗೆ ಹಲವು ಬಾರಿ ಗಡುವು ನೀಡಿದ್ದರೂ ಅವರು ಸ್ಪಂದಿಸದ ಹಿನ್ನೆಲೆಯಲ್ಲಿ ವಸತಿ ಯೋಜನೆಗಳ ಒಟ್ಟು ಅಂದಾಜು ವೆಚ್ಚದ ಆಧಾರದ ಮೇಲೆ ಪ್ರತಿ ವರ್ಷಕ್ಕೆ ಇಂತಿಷ್ಟು ಎಂದು ದಂಡ ವಿಧಿಸಲು ನಿರ್ಧರಿಸಿದೆ. ಈ ಕುರಿತು ಆದೇಶ ಹೊರಡಿಸಿರುವ ಕರ್ನಾಟಕ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರ, ತಕ್ಷಣದಿಂದಲೇ ಅನ್ವಯವಾಗುವಂತೆ ಈ ದಂಡದ ಆದೇಶ ಜಾರಿಗೆ ಬರಲಿದೆ ಎಂದು ಹೇಳಿದೆ.

**ವರದಿ ಸಲ್ಲಿಕೆ ಕಡ್ಡಾಯ:** ಗೃಹ ಖರೀದಿದಾರರ ಹಿತ ಕಾಯಲು ಮತ್ತು ಲಂಗು ಲಗಾಮಿಲ್ಲದೆ ಬೆಳೆಯುತ್ತಿದ್ದ ರಿಯಲ್ ಎಸ್ಟೇಟ್ ವಲಯವನ್ನು ನಿಯಂತ್ರಿಸುವ ಉದ್ದೇಶದಿಂದ ಕೇಂದ್ರ ಸರಕಾರ 2016ರಲ್ಲಿ ರಿಯಲ್ ಎಸ್ಟೇಟ್ ನಿಯಂತ್ರಣ ಮತ್ತು ಅಭಿವೃದ್ಧಿ

**ದಂಡ ಪ್ರಮಾಣ ಎಷ್ಟು ?**

- ವಸತಿ ಯೋಜನೆಯ ಅಂದಾಜು ವೆಚ್ಚ ದಂಡದ ಮೊತ್ತ (ವರ್ಷಕ್ಕೆ)
- 25 ಕೋಟಿ ರೂ.ಒಳಗೆ 20,000 ರೂ.
- 25ರಿಂದ 50 ಕೋಟಿ ರೂ. 25,000 ರೂ.
- 50ರಿಂದ 100 ಕೋಟಿ ರೂ. 50,000 ರೂ.
- 100 ಕೋಟಿ ರೂ.ಮೇಲ್ಪಟ್ಟು 1,00,000 ರೂ.

ಕಾಯಿದೆ ಜಾರಿಗೊಳಿಸಿತು. ಅದರಂತೆ ಕರ್ನಾಟಕ ಸರಕಾರವೂ 'ಕೆ-ರೇರಾ' ಕಾಯಿದೆಯನ್ನು ಜಾರಿಗೊಳಿಸಿ 2017ರಲ್ಲಿ ಅಧಿಸೂಚನೆ ಹೊರಡಿಸಿತು.

ಅದರ ಸೆಕ್ಷನ್ 4(2)(ಐ)(ಡಿ)ಅನ್ವಯ ಪ್ರತಿಯೊಬ್ಬ ಬಿಲ್ಡರ್ ಅಥವಾ ಪ್ರವರ್ತಕರು ಪ್ರತಿ ಹಣಕಾಸು ವರ್ಷ ಕೊನೆಗೊಂಡ ಬಳಿಕ ತಮ್ಮ ವಸತಿ ಯೋಜನೆಗಳ ಲೆಕ್ಕಪತ್ರಗಳನ್ನು ಲೆಕ್ಕಪರಿಶೋಧಕರಿಂದ ಆಡಿಟ್ ನಡೆಸಿದ ಬಳಿಕ ಸಿಎ ಪ್ರಮಾಣೀಕರಿಸಿದ ಆ ವರದಿಯನ್ನು


ಉದಯವಾಹಿನಿ ಚಿತ್ರ

ಪ್ರಾಧಿಕಾರಕ್ಕೆ ಸಲ್ಲಿಸುವುದು ಕಡ್ಡಾಯವಾಗಿದೆ. ಆ ವರದಿಯಲ್ಲಿ ವಸತಿ ಯೋಜನೆಗೆ ಸಂಗ್ರಹಿಸಿರುವ ಮೊತ್ತ, ಖರ್ಚು ಮಾಡಿರುವ ಹಣ ಮತ್ತು ಯೋಜನೆ ಎಷ್ಟು ಪ್ರಮಾಣದಲ್ಲಿ ಪೂರ್ಣಗೊಂಡಿದೆ ಮತ್ತಿತರ ವಿವರಗಳು ಒಳಗೊಂಡಿರಬೇಕೆಂಬ ನಿಬಂಧನೆ ಇದೆ. ಆ ವರದಿ ಸಲ್ಲಿಸುವುದಕ್ಕಾಗಿಯೇ 'ಕೆ-ರೇರಾ' ಫಾರಂ ನಂಬರ್ 7 ಬಿಡುಗಡೆ ಮಾಡಿ, ಆನ್‌ಲೈನ್ ಮೂಲಕವೇ ವರದಿ ಸಲ್ಲಿಸಲು

**ಜ.20ರವರೆಗೆ ಅಂತಿಮ ಗಡುವು ವಿಸ್ತರಣೆ**

**ಈ ಮಧ್ಯೆ, ಕೆ-ರೇರಾ 2023-24ನೇ ಸಾಲಿನ ವಾರ್ಷಿಕ ಲೆಕ್ಕ ಪರಿಶೋಧನಾ ವರದಿ ಸಲ್ಲಿಕೆಗೆ ನೀಡಿದ್ದ ಗಡುವನ್ನು ದಂಡ ಶುಲ್ಕವಿಲ್ಲದೆ ಇದೇ 20ರವರೆಗೆ ವಿಸ್ತರಣೆ ಮಾಡಿದೆ. ಒಂದು ವೇಳೆ ದಂಡದ ಮೊತ್ತವನ್ನು ಸಲ್ಲಿಸದೆ 2026ರ ಜ.20 ರಿಂದ ಮಾ.31ರೊಳಗೆ ಲೆಕ್ಕ ಪರಿಶೋಧನಾ ವರದಿ ಸಲ್ಲಿಸಿದರೆ ಅಂತಹ ಬಿಲ್ಡರ್ ವಿರುದ್ಧ 2026ರ ಏ.1ರಿಂದ ಕ್ರಮ ಜರುಗಿಸಲಾಗುವುದು ಎಂದು ಪ್ರಾಧಿಕಾರ ಎಚ್ಚರಿಕೆ ನೀಡಿದೆ. ರೇರಾ ಕಾಯಿದೆ ಮತ್ತು ನಿಯಮಗಳನ್ವಯ ಬಿಲ್ಡರ್‌ಗಳ ವಿರುದ್ಧ ದಂಡದ ಮೊತ್ತ ವಸೂಲು ಮಾಡಲು ಕ್ರಮ ಕೈಗೊಳ್ಳಲಾಗುವುದು ಎಂದು ಕೆ-ರೇರಾ ಆದೇಶದಲ್ಲಿ ಸ್ಪಷ್ಟಪಡಿಸಿದೆ.**

ಪೋರ್ಟಲ್‌ನಲ್ಲಿ ಪ್ರತ್ಯೇಕ ವ್ಯವಸ್ಥೆ ಮಾಡಿದೆ.

ಅದರಂತೆ ಪ್ರತಿ ವರ್ಷ ಕೆ-ರೇರಾ' ವಾರ್ಷಿಕ ಲೆಕ್ಕ ಪರಿಶೋಧನಾ ವರದಿಗಳನ್ನು ಸಲ್ಲಿಸಲು ಬಿಲ್ಡರ್‌ಗಳಿಗೆ ಗಡುವು ನೀಡುತ್ತಲೇ ಇರುತ್ತದೆ. ಆದರೆ, ಬಹುತೇಕ ಬಿಲ್ಡರ್‌ಗಳು ಅಂತಹ ಸೂಚನೆ ಅಥವಾ ಆದೇಶಗಳಿಗೆ 'ಕ್ಯಾರೇ' ಎನ್ನುವುದಿಲ್ಲ. ಕೆಲವು ಬಿಲ್ಡರ್‌ಗಳು ತಮ್ಮ ಮನಸ್ಸಿಗೆ ಬಂದಾಗ ವರದಿಗಳನ್ನು ಸಲ್ಲಿಸುತ್ತಾರೆ. ಇದು ಪ್ರಾಧಿಕಾರಕ್ಕೂ ದೊಡ್ಡ ಸಮಸ್ಯೆಯಾಗಿದೆ. ಆದರೆ, ಪ್ರಾಧಿಕಾರ ಎಷ್ಟು ಬಿಲ್ಡರ್ ವರದಿ ಸಲ್ಲಿಸಿದ್ದಾರೆ, ಎಷ್ಟು ಮಂದಿ ಸಲ್ಲಿಸಿಲ್ಲವೆಂಬ ವಿವರಗಳನ್ನು ಬಹಿರಂಗಗೊಳಿಸುತ್ತಿಲ್ಲ.

**ಬಿಲ್ಡರ್‌ಗಳಿಗೆ ಪಾಠ:** 2024-25ನೇ ಹಣಕಾಸು ವರ್ಷ 2025ರ ಮಾ.31ಕ್ಕೆ ಮುಕ್ತಾಯವಾಗಿದೆ. ಆನಂತರ ಬಿಲ್ಡರ್‌ಗಳು ಆರು ತಿಂಗಳೊಳಗೆ ಅಂದರೆ ಸೆ.30ರೊಳಗೆ ವರದಿ ಸಲ್ಲಿಸಬೇಕಿತ್ತು. ಆದರೆ, ಬಹುತೇಕ ಬಿಲ್ಡರ್‌ಗಳು ಸಲ್ಲಿಸಿಲ್ಲ. ಹಾಗಾಗಿ, ಪ್ರಾಧಿಕಾರ ವರದಿ ಸಲ್ಲಿಕೆಗೆ ಸೆ.12, ನ.15 ಮತ್ತು ಡಿ.12ರಂತೆ ಮೂರು ಗಡುವು ನೀಡಿದ್ದರೂ ಬಿಲ್ಡರ್‌ಗಳು ಸರಿಯಾಗಿ ಸ್ಪಂದಿಸಲಿಲ್ಲ. ಹಾಗಾಗಿ, 'ಕೆ-ರೇರಾ' ಅನ್ಯ ಮಾರ್ಗವಿಲ್ಲದೆ ಬಿಲ್ಡರ್‌ಗಳಿಗೆ ಪಾಠ ಕಲಿಸಲು ರೇರಾ ಕಾಯಿದೆ ಸೆಕ್ಷನ್ 38(1)ರಡಿ ಲಭ್ಯವಿರುವ ಅಧಿಕಾರ ಬಳಸಿ ದಂಡ ವಿಧಿಸಲು ತೀರ್ಮಾನಿಸಿದೆ.

# ತಿಲಕ್‌ನಗರ ಸಮಸ್ಯೆ ಬಗೆಹರಿಸಲು ಸಂಸದ ಯದುವೀರ್ ಸೂಚನೆ

## ಆಯುಕ್ತ ಶೇಖ್ ತನ್ನೀರ್ ಅಸೀಫ್ ಅವರಿಗೆ ಪತ್ರ ಬರೆದಿರುವ, ವಾರ್ಡ್ ಸಂಖ್ಯೆ 25ರ ತಿಲಕ್‌ನಗರದಲ್ಲಿ ಸಮಸ್ಯೆಗಳ ಬಗ್ಗೆ ನಾಗರಿಕರು ಅಹವಾಲು ಸಲ್ಲಿಕೆ

• **ಉದಯವಾಹಿನಿ, ಮೈಸೂರು**

ಇಲ್ಲಿನ ತಿಲಕ್‌ನಗರ ಬಡಾವಣೆಯಲ್ಲಿ ಜನರು ಎದುರಿಸುತ್ತಿರುವ ಮೂಲಸೌಕರ್ಯಗಳ ಕೊರತೆಯ ಸಮಸ್ಯೆಯನ್ನು ತ್ವರಿತವಾಗಿ ಬಗೆಹರಿಸಲು ಕ್ರಮ ಕೈಗೊಳ್ಳುವಂತೆ ಸಂಸದ ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್ ಸೂಚಿಸಿದ್ದಾರೆ. ಈ ಬಗ್ಗೆ ಮಹಾನಗರಪಾಲಿಕೆ ಆಯುಕ್ತ ಶೇಖ್ ತನ್ನೀರ್ ಅಸೀಫ್ ಅವರಿಗೆ ಪತ್ರ ಬರೆದಿರುವ ಅವರು, ವಾರ್ಡ್ ಸಂಖ್ಯೆ 25ರ ತಿಲಕ್‌ನಗರದಲ್ಲಿ ಸಮಸ್ಯೆಗಳ ಬಗ್ಗೆ ನಾಗರಿಕರು ಅಹವಾಲು ಸಲ್ಲಿಸಿದ್ದಾರೆ. ಕುಡಿಯುವ ನೀರು ಸಮರ್ಪಕವಾಗಿ ಪೂರೈಸಬೇಕು ಎಂದು ಕೋರಿದ್ದಾರೆ. ಮೂಲಸೌಕರ್ಯ ಕಲ್ಪಿಸಬೇಕು, ಸಾರ್ವಜನಿಕ ಸುರಕ್ಷತೆಗೆ ಕ್ರಮ ವಹಿಸಬೇಕು ಎಂದು ಕೋರಿದ್ದಾರೆ ಎಂದು ತಿಳಿಸಿದ್ದಾರೆ.

ನಗರದ ಎಲ್ಲಾ ಸಮಸ್ಯೆಗಳಿಗೆ ಕಾಲಮಿತಿಯಲ್ಲಿ


ಉದಯವಾಹಿನಿ ಚಿತ್ರ

ಪರಿಹಾರ ದೊರಕಿಸಿಕೊಡಲಾಗುವುದು. ಈ ನಿಟ್ಟಿನಲ್ಲಿ ಸಲ್ಲಿಕೆಯಾಗಿರುವ ಅಹವಾಲುಗಳನ್ನು ಆದ್ಯತೆಯ ಮೇರೆಗೆ ಕೈಗೆತ್ತಿಕೊಳ್ಳಲಾಗುವುದು

**ವಾರ್ಡ್‌ವಾರು ಕ್ರಮ**

**ನಗರದ ಪರಿಸ್ಥಿತಿ ಸುಧಾರಿಸಲು ವಾರ್ಡ್‌ವಾರು ಕ್ರಮ ಕೈಗೊಳ್ಳಲಾಗುತ್ತಿದೆ. ಈ ನಿಟ್ಟಿನಲ್ಲಿ ತಿಲಕ್‌ನಗರ ವಾರ್ಡ್‌ನಲ್ಲಿರುವ ಸಮಸ್ಯೆಗಳನ್ನು ಬಗೆಹರಿಸಲು ಈಗಾಗಲೇ ನಗರಪಾಲಿಕೆ ಆಯುಕ್ತರಿಗೆ ಪತ್ರ ಬರೆಯಲಾಗಿದೆ ಎಂದು ಹೇಳಿದ್ದಾರೆ.**

ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಆ ವಾರ್ಡ್‌ನಲ್ಲಿ ಪ್ರಮುಖವಾಗಿ ಕುಡಿಯುವ ನೀರಿನ ಸಮಸ್ಯೆ ಇದೆ. ಇದಕ್ಕೆ ತಕ್ಷಣದ ಪರಿಹಾರವಾಗಿ ವಾಣಿವಿಲಾಸ ವಾಟರ್ ವರ್ಕ್ಸ್‌ನಿಂದ ತಿಲಕ್‌ನಗರ ಓವರ್‌ಹೆಡ್ ಟ್ಯಾಂಕ್‌ಗೆ ನೀರಿನ ಪೈಪ್‌ಲೈನ್ ಸಂಪರ್ಕ ಕಲ್ಪಿಸಬೇಕು. ಆ ಪ್ರದೇಶಕ್ಕೆ ಸಮರ್ಪಕ

**ಈ ವಾರ್ಡ್‌ನಲ್ಲಿ ಮಾಲೀಕರು ಹಸುಗಳನ್ನು ಸಾರ್ವಜನಿಕ ರಸ್ತೆಗಳಲ್ಲಿ ಮುಕ್ತವಾಗಿ ಬಿಡುತ್ತಿದ್ದಾರೆ. ಇದರಿಂದ ಪಾದಚಾರಿಗಳು ಮತ್ತು ವಾಹನ ಚಾಲಕರಿಗೆ ಸಂಚಾರಕ್ಕೆ ಅಡ್ಡಿ ಆಗುತ್ತಿದೆ, ಜನರ ಸುರಕ್ಷತೆಗೂ ಧಕ್ಕೆ ಉಂಟಾಗುತ್ತಿದೆ. ಈ ನಿಟ್ಟಿನಲ್ಲಿ ರಸ್ತೆಯಲ್ಲಿ ಹಸು ಬಿಡುವವರಿಗೆ ದಂಡ ವಿಧಿಸಿ ಕಠಿಣ ಕ್ರಮ ಜರುಗಿಸುವಂತೆ ಆಯುಕ್ತರಿಗೆ ಆದೇಶಿಸಲಾಗಿದೆ' ಎಂದು ತಿಳಿಸಿದ್ದಾರೆ. ನಗರದಲ್ಲಿ ಯಾವುದೇ ಸಮಸ್ಯೆ ಇದ್ದರೂ ನಾಗರಿಕರು ಅಹವಾಲು ಮೂಲಕ ತಿಳಿಸಬಹುದು. ಅದನ್ನು ಶೀಘ್ರವಾಗಿ ಬಗೆಹರಿಸಲು ಬದ್ಧರಾಗಿದ್ದೇನೆ**

**ಯದುವೀರ್ ಕೃಷ್ಣದತ್ತ ಚಾಮರಾಜ ಒಡೆಯರ್** ಸಂಸದ

ಹಾಗೂ ನಿಯಮಿತವಾಗಿ ನೀರು ಸರಬರಾಜು ಖಚಿತಪಡಿಸಿಕೊಳ್ಳಲು ಎಸ್‌ಎಫ್‌ಸಿ ಅನುದಾನ ಬಳಸಿಕೊಂಡು 10 ಲಕ್ಷ ಲೀಟರ್ ಸಾಮರ್ಥ್ಯದ ಸಂಪ್ ನಿರ್ಮಾಣಕ್ಕೆ ಕ್ರಮ ಕೈಗೊಳ್ಳುವಂತೆ ಆಯುಕ್ತರಿಗೆ ಸೂಚಿಸಲಾಗಿದೆ ಎಂದು ಸಂಸದರು ವಿವರಿಸಿದ್ದಾರೆ.

ತಿಲಕ್‌ನಗರದಲ್ಲಿ ಸಮುದಾಯ ಭವನ ನಿರ್ಮಾಣಕ್ಕೆ ಬೇಡಿಕೆ ಇದೆ. ಸಾರ್ವಜನಿಕ ಸಭೆಗಳು, ಸಾಮಾಜಿಕ ಕಾರ್ಯಗಳು ಮತ್ತು ಮದುವೆ ಕಾರ್ಯಕ್ಕೆ ಅದು ಅವಶ್ಯವಾಗಿದೆ. ಇದಕ್ಕೆ ಸಂಬಂಧಿಸಿದಂತೆ ಕೆಲಸವನ್ನು ಆದಷ್ಟು ಬೇಗ ಕೈಗೆತ್ತಿಕೊಳ್ಳಲು ಅಗತ್ಯ ಕ್ರಮ ವಹಿಸುವಂರೆ ತಿಳಿಸಲಾಗಿದೆ. ಸಾರ್ವಜನಿಕ ಸುರಕ್ಷತೆ ಮತ್ತು ಅಗತ್ಯ ನಾಗರಿಕ ಸೌಲಭ್ಯಗಳನ್ನು ಒದಗಿಸಲು ಸ್ಪಷ್ಟ ಸೂಚನೆ ನೀಡಲಾಗಿದೆ ಎಂದು ಹೇಳಿದ್ದಾರೆ.

# ಏಪ್ರಿಲ್‌ನಲ್ಲಿ ಮರಳೆ ಗವಿಮಠದ ಹೊಸ ಕಟ್ಟಡ ಉದ್ಘಾಟನೆ

• **ಉದಯವಾಹಿನಿ, ಕನಕಪುರ**

ಮರಳೆ ಗವಿಮಠದ ಆವರಣದಲ್ಲಿ ನಿರ್ಮಾಣ ಮಾಡುತ್ತಿರುವ ಮಠದ ಕಟ್ಟಡವನ್ನು ಏಪ್ರಿಲ್‌ನಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರಿಂದ ಉದ್ಘಾಟಿಸಲಾಗುವುದು. ಈ ಕುರಿತು ಚರ್ಚಿಸಲು ಜ.18ರಂದು ಹಿರಿಯ ವಿದ್ಯಾರ್ಥಿಗಳ ಸಂಕಲ್ಪಸಭೆ ಕರೆಯಲಾಗಿದೆ ಎಂದು ಮಠದ ಮುಮ್ಮಡಿ ಶಿವರುದ್ರ ಸ್ವಾಮೀಜಿ ತಿಳಿಸಿದರು.

ಶ್ರೀಮಠದ ಆವರಣದಲ್ಲಿ ನಡೆದ ಹಿರಿಯ ವಿದ್ಯಾರ್ಥಿಗಳ ಸಂಕಲ್ಪಸಭೆ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ಜ.18 ರಂದು ಶ್ರೀಮಠದ ಆವರಣದಲ್ಲಿ ನಡೆಯುವ ಸಂಕಲ್ಪ ಸಭೆಯಲ್ಲಿ ಕಾರ್ಯಕ್ರಮದ ರೂಪುರೇಷೆ ತೀರ್ಮಾನಿಸಲಾಗುವುದು. ಸಣ್ಣ ಪುಟ್ಟ ಕೆಲಸ ಹಾಗೂ ಉದ್ಘಾಟನೆ ಜವಾಬ್ದಾರಿಯನ್ನು ಹಿರಿಯ ವಿದ್ಯಾರ್ಥಿಗಳು ವಹಿಸಿಕೊಂಡಿದ್ದಾರೆ ಎಂದು ತಿಳಿಸಿದರು.


ಉದಯವಾಹಿನಿ ಚಿತ್ರ

ಮರಳೆ ಗವಿಮಠ ಯಡಿಯೂರು ಸಿದ್ದಲಿಂಗೇಶ್ವರರು ತಪಸ್ಸು ಮಾಡಿದ ತಪೋಭೂಮಿ. ಇಲ್ಲಿ ಇದ್ದ ಚಿಕ್ಕದಾದ ಪುರಾತನ ಮಠದ ಜಾಗದಲ್ಲಿ ಬೃಹತ್ ಮಠ ನಿರ್ಮಾಣ ಮಾಡುತ್ತಿದ್ದು ಅದು ಪೂರ್ಣಗೊಳ್ಳುವ ಹಂತ ತಲುಪಿದೆ ಎಂದರು. ಮರಳೆ ಗವಿಮಠ ನೂರಾರು ವರ್ಷಗಳ ಇತಿಹಾಸ ಹೊಂದಿರುವ ಪುರಾತನ ಮಠವಾಗಿದ್ದು, ಸ್ವಾತಂತ್ರ್ಯ ಪೂರ್ವ ದಿಂದಲೂ ತ್ರಿವಿಧ ದಾಸೋಹಗಳ ಮೂಲಕ ಸಾಮಾಜಿಕ, ಧಾರ್ಮಿಕ ಹಾಗೂ ಶೈಕ್ಷಣಿಕ ಸೇವೆಯಲ್ಲಿ ತೊಡಗಿದೆ. ಉಚಿತ ದಾಸೋಹ, ವಸತಿ ಮತ್ತು ಶಿಕ್ಷಣ ನೀಡುತ್ತಾ ಸಮಾಜ ಕಟ್ಟುವ ಕೆಲಸ ಮಾಡುತ್ತಾ ಬಂದಿದೆ. ಇಲ್ಲಿ ಶಿಕ್ಷಣ ಪಡೆದ ಸಾವಿರಾರು ವಿದ್ಯಾರ್ಥಿಗಳು ಬದುಕು ಕಟ್ಟಿಕೊಳ್ಳುವ ಜೊತೆಗೆ ಉತ್ತಮ ಭವಿಷ್ಯ ಕಟ್ಟಿಕೊಂಡಿದ್ದಾರೆ.

ಅನೇಕರು ಸಮಾಜದ ಉನ್ನತ ಸ್ಥಾನದಲ್ಲಿದ್ದಾರೆ ಎಂದು ಉದ್ಯಮಿ ಹಾಗೂ ಹಳೆಯ ವಿದ್ಯಾರ್ಥಿ ಸದಾಶಿವ ಹೇಳಿದರು. ಉರುಬರಾಣಿ ಮಠದ ಶಿವಶಂಕರ ಶಿವಾಚಾರ್ಯರು, ಅಜ್ಜ ಬಸವನಹಳ್ಳಿ ಮಠದ ಚಂದ್ರಶೇಖರ ಶಿವಾಚಾರ್ಯರು, ಸಪ್ಪೆ ಸ್ವಾಮಿ ಮಠದ ಶಾಂತ ಮಲ್ಲಿಕಾರ್ಜುನ ಸ್ವಾಮೀಜಿ, ಬಿಡದಿ ಹುಚ್ಚಪ್ಪ ಸ್ವಾಮೀಜಿ ಸೇರಿದಂತೆ ವಿವಿಧ ಮಠಾಧೀಶರು ವೇದಿಕೆಯಲ್ಲಿದ್ದರು.

# ಸಕಾರಣವಿಲ್ಲದೆ ವರ್ಗಾವಣೆ ಸಲ್ಲದು: ಡಿ. ಶಿವಶಂಕರ್ ಆಕ್ರೋಶ

• **ಉದಯವಾಹಿನಿ, ರಾಮನಗರ**

ಕಂದಾಯ ನಿರೀಕ್ಷಕ ಆರ್. ನಾಗರಾಜು ಅವರನ್ನು ಕೇವಲ ಐದೇ ತಿಂಗಳಿಗೆ ಯಾವುದೇ ಕಾರಣವಿಲ್ಲದೆ ವರ್ಗಾವಣೆ ಮಾಡಿರುವ ಪೌರಾಡಳಿತ ಇಲಾಖೆಯು ವರ್ಗಾವಣೆ ನಿಯಮಗಳನ್ನು ಗಾಳಿಗೆ ತೂರಿದೆ. ಇದು ಖಂಡನೀಯ ಎಂದು ಕರ್ನಾಟಕ ರಾಜ್ಯ ಸರ್ಕಾರಿ ಎಸ್‌ಸಿ, ಎಸ್‌ಟಿ ನೌಕರರ ಸಮನ್ವಯ ಸಮಿತಿ ಅಧ್ಯಕ್ಷ ಡಿ. ಶಿವಶಂಕರ್ ಆಕ್ರೋಶ ವ್ಯಕ್ತಪಡಿಸಿದರು. ನಗರದಲ್ಲಿ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ಬಲವಾದ ಕಾರಣವಿದ್ದಾಗ ಮಾತ್ರ ವರ್ಗಾವಣೆ ಮಾಡಬೇಕು.

ಆದರೆ ಕರ್ನಾಟಕ ರಾಜ್ಯ ಪೌರ ನೌಕರರ ಸಂಘದ ರಾಜ್ಯ ಉಪಾಧ್ಯಕ್ಷರೂ ಆಗಿರುವ ನಾಗರಾಜು ಅವರನ್ನು ಸಕಾರಣವಿಲ್ಲದೆ ಇಲ್ಲಿಂದ 600 ಕಿ.ಮೀ. ದೂರವಿರುವ ಶಿವಮೊಗ್ಗ ಜಿಲ್ಲೆಯ ಆನವಟ್ಟಿ ಪಟ್ಟಣ ಪಂಚಾಯಿತಿಗೆ ವರ್ಗಾವಣೆ ಮಾಡಿರುವುದು ಅನುಮಾನಗಳಿಗೆ ಎಡೆ ಮಾಡಿಕೊಟ್ಟಿದೆ ಎಂದರು. ಆಡಳಿತದ ಹಿತದೃಷ್ಟಿಯಿಂದ, ಸಾರ್ವಜನಿಕರಿಂದ ದೂರು ಬಂದಾಗ, ತರವಲ್ಲದ



ವರ್ತನೆ ತೋರಿದಾಗ, ಭ್ರಷ್ಟಾಚಾರದಡಿ ತನಿಖಾ ಸಂಸ್ಥೆಗಳ ದಾಳಿಯಲ್ಲಿ ಸಿಕ್ಕಿ ಬಿದ್ದಾಗ ಸೇರಿದಂತೆ ವಿವಿಧ ಬಲವಾದ ಕಾರಣಗಳಿದ್ದಾಗ ಮಾತ್ರ ವರ್ಗಾವಣೆ ಮಾಡಬೇಕು. ಆದರೆ, ನಾಗರಾಜು ವಿರುದ್ಧ ಯಾವುದೇ ದೂರುಗಳಿಲ್ಲದಿದ್ದರೂ ಕೇವಲ 5 ತಿಂಗಳು 18 ದಿನಕ್ಕೆ ವರ್ಗಾವಣೆ ಮಾಡಲಾಗಿದೆ ಎಂದು ಹೇಳಿದರು.ಸಿ ಗ್ರೂಪ್ ನೌಕರರನ್ನು ಕನಿಷ್ಠ 4 ವರ್ಷದವರೆಗೆ ವರ್ಗಾವಣೆ ಮಾಡುವಂತಿಲ್ಲ. ಆದರೆ, ನಾಗರಾಜು ವರ್ಗಾವಣೆಯು ಮೇಲ್ನೋಟಕ್ಕೆ ಶಿಕ್ಷಾರ್ಹ ವರ್ಗಾವಣೆಯಂತಿದೆ. ಪೌರ ಕಾರ್ಮಿಕರ ಪರವಾಗಿ ಅವರ ದನಿ ಎತ್ತಿ ಹೋರಾಟ ಮಾಡಿಕೊಂಡು ಬಂದಿರುವುದು ಇದಕ್ಕೆ ಕಾರಣವಿರಬಹುದು.

# ಕಳಪೆ ಕಾಮಗಾರಿ: ಕಾಂಪೌಂಡ್ ಪುನರ್ ನಿರ್ಮಾಣಕ್ಕೆ ಸೂಚನೆ ನೀಡಿದ ತಹಶೀಲ್ದಾರ್

• **ಉದಯವಾಹಿನಿ, ಹುಳಿಯಾರು**

ಪಟ್ಟಣ ಪಂಚಾಯಿತಿ ಮುಂಭಾಗದಲ್ಲಿ ನಡೆಯುತ್ತಿದ್ದ ಕಾಂಪೌಂಡ್ ಕಾಮಗಾರಿ ಕಳಪೆಯಾಗಿ ಎಂದು ತಹಶೀಲ್ದಾರ್ ಎಂ. ಮಮತಾ ಅಧಿಕಾರಿಗಳನ್ನು ಗುರುವಾರ ತರಾಟೆಗೆ ತೆಗೆದುಕೊಂಡರು. ಪಟ್ಟಣದ ಸಂತೆ ಜಾಗ ಸ್ಥಳಾಂತರದ ಪರಿಶೀಲನೆಗೆ ಪಟ್ಟಣ ಪಂಚಾಯಿತಿಗೆ ಬಂದಿದ್ದರು. ಅಲ್ಲಿಯೇ ನಡೆಯುತ್ತಿದ್ದ ಕಾಂಪೌಂಡ್ ನಿರ್ಮಾಣ ಕಾಮಗಾರಿ ವೀಕ್ಷಿಸಿದರು. ತಳಹದಿ ನಿರ್ಮಿಸದೆ ಕೇವಲ ಸೀಮೆಂಟ್ ಇಟ್ಟಿಗೆಗಳನ್ನು ಜೋಡಿಸಿ ಕಾಂಪೌಂಡ್ ನಿರ್ಮಿಸುತ್ತಿರುವುದನ್ನು ಗಮನಿಸಿದ ಅವರು, ಕಾಮಗಾರಿ ಬಗ್ಗೆ ಮೇಸ್ತ್ರಿಯಿಂದ ತಕ್ಷಣ ಸ್ಪಷ್ಟನೆ ಪಡೆದರು.

ಕಾಮಗಾರಿ ಮೇಲ್ವಿಚಾರಣೆ ಹೊಣೆ ಹೊತ್ತಿದ್ದ ಮುಖ್ಯಾಧಿಕಾರಿ ಮಂಜುನಾಥ್ ಅವರನ್ನು ಪ್ರಶ್ನಿಸಿದ ತಹಶೀಲ್ದಾರ್. ಇಂತಹ ಕಳಪೆ ಕಾಮಗಾರಿಯಿಂದ ಸರ್ಕಾರದ ಹಣ ದುರುಪಯೋಗವಾಗುತ್ತದೆ.



ಉದಯವಾಹಿನಿ ಚಿತ್ರ

ತಳಹದಿ ಇಲ್ಲದೆ ನಿರ್ಮಿಸಿದ ಕಾಂಪೌಂಡ್ ಕುಸಿದರೆ ಜೀವಹಾನಿಗೆ ಯಾರು ಹೊಣೆ? ಎಂದು ಪ್ರಶ್ನಿಸಿದರು. ಪಟ್ಟಣ ಪಂಚಾಯಿತಿಯಲ್ಲಿಯೇ ಎಂಜಿನಿಯರ್ ಇಂತಹ ಗಂಭೀರ ಲೋಪಕ್ಕೆ ಅವಕಾಶ ನೀಡಿರುವುದಕ್ಕೆ ತೀವ್ರ ಆಕ್ಷೇಪ ವ್ಯಕ್ತಪಡಿಸಿದರು. ಸ್ಥಳಕ್ಕೆ ಬಂದ ಪಟ್ಟಣ ಪಂಚಾಯಿತಿ ಅಧ್ಯಕ್ಷರನ್ನು ಪ್ರಶ್ನಿಸಿದರು ಮುಖ್ಯಾಧಿಕಾರಿ ಮಂಜುನಾಥ್ ಮಾತನಾಡಿ, ನನಗೆ ತಾಂತ್ರಿಕ ಮಾಹಿತಿಯ ಅರಿವು ಇಲ್ಲ. ಎಂಜಿನಿಯರ್‌ಗೆ ಗಮನಹರಿಸುವಂತೆ ಸೂಚಿಸಿದ್ದೇನೆಂದು ತಿಳಿಸಿದರು.


# ಏಕಶಿಲಾ ಬೆಟ್ಟಕ್ಕೆ ಬೇಕು ರೋಪ್ ವೇ: ಸ್ಥಳೀಯರಿಗೆ ಉದ್ಯೋಗ ನಿರೀಕ್ಷೆ

• **ಉದಯವಾಹಿನಿ, ಮಧುಗಿರಿ**

ಪಟ್ಟಣದಲ್ಲಿ ಏಕಶಿಲಾ ಬೆಟ್ಟಕ್ಕೆ ಶೀಘ್ರ ರೋಪ್‌ವೇ ನಿರ್ಮಾಣವಾದರೆ ತಾಲ್ಲೂಕಿನಲ್ಲಿ ಪ್ರವಾಸೋದ್ಯಮ ಅಭಿವೃದ್ಧಿ ಜೊತೆಗೆ ಸ್ಥಳೀಯರಿಗೆ ಉದ್ಯೋಗವಕಾಶ ದೊರೆತು ಆರ್ಥಿಕ ಚೇತರಿಕೆಗೆ ಪೂರಕವಾಗಲಿದೆ ಎನ್ನುವುದು ಸ್ಥಳೀಯರ ಆಶಯ. ಶ್ರೀಮಂತ ಇತಿಹಾಸ ಹೊಂದಿರುವ ಮಧುಗಿರಿಯಲ್ಲಿನ ಏಕಾಶಿಲಾ ಬೆಟ್ಟ ಜಿಲ್ಲೆಯ ಪ್ರಸಿದ್ಧ ಪ್ರವಾಸಿ ತಾಣ.

ಕೋಟೆ ತನ್ನ ಅಪ್ರತಿಮ ಸಾಹಸದ ಜೊತೆಗೆ ಚಾರಣಕ್ಕೂ ಹೆಸರುವಾಸಿ. ಬೆಂಗಳೂರಿನಿಂದ ಕೇವಲ 105 ಕಿ.ಮೀ. ಮತ್ತು ತುಮಕೂರಿನಿಂದ 43 ಕಿ.ಮೀ. ಅಂತರದಲ್ಲಿರುವುದರಿಂದ ಪ್ರವಾಸಿಗರು ಬಂದು ಹೋಗಲು ಹೆಚ್ಚು ಅನುಕೂಲಕರವಾಗಿದೆ.

ಏಕಾಶಿಲಾ ಬೆಟ್ಟದ ಕೆಳ ಭಾಗದಲ್ಲಿ ನಾಲ್ಕು ಗುಹೆ, 11 ಸುಂದರ ಗೋಡೆ, ಭೀಮನ ದೊಣೆ, ನವಿಲು ದೊಣೆ, ಕುದುರೆ ಲಾಯ, ಶಸ್ತ್ರಾಸ್ತ್ರ ಸಂಗ್ರಹ ಉಗ್ರಾಣ, ಅರಮನೆ, ಕಲ್ಲಿನ ಕೋಟೆ, ಗುಮ್ಮಟ, ಕಣಜಗಳು ಸೇರಿದಂತೆ ಅನೇಕ ತಾಣಗಳಿವೆ. ಪ್ರವೇಶದ್ವಾರ



25 ಅಡಿ ಎತ್ತರ ಮತ್ತು 17 ಅಡಿ ಅಗಲವಿದೆ.

ಕೋಟೆ ಹಲವು ನೀರಿನ ತೊಟ್ಟಿಗಳನ್ನು ಮತ್ತು ಗೋಪಾಲಕೃಷ್ಣ ದೇವಾಲಯವನ್ನು ಹೊಂದಿದೆ. ದೇವಸ್ಥಾನದ ಕೆತ್ತನೆಗಳು ಹೊಯ್ಸಳ ವಾಸ್ತುಶಿಲ್ಪಕ್ಕೆ ಉದಾಹರಣೆಯಾಗಿದೆ. ಬೆಟ್ಟದ ಕೆಳಗಿರುವ ಐತಿಹಾಸಿಕ ಮಲ್ಲೇಶ್ವರಸ್ವಾಮಿ, ವೆಂಕಟರವಣಸ್ವಾಮಿ ಮತ್ತು ದಂಡಿಮಾರಮ್ಮ ದೇವಸ್ಥಾನಗಳು ಪ್ರವಾಸಿಗರ ಆಕರ್ಷಣೆಯ ಕೇಂದ್ರವಾಗಿವೆ. ಕಡಿದಾದ ಬೆಟ್ಟ ಮತ್ತು ಕೋಟೆಯ ತುದಿ ತಲುಪಿದರೆ ರಮಣೀಯ

**ಏಕಶಿಲಾ ಗಿರಿಗೆ ರೋಪ್‌ವೇ ಅಳವಡಿಸಿದರೆ ಐತಿಹಾಸಿಕ ಬೆಟ್ಟವನ್ನು ವೀಕ್ಷಿಸುವ ಭಾಗ್ಯ ಅಬಾಲ ವೃದ್ಧರಿಗೆ ಸಿಗುತ್ತದೆ. ಪ್ರವಾಸಿಗರಿಗೆ ಸ್ಥಳೀಯ ವ್ಯಾಪಾರಿಗಳಿಗೆ ಅನುಕೂಲವಾಗುತ್ತದೆ.**

**ಲಲಿತಾಂಬ ಗಾಯಕಿ ಮಧುಗಿರಿ**

ದೃಶ್ಯಗಳನ್ನು ಕಾಣಬಹುದು.

ಆದರೆ ಕೆಲ ವೃದ್ಧರು, ಮಹಿಳೆಯರು, ಮಕ್ಕಳು, ಇನ್ನಿತರರು ಏರುವುದು ಕಷ್ಟಸಾಧ್ಯ. ಹಾಗಾಗಿ ಬೆಟ್ಟಕ್ಕೆ ಶೀಘ್ರ ರೋಪ್ ವೇ ಅಳವಡಿಸಿದರೆ ಅನುಕೂಲವಾಗುತ್ತದೆ. ತಾಲ್ಲೂಕಿನಲ್ಲಿ ವ್ಯಾಪಾರ ವಹಿವಾಟು ದುಪ್ಪಟ್ಟಾಗಿ ಸ್ಥಳೀಯರಿಗೆ ಉದ್ಯೋಗ ದೊರಕಲಿದೆ. ತಾಲ್ಲೂಕಿನ ಮೈದನಹಳ್ಳಿ ಕೃಷ್ಣಮೃಗ ವನ್ಯಧಾಮ, ಜಯಮಂಗಲಿ ನದಿ ಮತ್ತು ತಿಮ್ಮಲಾಪುರ ಕರಡಿಧಾಮಕ್ಕೂ ಪ್ರವಾಸಿಗರ ಸಂಖ್ಯೆ ಹೆಚ್ಚಳವಾಗಲಿದೆ. ಈ ನಿಟ್ಟಿನಲ್ಲಿ ಜನಪ್ರತಿನಿಧಿಗಳು, ಅಧಿಕಾರಿಗಳು ಕಾರ್ಯಪ್ರವೃತ್ತರಾಗಬೇಕು ಎನ್ನುವುದು ಜನರ ಆಶಯ.

# ರಾಸಾಯನಿಕ ಮುಕ್ತ ಕೃಷಿ ಇಂದಿನ ತುರ್ತು ಅಗತ್ಯ



ಉದಯವಾಹಿನಿ ಚಿತ್ರ

**ಜಿಲ್ಲಾ ಉಸ್ತುವಾರಿ ಸಚಿವ ಕೆ.ವೆಂಕಟೇಶ್ ಮಾತನಾಡಿ, ರಾಜ್ಯ ಸರ್ಕಾರಕ್ಕೆ ರೈತರ ಸಮಸ್ಯೆಗಳ ಬಗ್ಗೆ ಅರಿವಿದ್ದು ಅನ್ನದಾತರ ಬೇಡಿಕೆಗಳಿಗೆ ಸ್ಪಂದಿಸಲಿದ್ದಾರೆ. ಎಲ್ಲಾ ಸಮಸ್ಯೆಗಳಿಗೂ ಪ್ರತಿಭಟನೆಗಳೇ ಪರಿಹಾರವಲ್ಲ ರೈತರು ಬೀದಿಗಿಳಿಯುವ ಮುನ್ನ ಸರ್ಕಾರ ಹಾಗೂ ಜನಪ್ರತಿನಿಧಿಗಳ ಗಮನಕ್ಕೆ ತಂದು ಚರ್ಚಿಸಬೇಕು ಎಂದು ಸಲಹೆ ನೀಡಿದರು.**

**ಉಸ್ತುವಾರಿ ಸಚಿವ ಕೆ.ವೆಂಕಟೇಶ್**

• **ಉದಯವಾಹಿನಿ, ಚಾಮರಾಜನಗರ**

ರಾಸಾಯನಿಕ ಮುಕ್ತ ಕೃಷಿ ಇಂದಿನ ತುರ್ತು ಅಗತ್ಯವಾಗಿದ್ದು ರೈತರು ಸಾವಯವ ಕೃಷಿಯತ್ತ ಚಿತ್ತ ಹರಿಸಬೇಕು ಎಂದು ಸುತ್ತೂರು ಕ್ಷೇತ್ರದ ಶಿವರಾತ್ರಿ ದೇಶಿಕೇಂದ್ರ ಸ್ವಾಮೀಜಿ ಸಲಹೆ ನೀಡಿದರು. ನಗರದ ಡಾ.ರಾಜಕುಮಾರ್ ಜಿಲ್ಲಾ ರಂಗಮಂದಿರದಲ್ಲಿ ರಾಜ್ಯ ರೈತ ಸಂಘಟನೆಗಳ ಒಕ್ಕೂಟ, ರಾಜ್ಯ ರೈತಸಂಘ ಹಾಗೂ ಹಸಿರುಸೇನೆ, ರಾಜ್ಯ ಕಬ್ಬು ಬೆಳೆಗಾರರ ಸಂಘದ ವತಿಯಿಂದ ಹಮ್ಮಿಕೊಂಡಿದ್ದ ವಿಶ್ವ ರೈತ ದಿನಾಚರಣೆ, ರಾಜ್ಯಮಟ್ಟದ ರೈತ ಚಿಂತನಾ ಸಮಾವೇಶದ ಸಾನಿಧ್ಯ ವಹಿಸಿ ಮಾತನಾಡಿದ ಶ್ರೀಗಳು ರೈತ ಉಳಿದರೆ ಮಾತ್ರ ದೇಶ ಉಳಿಯುತ್ತದೆ ಎಂಬ ಸತ್ಯ ಅರಿಯಬೇಕು ಎಂದರು.


ಆಧುನಿಕ ಕೃಷಿ ಪದ್ಧತಿ ಹೆಸರಿನಲ್ಲಿ ಅತಿಯಾದ ರಾಸಾಯನಿಕಗಳ ಬಳಕೆಯಿಂದ ಆಹಾರ ವಿಷವಾಗಿ ಮನುಷ್ಯನ ದೇಹ ಸೇರುತ್ತಿದೆ.

ರೋಗ ಬಾಧೆ ನಿಯಂತ್ರಣ ಹಾಗೂ ಹೆಚ್ಚು ಇಳುವರಿ ಪಡೆಯುವ ಉದ್ದೇಶದಿಂದ ನಿಗದಿಗಿಂತಲೂ ಹೆಚ್ಚು ಕೀಟನಾಶಕ, ರಾಸಾಯನಿಕ ಬಳಕೆ ಮಾಡುತ್ತಿರುವುದು ಆತಂಕಕಾರಿ. ರೈತರು ರಾಸಾಯನಿಕ ಮುಕ್ತ ಕೃಷಿಯತ್ತ ಹೊರಳುವ ಬಗ್ಗೆ ಗಂಭೀರ ಚಿಂತನೆ ಮಾಡಬೇಕು ಎಂದರು.

ರೈತರ ದುಡಿಮೆಗೆ ಬೆಲೆ ಕಟ್ಟಲು ಸಾಧ್ಯವಿಲ್ಲ. ಆದರೂ ರೈತ ಬೆಳೆದ ಬೆಳೆಗಳಿಗೆ ಸೂಕ್ತ ಬೆಲೆ ಸಿಗುತ್ತಿಲ್ಲ ಈ ನಿಟ್ಟಿನಲ್ಲಿ ಸರ್ಕಾರ ವೈಜ್ಞಾನಿಕ ಬೆಲೆ ನಿಗದಿ ಮಾಡಿದರೆ ರೈತರು ಬದುಕು ಹಸನಾಗಲಿದೆ, ರೈತರ ಬೆಳೆಗಳಿಗೆ ಹಾನಿಯಾದರೆ ಸೂಕ್ತ ಪರಿಹಾರ ನೀಡಬೇಕು ಎಂದು ಸುತ್ತೂರು ಸ್ವಾಮೀಜಿ ಹೇಳಿದರು. ಕೃಷಿಯಲ್ಲಿ ಅತಿಯಾದ ರಾಸಾಯನಿಕ ಬಳಕೆಯಿಂದ ಆಹಾರ ವಿಷವಾಗುತ್ತಿದ್ದು ಸಾರ್ವಜನಿಕರ ದೇಹ ಸೇರಿ ಅನಾರೋಗ್ಯ ಸಮಸ್ಯೆಗಳು ಕಾಣಿಸುತ್ತಿವೆ.

ಈ ನಿಟ್ಟಿನಲ್ಲಿ ರೈತರು ಚಿಂತನೆ ಮಾಡಬೇಕಿದ್ದು ರಾಸಾಯನಿಕ ಮುಕ್ತ ಕೃಷಿಗೆ ಮುಂದಾಗಬೇಕು. ರೈತರು ಬೆಳೆದ ಬೆಳೆಗೆ ಬೆಂಬಲ ಬೆಲೆ ನೀಡುವ ಹಾಗೂ ರೈತಪರ ನೀತಿಗಳನ್ನು ಜಾರಿಗೊಳಿಸುವ ಕೆಲಸವನ್ನು ಕೇಂದ್ರ ಸರ್ಕಾರ ಮಾಡಬೇಕು ಎಂದರು.

# ಗಣರಾಜ್ಯೋತ್ಸವ ಪೂರ್ವಭಾವಿ ಸಭೆ ಮುಂದೂಡಿಕೆ


ಉದಯವಾಹಿನಿ ಚಿತ್ರ

• **ಉದಯವಾಹಿನಿ, ಕೆಜಿಎಫ್**

ಗಣರಾಜ್ಯೋತ್ಸವ ಸೇರಿದಂತೆ ಮೂವರು ಮಹನೀಯರ ಜಯಂತಿ ಆಚರಣೆಗಾಗಿ ಹಮ್ಮಿಕೊಳ್ಳಲಾಗಿದ್ದ ಪೂರ್ವಭಾವಿ ಸಭೆಗೆ ಯಾವುದೇ ಸಮುದಾಯದ ಮುಖಂಡರು ಹಾಜರಾಗಲಿಲ್ಲ. ಇದರಿಂದಾಗಿ ಶಾಸಕಿ ರೂಪಕಲಾ ಶಶಧರ್ ಅವರು ತಾಲ್ಲೂಕು ಆಡಳಿತ ಸೌಧದಲ್ಲಿ ಗಂಟೆಗಟ್ಟಲೇ ಕಾದು ಕುಳಿತುಕೊಂಡರು.ಮಹಾಯೋಗಿ ವೇಮನ, ಅಂಬಿಗರ ಚೌಡಯ್ಯ ಮತ್ತು ಸವಿತಾ ಮಹರ್ಷಿ ಅವರ ಜಯಂತಿ ಆಚರಣೆಯ ಪೂರ್ವಭಾವಿ ಸಭೆಯನ್ನು ಹಮ್ಮಿಕೊಳ್ಳಲಾಗಿತ್ತು. ಇದೇ ವೇಳೆ ಗಣರಾಜ್ಯೋತ್ಸವ ಪೂರ್ವಭಾವಿ ಸಭೆಯನ್ನೂ ಆಯೋಜಿಸಲಾಗಿತ್ತು.

ವೇಮನ ಜಯಂತಿ ಸಂಬಂಧ ಮಾತನಾಡಲು ರೆಡ್ಡಿ ಸಮುದಾಯದ ಮುಖಂಡರು ಆಗಮಿಸುತ್ತಾರೆ ಎಂದು ಬಹಳ ಹೊತ್ತು ಶಾಸಕರು ಕಾದರು. ತಡವಾದ ಕಾರಣ ಗಣರಾಜ್ಯೋತ್ಸವ ಪೂರ್ವಭಾವಿ ಸಭೆ ನಡೆಸಿದರು.

ಸುಮಾರು ಹೊತ್ತಿನ ನಂತರ ರೆಡ್ಡಿ ಸಮುದಾಯದ ಪ್ರಸನ್ನ ರೆಡ್ಡಿ ಮತ್ತು ರಾಧಾಕೃಷ್ಣರೆಡ್ಡಿ ಸಭೆಗೆ ಆಗಮಿಸಿದರು. ಸವಿತಾ ಮಹರ್ಷಿ ಸಮುದಾಯದ ಬೆರಳೆಣಿಕೆಯಷ್ಟು ಮಂದಿ ಬಂದಿದ್ದರು. ಅಂಬಿಗ ಚೌಡಯ್ಯ ಅವರ ಸಮುದಾಯಕ್ಕೆ ಸೇರಿದ ಯಾರೂ ಬಂದಿರಲಿಲ್ಲ. ನಂತರ ಮಹನೀಯರ ಜಯಂತಿಗೆ ಪುನಃ ತಹಶೀಲ್ದಾರ್ ಅಧ್ಯಕ್ಷತೆಯಲ್ಲಿ ಸಭೆ ಕರೆಯಲು ಶಾಸಕಿ ಸೂಚಿಸಿದರು. ಡಿವೈಎಸ್‌ಪಿ ಲಕ್ಷ್ಮಯ್ಯ, ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಹಣಾಧಿಕಾರಿ ವೆಂಕಟೇಶಪ್ಪ, ನಗರಸಭೆ ಆಯುಕ್ತ ಆಂಜನೇಯಲು ಹಾಜರಿದ್ದರು.

# ಮಿನಿ ನ್ಯೂಸ್

## 13ರಂದು ಕಲ್ಟ್ ಚಲನಚಿತ್ರ ಪ್ರಚಾರ ಕಾರ್ಯ

• **ಉದಯವಾಹಿನಿ, ಶಿಡ್ಲಘಟ್ಟ**

ಕನ್ನಡದ ಸಿನಿಮಾಗಳನ್ನು ನೋಡಬೇಕು. ಕನ್ನಡ ಸಾಹಿತ್ಯವನ್ನು ಓದಬೇಕು. ಆ ಮೂಲಕ ಕನ್ನಡ ಭಾಷೆ ಸಾಹಿತ್ಯವನ್ನು ಉಳಿಸಿ ಬೆಳೆಸುವ ಕೆಲಸ ಮಾಡಬೇಕಿದೆ ಎಂದು ಕೆಪಿಸಿಸಿ ಕೋ-ಆರ್ಡಿನೇಟರ್ ಬಿ.ವಿ.ರಾಜೀವ್‌ಗೌಡ ಹೇಳಿದರು. ಸಚಿವ ಜಮೀರ್ ಅಹ್ಮದ್ ಖಾನ್ ಪುತ್ರ ಝುನ್ಯೆದ್ ಖಾನ್ ನಟನೆಯ ಕಲ್ಟ್ ಚಲನ ಚಿತ್ರದ ಪ್ರಚಾರ ಕಾರ್ಯ ಜ.13ರಂದು ನಗರದ ನೆಹರೂ ಕ್ರೀಡಾಂಗಣದಲ್ಲಿ ನಡೆಯಲಿದ್ದು ಪ್ರಚಾರ ಕಾರ್ಯಕ್ಕೆ ಕೈಗೊಂಡ ಪೂರ್ವ ಸಿದ್ಧತೆಗಳನ್ನು ವೀಕ್ಷಿಸಿ ಮಾತನಾಡಿದರು. ಸಚಿವ ಜಮೀರ್ ಅಹ್ಮದ್ ಅವರು ಕಾಂಗ್ರೆಸ್ ಪಕ್ಷದ ನಾಯಕರು. ಅವರ ಪುತ್ರ ಝುನ್ಯೆದ್ ಖಾನ್ ಕನ್ನಡ ಚಿತ್ರದಲ್ಲಿ ನಾಯಕ ನಟನಾಗಿ ನಟಿಸಿರುವ ಕಲ್ಟ್ ಚಲನಚಿತ್ರ ಜ. 23ರಂದು ರಾಜ್ಯದಾದ್ಯಂತ ಬಿಡುಗಡೆ ಆಗುತ್ತಿದೆ. ಶಿಡ್ಲಘಟ್ಟದಲ್ಲಿ ಜ. 13ರಂದು ಸಂಜೆ 5 ಗಂಟೆಗೆ ನೆಹರೂ ಕ್ರೀಡಾಂಗಣದಲ್ಲಿ ಚಿತ್ರದ ಪ್ರಚಾರ ಕಾರ್ಯಕ್ರಮ ನಡೆಯಲಿದೆ ಎಂದರು.

ನಾಯಕ ನಟ, ನಾಯಕಿ ಸೇರಿದಂತೆ ಚಿತ್ರದ ನಟರು, ತಾಂತ್ರಿಕ ಸಿಬ್ಬಂದಿ, ಕಾಂಗ್ರೆಸ್ ಮುಖಂಡರು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ. 10 ಸಾವಿರಕ್ಕೂ ಹೆಚ್ಚು ಮಂದಿ ಭಾಗವಹಿಸಲಿದ್ದಾರೆ ಎಂದರು. ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಕೃಷ್ಣಾರೆಡ್ಡಿ ಸೇರಿದಂತೆ ಕಾಂಗ್ರೆಸ್ ಮುಖಂಡರು, ಕಾರ್ಯಕರ್ತರು ಇದ್ದರು.

## ನಗರದ ರೈಲ್ವೆ ನಿಲ್ದಾಣದಲ್ಲಿ ಪ್ರಯಾಣಿಕರಿಗಾಗಿ ಪುಸ್ತಕ ಗೂಡು ಮಿನಿ ಗ್ರಂಥಾಲಯ ಆರಂಭ

• **ಉದಯವಾಹಿನಿ, ತುಮಕೂರು**

ನಗರದ ರೈಲ್ವೆ ನಿಲ್ದಾಣದಲ್ಲಿ ಪ್ರಯಾಣಿಕರಿಗಾಗಿ ಪುಸ್ತಕ ಗೂಡು ಮಿನಿ ಗ್ರಂಥಾಲಯ ಆರಂಭಿಸಲಾಗಿದೆ.ಕೇಂದ್ರ ಜಲ ಶಕ್ತಿ, ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ಅಭಿಮಾನಿ ಬಳಗದಿಂದ ಪುಸ್ತಕ ಗೂಡು ಪ್ರಾರಂಭಿಸಿದ್ದು, ಸೋಮಣ್ಣ ಚಾಲನೆ ನೀಡಿದರು. ಬಸ್ ನಿಲ್ದಾಣ, ಉದ್ಯಾನವನ ಜನ ಸೇರುವ ಕಡೆ ಪುಸ್ತಕ ಗೂಡು ಸ್ಥಾಪಿಸುವಂತೆ ಸಲಹೆ ಮಾಡಿದರು. ಲೇಖಕಿ ಬಾ.ಹ.ರಮಾಕುಮಾರಿ, ಗ್ರಂಥಾಲಯಗಳಿಗೆ ಹೋಗಿ ಓದುವವರ ಸಂಖ್ಯೆ ಕಡಿಮೆಯಾಗಿದೆ. ಪುಸ್ತಕ ಪ್ರೀತಿ ಬೆಳೆಯಬೇಕು. ಇಂತಹ ಕಾರ್ಯಗಳ ಮೂಲಕ ಕತ್ತಲೆಯಲ್ಲಿರುವ ಪುಸ್ತಕಗಳಿಗೆ ಬೆಳಕು ತೋರಿದಂತಾಗುತ್ತದೆ' ಎಂದರು. ಜಿಲ್ಲಾ ಕನ್ನಡ ಸಾಹಿತ್ಯ ಪರಿಷತ್ತಿನ ಅಧ್ಯಕ್ಷ ಕೆ.ಎಸ್. ಸಿದ್ದಲಿಂಗಪ್ಪ, ಗಂಗಾ ಆಸ್ಪತ್ರೆ ವೈದ್ಯ ಎಚ್.ಬಿ.ಎಂ.ಹಿರೇಮಠ, ಸಿದ್ಧಗಂಗಾ ಕಾಲೇಜು ಗ್ರಂಥಪಾಲಕಿ ಪರಿಮಳಾ ಸತೀಶ್, ಲೇಖಕಿ ಶಾಲಿನಿ ದೇವಪ್ರಕಾಶ್, ಮುಖಂಡರಾದ ಧನಿಯಾಕುಮಾರ್, ಗಿರಿಜಾ ಧನಿಯಾಕುಮಾರ್, ಗುರುರಾಘವೇಂದ್ರ, ಜೆ.ವಿಠಲ್, ರಾಮಚಂದ್ರರಾವ್, ಶಬ್ಬಿರ್ ಅಹ್ಮದ್, ಸಿದ್ದಲಿಂಗಸ್ವಾಮಿ, ಸತೀಶ್ ಇತರರು ಭಾಗವಹಿಸಿದ್ದರು.

## ಬಾಂಗ್ಲಾದಲ್ಲಿ ಹಿಂದೂಗಳ ಮೇಲೆ ದೌರ್ಜನ್ಯಕ್ಕೆ ಆಕ್ರೋಶ

• **ಉದಯವಾಹಿನಿ, ಕೆಜಿಎಫ್**

ಬಾಂಗ್ಲಾದೇಶದಲ್ಲಿ ಹಿಂದೂ ಸಮುದಾಯದ ಮೇಲೆ ನಡೆಯುತ್ತಿರುವ ದೌರ್ಜನ್ಯಗಳನ್ನು ತಡೆಗಟ್ಟಲು ಆ ದೇಶದ ಮೇಲೆ ಭಾರತವು ರಾಜತಾಂತ್ರಿಕ ಒತ್ತಡ ಹೇರಬೇಕು ಎಂದು ಒತ್ತಾಯಿಸಿ ಹಿಂದೂ ನಾಗರಿಕ ವೇದಿಕೆ ಕಾರ್ಯಕರ್ತರು ನಗರದಲ್ಲಿ ಪ್ರತಿಭಟನೆ ನಡೆಸಿದರು. ರಾಬರ್ಟ್‌ಸನ್‌ಪೇಟೆಯ ಪ್ರಸನ್ನ ಲಕ್ಷ್ಮಿವೆಂಕಟರಮಣ ದೇವಾಲಯದಲ್ಲಿ ಜಮಾಯಿಸಿದ ಕಾರ್ಯಕರ್ತರು ಘೋಷಣೆಗಳನ್ನು ಕೂಗುತ್ತಾ ಗೀತಾ ರಸ್ತೆ ಮತ್ತು ಪ್ರಿಚರ್ಡ್ ರಸ್ತೆ ಮೂಲಕ ಹಾದು ಮತ್ತೆ ದೇವಾಲಯ ಆವರಣದಲ್ಲಿ ಸೇರಿ ಸರ್ಕಲ್ ಇನ್ಸ್‌ಪೆಕ್ಟರ್ ಪಿ.ಎಂ.ನವೀನ್ ಅವರಿಗೆ ಮನವಿ ಸಲ್ಲಿಸಿದರು.

ವಿಶ್ವ ಹಿಂದೂ ಪರಿಷತ್ ಮುಖಂಡ ಶ್ರೀಧರರಾವ್ ಶಿಂಧೆ ಮಾತನಾಡಿ, ಬಾಂಗ್ಲಾದೇಶದಲ್ಲಿ ಒಂದೂವರೆ ತಿಂಗಳಿಂದ ಹಿಂದೂಗಳ ಮೇಲೆ ದೌರ್ಜನ್ಯ ಹೆಚ್ಚಿದೆ. ಈವರೆಗೆ ಆರು ಹಿಂದೂಗಳ ಹತ್ಯೆಯಾಗಿದೆ. ಮಹಿಳೆಯರ ಮೇಲೆ ಅತ್ಯಾಚಾರವಾಗಿದೆ. ಸುಮಾರು 600 ಮನೆಗಳಿಗೆ ಬೆಂಕಿ ಇಡಲಾಗಿದೆ. ಕ್ರಿಸ್‌ಮಸ್ ದಿನದಂದು ಚರ್ಚ್‌ಗೆ ಬೆಂಕಿ ಹಚ್ಚಲಾಗಿದೆ. ಭಾರತದಲ್ಲಿ ಅಲ್ಪಸಂಖ್ಯಾತರನ್ನು ಗೌರವಯುತವಾಗಿ ನಡೆಸಿಕೊಳ್ಳಲಾಗುತ್ತಿದೆ. ಅವರಿಗೆ ರಕ್ಷಣೆ ಇದೆ.

ಆದರೆ ಬಾಂಗ್ಲಾದೇಶದಲ್ಲಿ ಅಲ್ಪಸಂಖ್ಯಾತರಾದ ಹಿಂದೂಗಳು, ಕ್ರಿಶ್ಚಿಯನ್ನರು ಸೇರಿದಂತೆ ಇತರ ಅಲ್ಪಸಂಖ್ಯಾತರ ಮೇಲೆ ಪ್ರತಿನಿತ್ಯ ದಾಳಿ ಮತ್ತು ಹಲ್ಲೆಗಳು ನಡೆಯುತ್ತಿವೆ. ಈ ರೀತಿಯ ದೌರ್ಜನ್ಯವನ್ನು ಒಟ್ಟಾಗಿ ಖಂಡಿಸುವ ಅವಶ್ಯಕತೆ ಇದೆ ಎಂದು ಹೇಳಿದರು.

ವಕೀಲರ ಸಂಘದ ಅಧ್ಯಕ್ಷ ಎಸ್.ಎನ್. ರಾಜಗೋಪಾಲಗೌಡ ಮಾತನಾಡಿ, ಬಾಂಗ್ಲಾದೇಶದಲ್ಲಿ ಆಗುತ್ತಿರುವ ಅನ್ಯಾಯ ಮತ್ತು ಅಕ್ರಮಗಳನ್ನು ನಿಲ್ಲಿಸಲು ಭಾರತ ತೀವ್ರ ಸ್ವರೂಪದ ಒತ್ತಡ ಹೇರಬೇಕು ಎಂದು ಆಗ್ರಹಿಸಿದರು.

# ಕೇಂದ್ರ ಸರ್ಕಾರದ ವಿರುದ್ಧ ಜಿಲ್ಲಾ ಉಸ್ತುವಾರಿ ವಾಗ್ದಾಳಿ

## ಯುಪಿಎ ಯೋಜನೆ; ಹೆಸರು ಬದಲಿಸುತ್ತಿರುವ ಬಿಜೆಪಿ: ಸಚಿವ ಡಾ.ಎಂ.ಸಿ.ಸುಧಾಕರ್

• **ಉದಯವಾಹಿನಿ, ಚಿಕ್ಕಬಳ್ಳಾಪುರ**

ಬಿಜೆಪಿ ನೇತೃತ್ವದ ಎನ್‌ಡಿಎ ಸರ್ಕಾರವು ಕಾಂಗ್ರೆಸ್ ನೇತೃತ್ವದ ಯುಪಿಎ ಸರ್ಕಾರವು ಜಾರಿಗೊಳಿಸಿದ್ದ ಯೋಜನೆಗಳ ಹೆಸರು ಬದಲಿಸುತ್ತಿದೆ. ಇದರ ಮುಂದುವರಿದ ಭಾಗವೇ ಮಹಾತ್ಮ ಗಾಂಧಿ ರಾಷ್ಟ್ರೀಯ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ (ನರೇಗಾ) ಹೆಸರನ್ನು ವಿಬಿ-ಜಿ ರಾಮ್ ಜಿ ಎಂದು ಬದಲಿಸಿರುವುದು ಎಂದು ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಸಿ.ಸುಧಾಕರ್ ವಾಗ್ದಾಳಿ ನಡೆಸಿದರು. ನಗರದಲ್ಲಿ ಮಾಧ್ಯಮಗೋಷ್ಠಿಯಲ್ಲಿ ಮಾತನಾಡಿದ ಅವರು, ಮನಮೋಹನ್ ಸಿಂಗ್ ಅವರು ಪ್ರಧಾನಿ ಆಗಿದ್ದಾಗ ಬಡವರ ಬದುಕಿನಲ್ಲಿ ಬದಲಾವಣೆ ತರಬೇಕು ಎಂದು ಉದ್ಯೋಗ ಖಾತ್ರಿ ಯೋಜನೆಯನ್ನು ದೇಶದಾದ್ಯಂತ ಜಾರಿಗೊಳಿಸಿದರು ಎಂದರು.

2014ರಿಂದ ಬಿಜೆಪಿ ಸರ್ಕಾರವು ಯೋಜನೆಗಳ ಹೆಸರು ಬದಲಿಸುತ್ತಿದೆ. ಸ್ವಚ್ಛತಾ ಆಂದೋಲವನ್ನು ಸ್ವಚ್ಛ ಭಾರತ್ ಎಂದು ಬದಲಿಸಿದರು. ಹೀಗೆ ಎಲ್ಲದಕ್ಕೂ ಹಿಂದಿ ಪದಗಳನ್ನು ಬಳಸುತ್ತಿದ್ದಾರೆ ಎಂದರು. ನರೇಗಾ ಯೋಜನೆಯ ಹೆಸರು ಬದಲಿಸಿ ರಾಮ್ ಎಂದು ಹೆಸರು ಇಡಲಾಗಿದೆ. ರಾಮನ ಹೆಸರಿಗೆ ಕಾಂಗ್ರೆಸ್ ವಿರೋಧ ವ್ಯಕ್ತಪಡಿಸುತ್ತಿದೆ ಎಂದು ಜನರಲ್ಲಿ ತಪ್ಪು ಭಾವನೆ ಹರಡುತ್ತಿದ್ದಾರೆ ಎಂದರು. ಈ ಹಿಂದೆ ಕೇಂದ್ರದ ಪಾಲು ಶೇ 90 ಮತ್ತು ರಾಜ್ಯದ ಪಾಲು ಶೇ 10 ಇತ್ತು. ಆದರೆ ಈಗ ಯೋಜನೆಯ ಸ್ವರೂಪ ಬದಲಿಸಿ ಕೇಂದ್ರದ್ದು ಶೇ 60 ಮತ್ತು ರಾಜ್ಯದ ಪಾಲು ಶೇ 40 ಎಂದಿದ್ದಾರೆ. ಈ ಹಿಂದೆ ಅಂಗನವಾಡಿ ಕಟ್ಟಡಗಳು, ಕೊಟ್ಟಿಗೆ ಸೇರಿದಂತೆ ಹಲವು ಕಾರ್ಯಕ್ರಮಗಳನ್ನು ನರೇಗಾದಡಿ ಅನುಷ್ಠಾನಗೊಳಿಸಬಹುದಿತ್ತು. ಆದರೆ ಈಗ ಕೆಲವು ಕಾರ್ಯಕ್ರಮಗಳನ್ನು ಮಾತ್ರ ಜಾರಿಗೊಳಿಸಬಹುದು ಎಂದರು.


ಉದಯವಾಹಿನಿ ಚಿತ್ರ

ಗ್ರಾಮಗಳು ಅಭಿವೃದ್ಧಿ ಆಗಬೇಕು ಎನ್ನುವುದು ಗಾಂಧೀಜಿ ಅವರ ಪರಿಕಲ್ಪನೆ. ಆ ಕಾರಣದಿಂದಲೇ ನರೇಗಾ ಯೋಜನೆ

**ರಾಮನ ಆಶೀರ್ವಾದ ಬಿಜೆಪಿಗೆ ಇದ್ದಿದ್ದರೆ ಅಯೋಧ್ಯೆಯಲ್ಲಿ ಗೆಲ್ಲಬೇಕಿತ್ತು. ಆದರೆ ಅಲ್ಲಿಯೇ ಗೆಲ್ಲಲು ಆಗಲಿಲ್ಲ. ಬಿಜೆಪಿಯ ಹೆಸರು ಬದಲಾವಣೆ ಮತ್ತು ಅದರ ಪರಿಣಾಮಗಳನ್ನು ಜನರು ಅರಿತುಕೊಳ್ಳಬೇಕು ಎಂದರು.**

**ಶಾಸಕ ಪ್ರದೀಪ್ ಈಶ್ವರ್**

ರೂಪಿಸಲಾಗಿತ್ತು. ಆದರೆ ಇದಕ್ಕೆ ವಿರುದ್ಧವಾಗಿ ಕೇಂದ್ರ ಸರ್ಕಾರ ನಡೆದುಕೊಳ್ಳುತ್ತಿದೆ. ಜಿಎಸ್‌ಟಿ ಸೇರಿದಂತೆ ಬೇರೆ ಬೇರೆ ತೆರಿಗೆಗಳನ್ನು ರಾಜ್ಯವು ಕೇಂದ್ರಕ್ಕೆ ನೀಡುತ್ತದೆ. ಆದರೆ ನಮಗೆ ನಮ್ಮ ರಾಜ್ಯದ ಪಾಲನ್ನು ಕೇಂದ್ರ ಸರ್ಕಾರ ನೀಡುತ್ತಿಲ್ಲ ಎಂದರು. ಕಾಂಗ್ರೆಸ್ ಜಾತಿ ಧರ್ಮದ ಆಧಾರದಲ್ಲಿ ರಾಜಕೀಯ ಮಾಡುವುದಿಲ್ಲ. ಸ್ವಾತಂತ್ರ್ಯ ಹೋರಾಟದಲ್ಲಿ ಪಾತ್ರವೇ ಇಲ್ಲದವರು ಜಾತಿ, ಧರ್ಮದ ಹೆಸರಿನಲ್ಲಿ ದೇಶ ವಿಭಜಿಸುತ್ತಿದ್ದಾರೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಎಐಸಿಸಿ ಕಾರ್ಯದರ್ಶಿ ಅಭಿಷೇಕ್ ದತ್ತ ಮಾತನಾಡಿ, ಯಾವುದೇ ರೀತಿ ಸಾರ್ವಜನಿಕ ಚರ್ಚೆ ನಡೆಸದೆ ಹೆಸರುಗಳನ್ನು ಕೇಂದ್ರ ಸರ್ಕಾರ ಬದಲಿಸುತ್ತಿದೆ. ಗೋಡ್ಸೆ, ಮಹಾತ್ಮಗಾಂಧಿ


**ತೀರ್ಮಾನಗಳ ಹಿಂದೆ ಆರ್‌ಎಸ್ ಪಾತ್ರ**

**ಎನ್‌ಡಿಎ ಸರ್ಕಾರದ ತೀರ್ಮಾನಗಳ ಹಿಂದೆ ಆರ್‌ಎಸ್ ಪಾತ್ರವಿದೆ. ರಾಹುಲ್ ಗಾಂಧಿ ಅವರು ಹೇಳಿದರು ಎನ್ನುವ ಕಾರಣಕ್ಕೆ ಜಾತಿ ಜನಗಣತಿಯನ್ನು ಬಿಜೆಪಿ ವಿರೋಧಿಸಿತು. ಆದರೆ ಆರ್‌ಎಸ್‌ಎಸ್ ಹೇಳಿದ ಮೇಲೆ ಜಾತಿ ಸಮೀಕ್ಷೆ ಮಾಡುತ್ತೇವೆ ಎಂದರು. ಆರ್‌ಎಸ್‌ಎಸ್ ಅಣತಿಯಂತೆ ಕಾರ್ಯಕ್ರಮಗಳು ಜಾರಿ ಆಗುತ್ತಿವೆ ಎಂದು ಡಾ.ಎಂ.ಸಿ.ಸುಧಾಕರ್ ಆರೋಪಿಸಿದರು. ದೇಶದ ಜಾತ್ಯತೀತ ನೆಲೆಗಟ್ಟನ್ನು ಅವರ ಸಿದ್ಧಾಂತಕ್ಕೆ ತರಬೇಕು ಎಂದು ಆರ್‌ಎಸ್‌ಎಸ್ ಪ್ರಯತ್ನಿಸುತ್ತಿದೆ. ಸಮಾಜವನ್ನು ಧರ್ಮದ ಹೆಸರಲ್ಲಿ ವಿಭಜಿಸುವುದೇ ದುರುದ್ದೇಶ ಇದೆ. ಸ್ವಾತಂತ್ರ್ಯ ಹೋರಾಟದಲ್ಲಿ ಆರ್‌ಎಸ್‌ಎಸ್ ಪಾತ್ರ ಏನಿತ್ತು? ಅವರು ಸ್ವಾತಂತ್ರ್ಯಕ್ಕಾಗಿ ಹೋರಾಟ ನಡೆಸಲಿಲ್ಲ ಎಂದರು. ಗ್ರಾಮ ಮಟ್ಟದಿಂದ ಹೋರಾಟ ನರೇಗಾ ಯೋಜನೆ ಹೆಸರು ಬದಲಿಸಿರುವ ಬಗ್ಗೆ ಗ್ರಾಮ ತಾಲ್ಲೂಕು ಜಿಲ್ಲೆ ಮತ್ತು ರಾಜ್ಯ ಮಟ್ಟದಲ್ಲಿ ಹೋರಾಟಗಳನ್ನು ರೂಪಿಸುತ್ತೇವೆ. ಹಂತ ಹಂತವಾಗಿ ಹೋರಾಟಗಳು ನಡೆಯುತ್ತವೆ ಎಂದು ಸಚಿವರು ತಿಳಿಸಿದರು.**

ಅವರನ್ನು ಹತ್ಯೆ ಮಾಡಿದ. ಈಗ ಬಿಜೆಪಿ ಗಾಂಧಿ ಚಿಂತನೆಗಳನ್ನು ಹತ್ಯೆ ಮಾಡುತ್ತಿದೆ ಎಂದರು. ಶಾಸಕ ಕೆ.ಎಚ್. ಪುಟ್ಟಸ್ವಾಮಿಗೌಡ ಮಾತನಾಡಿ, ನರೇಗಾ ಗ್ರಾಮಗಳ ಸರ್ವತೋಮುಖ ಅಭಿವೃದ್ಧಿಗೆ ಪೂರಕವಾಗಿತ್ತು. ಈ ಯೋಜನೆಯ ರೂಪುರೇಷೆಗಳನ್ನು ಬದಲಿಸುವ ಮೂಲಕ ಬಿಜೆಪಿ ಗ್ರಾಮೀಣಾಭಿವೃದ್ಧಿಗೆ ಅಡ್ಡಿ ಆಗಿದೆ ಎಂದು ದೂರಿದರು. ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಕೇಶವರೆಡ್ಡಿ, ಎಚ್.ಎನ್. ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಎನ್.ಎಚ್. ಶಿವಶಂಕರರೆಡ್ಡಿ, ಬೀಜ ನಿಗಮದ ಅಧ್ಯಕ್ಷ ಅಂಜನಪ್ಪ, ಉಗ್ರಾಣ ನಿಗಮದ ಅಧ್ಯಕ್ಷ ಸಂಪಂಗಿ, ಮಾವು ಅಭಿವೃದ್ಧಿ ಮತ್ತು ಮಾರಾಟ ನಿಗಮದ ಡಾ.ಬಿ.ಸಿ ಮುದ್ದು ಗಂಗಾಧರ್, ಮಾಜಿ ಶಾಸಕರಾದ ಕೆ.ಪಿ ಬಚ್ಚೇಗೌಡ, ವಿಧಾನ ಪರಿಷತ್ ಆಗ್ನೇಯ ಪದವೀಧರ ಕ್ಷೇತ್ರದ ಅಭ್ಯರ್ಥಿ ಶಶಿ ಹುಲಿಕುಂಟೆಮಠ ಮತ್ತಿತರರು ಗೋಷ್ಠಿಯಲ್ಲಿ ಪಾಲ್ಗೊಂಡಿದ್ದರು.

ಅಂತರಾಳದಿಂದ.. EDITORIAL


# ಬೆದರಿಕೆಗೆ ಬಾಗುವ ಪ್ರವೃತ್ತಿ-ಭಾರತದ ನಡೆ ನಿರಾಶಾದಾಯಕ



**ದಾಳಿಕೋರ ಮನಃಸ್ಥಿತಿಯನ್ನು ದಿಟ್ಟವಾಗಿ ಖಂಡಿಸುತ್ತಿದ್ದ ಭಾರತ, ಇತ್ತೀಚೆಗೆ ಯಾರನ್ನೂ ನೋಯಿಸದ ನಿಲುವು ಅನುಸರಿಸುತ್ತಿದೆ. ಈ ನೀತಿ ವೆನೆಜುವೆಲಾ ಮೇಲಿನ ಅಮೆರಿಕ ದಾಳಿಗೆ ಸಂಬಂಧಿಸಿದಂತೆಯೂ ಮುಂದುವರಿದಿದೆ.**

ತೈಲನಿಕ್ಷೇಪ ಸಂಪದ್ಭರಿತ ರಾಷ್ಟ್ರ ವೆನೆಜುವೆಲಾ ಮೇಲೆ ದಾಳಿ ನಡೆಸಿ, ಆ ದೇಶದ ಅಧ್ಯಕ್ಷ ನಿಕೊಲಸ್ ಮಡೂರೊ ಮತ್ತು ಅವರ ಪತ್ನಿ ಸಿಲಿಯಾ ಫ್ಲೋರೆಸ್ ಅವರನ್ನು ಬಂಧಿಸಿರುವ ಅಮೆರಿಕದ ಕ್ರಮಕ್ಕೆ ಸಂಬಂಧಿಸಿದಂತೆ ಭಾರತ ನೀಡಿರುವ ಪ್ರತಿಕ್ರಿಯೆ ಎಚ್ಚರಿಕೆಯಿಂದ ಕೂಡಿದುದಾಗಿದೆ ಹಾಗೂ ನಡೆದ ಘಟನೆ ಸ್ವೀಕಾರಾರ್ಹ ಎನ್ನುವ ಧಾಟಿಯಲ್ಲಿದೆ. ಘಟನೆಗೆ ಪ್ರತಿಕ್ರಿಯಿಸಲು ತಡಬಡಾಯಿಸಿರುವ ಕೇಂದ್ರ ಸರ್ಕಾರ, ಒಂದು ದಿನದ ವಿಳಂಬದ ನಂತರ ನೀಡಿರುವ ಪ್ರತಿಕ್ರಿಯೆ ಔಪಚಾರಿಕತೆಯಿಂದ ಕೂಡಿದುದಾಗಿದೆ. ಬೆಳವಣಿಗೆಗಳ ಬಗ್ಗೆ ತೀವ್ರ ಕಳವಳ ವ್ಯಕ್ತಪಡಿಸಿರುವ ಸರ್ಕಾರದ ಹೇಳಿಕೆಯು ಅಮೆರಿಕದ ಹೆಸರಿನ ಉಲ್ಲೇಖ ಹಾಗೂ ದಾಳಿಯ ಬಗ್ಗೆ ಖಂಡನೆ ಇಲ್ಲದಿರುವ ಹಾಗೆ ಎಚ್ಚರಿಕೆಯಿಂದ ಆಯ್ದ ಪದಗಳಿಂದ ರೂಪುಗೊಂಡಿದೆ. ವೆನೆಜುವೆಲಾ ಜನರ ಸುರಕ್ಷತೆ ಮತ್ತು ಯೋಗಕ್ಷೇಮಕ್ಕೆ ಸಂಬಂಧಿಸಿದ ತನ್ನ ಕಾಳಜಿಯನ್ನು ಮರುದೃಢೀಕರಿಸುವುದಾಗಿಯೂ ಹೇಳಿರುವ ಈ ಹೇಳಿಕೆಯು, ಉಭಯ ದೇಶಗಳು ಎಲ್ಲಾ ಸಮಸ್ಯೆಗಳನ್ನು ಮಾತುಕತೆಗಳ ಮೂಲಕ ಬಗೆಹರಿಸಿಕೊಳ್ಳುವ ಹಾಗೂ ಶಾಂತಿ ಮತ್ತು ಸ್ಥಿರತೆಯನ್ನು ಕಾಪಾಡಿಕೊಳ್ಳುವ ಕರೆಯನ್ನು ಒಳಗೊಂಡಿದೆ. ಅಂತರರಾಷ್ಟ್ರೀಯ ಕಾನೂನುಗಳ ಉಲ್ಲಂಘನೆ ಹಾಗೂ ಶಾಂತಿ-ಸೌಹಾರ್ದತೆಗೆ ಸಂಬಂಧಿಸಿದ ವಿಶ್ವಸಂಸ್ಥೆಯ ಮೂಲ ಆಶಯಗಳ ಉಲ್ಲಂಘನೆಯ ಹಿನ್ನೆಲೆಯಲ್ಲಿ ಭಾರತದ ಪ್ರತಿಕ್ರಿಯೆಯು ಅತ್ಯಂತ ನಿರಾಶಾದಾಯಕ ಆದುದಾಗಿದೆ. ಉಕ್ರೇನ್‌ನಲ್ಲಿನ ಯುದ್ಧ ಹಾಗೂ ಗಾಜಾದಲ್ಲಿನ ಹತ್ಯಾಕಾಂಡ ಘಟನೆಗಳ ಖಂಡನೆಗೆ ಸಂಬಂಧಿಸಿದಂತೆಯೂ ಭಾರತ ವಿಫಲ ಆಗಿರುವುದರ ಮುಂದುವರಿದ ಭಾಗದಂತೆ, ವೆನೆಜುವೆಲಾ ಮೇಲಿನ ಅಮೆರಿಕದ ದಾಳಿಗೆ ಸಂಬಂಧಿಸಿದ ಪ್ರತಿಕ್ರಿಯೆಯನ್ನು ಗಮನಿಸಬಹುದು. ಹಿಂಜರಿಕೆಯ ನಿಲುವು ಹಾಗೂ ಎಚ್ಚರಿಕೆಯ ಪದಪುಂಜಗಳು ವೆನೆಜುವೆಲಾ ಮೇಲಿನ ದಾಳಿಗೆ ಸೀಮಿತವಾಗಿರದೆ, ಅಂತರರಾಷ್ಟ್ರೀಯ ಕಾನೂನುಗಳು ಮತ್ತು ವಿಶ್ವಸಂಸ್ಥೆಯ ಆಶಯಗಳಿಗೆ ಸಂಬಂಧಿಸಿದ ವಿದ್ಯಮಾನಗಳನ್ನು ನಿಭಾಯಿಸುವಲ್ಲಿ ಭಾರತ ಎದುರಿಸುತ್ತಿರುವ ಸಮಸ್ಯೆಗೆ ಸಂಬಂಧಿಸಿದ್ದಾಗಿವೆ. ಇಲ್ಲಿಯವರೆಗೆ ದುರ್ಬಲ ದೇಶಗಳ ಮೇಲೆ ಪ್ರಬಲ ದೇಶಗಳು ದಾಳಿ ನಡೆಸಿದಾಗ ಭಾರತ ಹಿಂಜರಿಕೆ ಇಲ್ಲದೆ ಖಂಡಿಸುತ್ತಿತ್ತು. ನೈತಿಕತೆ, ಶಿಷ್ಟಾಚಾರ, ದೇಶದ ಸಾರ್ವಭೌಮತೆಯನ್ನು ಗೌರವಿಸುವುದು ಹಾಗೂ ಮತ್ತೊಂದು ದೇಶದ ಅಂತರಿಕ ವ್ಯವಹಾರಗಳಲ್ಲಿ ಹಸ್ತಕ್ಷೇಪ ಮಾಡದಿರುವುದರ ಪರವಾಗಿ ಭಾರತ ತನ್ನನ್ನು ಗುರ್ತಿಸಿಕೊಳ್ಳುತ್ತಿತ್ತು. ಆದರೆ, ಕಳೆದ ಕೆಲವು ದಶಕಗಳಲ್ಲಿ ಜಗತ್ತು ಸಾಕಷ ಬದಲಾಗಿದೆ ಹಾಗೂ ಗಾಳಿ ಬಂದೆಡೆ ತೂರಿಕೊಳ್ಳುವ ಅಭ್ಯಾಸವನ್ನು ಭಾರತ ರೂಢಿಸಿಕೊಳ್ಳುತ್ತಿದೆ. ಅಂತರರಾಷ್ಟ್ರೀಯ ವಿದ್ಯಮಾನಗಳನ್ನು ನಿರ್ದೇಶಿಸಬೇಕಾದ ಉನ್ನತ ಆದರ್ಶಗಳು ಹಾಗೂ ಸನ್ನಡತೆಯ ಸ್ಥಳದಲ್ಲಿ ಸ್ವಹಿತಾಸಕ್ತಿ ಕಾಣಿಸಿಕೊಳ್ಳುತ್ತಿದೆ. ಆದರ್ಶವಾದಿಯಾಗಿ ವಿಷಾದಿಸುವ ಸ್ಥಿತಿ ತಂದುಕೊಳ್ಳುವುದರ ಬದಲಾಗಿ, ಅಪಾಯಕ್ಕೆ ಅಸ್ಪದ ಕಲ್ಪಿಸದಿರುವ ವಾಸ್ತವವಾದಿ ಆಗುವುದೇ ಉತ್ತಮ ಎನ್ನುವ ಚಿಂತನೆ ಇದಾಗಿರುವಂತಿದೆ. ದಕ್ಷಿಣ ಆಫ್ರಿಕಾ, ಬ್ರೆಜಿಲ್, ಮೆಕ್ಸಿಕೊ ಸೇರಿದಂತೆ ದಕ್ಷಿಣ ಭೂಖಂಡದ ಪ್ರಮುಖ ರಾಷ್ಟ್ರಗಳು ವೆನೆಜುವೆಲಾದ ಮೇಲಿನ ಅಮೆರಿಕದ ದಾಳಿಯನ್ನು ಖಂಡಿಸಿವೆ. ಆದರೆ, ಈ ದೇಶಗಳ ಪ್ರಮುಖ ಪ್ರತಿನಿಧಿಯಂತಿರುವ ಹಾಗೂ ಅಂತರರಾಷ್ಟ್ರೀಯ ವೇದಿಕೆಯಲ್ಲಿ ತನ್ನದೇ ಆದ ಧ್ವನಿ ಹೊಂದಿರುವ ಭಾರತ, ಅಮೆರಿಕಕ್ಕೆ ಅಸಮಾಧಾನ ಆಗದಂತೆ ನಡೆದುಕೊಳ್ಳಲು ಪ್ರಯತ್ನಿಸುತ್ತಿದೆ.ಭಾರತದ ಮೇಲೆ ಸುಂಕ ಸಮರವನ್ನು ತೀವ್ರಗೊಳಿಸುವ ಅಮೆರಿಕದ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಬೆದರಿಕೆಯ ಹಿನ್ನೆಲೆಯಲ್ಲಿ ಭಾರತದ ಪ್ರತಿಕ್ರಿಯೆಯನ್ನು ಗಮನಿಸಬೇಕಾಗಿದೆ. ರಷ್ಯಾದಿಂದ ತೈಲ ಖರೀದಿಯನ್ನು ಭಾರತ ನಿಲ್ಲಿಸಬೇಕೆಂದು ಟ್ರಂಪ್ ಬಯಸುತ್ತಿದ್ದಾರೆ. ರಷ್ಯಾದಿಂದ ತೈಲ ಖರೀದಿಸುವ ದೇಶಗಳ ಮೇಲೆ ಶೇ 500ರಷ್ಟು ತೆರಿಗೆ ವಿಧಿಸಲು ಅನುಮತಿಸುವ ಮಸೂದೆಗೆ ಅವರು ಒಪ್ಪಿಗೆ ನೀಡಿದ್ದಾರೆ. ಈ ಮಸೂದೆ ಕಾಯ್ದೆಯಾಗಿ ಬದಲಾದರೆ, ಅದರ ತೀವ್ರ ಪರಿಣಾಮ ಭಾರತದ ಮೇಲಾಗಲಿದೆ. ಶೇ 500ರಷ್ಟು ಸುಂಕ ಹೆಚ್ಚಳ ಅಮೆರಿಕದೊಂದಿಗೆ ರಫ್ತು ವ್ಯವಹಾರವನ್ನು ಕೊನೆಗೊಳಿಸಬಹುದು. ಪ್ರಸ್ತುತ, ಉಭಯ ದೇಶಗಳ ನಡುವಣ ವಾಣಿಜ್ಯ ಒಪ್ಪಂದಗಳು ನನೆಗುದಿಗೆ ಬಿದ್ದಿವೆ. ಪ್ರಧಾನಿ ನರೇಂದ್ರ ಮೋದಿ ಅವರ ಬಗ್ಗೆ ಟ್ರಂಪ್ ಅವರು ಆಕ್ಷೇಪಾರ್ಹ ಹೇಳಿಕೆಗಳನ್ನೂ ನೀಡಿದ್ದಾರೆ. ಬಲಿಷ್ಠರಿಗೆ ನೋವಾಗದಂತೆ ನಡೆದುಕೊಳ್ಳುವುದು ಸ್ವಹಿತದ ದಾರಿ ಎನ್ನುವ ಚಿಂತನೆ ಕೇಂದ್ರ ಸರ್ಕಾರದ್ದಾಗಿರುವಂತಿದೆ.

# ರಾಮಾಯಣ



## ಶ್ರೀರಾಮನು ಸೀತಾದೇವಿಯ ಆಭರಣಗಳನ್ನು ನೋಡಿ ದುಃಖಿಸಿದ್ದು

• ಹಿಂದಿನ ಸಂಚಿಕೆಯಿಂದ 120 ನೆಯ ಅಧ್ಯಾಯ

ಆದಕಾರಣ ನಾನು ಇಲ್ಲಿ ಈ ಆ ಮಾತನ್ನು ಕೇಳಿ ವಾಲಿಯು ಭಯಪಟ್ಟು ಮತಂಗಮುನೀಶ್ವರನ ಸಮೀಪಕ್ಕೆ ಹೋಗಿ ಕೈ ಮುಗಿದು ಶಾಪ ವಿಮೋಚನಕ್ಕಾಗಿ ಬಹಳವಾಗಿ ಬೇಡಿಕೊಂಡನು. ಆ ಮುನೀಶ್ವರನು ವಾಲಿಯನ್ನು ಉದಾಸೀನಮಾಡಿ ತನ್ನ ಆಶ್ರಮಕ್ಕೆ ಹೋದನು. ಅಂದಿನಿಂದ ವಾಲಿಯು ಮತಂಗಮುನೀಶ್ವರನ ಶಾಪಕ್ಕೆ ಭಯಪಟ್ಟು ಋಷ್ಯಮೂಕಪರ್ವತಕ್ಕೆ ಬರುವುದಿಲ್ಲ. ನಾಲ್ವರು ವಾನರರೊಡನೆ ಅತಿದುಃಖದಿಂದ ಸಂಚರಿಸಿಕೊಂಡಿದ್ದೇನೆ. ಅಗೋ, ದುಂದುಭಿಯ ಶುಷ್ಕವಾದ ಶರೀರವು ಪರ್ವತಾಕಾರವಾಗಿ ಅಲ್ಲಿ ಬಿದ್ದಿದೆ. ವಾಲಿಯು ತನ್ನ ಬಲಾತಿಶಯದಿಂದ ಆ ಶರೀರವನ್ನು ಇಲ್ಲಿಗೆ ಎಸೆದನು. ಅದಲ್ಲದೆ ವಾಲಿಯು ಅಲ್ಲಿ ಕಾಣುತ್ತಿರುವ ಏಳು ಸಾಲವೃಕ್ಷಗಳಲ್ಲಿ ಒಂದೊಂದು ಮರವನ್ನೂ ಅಲ್ಲಾಡಿಸಿ ಎಲೆಗಳೆಲ್ಲಾ ಉದುರಿ ಹೋಗುವಂತೆ ಮಾಡಲು ಸಮರ್ಥನಾಗಿದ್ದಾನೆ.

ಅಂಥ ಪರಾಕ್ರಮಿಯಾದ ವಾಲಿಯನ್ನು, ರಾಜಪುತ್ರ, ನೀನು ಸಂಹರಿಸ ಬಲ್ಲೆಯಾ ಎಂದು ಕೇಳಿದನು.ಆ ಮಾತನ್ನು ಕೇಳಿ ಲಕ್ಷ್ಮಣನು ಸುಗ್ರೀವನನ್ನು ಕುರಿತು ಎಲೈ ಸುಗ್ರೀವನೆ, ಯಾವ ಕಾರ್ಯವನ್ನು ಮಾಡಿ ತೋರಿಸಿದರೆ ಶ್ರೀರಾಮನು ವಾಲಿಯನ್ನು ಸಂಹರಿಸಲಾವುವನೆಂದು ನೀನು ನಂಬುತ್ತೀಯೆ ಎಂದು ಕೇಳಿದನು. ಸುಗ್ರೀವನು ಲಕ್ಷ್ಮಣ, ಪೂರ್ವದಲ್ಲಿ ವಾಲಿಯು ಈ ಮರಗಳಲ್ಲಿ ಒಂದೊಂದು ಮರವನ್ನೂ ಅನೇಕ ಬಾರಿ ಅಲ್ಲಾಡಿಸಿ ಎಲೆಗಳನ್ನು ಉದುರಿಸಿದ್ದಾನೆ. ಇವುಗಳಲ್ಲೊಂದು ಮರವನ್ನು ಶ್ರೀರಾಮನು ಒಂದೇ ಬಾಣದಿಂದ ಹೊಡೆದು ತಟಹಾಯಿಸುವಂತೆ ರಂಧ್ರಮಾಡಲಿ. ವಾಲಿಯಿಂದ ಹತನಾದ ದುಂದುಭಿಯ ಶರೀರವನ್ನು ತನ್ನ ವಾದಾಂಗುಷ್ಠದಿಂದ ಇನ್ನೂರು ಬಿಲ್ಲು ಪ್ರಮಾಣದ ವರೆಗೆ ಎಸೆಯಲಿ. ಆಗವಾಲಿಯನ್ನು ಕೊಲ್ಲುವನೆಂದು ನನ್ನ ಮನಸ್ಸಿಗೆ ವಿಶ್ವಾಸಹುಟ್ಟುವುದು ಎಂದು ನುಡಿದನು. ಪುನಃ ಒಂದು ಕ್ಷಣಮಾತ್ರ ಧ್ಯಾನಮಾಡಿ ಹೀಗೆಂದನು: ಶ್ರೀರಾಮವಾಲಿಯು ಮಹಾಸಮರ್ಥ: ಅತಿವರಾಕ್ರಮಿ: ಅತ್ಯಂತ ಬಲಪೌರುಷಗಳುಳ್ಳವನು; ಸಮರಾಂಗಣದಲ್ಲಿ ಹಿಮ್ಮೆಟ್ಟದವನು, ದೇವತೆಗಳಿಗೂ ಅಸಾಧ್ಯವಾದ ಸಾಹಸವನ್ನು ಮಾಡಿದವನು. ಆತನ ಸಾಹಸವನ್ನು ನೆನೆದು ಭಯಪಟ್ಟು ಈ ವರ್ವತದಲ್ಲಿದ್ದೇನೆ. ಇಲ್ಲಿ ನನಗೆ ಅನುಕೂಲರಾದವರು ಹನುಮಂತನೇ ಮೊದಲಾದ ನಾಲ್ಕು ಪ್ರಧಾನರಲ್ಲದೆ ಮತ್ತಾರೂ ಇಲ್ಲ. ದೈವಾನುಕೂಲದಿಂದ ಈ ವನದಲ್ಲಿ ನನಗೆ ಮಿತ್ರತ್ವವು ದೊರಕಿತು. ಹಿಮಪರ್ವತದಂತೆ ಧೀರನಾದ ನಿನ್ನ ಸ್ನೇಹವನ್ನು ಪಡೆದೆನು.

ಬಲವಂತನಾದ ವಾಲಿಯ ಬಲಪೌರುಷಗಳನ್ನು ಹೇಳಿದೆನು. ಸಮರಾಂಗಣದಲ್ಲಿ ನಿನ್ನ ಶೌರ್ಯವನ್ನು ನಾನು ಕಂಡಿಲ್ಲ, ನಾನು ನಿನ್ನ ಶೌರ್ಯವನ್ನು ತೂಕಮಾಡುತ್ತಿಲ್ಲ, ನಿನಗೆ ಅವಮಾನ ಮಾಡುವುದಕ್ಕಾಗಿ ನಾನು ತೊಡಗಿಲ್ಲ ಅಥವಾ ನಿನ್ನನ್ನು ಹೆದರಿಸುತ್ತಿಲ್ಲ, ವಾಲಿಯ ಭಯಂಕರ ವಾದ ಪರಾಕ್ರಮವನ್ನು ನೋಡಿ ನನ್ನ ಮನಸ್ಸು ಕಂಗೆಡುತ್ತಿದೆ. ಎಲೈ ಶ್ರೀರಾಮ, ನಿನ್ನ ವಾಕ್ಯವೂ ನೀನು ಮಾಡಿಕೊಟ್ಟ ಪ್ರಮಾಣವೂ ನಿನ್ನ ಧೈರ್ಯವೇ ಮೊದಲಾದವೆಲ್ಲವೂ ಬೂದಿಮುಚ್ಚಿದ ಕೆಂಡ ದಂತಿರುವ ನಿನ್ನ ತೇಜೋ ವಿಶೇಷವನ್ನು ಸೂಚಿಸುತ್ತಿವೆ ಎಂದು ನುಡಿದನು. **ಮುಂದುವರಿಯುವುದು...**

# ಮಕರ ಸಂಕ್ರಾಂತಿಯ ಮಹತ್ವ!



• ಉದಯವಾಹಿನಿ, ವಿಶೇಷ

ಮಕರ ಸಂಕ್ರಾಂತಿಯ ದಿನದಂದು ಪಂಚಾಂಗದ ನಿರಯನ ಪದ್ಧತಿಗನುಸಾರ ಸೂರ್ಯನ ಉತ್ತರಾಯಣ ಪ್ರಾರಂಭವಾಗುತ್ತದೆ. ಮಕರ ಸಂಕ್ರಾಂತಿ ಹಬ್ಬವು ತಿಥಿವಾಚಕವಾಗಿರದೇ ಅಯನ-ವಾಚಕವಾಗಿದೆ. ಈ ದಿನ ಸೂರ್ಯನ ನಿರಯನ ಮಕರ ರಾಶಿಯಲ್ಲಿ ಸಂಕ್ರಮಣವಾಗುತ್ತದೆ. ಇದರೊಂದಿಗೆ ಸಂಕ್ರಾಂತಿಯನ್ನು ದೇವತೆ ಎಂದು ನಂಬಲಾಗಿದೆ.

ಸಂಕ್ರಾಂತಿಯು ಸಂಕರಾಸುರನೆಂಬ ದೈತ್ಯನನ್ನು ವಧಿಸಿದ್ದಳು ಎಂಬ ಕಥೆಯೂ ಇದೆ. ಸೂರ್ಯನ ಭ್ರಮಣದಿಂದಾಗುವ ಕಾಲ ವ್ಯತ್ಯಾಸವನ್ನು ಸರಿಪಡಿಸಲು ಪ್ರತಿ 80 ವರ್ಷಕ್ಕೊಮ್ಮೆ ಸಂಕ್ರಾಂತಿಯನ್ನು ಒಂದು ದಿನ ಮುಂದೂಡಲಾಗುತ್ತದೆ. ಸಂಕ್ರಾಂತಿಯಂದು ಒಬ್ಬರಿಗೊಬ್ಬರು ಎಳ್ಳು-ಬೆಲ ಹಂಚುತ್ತಾರೆ. ಇದು ಪ್ರೀತಿ ಮತ್ತು ಸೌಹಾರ್ದತೆ ಹೆಚ್ಚಿಸುವ ಹಬ್ಬವಾಗಿದೆ.

ಕರ್ಕ ಸಂಕ್ರಾಂತಿಯಿಂದ ಮಕರ ಸಂಕ್ರಾಂತಿಯ ವರೆಗಿನ ಕಾಲವನ್ನು ದಕ್ಷಿಣಾಯನ ಎನ್ನುತ್ತಾರೆ. ದಕ್ಷಿಣಾಯನ ಕಾಲದಲ್ಲಿ ಮೃತನಾದ ವ್ಯಕ್ತಿಯು, ಉತ್ತರಾಯಣದಲ್ಲಿ ಮೃತನಾದ ವ್ಯಕ್ತಿಗಿಂತ ದಕ್ಷಿಣಲೋಕಕ್ಕೆ ಹೋಗುವ ಸಾಧ್ಯತೆ ಹೆಚ್ಚಿರುತ್ತದೆ. ಈ ದಿನ ಸೂರ್ಯೋದಯದಿಂದ ಸೂರ್ಯಾಸ್ತದ ವರೆಗಿನ ವಾತಾವರಣವು ಅಧಿಕ ಚೈತನ್ಯಮಯವಾಗಿರುವುದರಿಂದ ಸಾಧನೆಯನ್ನು ಮಾಡುವವರಿಗೆ ಈ ಸಮಯ ಚೈತನ್ಯದ ಲಾಭವಾಗುತ್ತದೆ.

**ಎಳ್ಳು ಮತ್ತು ಸಂಕ್ರಾಂತಿಯ ಸಂಬಂಧ:** ಸಂಕ್ರಾಂತಿಯಲ್ಲಿ ಎಳ್ಳನ್ನು ಆದಷ್ಟು ಹೆಚ್ಚು ಪ್ರಮಾಣದಲ್ಲಿ ಉಪಯೋಗಿಸುತ್ತಾರೆ. ಎಳ್ಳು ಸತ್ತ್ವಲಹರಿಗಳನ್ನು ಗ್ರಹಿಸಿ ಪ್ರಕ್ಷೇಪಿಸುತ್ತದೆ. ಎಳ್ಳು ಸೇವಿಸುವುದರಿಂದ ಆಂತರಿಕ ಶುದ್ಧಿಯಾಗುತ್ತದೆ. ಎಳ್ಳು-ಬೆಲ್ಲವನ್ನು ದೇವರಿಗೆ ನೈವೇದ್ಯವೆಂದು ಅರ್ಪಿಸಿ ಇತರರಿಗೆ ಹಂಚುವುದರಿಂದ ಅವರಲ್ಲಿಯೂ ಪ್ರೇಮಭಾವ ಮತ್ತು ಸಕಾರಾತ್ಮಕತೆ ಹೆಚ್ಚುತ್ತದೆ. ಮಕರ ಸಂಕ್ರಾಂತಿಯಿಂದ ರಥ ಸಪ್ತಮಿಯವರೆಗಿನ ಕಾಲವು ಪರ್ವಕಾಲವಾಗಿರುತ್ತದೆ. ಈ ಪರ್ವಕಾಲದಲ್ಲಿ ಮಾಡಿದ ದಾನ ಮತ್ತು ಪುಣ್ಯಕರ್ಮಗಳು ವಿಶೇಷ ಫಲವನ್ನು ಕೊಡುತ್ತವೆ. ಹೊಸಪಾತ್ರೆ, ವಸ್ತ್ರ, ಅನ್ನ, ಎಳ್ಳು, ಎಳ್ಳುಪಾತ್ರೆ, ಬೆಲ್ಲ, ಆಕಳು, ಕುದುರೆ, ಚಿನ್ನ ಅಥವಾ ಭೂಮಿಯನ್ನು ಯಥಾಶಕ್ತಿ ದಾನ ಮಾಡಬೇಕು. ಈ ದಿನ ಮುತ್ತೈದೆಯರು ದಾನ ಮಾಡುತ್ತಾರೆ. ಮುತ್ತೈದೆಯರು ಕೆಲವು ಪದಾರ್ಥಗಳನ್ನು ಕುಮಾರಿಯರಿಂದ ಅಪಹರಿಸುತ್ತಾರೆ ಮತ್ತು ಅವರಿಗೆ ಎಳ್ಳುಬೆಲ್ಲ ಕೊಡುತ್ತಾರೆ.

**ಮಕರ ಸಂಕ್ರಾಂತಿಯಂದು ಬಾಗಿನ ನೀಡುವುದು**

ಬಾಗಿನ ನೀಡುವುದೆಂದರೆ ಇನ್ನೊಂದು ಜೀವದಲ್ಲಿರುವ ದೇವತ್ವಕ್ಕೆ ತನು, ಮನ ಮತ್ತು ಧನದಿಂದ ಶರಣಾಗುವುದು. ಸಂಕ್ರಾಂತಿಯ ಕಾಲವು ಸಾಧನೆಗೆ ಪೂರಕವಾಗಿರುವುದರಿಂದ ಈ ಕಾಲದಲ್ಲಿ ನೀಡಿದ ಬಾಗಿನದಿಂದ ದೇವತೆಯ ಕೃಪೆಯಾಗಿ ಜೀವಕ್ಕೆ ಇಚ್ಛಿತ ಫಲಪ್ರಾಪ್ತಿಯಾಗುತ್ತದೆ. ಇತ್ತೀಚೆಗೆ ಸಾಬೂನು ಇಡುವ ಡಬ್ಬಿ, ಸ್ಟೀಲ್ ಪಾತ್ರೆ, ಪ್ಲಾಸ್ಟಿಕ್‌ನ ವಸ್ತುಗಳಂತಹ ವಸ್ತುಗಳನ್ನು ಬಾಗಿನವೆಂದು ಕೊಡುವ ಅಯೋಗ್ಯ ಪದ್ಧತಿಯು ರೂಢಿಯಲ್ಲಿದೆ.

ಈ ವಸ್ತುಗಳ ಬದಲಿಗೆ ಸೌಭಾಗ್ಯದ ವಸ್ತುಗಳು, ಊದುಬತ್ತಿ, ಉಟಣೆ, ಧಾರ್ಮಿಕಗ್ರಂಥ, ಪುರಾಣಗ್ರಂಥ, ದೇವತೆಗಳ ಚಿತ್ರ, ಅಧ್ಯಾತ್ಮದ ಬಗೆಗಿನ ಧ್ವನಿಚಿತ್ರಮುದ್ರಿಕೆ ಮುಂತಾದ ಸಾಧನೆಗೆ ಪೂರಕ ಹಾಗೂ ಮಾರ್ಗದರ್ಶಕವಾಗಿರುವ ವಸ್ತುಗಳನ್ನು ಕೊಡಬೇಕು. ಸಂಕ್ರಾಂತಿಯ ಹಬ್ಬಕ್ಕೆ ಮುತ್ತೈದೆಯರು ಸಣ್ಣ ಮಣ್ಣಿನ ಮಡಕೆಗಳನ್ನು ಹಂಚುತ್ತಾರೆ. ಅವುಗಳಿಗೆ ಅರಿಶಿನ ಕುಂಕುಮವನ್ನು ಹಚ್ಚಿ ದಾರವನ್ನು ಸುತ್ತುತ್ತಾರೆ. ಮಡಕೆಗಳಲ್ಲಿ ಗಜ್ಜರಿ, ಬೋರೇಹಣ್ಣು, ಕಬ್ಬಿನ ತುಂಡು, ನೆಲಗಡಲೆ, ಹತ್ತಿ, ಕಡಲೆಕಾಳು, ಎಳ್ಳುಬೆಲ್ಲ, ಅರಿಶಿನ-ಕುಂಕುಮ ಮುಂತಾದವುಗಳನ್ನು ತುಂಬಿಸುತ್ತಾರೆ. ರಂಗೋಲಿಯನ್ನು ಬಿಡಿಸಿ ಮಣೆ ಹಾಕಿ ಅದರ ಮೇಲೆ ಐದು ಮಡಕೆಗಳನ್ನಿಟ್ಟು ಅವುಗಳ ಪೂಜೆಯನ್ನು ಮಾಡುತ್ತಾರೆ. 3 ಮಡಕೆಗಳನ್ನು ಸೌಭಾಗ್ಯವತಿಯರಿಗೆ ದಾನ ನೀಡುತ್ತಾರೆ, ಒಂದು ಮಡಕೆಯನ್ನು ತುಳಸಿಗೆ ಮತ್ತು ಇನ್ನೊಂದನ್ನು ತಮಗಾಗಿ ಇಟ್ಟುಕೊಳ್ಳುತ್ತಾರೆ.

**ಪವಿತ್ರ ನದಿಗಳಲ್ಲಿ ತೀರ್ಥಸ್ನಾನ, ಗಂಗಾ ಸ್ನಾನ:** ಮಕರಸಂಕ್ರಾಂತಿಯ ದಿನ ಸೂರ್ಯೋದಯದಿಂದ ಸೂರ್ಯಾಸ್ತದ ವರೆಗಿನ ಕಾಲವು ಪುಣ್ಯಕಾಲವಾಗಿರುತ್ತದೆ. ಈ ಕಾಲದಲ್ಲಿ ತೀರ್ಥಸ್ನಾನಕ್ಕೆ ವಿಶೇಷ ಮಹತ್ವವಿದೆ. ಗಂಗಾ, ಯಮುನಾ, ಗೋದಾವರಿ, ಕೃಷ್ಣಾ ಮತ್ತು ಕಾವೇರಿ ನದಿಗಳ ದಡದಲ್ಲಿರುವ ಕ್ಷೇತ್ರದಲ್ಲಿ ಸ್ನಾನ ಮಾಡಿದರೆ ಮಹಾಪುಣ್ಯವು ಲಭಿಸುತ್ತದೆ.

ಈ ದಿನ ಮಹಾದೇವನಿಗೆ ಎಳ್ಳು-ಅಕ್ಕಿಯನ್ನು ಅರ್ಪಣೆ ಮಾಡುವ ಅಥವಾ ಎಳ್ಳು-ಅಕ್ಕಿ ಮಿಶ್ರಿತ ಅರ್ಘ್ಯವನ್ನು ಅರ್ಪಣೆ ಮಾಡುತ್ತಾರೆ. ಪರ್ವದ ಈ ದಿನದಂದು ಎಳ್ಳಿಗೆ ವಿಶೇಷ ಮಹತ್ವವಿದೆ ಎಂದು ಪರಿಗಣಿಸಲಾಗಿದೆ. ಎಳ್ಳಿನ ಉಟಣೆ, ಎಳ್ಳುಮಿಶ್ರಿತ ನೀರಿನಿಂದ ಸ್ನಾನ, ಎಳ್ಳುಮಿಶ್ರಿತ ನೀರನ್ನು ಕುಡಿಯುವುದು, ಎಳ್ಳಿನಿಂದ ಹವನ ಮಾಡುವುದು, ಅಡುಗೆಯಲ್ಲಿ ಎಳ್ಳನ್ನು ಉಪಯೋಗಿಸುವುದು ಹಾಗೂ ಎಳ್ಳನ್ನು ದಾನ ಮಾಡುವುದು ಇವೆಲ್ಲ ಪಾಪನಾಶಕ ಕೃತಿಗಳಾಗಿವೆ.

**ಆಧಾರ:** ಸನಾತನ ನಿರ್ಮಿತ ಗ್ರಂಥ 'ಹಬ್ಬಗಳನ್ನು ಆಚರಿಸುವ ಯೋಗ್ಯ ಪದ್ಧತಿ ಮತ್ತು ಶಾಸ್ತ್ರ'

# ಆನೇಕಲ್‌ನ ವಿವಿಧ ದೇವಸ್ಥಾನಗಳಲ್ಲಿ ವಸ್ತ್ರ ಸಂಹಿತೆ ಅಳವಡಿಕೆ!

• ಉದಯವಾಹಿನಿ, ಆನೇಕಲ್

ದೇಶದಾದ್ಯಂತ ಅನೇಕ ಕ್ಷೇತ್ರಗಳಲ್ಲಿ ವಸ್ತ್ರಸಂಹಿತೆ ಜಾರಿಯಲ್ಲಿದ್ದು, ದೇವಸ್ಥಾನಗಳು, ಗುರುದ್ವಾರಗಳು, ಚರ್ಚುಗಳು, ಮಸೀದಿಗಳು ಸೇರಿದಂತೆ ವಿವಿಧ ಪ್ರಾರ್ಥನಾ ಸ್ಥಳಗಳು ಹಾಗೂ ಖಾಸಗಿ ಸಂಸ್ಥೆಗಳು, ಶಾಲಾ-ಕಾಲೇಜುಗಳು, ನ್ಯಾಯಾಲಯಗಳು, ಪೊಲೀಸ್ ಇಲಾಖೆ ಮುಂತಾದೆಡೆಗಳಲ್ಲಿ ಶಿಷ್ಟ ಹಾಗೂ ಸಂಯಮಿತ ವೇಷಭೂಷಣ ಪಾಲನೆ ಮಾಡಲಾಗುತ್ತಿದೆ.

ಈ ಹಿನ್ನೆಲೆಯಲ್ಲಿ, ದೇವಸ್ಥಾನಗಳ ಪಾವಿತ್ರ್ಯತೆ, ಸಂಸ್ಕೃತಿಯ ಗೌರವ ಮತ್ತು ಶಿಸ್ತುಬದ್ಧ ವಾತಾವರಣವನ್ನು ಕಾಪಾಡುವ ಉದ್ದೇಶದಿಂದ, ದೇವಸ್ಥಾನಗಳಿಗೆ ಬರುವ ಭಕ್ತರು ಯೋಗ್ಯ ವೇಷಭೂಷಣವನ್ನು ಧರಿಸುವಂತೆ ಜಾಗೃತಿ ಮೂಡಿಸುವ ಕಾರ್ಯವನ್ನು ಕರ್ನಾಟಕ ಮಂದಿರ ಮಹಾಸಂಘದಿಂದ ಕೈಗೊಳ್ಳಲಾಗಿದೆ. ಈ ದಿಶೆಯಲ್ಲಿ ಚಂದಾಪುರದಲ್ಲಿರುವ ಪ್ರಸಿದ್ಧ ದೇವಸ್ಥಾನಗಳಾದ ಶ್ರೀಕೋದಂಡರಾಮ ದೇವಸ್ಥಾನ, ಬನಹಳ್ಳಿಯ ದಕ್ಷಿಣ ಮುಖ ಶ್ರೀಆಂಜನೇಯ ಸ್ವಾಮಿ ದೇವಸ್ಥಾನ, ಹಾಗೂ ಯಾರಂಡಹಳ್ಳಿಯ ಶ್ರೀ ಆಂಜನೇಯ ಸ್ವಾಮಿ ದೇವಸ್ಥಾನದ ಮುಂಭಾಗದಲ್ಲಿ ವಸ್ತ್ರ ಸಂಹಿತೆಯ ಕುರಿತು ಸೂಚನಾ ಫಲಕಗಳನ್ನು ಅಳವಡಿಸಿ, ಭಕ್ತರಲ್ಲಿ ಜನಪ್ರಬೋಧನೆ ನಡೆಸಲಾಗುತ್ತಿದೆ. ದೇವಾಲಯಗಳು ಭಕ್ತಿಯ ಮತ್ತು ಸಾತ್ವಿಕತೆಯ ಕೇಂದ್ರಗಳಾಗಿರುವುದರಿಂದ, ಭಕ್ತರು ತುಂಡು ಅಥವಾ ಅಸಂಗತ ಉಡುಪುಗಳನ್ನು ತೊರೆದು, ಭಾರತೀಯ ಸಂಸ್ಕೃತಿಗೆ ತಕ್ಕಂತೆ ವೇಷಭೂಷಣ ಧರಿಸಿ ದೇವಸ್ಥಾನ ವ್ಯವಸ್ಥಾಪನೆಗೆ ಸಹಕರಿಸಬೇಕೆಂದು ವಿನಂತಿಸಲಾಗಿದೆ.



**ಅಸಾತ್ವಿಕ ಹಾಗೂ ಅನರ್ಹ ಉಡುಪುಗಳು**

**ಪಾಶ್ಚಾತ್ಯ ಶೈಲಿಯ ಸ್ಕರ್ಟ್, ಮಿಡಿ, ಶಾರ್ಟ್ ಪ್ಯಾಂಟ್, ಸ್ಯಾಂಡೋ ವೆಸ್ಟ್, ಜೀನ್ಸ್, ಸ್ಲೀವ್‌ಲೆಸ್ ಡ್ರೆಸ್, ನೈಟ್ ಡ್ರೆಸ್, ಸಾಕ್ಸ್ ಮುಂತಾದ ಉಡುಪುಗಳನ್ನು ದೇವಸ್ಥಾನ ಪ್ರವೇಶದ ವೇಳೆ ಧರಿಸದಂತೆ ಭಕ್ತರಲ್ಲಿ ವಿನಂತಿಸಲಾಗುತ್ತದೆ. ಭಕ್ತರು ಈ ವಸ್ತ್ರಸಂಹಿತೆಯನ್ನು ಸ್ವಯಂ ಪ್ರೇರಣೆಯಿಂದ ಪಾಲಿಸಿ, ದೇವಾಲಯಗಳ ಸಾಂಸ್ಕೃತಿಕ ಹಾಗೂ ಧಾರ್ಮಿಕ ಮೌಲ್ಯಗಳ ರಕ್ಷಣೆಗೆ ಕೈಜೋಡಿಸಬೇಕೆಂದು ಕರ್ನಾಟಕ ಮಂದಿರ ಮಹಾಸಂಘ ಮನವಿ ಮಾಡಿದೆ.**

**ಭಾರತೀಯ ಸಾತ್ವಿಕ ಉಡುಪುಗಳು**

**ಮಹಿಳೆಯರು ಚುಡಿದಾರ, ಲಂಗ ದಾವಣಿ, ಸಲ್ವಾರ್‌ಕುರ್ತಾ, ಸೀರೆ, ಓಡಾಣಿ ಮುಂತಾದ ಪಾರಂಪರಿಕ ಮತ್ತು ಸಾತ್ವಿಕ ವೇಷಭೂಷಣಗಳನ್ನು ಧರಿಸಬೇಕು. ಪುರುಷರು ಕುರ್ತಾ, ಧೋತಿ, ಲುಂಗಿ, ಪೈಜಾಮ ಅಥವಾ ಸಾಮಾನ್ಯ ಶರ್ಟ್‌ಪ್ಯಾಂಟ್ ಧರಿಸುವುದು ಸೂಕ್ತವಾಗಿದೆ.**

# ಮಧುಮೇಹ, ಕ್ಯಾನ್ಸರ್ ಬರಬಹುದು!



ನೀವು ಪ್ಯಾಕ್ ಮಾಡಿದ ಆಹಾರವನ್ನು ಸೇವಿಸುತ್ತಿದ್ದರೆ, ತಕ್ಷಣ ನಿಲ್ಲಿಸಿ. ಪ್ಯಾಕ್ ಮಾಡಿದ ಆಹಾರಗಳಲ್ಲಿ ಅಡಗಿರುವ ಸಂರಕ್ಷಕಗಳು ಮಧುಮೇಹ ಮತ್ತು ಕ್ಯಾನ್ಸರ್‌ಗೆ ಕಾರಣವಾಗಬಹುದು ಎಂದು ಭಯಾನಕ ಹೊಸ ಅಧ್ಯಯನವೊಂದು ತಿಳಿಸಿದೆ. ಭಾರತ ಸೇರಿದಂತೆ ಪ್ರಪಂಚದಾದ್ಯಂತ ಪ್ಯಾಕ್ ಮಾಡಿರುವ ಆಹಾರ ಪದಾರ್ಥಗಳು ಹೆಚ್ಚಿನ ಪ್ರಮಾಣದಲ್ಲಿ ಮಾರಾಟವಾ ಗುತ್ತಿವೆ. ಬಾಯಿಗೆ ರುಚಿ ನೀಡುವ ಇಂತಹ ತಿಂಡಿ ತಿನಿಸುಗಳನ್ನು ಮಕ್ಕಳಿಂದ ಹಿಡಿದು ವಯಸ್ಸಾದವರೆಗೂ ಕೂಡ ಎಲ್ಲರಿಗೂ ಇಷ್ಟವಾಗುತ್ತದೆ. ಆದರೆ ಮಾರುಕಟ್ಟೆಯಿಂದ ಖರೀದಿಸಿದ ಬಿಸ್ಕತ್ತುಗಳು, ಚಿಪ್ಸ್, ಸಾಸ್‌ಗಳು, ತಿಂಡಿಗಳು,

ಪಾನೀಯಗಳು, ಜಾಮ್‌ಗಳು ಅಥವಾ ಪ್ಯಾಕ್ ಮಾಡಿರುವ ಮಾಂಸಗಳು ಹೀಗೆ ಹಲವಾರು ಆಹಾರ ಪದಾರ್ಥಗಳು ಬೇಗನೇ ಕೆಡಬಾರದು ಅಥವಾ ಹಾಳಾಗಬಾರದು ಮತ್ತು ದೀರ್ಘ ಕಾಲದವರೆಗೆ ಇರಬೇಕು ಎನ್ನುವ ದೃಷ್ಟಿಯಿಂದಾಗಿ ರಾಸಾಯನಿಕ ಅಂಶಗಳನ್ನು ಸ್ವಲ್ಪ ಪ್ರಮಾಣದಲ್ಲಿ ಆಹಾರ ತಯಾರಿಕಾ ಘಟಕಗಳಲ್ಲಿ ಮಿಶ್ರಣ ಮಾಡುತ್ತಾರೆ.

## ಪ್ಯಾಕ್ ಮಾಡಿದ ಆಹಾರ ಪದಾರ್ಥಗಳಿಂದ ದೂರವಿರಿ

**ಪ್ಯಾಕ್ ಮಾಡಿದ ಆಹಾರಗಳು :** ಪ್ಯಾಕ್ ಮಾಡಿದ ಆಹಾರಗಳಲ್ಲಿ ಮಿಶ್ರಣವಾಗಿರುವ ರಾಸಾಯನಿಕ ಅಂಶಗಳು ದೇಹದಲ್ಲಿ ಸ್ಲೋ ಪಾಯಿಸನ್ ರೀತಿಯಲ್ಲಿ ಬೆರೆತು ಮುಂದಿನ ದಿನಗಳಲ್ಲಿ ಮಧುಮೇಹ ಮತ್ತು ಕ್ಯಾನ್ಸರ್ ಅಪಾಯವನ್ನುಂಟು ಮಾಡುತ್ತವೆ. ಇತ್ತೀಚಿನ ಎರಡು ಪ್ರಮುಖ ಅಧ್ಯಯನಗಳು ಈ ಆತಂಕಕಾರಿ ಸಂಗತಿಯನ್ನು ಬಹಿರಂಗಪಡಿಸಿವೆ. ಫ್ರಾನ್ಸ್‌ನಲ್ಲಿ ನಡೆಸಲಾದ ಈ ಸಂಶೋಧನೆಯು ಬ್ರಿಟಿಷ್ ಮೆಡಿಕಲ್ ಜರ್ನಲ್ ಮತ್ತು ನೇಚರ್ ಕಮ್ಯುನಿ ಕೇಷನ್ಸ್‌ನಲ್ಲಿ ಪ್ರಕಟವಾಗಿದೆ. ಇನ್ನೂ ಮುಖ್ಯವಾಗಿ ಗಮನಿಸಬೇಕಾದ ಸಂಗತಿ ಏನೆಂದ್ರೆ ಜಂಕ್ ಫುಡ್ ನಂತಹ ಅನಾರೋಗ್ಯ ಆಹಾರಗಳಲ್ಲಿ ಕಂಡುಬರುವ ಸ್ಯಾಚುರೇಟೆಡ್ ಕೊಬ್ಬಿನ ಅಂಶ ದಿಂದಾಗಿಯೂ ದೇಹದಲ್ಲಿ ಬೊಜ್ಜಿನ ಅಂಶ ಹೆಚ್ಚಾಗಿ ಮಧುಮೇಹ ಬಹಳ ಬೇಗನೇ ಕಾಣಿಸಿಕೊಳ್ಳುವ ಸಾಧ್ಯತೆಗಳು ಇರುತ್ತವೆಯಂತೆ!

**ಹೃದಯದ ಆರೋಗ್ಯಕ್ಕೂ ಅಪಾಯಕಾರಿ :** ಸಂಸ್ಕರಿಸಿದ ಆಹಾರ ಪದಾರ್ಥಗಳಲ್ಲಿ ದೇಹಕ್ಕೆ ಬೇಡವಾಗಿರುವ ಕೊಬ್ಬಿನಾಂಶ ಕಂಡು ಬರುವುದು ಮಾತ್ರವಲ್ಲದೆ, ಅಧಿಕ ಪ್ರಮಾಣದಲ್ಲಿ ಉಪ್ಪಿನಾಂಶ, ಕೃತಕ ಸಕ್ಕರೆ ಮತ್ತು ಕ್ಯಾಲೊರಿ ಅಂಶಗಳು ಕೂಡ ಹೆಚ್ಚಿನ ಪ್ರಮಾಣದಲ್ಲಿ ಕಂಡು ಬರುವುದರಿಂದ, ಬಹಳ ಬೇಗನೇ ಹೃದಯಕ್ಕೆ ಸಮಸ್ಯೆ ಬರುವುದರ ಜೊತೆಗೆ ದೇಹದ ತೂಕ ಹೆಚ್ಚಾಗಲು ಕೂಡ ಕಾರಣವಾಗಿಬಿಡುತ್ತದೆ

**1 ಲಕ್ಷಕ್ಕೂ ಹೆಚ್ಚು ಜನರ ಮೇಲೆ ಅಧ್ಯಯನ:** ಸಂಶೋಧಕರು 2009 ಮತ್ತು 2023ರ ನಡುವೆ 1 ಲಕ್ಷಕ್ಕೂ ಹೆಚ್ಚು ಫ್ರೆಂಚ್ ಜನರ ಆಹಾರ ಮತ್ತು ಆರೋಗ್ಯ ಡೇಟಾವನ್ನು ವಿಶ್ಲೇಷಿಸಿದ್ದಾರೆ. 14 ವರ್ಷಗಳ ಕಾಲ ನಡೆದ ಈ ನ್ಯೂಟ್ರಿನೆಟ್-ಸ್ಯಾಂಟ್ ಅಧ್ಯಯನವು ನಮ್ಮ ದೇಹದ ಮೇಲೆ ಸಂರಕ್ಷಕಗಳ ಪರಿಣಾಮವನ್ನು ಪರಿಶೀಲಿಸಿದೆ. ಪ್ಯಾಕ್ ಮಾಡಿದ ಆಹಾರದಲ್ಲಿ ಬಳಸುವ ಕೆಲವು ಸಂರಕ್ಷಕಗಳ ಹೆಚ್ಚಿನ ಸೇವನೆಯು ಟೈಪ್ -2 ಮಧುಮೇಹ ಮತ್ತು ಕ್ಯಾನ್ಸರ್ ಅಪಾಯವನ್ನು ಹೆಚ್ಚಿಸುತ್ತದೆ ಎಂದು ಸಂಶೋಧಕರು ಕಂಡುಕೊಂಡಿದ್ದಾರೆ. ಸೋಡಿಯಂ ನೈಟ್ರೈಟ್ ಹಾಗೂ ಪೊಟ್ಯಾಸಿಯಮ್ ನೈಟ್ರೇಟ್, ಸೋರ್ಬೇಟ್‌ಗಳು, ಪೊಟ್ಯಾಸಿಯಮ್ ಮೆಟಾಬೈಸಲ್ಫೈಟ್, ಅಸಿಟೇಟ್‌ಗಳು ಮತ್ತು ಅಸಿಟಿಕ್ ಆಮ್ಲ ದಂತಹ ಸಂರಕ್ಷಕಗಳು ಕ್ಯಾನ್ಸರ್ ಮತ್ತು ಟೈಪ್ 2 ಮಧುಮೇಹದ ಅಪಾಯವನ್ನು ಹಲವಾರು ಬಾರಿ ಹೆಚ್ಚಿಸುತ್ತವೆ ಎಂದು ಅಧ್ಯಯನಗಳು ಕಂಡುಕೊಂಡಿವೆ. ಎಲ್ಲಾ ಸಂರಕ್ಷಕಗಳು ಕ್ಯಾನ್ಸರ್‌ಗೆ ಕಾರಣವಾಗದಿದ್ದರೂ, ಕೆಲವು ರಾಸಾಯನಿಕಗಳ ಹೆಚ್ಚಿನ ಸೇವನೆಯು ಅಪಾಯವನ್ನು ಹೆಚ್ಚಿಸುತ್ತದೆ ಎಂದು ಸಂಶೋಧನೆ ಕಂಡುಹಿಡಿದಿದೆ.

**ಸಂರಕ್ಷಕಗಳು ಅಥವಾ ಪ್ರಿಸರ್ವೇಟಿವ್ ಎಂದರೇನು? :** ಸಂರಕ್ಷಕಗಳು ಆಹಾರವನ್ನು ಬ್ಯಾಕ್ಟೀರಿಯಾ ಮತ್ತು ಅಚ್ಚಿನಿಂದ ರಕ್ಷಿಸುವ ರಾಸಾಯನಿಕಗಳಾಗಿವೆ, ತಿಂಗಳುಗಳವರೆಗೆ ತಾಜಾವಾಗಿರಿಸುತ್ತದೆ. ಉಪ್ಪು ಮತ್ತು ಸಕ್ಕರೆ ನೈಸರ್ಗಿಕ ಸಂರಕ್ಷಕಗಳಾಗಿವೆ ಆದರೆ ಇಂದು ಆಹಾರ ಉದ್ಯಮವು ಸೋಡಿಯಂ ನೈಟ್ರೈಟ್, ಪೊಟ್ಯಾಸಿಯಮ್ ಮೆಟಾಬೈಸಲ್ಫೈಟ್ ಮತ್ತು ಅಸಿಟೇಟ್ ಗಳಂತಹ ಸಂಶ್ಲೇಷಿತ ರಾಸಾಯನಿ ಕಗಳನ್ನು ಹೆಚ್ಚಾಗಿ ಬಳಸುತ್ತಿದೆ.

ಇದು ಆರೋಗ್ಯಕ್ಕೆ ಹಾನಿಕಾರಕವಾಗಿದೆ. ಅಲ್ಟ್ರಾ-ಸಂಸ್ಕರಿಸಿದ ಆಹಾರಗಳು ಕೈಗಾರಿಕಾವಾಗಿ ತಯಾರಿಸಿದ ಉತ್ಪನ್ನಗಳಾಗಿವೆ, ಇವು ಸಾಮಾನ್ಯವಾಗಿ ಉಪ್ಪು, ಸಕ್ಕರೆ ಮತ್ತು ಅನಾರೋಗ್ಯಕರ ಕೊಬ್ಬುಗಳಲ್ಲಿ ಅಧಿಕವಾಗಿರುತ್ತವೆ ಮತ್ತು ಅಗತ್ಯ ಪೋಷಕಾಂಶಗಳಲ್ಲಿ ಕಡಿಮೆ ಇರುತ್ತವೆ.

# ಆಹಾರ ಶ್ವಾಸಕೋಶದಲ್ಲಿ ಸಿಕ್ಕಾಕ್ಕೊಂಡಾಗ ನೀವೂ ತಕ್ಷಣ ನೀರು ಕುಡಿತೀರಾ?



ಆಹಾರ ತಿನ್ನುವಾಗ ಕೆಲವೊಮ್ಮೆ ಗಂಟಲಿನಲ್ಲಿ ಸಿಲುಕಿಕೊಳ್ಳುವುದು ಸಾಮಾನ್ಯ. ಆದರೆ ಕೆಲವೊಮ್ಮೆ ಅದು ತುಂಬಾ ನೋವಿನಿಂದ ಕೂಡಿದ್ದು, ಉಸಿರಾಡಲೂ ಕಷ್ಟವಾಗಬಲ್ಲದು. ಅಂತಹ ಸಂದರ್ಭದಲ್ಲಿ ಈ ವಿಧಾನವನ್ನು ಅನುಸರಿಸುವುದು ಉತ್ತಮ ಎನ್ನುತ್ತಾರೆ ವೈದ್ಯರು. ಪ್ರತಿಯೊಬ್ಬರೂ ಆಹಾರ ಸೇವಿಸುವಾಗ ಒಂದಲ್ಲಾ ಒಂದು ದಿನ ಆಹಾರ ಗಂಟಲಿನಲ್ಲಿ ಸಿಲುಕಿಕೊಳ್ಳೋದು ಸಾಮಾನ್ಯ. ಕೆಲವೊಮ್ಮೆ ಇದು ಜೀವಕ್ಕೆ ಹಾನಿಯಾಗಬಲ್ಲದು. ಆಹಾರ ತಿನ್ನುವಾಗ ಬೇಗ ಬೇಗನೇ ತಿನ್ನುವುದು ಅಥವಾ ಆಹಾರ ತಿನ್ನುವಾಗ ಮಾತನಾಡುವುದರಿಂದ ಆಹಾರ ಗಂಟಲಿನಲ್ಲಿ ಸಿಲುಕಿಕೊಳ್ಳುತ್ತದೆ. ಆಗ ಉಸಿರುಗಟ್ಟಿದಂತಾಗುತ್ತದೆ. ಕೆಲವೊಮ್ಮೆ ಇದು ವಿಪರೀತ ನೋವಿನಿಂದ ಕೂಡಿರುತ್ತದೆ.

ತಕ್ಷಣಕ್ಕೆ ಏನು ಮಾಡಬೇಕೆಂದು ತಿಳಿಯದೇ, ಕೆಲವರು ನೀರು ಕುಡಿಯಲು ಸಲಹೆ ನೀಡುತ್ತಾರೆ. ಇನ್ನೂ ಕೆಲವರು ತಲೆ ಮೇಲೆ ಎರಡೇಟು ಹೊಡೆಯುತ್ತಾರೆ. ಆದರೆ ಆಹಾರ ಗಂಟಲಿನಲ್ಲಿ ಸಿಲುಕಿಕೊಂಡಾಗ ನೀವು ತಕ್ಷಣ ಮಾಡಬೇಕಾದುದ್ದೇನು ಎನ್ನುವುದನ್ನು ನಾವು ತಜ್ಞರಿಂದಲೇ ತಿಳಿಯೋಣ.

**ವೈದ್ಯರು ಏನಂತಾರೆ:** ಆರ್ಥೋ ಮತ್ತು ಕ್ರೀಡಾ ಶಸ್ತ್ರಚಿಕಿತ್ಸಕ ಒಬೈದೂರ್ ರೆಹಮಾನ್ ತಮ್ಮ ಇನ್‌ಸ್ಟಾಗ್ರಾಮ್ ಖಾತೆಯಲ್ಲಿ ಆಹಾರ ಗಂಟಲಿನಲ್ಲಿ ಸಿಲುಕಿಕೊಂಡಾಗ ತಕ್ಷಣ ಏನು ಮಾಡಬೇಕು, ಏನನ್ನು ಮಾಡಬಾರದು ಎನ್ನುವುದರ ಬಗ್ಗೆ ವೀಡಿಯೋವನ್ನು ಹಂಚಿಕೊಂಡಿದ್ದಾರೆ.

ನಿಮ್ಮ ಸುತ್ತಲೂ ಯಾರೂ ಇಲ್ಲದಾದ ಆಹಾರವು ಶ್ವಾಸನಾಳದಲ್ಲಿ ಸಿಲುಕಿಕೊಂಡರೆ ಅಥವಾ ಗಂಟಲಿನಲ್ಲಿ ಏನಾದರೂ ಸಿಲುಕಿಕೊಂಡರೆ ಮಾಡಬೇಕಾದ ಮೊದಲ ಮತ್ತು ಉತ್ತಮ ಕೆಲಸಗಳನ್ನು ವೈದ್ಯರು ಈ ವೀಡಿಯೋದಲ್ಲಿ ವಿವರಿಸಿದ್ದಾರೆ.

**ಏನು ಮಾಡಬಾರದು?:** ನಿಮ್ಮ ಗಂಟಲಿನಲ್ಲಿ ಏನಾದರೂ ಸಿಲುಕಿಕೊಂಡಾಗಲೆಲ್ಲಾ ಮೊದಲು ಮಾಡಬೇಕಾದ ಕೆಲಸವೆಂದರೆ ನೀರು ಕುಡಿಯುವುದನ್ನು ತಪ್ಪಿಸುವುದು ಎಂದು ವೈದ್ಯರು ಹೇಳುತ್ತಾರೆ. ಇದು ಅಡಚಣೆಯನ್ನು ಇನ್ನಷ್ಟು ಹದಗೆಡಿಸಬಹುದು. ನಿಮ್ಮ ಬೆರಳುಗಳನ್ನು ಗಂಟಲಿನಲ್ಲಿ ಇಡಬೇಡಿ, ಇದು ತುಂಡನ್ನು ಮತ್ತಷ್ಟು ಕೆಳಕ್ಕೆ ತಳ್ಳಬಹುದು ಮತ್ತು ಊತವನ್ನು ಹೆಚ್ಚಿಸಬಹುದು. ಸಮತಟ್ಟಾಗಿ ಮಲಗಬೇಡಿ, ಇದು ಉಸಿರುಕಟ್ಟುವಿಕೆಯ ಅಪಾಯವನ್ನು ಹೆಚ್ಚಿಸುತ್ತದೆ. ಗಾಬರಿಗೊಂಡು ಓಡಾಡಬೇಡಿ, ಇದು ದೇಹದ ಆಮ್ಲಜನಕವನ್ನು ಬೇಗನೆ ಖಾಲಿ ಮಾಡುತ್ತದೆ.

**ತಜ್ಞರ ಸಲಹೆ**

**ಹಾಗಾದರೆ ನೀವು ಏನು ಮಾಡಬೇಕು?:** ಸ್ವಯಂ-ಹೈಮ್ಲಿಚ್ ತಂತ್ರವನ್ನು ಅಭ್ಯಾಸ ಮಾಡಿ

ವೈದ್ಯರು ಮೊದಲು ಗಟ್ಟಿಮುಟ್ಟಾದ ಕುರ್ಚಿಯ ಮೇಲೆ ಕುಳಿತುಕೊಳ್ಳಲು ಶಿಫಾರಸು ಮಾಡುತ್ತಾರೆ. ನಿಮ್ಮ ಹೊಟ್ಟೆಯನ್ನು ಕುರ್ಚಿಯ ಮೇಲೆ ಇರಿಸಿ ಮತ್ತು ನಿಮ್ಮ ಸಂಪೂರ್ಣ ದೇಹದ ತೂಕವನ್ನು ಕೆಳಕ್ಕೆ ಒರಗಿಸಿ. ಸಿಲುಕಿಕೊಂಡ ತುಂಡು ಸ್ಥಳಾಂತರಗೊಳ್ಳುವವರೆಗೆ ಇದನ್ನು ಪುನರಾವರ್ತಿಸಿ.

**ಹೊಟ್ಟೆಯ ಮೇಲೆ ಒತ್ತಡ ಹೇರಿ:** ಮುಷ್ಟಿಯನ್ನು ಹಿಡಿದು, ಹೊಕ್ಕುಳಿನ ಮೇಲೆ ಇರಿಸಿ, ಅದನ್ನು ನಿಮ್ಮ ಇನ್ನೊಂದು ಕೈಯಿಂದ ಹಿಡಿದು, ಅದನ್ನು ಒಳಗೆ ಮತ್ತು ಮೇಲಕ್ಕೆ ವೇಗವಾಗಿ ತಳ್ಳಿರಿ. ಈ ಪ್ರಕ್ರಿಯೆಯನ್ನು ಮುಂದುವರಿಸಿ.

**ಕೆಮ್ಮುತ್ತಲೇ ಇರಿ:** ನಿಮಗೆ ಇನ್ನೂ ಉಸಿರಾಟದ ತೊಂದರೆ ಇದ್ದರೆ, ಕೆಮ್ಮುತ್ತಲೇ ಇರಿ. ಬಲವಂತವಾಗಿ ಕೆಮ್ಮುವುದು ಗಂಟಲಿನಲ್ಲಿ ಅಥವಾ ಶ್ವಾಸಕೋಶದಲ್ಲಿ ಸಿಲುಕಿರುವ ಸಣ್ಣ ತುಣುಕುಗಳನ್ನು ಹೊರಹಾಕಲು ಸಹಾಯ ಮಾಡುತ್ತದೆ.

**ತಕ್ಷಣ ತುರ್ತು ಸಂಖ್ಯೆಗೆ ಕರೆ ಮಾಡಿ**

ಎಲ್ಲಾ ವಿಧಾನಗಳನ್ನು ಪ್ರಯತ್ನಿಸಿದ ನಂತರವೂ ಸಿಲುಕಿಕೊಂಡ ವಸ್ತು ಹೊರಬರದಿದ್ದರೆ, ವಿಳಂಬ ಮಾಡದೆ ತುರ್ತು ಸಂಖ್ಯೆಗೆ ಕರೆ ಮಾಡಿ. ನೀವು ಮನೆಯಲ್ಲಿ ಒಬ್ಬಂಟಿಯಾಗಿದ್ದರೆ, ವೈದ್ಯಕೀಯ ತಂಡವು ಸುಲಭವಾಗಿ ಪ್ರವೇಶಿಸಲು ಬಾಗಿಲನ್ನು ಅನ್‌ಲಾಕ್ ಮಾಡಿ.



**ತಕ್ಷಣ ತುರ್ತು ಸಂಖ್ಯೆಗೆ ಕರೆ ಮಾಡಿ**

## ದಿನ ಭವಿಷ್ಯ

| | | |
|---|---|---|
| ರಾಹುಕಾಲ | ಬೆಳಿಗ್ಗೆ | 07:30 ರಿಂದ 09:00 |
| ಗುಳಿಕ ಕಾಲ | ಮಧ್ಯಾಹ್ನ | 01:30 ರಿಂದ 03:00 |
| ಯಮಗಂಡ ಕಾಲ | ಬೆಳಿಗ್ಗೆ | 10:00 ರಿಂದ 12:00 |

**ಮೇಷ** ಸ್ವಲ್ಪ ಮನರಂಜನೆಗಾಗಿ ನಿಮ್ಮ ಕಚೇರಿಯಿಂದ ಬೇಗನೇ ಹೊರಬರಲು ಪ್ರಯತ್ನಿಸಿ. ಆರ್ಥಿಕ ಸಮಸ್ಯೆ ರಚನಾತ್ಮಕವಾಗಿ ಯೋಚಿಸುವ ನಿಮ್ಮ ಸಾಮರ್ಥ್ಯವನ್ನು ಹಾಳುಮಾಡುತ್ತದೆ. ಸಂಜೆ ಸ್ನೇಹಿತರೊಡನೆ ಹೋಗಿ, ಇದು ತುಂಬ ಒಳ್ಳೆಯದನ್ನು ಮಾಡುತ್ತದೆ.

**ವೃಷಭ** ಫಿಟ್ ಆಗಿ, ಚೆನ್ನಾಗಿರಿಸಿಕೊಳ್ಳಲು ಹೆಚ್ಚಿನ ಕ್ಯಾಲೊರಿಯ ಆಹಾರವನ್ನು ತಪ್ಪಿಸಿ ಜೀವನದ ಕಳಪೆ ಆರೋಗ್ಯದಿಂದಾಗಿ, ಹಣವನ್ನು ಖರ್ಚು ಮಾಡಬಹುದು, ಆದರೆ ನೀವು ಅದರ ಬಗ್ಗೆ ಚಿಂತಿಸಬೇಕಾಗಿಲ್ಲ ಏಕೆಂದರೆ ಹಣವನ್ನು ಉಳಿಸಲಾಗಿದೆ ಇದರಿಂದ ಅದು ಕೆಟ್ಟ ಸಮಯದಲ್ಲಿ ನಿಮಗೆ ಉಪಯುಕ್ತವಾಗಿರುತ್ತದೆ.

**ಮಿಥುನ** ಬಹುಕಾಲದಿಂದ ಎದುರು ನೋಡುತ್ತಿದ್ದ ಜೀವನದ ಒತ್ತಡಗಳಿಂದ ಶಮನ ಪಡೆಯುತ್ತೀರಿ. ಅವುಗಳನ್ನು ಶಾಶ್ವತವಾಗಿ ದೂರವಿಸಿರಿಸಲು ಜೀವನ ಶೈಲಿಯನ್ನು ಬದಲಿಸಲು ಇದು ಸರಿಯಾದ ಸಮಯ ಆಕರ್ಷಕವಾಗಿ ತೋರುವ ಯಾವುದೇ ಹೂಡಿಕೆಯ ಯೋಜನೆಯ ಬಗ್ಗೆ ಹೆಚ್ಚು ಕಂಡುಹಿಡಿಯಲು ಮೇಲ್ಮೈಗಿಂತ ಕೆಳಗೆ ಆಳವಾಗಿ ಕೆದಕಿ.

**ಕರ್ಕಾಟಕ** ನಿಮ್ಮ ವ್ಯಕ್ತಿತ್ವ ಒಂದು ಸುಗಂಧದಂತೆ ಕೆಲಸ ಮಾಡುತ್ತದೆ. ಹಣಕ್ಕೆ ಸಂಬಂಧಿಸಿದ ಯಾವುದೇ ಸಮಸ್ಯೆಯನ್ನು ಇಂದು ಪರಿಹರಿಸಬಹುದು, ನೀವು ಹಣದಿಂದ ಲಾಭ ಪಡೆಯಬಹುದು. ಸ್ನೇಹಿತರು ನೀವು ನಿರೀಕ್ಷಿಸಿದ್ದಕ್ಕಿಂತ ಹೆಚ್ಚು ಬೆಂಬಲ ನೀಡಬಹುದು. ನೀವು ನಿಮ್ಮ ಅತ್ಯುತ್ತಮ ನಡವಳಿಕೆಯನ್ನು ಹೊಂದಿರಬೇಕು.

**ಸಿಂಹ** ಅಸಾಧ್ಯವಾದ ಅನಗತ್ಯ ಚಿಂತನೆಯಲ್ಲಿ ನಿಮ್ಮ ಶಕ್ತಿ ವ್ಯರ್ಥ ಮಾಡುವ ಬದಲು ಅದನ್ನು ಸರಿಯಾದ ದಿಕ್ಕಿನಲ್ಲಿ ಬಳಸಿ. ನೀವು ಜೀವನದಲ್ಲಿ ಹಣದ ಪ್ರಾಮುಖ್ಯತೆಯನ್ನು ಅರ್ಥಮಾಡಿಕೊಳ್ಳುವುದಿಲ್ಲ ಆದರೆ ಇಂದು ನೀವು ಹಣದ ಮೌಲ್ಯವನ್ನು ಅರ್ಥ ಮಾಡಿಕೊಳ್ಳಬಹುದು ಏಕೆಂದರೆ ಇಂದು ನಿಮಗೆ ಹಣದ ಅಗತ್ಯವಿರುತ್ತದೆ.

**ಕನ್ಯಾ** ನಿಮ್ಮ ಆರೋಗ್ಯದ ಬಗ್ಗೆ ಎಚ್ಚರ ವಹಿಸಿ. ಕಳೆದ ದಿನಗಳನ್ನು ಹೋಲಿಸಿದರೆ ಇಂದು ಆರ್ಥಿಕ ಉತ್ತಮವಾಗಲಿದೆ, ನೀವು ಹೆಚ್ಚಿನ ಹಣವನ್ನು ಪಡೆಯುತ್ತೀರಿ . ಗೃಹ ಜೀವನ ಶಾಂತಿಯುತ ಮತ್ತು ಉತ್ತಮವಾಗಿರುತ್ತದೆ ನಿಮ್ಮ ಪ್ರೇಮಿಯಿಂದ ದೂರವುಳಿಯಲು ತುಂಬಾ ಕಷ್ಟವಾಗುತ್ತದೆ.

**ತುಲಾ** ನಿಮ್ಮ ಆರೋಗ್ಯದ ಬಗ್ಗೆ ವಿಶೇಷವಾಗಿ ರಕ್ತದೊತ್ತಡ ರೋಗಿಗಳ ಬಗ್ಗೆ ಸ್ವಲ್ಪ ಜಾಗ್ರತೆಯಿಂದಿರಿ. ನೀವು ಪ್ರಯಾಣ ಮಾಡುತ್ತಿದ್ದರೆ ನಿಮ್ಮ ಅಮೂಲ್ಯ ವಸ್ತುಗಳ ಬಗ್ಗೆ ವಿಶೇಷ ಗಮನ ಹರಿಸಿ, ನೀವು ಇದನ್ನು ಮಾಡದಿದ್ದರೆ ಸರಕುಗಳು ಕದಿಯುವ ಸಾಧ್ಯತೆಯಿದೆ.

**ವೃಶ್ಚಿಕ** ಕುಟುಂಬದ ಜೊತೆ ನಿಮ್ಮ ಸಮಯವನ್ನು ವ್ಯಯಿಸಿ ಪ್ರತ್ಯೇಕತೆ, ಒಂಟಿತನದ ಭಾವನೆಯನ್ನು ತೊಡೆದುಹಾಕಿ. ಹಣಕ್ಕೆ ಸಂಬಂಧಿಸಿದ ಯಾವುದೇ ವಿಷಯ ನ್ಯಾಯಾಲಯ ಪ್ರಕರಣದಲ್ಲಿ ಸಿಲುಕಿಕೊಂಡಿದ್ದರೆ, ಇಂದು ನೀವು ಅದರಲ್ಲಿ ವಿಜಯವನ್ನು ಪಡೆಯಬಹುದು, ನೀವು ಹಣದ ಲಾಭವನ್ನು ಪಡೆಯಬಹುದು.

**ಧನಸ್ಸು** ಸಂತಸದ ಪ್ರಯಾಣ, ಸಾಮಾಜಿಕ ಕಾರ್ಯಕ್ರಮಗಳು ನಿಮಗೆ ಆರಾಮ ಮತ್ತು ಸಂತೋಷ ತರುತ್ತದೆ. ನಿಮ್ಮ ಸಮರ್ಪಣೆ ಮತ್ತು ಶ್ರಮವನ್ನು ಗಮನಿಸಲಾಗುತ್ತದೆ ಮತ್ತು ಇಂದು ನಿಮಗೆ ಸ್ವಲ್ಪ ಆರ್ಥಿಕ ಪ್ರತಿಫಲಗಳನ್ನು ತರುತ್ತದೆ. ಸ್ನೇಹಿತರು ಮತ್ತು ಕುಟುಂಬದ ಸದಸ್ಯರು ನಿಮ್ಮ ಹೆಚ್ಚಿನ ಸಮಯ ತೆಗೆದುಕೊಳ್ಳುತ್ತಾರೆ.

**ಮಕರ** ದೈಹಿಕ ರಚನೆಯನ್ನು ಕಾಯ್ದುಕೊಳ್ಳಲು ನೆರವಾಗುವ ಕೆಲವು ಕ್ರೀಡಾ ಚಟುವಟಿಕೆಗಳನ್ನು ನೀವು ಇಂದು ಆನಂದಿಸಬಹುದು. ವಿವಾಹಿತರು ಇಂದು ತಮ್ಮ ಮಕ್ಕಳ ಅಧ್ಯಯನದ ಮೇಲೆ ಹೆಚ್ಚು ಹಣವನ್ನು ಖರ್ಚು ಮಾಡಬೇಕಾಗುತ್ತದೆ. ಸಂಜೆ ಸಾಮಾಜಿಕ ಚಟುವಟಿಕೆ ನೀವು ನಿರೀಕ್ಷಿಸಿದ್ದಕ್ಕಿಂತ ಉತ್ತಮವಾಗಿರುತ್ತದೆ.

**ಕುಂಭ** ಬೆಂಬಲ ನೀಡುವ ಸ್ನೇಹಿತರು ನಿಮ್ಮನ್ನು ಸಂತೋಷವಾಗಿರಿಸುತ್ತಾರೆ. ಹಣವನ್ನು ಯೋಚಿಸದೆ ಮತ್ತು ಪರಿಗಣಿಸದೆ ಖರ್ಚುಮಾಡುವುದು, ನಿಮಗೆ ಎಷ್ಟು ನಷ್ಟ ಮಾಡಬಹುದು ಎಂಬುದು ಇಂದು ನಿಮಗೆ ಅರ್ಥವಾಗಬಹುದು. ನಿಮ್ಮ ಅತಿಯಾದ ಜೀವನಶೈಲಿ ಮನೆಯಲ್ಲಿ ಆತಂಕ ಸೃಷ್ಟಿಸಬಹುದು.

**ಮೀನ** ನಿಮ್ಮ ಜೀವನವನ್ನು ಲಘುವಾಗಿ ತೆಗೆದುಕೊಳ್ಳಬೇಡಿ ನೆನಪಿಡಿ, ಬದುಕಿನ ರಕ್ಷಣೆ ನಿಜವಾದ ಆಣೆ. ಜೀವನ ಸಂಗಾತಿಯೊಂದಿಗೆ ಹಣಕ್ಕೆ ಸಂಬಂಧಿಸಿದ ಯಾವುದೇ ವಿಷಯದ ಬಗ್ಗೆ ಜಗಳವಾಗುವ ಸಾಧ್ಯತೆ ಇದೆ. ಇಂದು ನಿಮ್ಮ ದುಂದುಗಾರಿಕೆಯ ಮೇಲೆ ನಿಮ್ಮ ಸಂಗಾತಿ ನಿಮಗೆ ಮಾತುಗಳು ಹೇಳಬಹುದು.

# ಬದುಕೋಕೆ ಒಂದು ತುಂಡು ನೆಲ ಕೂಡಿ.!

## ಅಲೆಮಾರಿ ಜನಾಂಗದವರಿಗೆ ಆಕಾಶವೇ ಸೂರು ನೆಲವೇ ಹಾಸಿಗೆ, ಸರಕಾರದ ಸೌಲಭ್ಯಗಳು ಇಲ್ಲವೇ ಇಲ್ಲ

- ಪರಮೇಶ.ಡಿ.ವಿಳಸಪೂರೆ
- ಉದಯವಾಹಿನಿ, ಔರಾದ್

ವಾಸಿಸಲು ಮನೆ ಇಲ್ಲ, ವಿದ್ಯುತ್ ಇಲ್ಲ, ಕುಡಿಯಲು ನೀರಿಲ್ಲ, ಓಡಾಡಲು ರಸ್ತೆ ಇಲ್ಲ ಸರಕಾರದ ಸೌಲಭ್ಯಗಳು ಇಲ್ಲವೇ ಇಲ್ಲ. ಹೀಗೆ 'ಇಲ್ಲ'ಗಳ ಮಧ್ಯೆ ಔರಾದ್ ಪಟ್ಟಣದಲ್ಲಿ ವಾಸಿಸುತ್ತಿರುವ ಅಲೆಮಾರಿ ಜನಾಂಗದ ಕುಟುಂಬಗಳು ಹೈರಾಣಾಗಿವೆ.

ಊರೂರು ಅಲೆಯುತ್ತ ಒಂದು ಸ್ಥಳದಲ್ಲಿ ತಳ ಊರಿ ನಿಲ್ಲದೆ ಅಲೆದಾಡುತ್ತಲೆ ಔರಾದ್ ಪಟ್ಟಣಕ್ಕೆ 40 ವರ್ಷಗಳ ಹಿಂದೆ ಬಂದು ನೆಲೆಸಿರುವ ಜೋಶಿ, ದುರುಮುರಗೇರ್, ಮಂಡರ, ಗೊಂದಲಗಿ ಸೇರಿದಂತೆ ಇನ್ನಿತರ ಸಮುದಾಯದವರು ಪ್ರಸ್ತುತ ಎದುರಿಸುತ್ತಿರುವ ಸಮಸ್ಯೆಗಳು ಅವರಿಗಲ್ಲದೆ ಮತ್ಯಾರಿಗೂ ಅರ್ಥವಾಗುತ್ತಿಲ್ಲ. ಅವರ ಕಷ್ಟ- ನಷ್ಟಗಳನ್ನು ದೇವರೇ ಭೂಮಿಗಿಳಿದು ಬಂದು ಸರಿ ಮಾಡಿದರೂ ಸರಿಯಾಗದಷ್ಟು ಘೋರ ಸಮಸ್ಯೆಗಳನ್ನು ಎದುರಿಸುತ್ತಿದ್ದಾರೆ. ಹೊಟ್ಟೆ ಪಾಡಿಗಾಗಿ ಅಲೆಯುತ್ತ-ಅಲೆದಾಡುತ್ತ ಔರಾದ್ ನಗರಕ್ಕೆ ಬಂದಿದ್ದೇವೆ. ಇಲ್ಲಿ ಹರಕು-ಮುರುಕು ಟೆಂಟ್ ಹಾಕಿಕೊಂಡು ಭಯದ ವಾತಾವರಣದಲ್ಲಿ ವಾಸಿಸುತ್ತಿದ್ದೇವೆ ಎನ್ನುತ್ತಾರೆ ಹಿರಿಯರು.

**ಶಿಕ್ಷಣ ಇಲ್ಲ :** ಊರೂರು ಅಲೆಯುತ್ತ ಬಂದಿರುವ ಇವರ ಪೂರ್ವಜರಾಗಲಿ ಈಗಿರುವ ಸಮುದಾಯದ ಜನರಾಗಲಿ ಯಾರೂ ಕೂಡ ಶಿಕ್ಷಣ ಪಡೆದಿಲ್ಲ! ಎಲ್ಲರೂ ಅವಿದ್ಯಾವಂತರೇ. ನಮಗೆ ಒಂದು ಖಾಲಿ ಜಾಗವನ್ನಾದರೂ ಕೊಡಿ ಸಾಕು. ಅಲ್ಲೇ ಜೋಪಡಿ ಕಟ್ಟಿಕೊಂಡು ಹೆಂಗೋ ಜೀವನ ಮಾಡ್ತೀವಿ ಅನ್ನೋದು ಅವರ ಬೇಡಿಕೆ. ಬದುಕೋಕೆ ಒಂದು ತುಂಡು ನೆಲ. ಇಷ್ಟೇ ಇವರ ಬೇಡಿಕೆ. ಇಷ್ಟು ಸಣ್ಣ ಬೇಡಿಕೆಗೂ ಸರ್ಕಾರ ಬೆನ್ನು ತೋರಿಸಿದರೆ, ಈ ದೇಶದಲ್ಲಿ ಬಡವನಿಗೆ ಜಾಗ ಎಲ್ಲಿ?


ಉದಯವಾಹಿನಿ ಚಿತ್ರ


ಉದಯವಾಹಿನಿ ಚಿತ್ರ

### ಸೂರು ಭಾಗ್ಯ ಇಲ್ಲ

ಕಳೆದ 20 ವರ್ಷಗಳಿಂದ ಕರ್ನಾಟಕ ರಾಜ್ಯವನ್ನು ಗುಡಿಸಲು ಮುಕ್ತ ರಾಜ್ಯವನ್ನು ಮಾಡುತ್ತೇವೆ ಎನ್ನುತ್ತಾರೆ ಸರಕಾರವನ್ನಾಳುವ ರಾಜಕರಣಿಗಳು. ಆದರೆ ಇಲ್ಲಿಯ ಪರಿಸ್ಥಿತಿಯೇ ಬೇರೆ ಇದೆ. ಒಂದೇ ಕಡೆ ವಾಸಿಸಲ್ಲು ಜಾಗವಿಲ್ಲ ಈ ಜನಾಂಗದವರಿಗೆ 40 ವರ್ಷಗಳಿಂದ ಒಂದೂ ಸೂರಿನ ಭಾಗ್ಯವು ದೊರೆತಿಲ್ಲ. ಹಾಗಾದರೆ ಗುಡಿಸಲು ಮುಕ್ತ ರಾಜ್ಯ ಸಾಧ್ಯವೆ ? ಎನ್ನಿಸುತ್ತದೆ ಇಲ್ಲಿಯ ಸ್ಥಿತಿಗತಿಗಳನ್ನು ನೋಡಿದರೆ.


> ನಮಗೆ ಓಡಾಡಲು ರಸ್ತೆ ಇಲ್ಲ, ಕುಡಿಯುವ ನೀರಿಲ್ಲ, ವಿದ್ಯುತ್ ಇಲ್ಲ, ವಾಸಿಸಲು ಮನೆ ಇಲ್ಲ, ವೋಟಿನ್ ಚೀಟಿ, ಪಡಿತರ ಚೀಟಿ, ಮಾತ್ರ ಇವೆ. ಆದರೆ ಸರಕಾರದ ಯಾವುದೇ ಸೌಲಭ್ಯಗಳು ನಮಗೆ ದೊರೆತಿಲ್ಲ. 15 ವರ್ಷಗಳಿಂದ ಹೋರಾಟ ಮಾಡ್ತಾ ಇದ್ದೇವೆ ಜಾಗವನ್ನು ಮಾಡಿ ಕೊಟ್ಟಿಲ್ಲ. ಮನೆ ಕಟ್ಟಿಕೊಟ್ಟಿಲ್ಲ. ಹಾವು, ಚೇಳು ವಾಸಿಸುವ ಈ ಗುಡ್ಡದಲ್ಲಿ ಟೆಂಟ್ ಹಾಕಿಕೊಂಡು ಅಭದ್ರ ಜೀವನ ನಡೆಸುತ್ತಿದ್ದೇವೆ.
>
> -ನಾಗನಾಥ ಸಿ. ವಾಕುಡೆ, ಅಲೆಮಾರಿ ವಿಮುಕ್ತ ಸಮುದಾಯಗಳ ಒಕ್ಕೂಟ ಜಿಲ್ಲಾಧ್ಯಕ್ಷ

> ದೇಶದಲ್ಲಿ ಈ ಜನಾಂಗದವರು ಇದೆ ಎಂಬುದು ಅಧಿಕಾರಿಗಳು ಹಾಗೂ ಪ್ರತಿನಿಧಿಗಳು ಮರೆತ್ತಿದ್ದಾರೆ. ಜಿಲ್ಲಾಡಳಿತ ತಾಲ್ಲೂಕು ಆಡಳಿತ ಈ ಜನಾಂಗಕ್ಕೆ ನಿರ್ಲಕ್ಷ್ಯ ತೋರುತ್ತಿದೆ. ಬರುವ ಜ.18ರೊಳಗೆ ಬೇಡಿಕೆಗಳು ಈಡೇರಿಸದೆ ಹೋದರೆ ತಹಶೀಲ್ದಾರ್ ಕಚೇರಿಯಲ್ಲಿ ಅನಿರ್ದಿಷ್ಟವಧಿ ಧರಣಿ ಸತ್ಯಾಗ್ರಹ ನಡೆಸಲಾಗುತ್ತದೆ.
>
> -ರಾಹುಲ್ ಖಂದಾರೆ, ಸಾಮಾಜಿಕ ಕಾರ್ಯಕರ್ತ

## ಭ್ರಷ್ಟಾಚಾರಕ್ಕೆ ಕಡಿವಾಣ ಹಾಕಲು ನರೇಗಾದಲ್ಲಿ ಬದಲಾವಣೆ: ಸಂಸದ

- ಉದಯವಾಹಿನಿ, ಬಾಗಲಕೋಟೆ

ವಿಕಸಿತ ಭಾರತದ ಕಲ್ಪನೆಯಿಟ್ಟುಕೊಂಡು ನರೇಂದ್ರ ಮೋದಿ ಕೈಗೊಳ್ಳುತ್ತಿರುವ ಯೋಜನೆ. ಕಾರ್ಯಕ್ರಮಗಳ ತಿರುಳು ಅರಿಯದ ಕಾಂಗ್ರೆಸ್ ಪಕ್ಷ ಬರೀ ಟೀಕೆ, ವಿರೋಧ ಮಾಡುವುದನ್ನು ರೂಢಿ ಮಾಡಿಕೊಂಡಿದೆ ಎಂದು ಸಂಸದ ಜಗದೀಶ ಶೆಟ್ಟರ್ ಆರೋಪಿಸಿದರು. ನಗರದಲ್ಲಿ ಬಿಜೆಪಿ ಕಚೇರಿಯಲ್ಲಿ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಬಡವರಿಗೆ ನೆರವಾಗುವ ದೃಷ್ಟಿಯಿಂದ ಕೇಂದ್ರ ಸರ್ಕಾರ ನರೇಗಾ ಯೋಜನೆಯಲ್ಲಿ ಬದಲಾವಣೆ ತಂದಿದೆ. ಅದನ್ನು ಸರಿಯಾಗಿ ತಿಳಿಯದೇ ಹಾಗೂ ಆ ಬಗ್ಗೆ ಸಂಸತ್ತಿನಲ್ಲಿ ಚರ್ಚಿಸಲು ಮುಂದಾಗದೇ ವಿರೋಧಿಸುವುದು, ಸದನ ಬಹಿಷ್ಕರಿಸುವುದು ಹಾಗೂ ಟೀಕೆ ಮಾಡುತ್ತ ಅಪಪ್ರಚಾರಕ್ಕೆ ಇಳಿದಿದೆ. ನರೇಂದ್ರ ಮೋದಿ ನೇತೃತ್ವದಲ್ಲಿ ದೇಶ ಪ್ರಗತಿಯಲ್ಲಿ ಮುನ್ನಡೆಯುತ್ತಿರುವುದನ್ನು ಸಹಿಸಿಕೊಳ್ಳಲು ಅವರಿಗೆ ಆಗುತ್ತಿಲ್ಲ ಎಂದು ದೂರಿದರು. ಮೋದಿ ವಿಕಸಿತ ಭಾರತದ ಕನಸು ಕಂಡಿದ್ದು, ಆ ನಿಟ್ಟಿನಲ್ಲಿ ಹಲವಾರು ಹೊಸ ಹೊಸ ಯೋಜನೆಗಳನ್ನು ರೂಪಿಸುತ್ತಿದ್ದಾರೆ. ಹೀಗಾಗಿ ದೇಶ ಆರ್ಥಿಕ ಪ್ರಗತಿ ಸಾಧಿಸುತ್ತಿದೆ. ಆರ್ಥಿಕತೆಯಲ್ಲಿ ಭಾರತ ಈಗ 4ನೇ ಸ್ಥಾನಕ್ಕೆ ಬಂದಿದೆ. ಅದಕ್ಕೆ ಪೂರಕವಾಗಿ ಹಲವಾರು ಬದಲಾವಣೆಗಳಾಗಿವೆ. ನರೇಗಾ ಯೋಜನೆಯಲ್ಲಿನ ಭ್ರಷ್ಟಾಚಾರ, ಲೋಪದೋಷಗಳನ್ನು ಸರಿಪಡಿಸಿ ನಿಜವಾದ ಕೂಲಿಕಾರರಿಗೆ ಯೋಜನೆಯ ಅನುಕೂಲತೆಗಳು ತಲುಪಬೇಕು ಎಂಬ ಉದ್ದೇಶದಿಂದ ಬದಲಾವಣೆ ತರಲಾಗಿದೆ ಎಂದರು. ನರೇಗಾ ಯೋಜನೆಯ ಬಜೆಟ್ ಹೆಚ್ಚಿಸಲಾಗಿದೆ. 100 ದಿನಗಳ ಕೆಲಸದ ದಿನಗಳನ್ನು 120ಕ್ಕೆ ಹೆಚ್ಚಿಸಲಾಗಿದೆ. ನಕಲಿ ಜಾಬ್ ಕಾರ್ಡ್‌ಗಳನ್ನು ರದ್ದುಪಡಿಸಿ, ಕೆಲಸ ಮಾಡಿದವರಿಗೆ 7 ದಿನದೊಳಗೆ ಹಣ ಪಾವತಿಸುವ ಕ್ರಮವಹಿಸಲಾಗಿದೆ.



## ಮಹಿಳೆ ವಿವಸ್ತ್ರಗೊಳಿಸಿ ದೌರ್ಜನ್ಯ; ಬಿಜೆಪಿ ಪ್ರತಿಭಟನೆ

- ಉದಯವಾಹಿನಿ, ಹಾವೇರಿ

ಹುಬ್ಬಳ್ಳಿಯ ಕೇಶ್ವಾಪುರದ ಚಾಲುಕ್ಯ ನಗರದಲ್ಲಿ ಸುಜಾತಾ ಹಂಡಿ ಅವರನ್ನು ವಿವಸ್ತ್ರಗೊಳಿಸಿ ಪೊಲೀಸರು ದೌರ್ಜನ್ಯ ಎಸಗಿದ್ದಾರೆ. ಇದಕ್ಕೆ ರಾಜ್ಯ ಸರ್ಕಾರದ ಕುಮ್ಮಕ್ಕು ಕಾರಣ ಎಂದು ಆರೋಪಿಸಿ ಬಿಜೆಪಿ ಕಾರ್ಯಕರ್ತರು ನಗರದಲ್ಲಿ ಪ್ರತಿಭಟನೆ ನಡೆಸಿದರು. ನಗರದ ಹುತಾತ್ಮ ಮೈಲಾರ ಮಹದೇವಪ್ಪ ವೃತ್ತದಲ್ಲಿ ಸೇರಿದ್ದ ಬಿಜೆಪಿ ಕಾರ್ಯಕರ್ತರು, ಕಾರ್ಯಕರ್ತೆಯರು, ದೌರ್ಜನ್ಯ ಎಸಗಿರುವ ಪೊಲೀಸರನ್ನು ಕೆಲಸದಿಂದ ಅಮಾನತು ಮಾಡಬೇಕು ಎಂದು ಒತ್ತಾಯಿಸಿದರು. ಸುಜಾತಾ ಹಂಡಿ ಅವರು ಬಿಜೆಪಿ ಕಾರ್ಯಕರ್ತೆ. ಅವರನ್ನು ಗುರಿಯಾಗಿಸಿಕೊಂಡು ಪೊಲೀಸರು ದೌರ್ಜನ್ಯ ಎಸಗಿದ್ದಾರೆ. ಇದರ ಹಿಂದೆ ಹಲವು ಕಾಣದ ಕೈಗಳು ಕೆಲಸ ಮಾಡಿವೆ. ಪೊಲೀಸರಿಂದ ಸುಜಾತಾ ಮೇಲಾಗಿರುವ ದೌರ್ಜನ್ಯಕ್ಕೆ ನ್ಯಾಯ ಸಿಗಬೇಕು. ಇಲ್ಲದಿದ್ದರೆ, ರಾಜ್ಯದಾದ್ಯಂತ ಮತ್ತಷ್ಟು ಗಂಭೀರ ಸ್ವರೂಪದಲ್ಲಿ ಹೋರಾಟ ನಡೆಸಲಾಗುವುದು ಎಂದು ಪ್ರತಿಭಟನಕಾರರು ಎಚ್ಚರಿಕೆ ನೀಡಿದರು.

ಬಿಜೆಪಿ ಮಹಿಳಾ ಮೋರ್ಚಾದ ರಾಜ್ಯ ಘಟಕದ ಪ್ರಧಾನ ಕಾರ್ಯದರ್ಶಿ ಶೋಭಾ ನಿಮಗೌಡ್ರ ಮಾತನಾಡಿ, ಇಂದಿನ ಕಾಂಗ್ರೆಸ್ ಸರ್ಕಾರದ ಅವಧಿಯಲ್ಲಿ ಮಹಿಳೆಯರ ಮೇಲೆ ನಿರಂತರವಾಗಿ ದೌರ್ಜನ್ಯದಂಥ ಪ್ರಕರಣಗಳು ನಡೆಯುತ್ತಿವೆ. ಹುಬ್ಬಳ್ಳಿ ಪ್ರಕರಣವು ಅತೀ ಅಮಾನವಿತೆಯಿಂದ ಕೂಡಿದೆ. ರಾಜ್ಯದ ಎಲ್ಲ ಮಹಿಳೆಯರು ಖಂಡಿಸುವಂತೆ ಪ್ರಕರಣ ಇದಾಗಿದೆ ಎಂದರು. ಭ್ರಷ್ಟ ಕಾಂಗ್ರೆಸ್ ಸರ್ಕಾರ, ರಾಜ್ಯದಲ್ಲಿ ಮಹಿಳೆಯರಿಗೆ ಗೌರವ ಇಲ್ಲದ ವಾತಾವರಣ ನಿರ್ಮಿಸಿದೆ. ಹುಬ್ಬಳ್ಳಿಯಲ್ಲಾದ ಹೀನ ಪ್ರಕರಣವನ್ನು ಗಂಭೀರವಾಗಿ ಪರಿಗಣಿಸಿ ತಪ್ಪಿತಸ್ಥ ಪೊಲೀಸರನ್ನು ರಾಜ್ಯ ಸರ್ಕಾರ ಅಮಾನತು ಮಾಡಬೇಕು ಎಂದು ಅವರು ಆಗ್ರಹಿಸಿದರು. ಬಿಜೆಪಿ ಜಿಲ್ಲಾ ಘಟಕದ ಅಧ್ಯಕ್ಷ ವಿರುಪಾಕ್ಷಪ್ಪ ಬಳ್ಳಾರಿ ಮಾತನಾಡಿ, ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ. ಗೃಹ ಸಚಿವರು ನಿಷ್ಕ್ರಿಯ ಸಚಿವರಾಗಿದ್ದಾರೆ. ರಾಜ್ಯದಲ್ಲಿ ಮಹಿಳೆಯರ ಮೇಲೆ ಪದೆ ಪದೇ ದೌರ್ಜನ್ಯಗಳು ನಡೆಯುತ್ತಿದ್ದರೂ ಮೌನವಾಗಿದ್ದಾರೆ' ಎಂದರು. ರಾಜ್ಯದಲ್ಲಿ ಮಹಿಳೆಯರ ಮೇಲಿನ ದೌರ್ಜನ್ಯ ಸೇರಿದಂತೆ ಕೊಲೆ, ದರೋಡೆಯಂಥ ಪ್ರಕರಣಗಳು ಹೆಚ್ಚಾಗಿವೆ. ಹುಬ್ಬಳ್ಳಿ ಘಟನೆಯನ್ನು ರಾಜ್ಯ ಸರ್ಕಾರ ಗಂಭೀರವಾಗಿ ಪರಿಗಣಿಸಬೇಕು. ಸುಜಾತಾ ಅವರನ್ನು ವಿವಸ್ತ್ರಗೊಳಿಸಿದ ಪೊಲೀಸರನ್ನು ತಕ್ಷಣವೇ ಕೆಲಸದಿಂದ ಅಮಾನತು ಮಾಡಿ, ಪ್ರಾಮಾಣಿಕ ತನಿಖೆಗೆ ಆದೇಶಿಸಬೇಕು ಎಂದು ಒತ್ತಾಯಿಸಿದರು.

ಬಿಜೆಪಿ ಮುಖಂಡ ಬಿ.ಸಿ. ಪಾಟೀಲ ಮಾತನಾಡಿ, ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹಾಳಾಗಿದೆ. ಪದೇ ಪದೇ ರಾಜ್ಯದಲ್ಲಿ ಮಹಿಳೆಯರ ಮೇಲೆ ದೌರ್ಜನ್ಯಗಳು ನಡೆಯುತ್ತಿವೆ. ರಾಜ್ಯದಲ್ಲಿ ಮಹಿಳೆಯರಿಗೆ ಗೌರವ ಹಾಗೂ ರಕ್ಷಣೆ ಇಲ್ಲದಂತಾಗಿದೆ. ಪೊಲೀಸ್ ಇಲಾಖೆಯ ಮೇಲೆ ಕಾಂಗ್ರೆಸ್ ಸರ್ಕಾರ, ಹಿಡಿತ ಸಾಧಿಸಿದೆ. ತಮಗೆ ಬೇಕಾದ ರೀತಿಯಲ್ಲಿ ಪೊಲೀಸರನ್ನು ಬಳಸಿಕೊಳ್ಳಲಾಗುತ್ತಿದೆ ಎಂದು ದೂರಿದರು. ಹುಬ್ಬಳ್ಳಿ ಪ್ರಕರಣದಿಂದ ಇಡೀ ರಾಜ್ಯವೇ ತಲೆತಗ್ಗಿಸುವಂತಾಗಿದೆ. ಈ ಘಟನೆಯಲ್ಲಿ ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಆಗಬೇಕು. ಮುಂಬರುವ ದಿನಗಳಲ್ಲಿ ಇಂಥ ಘಟನೆಗಳು ನಡೆಯದಂತೆ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಅವರು ಆಗ್ರಹಿಸಿದರು.



ಉದಯವಾಹಿನಿ ಚಿತ್ರ

## 17ನೇ ಕನ್ನಡ ಸಾಹಿತ್ಯ ಸಮ್ಮೇಳನ ಸಂಪನ್ನ, ಏಳು ನಿರ್ಣಯ

- ಉದಯವಾಹಿನಿ, ಹಾರೂಗೇರಿ

ಹಾರೂಗೇರಿಯನ್ನು ತಾಲ್ಲೂಕು ಕೇಂದ್ರವಾಗಿಸಬೇಕು ಎಂಬುದು ಸೇರಿದಂತೆ ಏಳು ನಿರ್ಣಯಗಳನ್ನು ಇಲ್ಲಿ ಮುಕ್ತಾಯಗೊಂಡ ಜಿಲ್ಲಾಮಟ್ಟದ 17ನೇ ಕನ್ನಡ ಸಾಹಿತ್ಯ ಸಮ್ಮೇಳನದಲ್ಲಿ ಕೈಗೊಳ್ಳಲಾಯಿತು. ಸರ್ಕಾರಿ ಶಾಲೆಗಳ ಸ್ಥಿತಿಗತಿ ಸುಧಾರಣೆಗೆ ಸರ್ಕಾರ ಕ್ರಮ ವಹಿಸಬೇಕು. ಸರ್ಕಾರಿ ಶಾಲೆಗಳಲ್ಲಿನ ಶಿಕ್ಷಕರ ಕೊರತೆ ನೀಗಿಸಬೇಕು. ಜಿಲ್ಲೆಯ ಪ್ರವಾಸಿ ತಾಣಗಳು, ಧಾರ್ಮಿಕ ಸ್ಥಳಗಳನ್ನು ಸಮಗ್ರವಾಗಿ ಅಭಿವೃದ್ಧಿಪಡಿಸಿ, ಪ್ರವಾಸಿಗರನ್ನು ಸೆಳೆಯುವ ಕೆಲಸವಾಗಬೇಕು ಸಂಶೋಧಕರಾದ ಪ್ರೊ.ಕೆ.ಜಿ.ಕುಂದಣಗಾರ, ಶಿ.ಚ.ನಂದಿಮಠ ಹಾಗೂ ಸಾಹಿತಿ ಕೃಷ್ಣಮೂರ್ತಿ ಪುರಾಣಿಕ ಅವರ ಹೆಸರಿನಲ್ಲಿ ಪ್ರತಿಷ್ಠಾನ ಸ್ಥಾಪಿಸಬೇಕು. ರಂಗಾಯಣ ಮಾದರಿಯಲ್ಲೇ, ಕುಲಗೋಡ ತಮ್ಮಣ್ಣ ಹಾಗೂ ಕೌಜಲಗಿ ನಿಮ್ಮ ಹೆಸರಿನಲ್ಲಿ ರಾಜ್ಯಮಟ್ಟದ ಜನಪದ ಕಲೆಗಳ ರಂಗ ತರಬೇತಿ ಶಾಲೆ ಸ್ಥಾಪಿಸಬೇಕು. ಅಭಿವೃದ್ಧಿ ಕೆಲಸಕ್ಕಾಗಿ ಪ್ರತಿ ತಾಲ್ಲೂಕಿಗೆ ಹೆಚ್ಚಿನ ಅನುದಾನ ನೀಡಬೇಕು ಎಂದು ಒತ್ತಾಯಿಸಲಾಯಿತು.

ಸಮ್ಮೇಳನದ ಸಮಾರೋಪ ಕಾರ್ಯಕ್ರಮದಲ್ಲಿ ಮಾತನಾಡಿದ ಸರ್ವಾಧ್ಯಕ್ಷ ವಿ.ಎಸ್.ಮಾಳಿ, ಇಂದು ಮರೆಯಾಗುತ್ತಿರುವ ಕನ್ನಡ ಶಾಲೆಗಳನ್ನು ಉಳಿಸಿ, ಬೆಳೆಸುವ ಕೆಲಸವಾಗಬೇಕಿದೆ. ಇದಕ್ಕಾಗಿ ಎಲ್ಲರೂ ಕಂಕಣ ಬದ್ಧರಾಗಬೇಕಿದೆ ಎಂದರು. ಆಶೀರ್ವಚನ ನೀಡಿದ ಬೈಲೂರಿನ ನಿಷ್ಕಲ ಮಂಟಪದ ನಿಜಗುಣಾನಂದ ಸ್ವಾಮೀಜಿ, ಮಂದಿರ, ಚರ್ಚ್‌ಗಳನ್ನು ಕಟ್ಟುವುದರಿಂದ ಪ್ರಯೋಜನವಿಲ್ಲ. ಕನ್ನಡ ಶಾಲೆಗಳನ್ನು ಕಟ್ಟಬೇಕು. ಅವುಗಳನ್ನು ಉಳಿಸಿ, ಬೆಳೆಸಬೇಕು. ಸಂಸ್ಕೃತಿ, ಸಂಸ್ಕಾರ ಮರೆತು ಯಾರೂ ಬದುಕಬಾರದು ಎಂದರು. ಅಧಿಕಾರಿ ಸಿದ್ದು ಹುಲ್ಲೋಳಿ, ಪರೀಕ್ಷೆಗಳಲ್ಲಿ ಮಕ್ಕಳು ಹೆಚ್ಚಿನ ಅಂಕ ಗಳಿಸಿದರಷ್ಟೇ ಸಾಲದು. ಅವರಲ್ಲಿ ವ್ಯವಹಾರದ ಜ್ಞಾನವನ್ನೂ ಬೆಳೆಸಬೇಕು ಎಂದು ಹೇಳಿದರು.

## ವಿಬಿ-ಜಿ ರಾಮ್ ಜಿ ಕಾಯ್ದೆಗೆ ಕಾಂಗ್ರೆಸ್ ವಿರೋಧ

- ಉದಯವಾಹಿನಿ, ಬೆಳಗಾವಿ


ಉದಯವಾಹಿನಿ ಚಿತ್ರ

ವಿಕಸಿತ ಭಾರತ ಉದ್ಯೋಗ ಖಾತ್ರಿ, ಜೀವನೋಪಾಯ ಮಿಷನ್ (ಗ್ರಾಮೀಣ) (ವಿಬಿ-ಜಿ ರಾಮ್ ಜಿ) ಕಾಯ್ದೆ ವಿರೋಧಿಸಿ, ಇಲ್ಲಿನ ಕಾಂಗ್ರೆಸ್ ಭವನದ ಎದುರು ಭಾನುವಾರ ಸಾಂಕೇತಿಕ ಪ್ರತಿಭಟನೆ ಮತ್ತು ಒಂದು ದಿನದ ಉಪವಾಸ ಸತ್ಯಾಗ್ರಹ ನಡೆಯಿತು. ಜಿಲ್ಲೆಯ ವಿವಿಧೆಡೆಯಿಂದ ಬಂದಿದ್ದ ಪಕ್ಷದ ಮುಖಂಡರು ಮತ್ತು ಕಾರ್ಯಕರ್ತರು ಹೋರಾಟದಲ್ಲಿ ಭಾಗಿಯಾಗಿ, ಕೇಂದ್ರದ ವಿರುದ್ಧ ತಮ್ಮ ಆಕ್ರೋಶ ಹೊರಹಾಕಿದರು.

ಪ್ರತಿಭಟನೆ ನೇತೃತ್ವ ವಹಿಸಿದ್ದ ಎಐಸಿಸಿ ಉಸ್ತುವಾರಿ ಕಾರ್ಯದರ್ಶಿ ಗೋಪಿನಾಥ ಪಳನಿಯಪ್ಪನ್, ಕಾಂಗ್ರೆಸ್ ಸಾಮರಸ್ಯ ಮತ್ತು ಶಾಂತಿಗಾಗಿ ಹೋರಾಡುತ್ತಿದ್ದರೆ, ಬಿಜೆಪಿ ದ್ವೇಷದ ರಾಜಕಾರಣ ಮಾಡುತ್ತಿದೆ. ಕಾಂಗ್ರೆಸ್ ನಾಯಕ ರಾಹುಲ್ ಗಾಂಧಿ ಮತಕಳವು ವಿಚಾರವಾಗಿ ಧ್ವನಿ ಎತ್ತಿದರು. ಇದು ಆಂದೋಲನ ಸ್ವರೂಪ ಪಡೆಯಿತು. ಆದರೆ, ಜನರು ಜಾಗೃತರಾಗಿ ತಮಗೆ ಕಪಾಳಮೋಕ್ಷ ಮಾಡಿದರೆ ಹೇಗೆ ಎಂದು ಹೆದರಿದ ಪ್ರಧಾನಿ ನರೇಂದ್ರ ಮೋದಿ ಅವರು, ನರೇಗಾ ಯೋಜನೆಯಿಂದ ಗಾಂಧೀಜಿ ಹೆಸರು ಅಳಿಸಿ ಹೊಸ ವಿವಾದ ಸೃಷ್ಟಿಸಿದರು ಎಂದು ಆರೋಪಿಸಿದರು. ಈ ಹಿಂದೆ ನಾಥುರಾಮ್ ಗೋಡ್ಸೆಯು ಗಾಂಧೀಜಿ ಕೊಂದಿದ್ದ. ಈಗ ನರೇಗಾ ಹೆಸರು ಬದಲಿಸುವ ಮೂಲಕ ಕೇಂದ್ರ ಸರ್ಕಾರ ಮತ್ತೊಮ್ಮೆ ಗಾಂಧೀಜಿ ಹತ್ಯೆ ಮಾಡಿದೆ. ಗಾಂಧಿ ಹೆಸರಿದ್ದಲ್ಲಿ ರಾಮ್‌ಜಿ ಹೆಸರು ಬಂದಿದ್ದಕ್ಕೆ ನಾವು ಆಕ್ಷೇಪ ವ್ಯಕ್ತಪಡಿಸಿಲ್ಲ.

ನಾವೂ ರಾಮನನ್ನು ನಂಬುತ್ತೇವೆ. ಆದರೆ, ಬಿಜೆಪಿಗರ ಕೈಯಲ್ಲಿ ರಾಮ ಸಿಕ್ಕರೆ ಏನೆಲ್ಲ ಆಗಬಹುದು ಎಂಬುದಕ್ಕೆ ದೊಡ್ಡ ಇತಿಹಾಸವೇ ಇದೆ' ಎಂದು ಲೇವಡಿ ಮಾಡಿದರು. ನರೇಗಾ ಬದಲಿಗೆ ಕೇಂದ್ರ ಜಾರಿಗೆ ತರುತ್ತಿರುವ ಹೊಸ ಕಾಯ್ದೆ ರದ್ದುಪಡಿಸುವವರೆಗೂ ಹೋರಾಟ ನಿಲ್ಲದು. ಈ ಹೋರಾಟವು ಇಡೀ ದೇಶದಲ್ಲಿ ಚಳುವಳಿ ರೂಪ ಪಡೆಯಬೇಕಿದೆ. ಹೊಸ ಕಾಯ್ದೆ ಮೂಲಕ ನರೇಗಾ ಯೋಜನೆ ಹೆಸರಷ್ಟೇ ಬದಲಾಗುತ್ತಿಲ್ಲ. ಬದಲಿಗೆ ಯೋಜನೆ ಆಶಯವೇ ಬುಡಮೇಲು ಮಾಡಲಾಗುತ್ತಿದೆ ಎಂದು ದೂರಿದರು.

ಶಾಸಕ ಆಸಿಫ್ ಸೇಠ್, ಯಾವುದೇ ಯೋಜನೆ ಹೆಸರು ಬದಲಿಗೆ ಜನರ ಒಪ್ಪಿಗೆ ಅಗತ್ಯ. ಆದರೆ, ಬಿಜೆಪಿಯವರು ಸಾರ್ವಜನಿಕರ ಅಭಿಪ್ರಾಯ ಕೇಳದೆ ನರೇಗಾ ಯೋಜನೆ ಹೆಸರು ಬದಲಿಸುತ್ತಿದ್ದಾರೆ ಎಂದು ಆರೋಪಿಸಿದರು. ಶಾಸಕ ಬಾಬಾಸಾಹೇಬ ಪಾಟೀಲ, ಗ್ರಾಮಗಳ ಅಭಿವೃದ್ಧಿಗಾಗಿ ನರೇಗಾ ಮುಂದುವರಿಯಬೇಕಿದೆ ಎಂದರು.

ಶಾಸಕ ವಿಶ್ವಾಸ ವೈದ್ಯ, ಹೊಸ ಕಾಯ್ದೆ ಹೆಸರಿನಲ್ಲಿ ನರೇಗಾ ಯೋಜನೆಗೆ ಕಡಿವಾಣ ಹಾಕುವುದನ್ನು ತಡೆಯೋಣ ಎಂದರು.

## ಸುಗಮ ಸಂಚಾರಕ್ಕೆ ಪ್ರಯತ್ನಿಸದ ಪೊಲೀಸರು

- ಉದಯವಾಹಿನಿ, ರಟ್ಟಿಹಳ್ಳಿ

ತಾಲ್ಲೂಕು ಕೇಂದ್ರವಾಗಿರುವ ಪಟ್ಟಣದ ಹಲವು ಕಡೆಗಳಲ್ಲಿ ನಿತ್ಯವೂ ವಾಹನಗಳ ದಟ್ಟಣೆ ಉಂಟಾಗುತ್ತಿದ್ದು, ಸಂಚಾರ ನಿಯಮಗಳ ಉಲ್ಲಂಘನೆಯಿಂದಾಗಿ ಪದೇ ಪದೇ ಅಪಘಾತಗಳು ಸಂಭವಿಸುತ್ತಿರುವುದಾಗಿ ಜನರು ದೂರುತ್ತಿದ್ದಾರೆ. ತಾಲ್ಲೂಕಿನ 63 ಗ್ರಾಮಗಳ ಸಾರ್ವಜನಿಕರು, ನಿತ್ಯವೂ ಒಂದಿಲ್ಲೊಂದು ಕೆಲಸಕ್ಕಾಗಿ ತಾಲ್ಲೂಕು ಕೇಂದ್ರಕ್ಕೆ ಬಂದು ಹೋಗುತ್ತಿದ್ದಾರೆ. ವಿಪರೀತ ದಟ್ಟಣೆಯಿಂದ ಸಣ್ಣ-ಪುಟ್ಟ ಅಪಘಾತಗಳು ಸಂಭವಿಸುತ್ತಿದ್ದರೂ ಪೊಲೀಸರು, ಸಂಬಂಧಪಟ್ಟ ಇಲಾಖೆ ಅಧಿಕಾರಿಗಳು ಕ್ರಮ ಜರುಗಿಸದಿರುವುದು ಜನತೆಯಲ್ಲಿ ಬೇಸರ ಮೂಡಿಸಿದೆ.

ಪಟ್ಟಣದ ಮಾರ್ಗವಾಗಿ ರಾಷ್ಟ್ರೀಯ ಹೆದ್ದಾರಿ ನಿರ್ಮಾಣವಾಗಿದೆ. ಪಟ್ಟಣದ ಪ್ರಮುಖ ವೃತ್ತವಾದ ಭಗತಸಿಂಗ್ ಸರ್ಕಲ್‌ಗೆ ಹೊಂದಿಕೊಂಡು ನೋಬಲ್ ಪಬ್ಲಿಕ್ ಶಾಲೆ, ನೊಬೆಲ್ ಪಿ.ಯು. ಕಾಲೇಜು, ಮೌಲಾನಾ ಆಜಾದ ಶಾಲೆ, ತರಳುಬಾಳು ಶಾಲೆ, ಲಯನ್ಸ್ ಶಾಲೆ, ಸರ್ಕಾರಿ ಪಿ.ಯು. ಕಾಲೇಜು ಇದೆ. ನಿತ್ಯ ಸಾವಿರಾರು ವಿದ್ಯಾರ್ಥಿಗಳು ಭಗತಸಿಂಗ್ ವೃತ್ತದಿಂದಲೇ ಮನೆಗೆ ತೆರಳುವುದು ಅನಿವಾರ್ಯವಾಗಿದೆ. ಇಲ್ಲಿ ನಿತ್ಯ ಬೆಳಿಗ್ಗೆ ಹಾಗೂ ಸಂಜೆ ಹೆಚ್ಚಿನ ವಾಹನ ದಟ್ಟಣೆ, ಜನ ದಟ್ಟಣೆ ಉಂಟಾಗುತ್ತಿದೆ. ವಿದ್ಯಾರ್ಥಿಗಳು ಭಯದಲ್ಲಿ ಸಂಚರಿಸುತ್ತಿದ್ದಾರೆ. ರಸ್ತೆಗಳಲ್ಲಿ ಪ್ರತಿದಿನ ಒಂದಿಲ್ಲೊಂದು ಅಪಘಾತ ಸಂಭವಿಸಿದರೂ ಸಮಸ್ಯೆ ಕೇಳುವವರಿಲ್ಲದಂತಾಗಿದೆ. ದಟ್ಟಣೆ ಉಂಟಾದರೂ ಅದನ್ನು ನಿಯಂತ್ರಿಸಲು ಪೊಲೀಸರು ಸ್ಥಳದಲ್ಲಿ ಇರುವುದಿಲ್ಲವೆಂಬ ಆರೋಪವಿದೆ. ರಾಷ್ಟ್ರೀಯ ಹೆದ್ದಾರಿಯಲ್ಲಿ ಯಾವುದೇ ವೇಗ ನಿಯಂತ್ರಕಗಳ ಸೂಚನಾ ಫಲಕಗಳನ್ನು ಅಳವಡಿಸಿಲ್ಲ. ವೇಗಮಿತಿಗೂ ಕ್ರಮ ಕೈಗೊಂಡಿಲ್ಲ. ಇದು ಸ್ಥಳೀಯರಲ್ಲಿ ಆತಂಕವನ್ನುಂಟು ಮಾಡಿದೆ.

ರಸ್ತೆಯಲ್ಲಿ ಉಂಟಾಗುತ್ತಿರುವ ದಟ್ಟಣೆ ನಿಯಂತ್ರಿಸಿ ಎಂದರೆ, ಅಧಿಕಾರಿಗಳು ಪರಸ್ಪರ ಆರೋಪ-ಪ್ರತ್ಯಾರೋಪ ಮಾಡುತ್ತಿದ್ದಾರೆ. ರಾತ್ರಿ ಸಂದರ್ಭದಲ್ಲಿ ವಿದ್ಯುತ್ ದೀಪಗಳು ಹತ್ತುತ್ತಿಲ್ಲ. ಕತ್ತಲೆಯಲ್ಲಿ ಜನರು ಸಂಚರಿಸುತ್ತಿದ್ದಾರೆ ಹೆದ್ದಾರಿಗೆ ಹೊಂದಿಕೊಂಡಿರುವ ಪಾದಚಾರಿ ಮಾರ್ಗಗಳನ್ನು ಗೂಡಂಗಡಿಗಳು ಅತಿಕ್ರಮಿಸಿಕೊಂಡಿವೆ. ಪಾದಚಾರಿಗಳು ಅನಿವಾರ್ಯವಾಗಿ ರಸ್ತೆಯಲ್ಲಿ ನಡೆದುಕೊಂಡು ಹೋಗುತ್ತಿದ್ದು, ಇದೇ ಸಂದರ್ಭದಲ್ಲಿ ವಾಹನಗಳ ಡಿಕ್ಕಿ ಹೊಡೆಯುವ ಘಟನೆಗಳೂ ನಡೆಯುತ್ತಿವೆ. ರಸ್ತೆ ಸುರಕ್ಷತೆಗೆ ಯಾವುದೇ ಕ್ರಮಗಳನ್ನು ಕೈಗೊಂಡಿಲ್ಲ. ಇದರಿಂದ ನಿತ್ಯ ಅಪಘಾತಗಳು ಸಂಭವಿಸುತ್ತಿವೆ.

ಹಲವು ಬಾರಿ ಮನವಿ ನೀಡಿದರೂ ಅಧಿಕಾರಿಗಳು ಕಣ್ಮುಚ್ಚಿ ಕುಳಿತ್ತಿದ್ದಾರೆ. ಅಧಿಕಾರಿಗಳು ಜನರ ಪ್ರಾಣದ ಜೊತೆಗೆ ಚೆಲ್ಲಾಟವಾಡುತ್ತಿದ್ದಾರೆ ಎಂದು ಸ್ಥಳಿಯರಾದ ದೇವರಾಜ ಕಡೂರ, ನಿಕ್ಷೇಪ ಮೇದೂರ ಆರೋಪಿಸಿದರು.


ಉದಯವಾಹಿನಿ ಚಿತ್ರ

## ಮನುಷ್ಯನ ಸರ್ವಾಂಗೀಣ ಅಭಿವೃದ್ಧಿಗೆ ಶಿಕ್ಷಣ ಅಗತ್ಯ

- ಉದಯವಾಹಿನಿ, ರಾಮದುರ್ಗ

ಸರ್ಕಾರ ಶೈಕ್ಷಣಿಕ ಕ್ಷೇತ್ರದ ಅಭಿವೃದ್ಧಿಗೆ ನೀಡುವ ಅನುದಾನದ ಪ್ರಯೋಜನ ಪಡೆದು ಗುಣಮಟ್ಟದ ಶಿಕ್ಷಣ ಪಡೆದು ಉತ್ತಮ ನಾಗರಿಕರಾಗಲು ಗ್ರಾಮೀಣ ಮಕ್ಕಳು ಮುಂದಾಗಬೇಕು ಎಂದು ವಿಧಾನ ಸಭೆಯ ಮುಖ್ಯ ಸಚೇತಕ ಅಶೋಕ ಪಟ್ಟಣ ಹೇಳಿದರು.

ತಾಲ್ಲೂಕಿನ ಜಾಲಿಕಟ್ಟಿ ಗ್ರಾಮದಲ್ಲಿ ನಬಾರ್ಡ ಆರ್ ಐಡಿಎಫ್ ಯೋಜನೆಯಡಿ ನಿರ್ಮಾಣಗೊಂಡ ನೂತನ ಶಾಲಾ ಕೊಠಡಿ ಉದ್ಘಾಟಿಸಿ ಮಾತನಾಡಿ, ಉತ್ತಮ ಪ್ರಜೆಗಳ ನಿರ್ಮಾಣ, ಮನುಷ್ಯನ ಸರ್ವಾಂಗೀಣ ಅಭಿವೃದ್ಧಿಗೆ ಶಿಕ್ಷಣ ಅಗತ್ಯ ಎಂದು ತಿಳಿಸಿದರು. ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಬಸವರಾಜ ಐನಾಪೂರ ಮಾತನಾಡಿದರು. ಗ್ರಾಮ ಪಂಚಾಯಿತಿ ಅಧ್ಯಕ್ಷೆ ಪದ್ಮವ್ವ ಬಡಕಲಿ ಅಧ್ಯಕ್ಷತೆ ವಹಿಸಿದ್ದರು. ಕ್ಷೇತ್ರ ಶಿಕ್ಷಣಾಧಿಕಾರಿ ಎಸ್. ಆರ್. ಕಾಂಬಳೆ ಪ್ರಾಸ್ತಾವಿಕವಾಗಿ ಮಾತನಾಡಿದರು.

## ಜಾನುವಾರು ಖರೀದಿಗೆ ರೈತರ ಹಿಂದೇಟು

- ಉದಯವಾಹಿನಿ, ಬಾದಾಮಿ

ಬನಶಂಕರಿದೇವಿ ಜಾತ್ರೆ ಅಂಗವಾಗಿ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ ಆಶ್ರಯದಲ್ಲಿ ಎಪಿಎಂಸಿ ಆವರಣದಲ್ಲಿ ನಡೆಯುತ್ತಿರುವ ಜಾನುವಾರು ಜಾತ್ರೆಯಲ್ಲಿ ಜಾನುವಾರ ಖರೀದಿಗೆ ರೈತರು ಹಿಂದೇಟು ಹಾಕುತ್ತಿದ್ದಾರೆ. ಪಶು ಸಂಗೋಪನೆ ಇಲಾಖೆಯ ಮಳಿಗೆಗಳು ಮತ್ತು ಎತ್ತುಗಳ ಅಲಂಕಾರಕ್ಕಾಗಿ ಅಂಗಡಿಗಳಲ್ಲಿ ರೈತರು ವ್ಯಾಪಾರ ವಹಿವಾಟು ನಡೆಸಿದರು. ಜಾತ್ರೆಯಲ್ಲಿ ಅಮೀನಗಡದ ಚಕ್ಕಡಿ ಮಾರಾಟ ಜೋರಾಗಿತ್ತು ಒಂದು ಚಕ್ಕಡಿಗೆ 25 ಸಾವಿರದಿಂದ 30 ಸಾವಿರದವರೆಗೆ ಮಾರಾಟವಾಗುತ್ತವೆ ಎಂದು ಮಲ್ಲಪ್ಪ ಬಡಿಗೇರ ಹೇಳಿದರು. ಈ ಸಲ ದನದ ಜ್ಯಾತ್ಯಾಗ ಕಡಿಮಿ ದನ ಬಂದಾವು. ಥಂಡಿ ಭಾಳ ಐತ್ರಿ, ಹಿಂಗಾಗಿ ರೈತರು ಎತ್ತು ಹೊಡಕೊಂಡು ಬಂದಿಲ್ಲ ಎಂದು ಯರಗೊಪ್ಪ ಎಸ್.ಬಿ. ಗ್ರಾಮದ ರೈತ ಶರಣಪ್ಪ ಹೇಳಿದರು. ಜಾತ್ರಿಗೆ ಬಂದು ಎರಡು ಮೂರು ದಿನ ಆತು ವ್ಯಾಪಾರ ಇಲ್ಲ. ರೈತರ ಕೈಯ್ಯಾಗ ರೊಕ್ಕ ಇಲ್ಲ. ಎಲ್ಲಾರು ಟ್ರಾಕ್ಟರ್ ಮಾಡ್ಯಾರ ಎತ್ತು ತೊಗೊಳ್ಳುವವರು ಕಡಿಮೆ ಆಗ್ಯಾರ ಎಂದು ಬೂದಿಹಾಳ ಗ್ರಾಮದ ಚನ್ನಬಸಪ್ಪ ಪ್ರತಿಕ್ರಿಯಿಸಿದರು. ಜಾತ್ರೆಯಲ್ಲಿ ಅಥಣಿ ತಾಲ್ಲೂಕಿನ ರೈತ ತಾನಾಜಿ ತೆಗೆದುಕೊಂಡು ಬಂದಿರುವ ಹೋರಿಗಳು ಆಕರ್ಷಕವಾಗಿದ್ದವು. ನಾಲ್ಕು ಹಲ್ಲಿನ ಹೋರಿಗಳನ್ನು ರೈತರು ವೀಕ್ಷಿಸಿದರು.

## ಲಕ್ಕುಂಡಿಯಲ್ಲಿ ಚಿನ್ನದ ನಿಧಿ ಪತ್ತೆ

- ಉದಯವಾಹಿನಿ, ಗದಗ

ತಾಲ್ಲೂಕಿನ ಐತಿಹಾಸಿಕ ಲಕ್ಕುಂಡಿ ಗ್ರಾಮದಲ್ಲಿ ಗಂಗವ್ವ ಬಸವರಾಜ ರಿತ್ತಿ ಎಂಬುವರು ಮನೆ ಕಟ್ಟಿಸಲು ಅಡಿಪಾಯ ತೆಗೆಯುವ ವೇಳೆ ಚಿನ್ನದ ನಿಧಿ ಸಿಕ್ಕಿದೆ. ತಾಮ್ರದ ಪುಟ್ಟ ಬಿಂದಿಗೆಯಲ್ಲಿ ಅರ್ಧ ಕೆ.ಜಿ.ಗೂ ಹೆಚ್ಚಿನ ತೂಕದ ಚಿನ್ನಾಭರಣ ಸಿಕ್ಕಿದೆ ಎಂದು ಲಕ್ಕುಂಡಿ ಪಾರಂಪರಿಕ ಪ್ರದೇಶ ಅಭಿವೃದ್ಧಿ ಪ್ರಾಧಿಕಾರದ ಆಯುಕ್ತ ಶರಣು ಗೋಗೇರಿ ತಿಳಿಸಿದ್ದಾರೆ. ಸರ, ಉಂಗುರ, ಕಡಗ ಸೇರಿದಂತೆ ಪ್ರಾಚೀನ ವಿನ್ಯಾಸ ಹೊಂದಿರುವ ಆಭರಣಗಳಿವೆ. ತಜ್ಞರು ಅಧ್ಯಯನ ನಡೆಸಿದ ನಂತರ ಚಿನ್ನಾಭರಣ ಯಾರ ಕಾಲದ್ದು ಎಂಬುದು ಗೊತ್ತಾಗಲಿದೆ ಎಂದು ತಿಳಿಸಿದ್ದಾರೆ.

### ಚಿತ್ರದುರ್ಗ ತಾಲ್ಲೂಕಿನ ವಿವಿಧ ಗ್ರಾಮಪಂಚಾಯಿತಿಗಳಿಗೆ ಜಿ.ಪಂ ಸಿಇಒ ಡಾ.ಆಕಾಶ್ ಭೇಟಿ, ಪರಿಶೀಲನೆ

## ಜಲಜೀವನ್ ಮಿಷನ್: ತ್ವರಿತವಾಗಿ ಕಾಮಗಾರಿ ಪೂರ್ಣಗೊಳಿಸಿ

- ಉದಯವಾಹಿನಿ, ಚಿತ್ರದುರ್ಗ

ಜಲಜೀವನ್ ಮಿಷನ್, ಕಾಮಗಾರಿಗಳನ್ನು ತ್ವರಿತವಾಗಿ ಪೂರ್ಣಗೊಳಿಸಬೇಕು ಎಂದು ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಡಾ.ಎಸ್. ಆಕಾಶ್ ಅಧಿಕಾರಿಗಳಿಗೆ ಸೂಚನೆ ನೀಡಿದರು. ಚಿತ್ರದುರ್ಗ ತಾಲ್ಲೂಕಿನ ವಿವಿಧ ಗ್ರಾಮ ಪಂಚಾಯಿತಿಗಳಿಗೆ ಭೇಟಿ ನೀಡಿ, ಜಲಜೀವನ್ ಮಿಷನ್ ಯೋಜನೆಯಡಿ ಗೃಹ ಕಾರ್ಯಾತ್ಮಕ ನಳ ಸಂಪರ್ಕ ಕಾಮಗಾರಿಗಳನ್ನು ಪರಿಶೀಲನೆ ನಡೆಸಿದರು.

### ನಿರ್ವಹಣೆ ಕುರಿತು ಮಾಹಿತಿ ಪಡೆದರು

**ಸಿದ್ದಾಪುರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಮಾನಂಗಿ ಗ್ರಾಮದಲ್ಲಿ ಪ್ರಾಥಮಿಕ ಆರೋಗ್ಯ ಉಪಕೇಂದ್ರಕ್ಕೆ ಭೇಟಿ ನೀಡಿ, ದಾಸ್ತಾನು ಕೊಠಡಿ, ದಾಖಲಾತಿಗಳನ್ನು ಪರಿಶೀಲಿಸಿದರು. ಸಿದ್ದಾಪುರ ಗ್ರಾಮಕ್ಕೆ ಭೇಟಿ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ಭೇಟಿ ನೀಡಿ, ವಿದ್ಯಾರ್ಥಿಗಳ ಹಾಜರಾತಿ ಹಾಗೂ ಅಡುಗೆ ಕೋಣೆಯ ಆಹಾರ ಪದಾರ್ಥಗಳು, ಶಾಲೆಯ ಸುತ್ತ-ಮುತ್ತ ಸ್ವಚ್ಛತೆ ಹಾಗೂ ಶೌಚಾಲಯ ನಿರ್ವಹಣೆ ಕುರಿತು ಮಾಹಿತಿ ಪಡೆದರು. ನಂತರ ಸಿದ್ದಾಪುರ ಗ್ರಾಮ ಪಂಚಾಯಿತಿಗೆ ಭೇಟಿ ನೀಡಿ, ಅಭಿವೃದ್ಧಿ ಕಾರ್ಯಕ್ರಮಗಳು, ಯೋಜನೆಗಳ ಪ್ರಗತಿ ಬಗ್ಗೆ ಮಾಹಿತಿ ಪಡೆದರು.**


ಉದಯವಾಹಿನಿ ಚಿತ್ರ



ಜಲಜೀವನ್ ಮಿಷನ್ ಯೋಜನೆ ಕಾಮಗಾರಿಯನ್ನು ತ್ವರಿತವಾಗಿ ಪೂರ್ಣಗೊಳಿಸಿ, ಜೆಜೆಎಂ ಪೈಪ್‌ಲೈನ್ ಮೂಲಕವೇ ಪ್ರತಿ ಮನೆ ಮನೆಗೂ ನಳ ಸಂಪರ್ಕದ ಮೂಲಕ ಕುಡಿಯುವ ನೀರು ಸರಬರಾಜು ಮಾಡಿ ಜಲಜೀವನ್ ಮಿಷನ್ ಯೋಜನೆಯನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸಬೇಕು ಎಂದು ತಾಕೀತು ಮಾಡಿದರು.

**ಬೂದು ನೀರು ನಿರ್ವಹಣಾ ಕಾಮಗಾರಿ ಪರಿಶೀಲನೆ:** ಸ್ವಚ್ಛ ಭಾರತ್ ಮಿಷನ್ (ಗ್ರಾಮೀಣ) ಯೋಜನೆಯಡಿ ಬೂದು ನೀರು ನಿರ್ವಹಣಾ ಕಾಮಗಾರಿಗಳನ್ನು ಪರಿಶೀಲಿಸಿದ ಜಿ.ಪಂ ಸಿಇಒ ಅವರು, ಬೂದು ನೀರು ನಿರ್ವಹಣಾ ಘಟಕದಲ್ಲಿ ಸಂಗ್ರಹಿಸುವ ತ್ಯಾಜ್ಯವನ್ನು ಪ್ರತಿ ತಿಂಗಳು ಸ್ವಚ್ಛಗೊಳಿಸಬೇಕು ಎಂದು ತಾಕೀತು ಮಾಡಿದರು. ಜೆ.ಎನ್.ಕೋಟೆ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಜೆ.ಎನ್.ಕೋಟೆ ಗ್ರಾಮದ ಅಂಗನವಾಡಿ ಕೇಂದ್ರಕ್ಕೆ ಭೇಟಿ ನೀಡಿ, ಮಕ್ಕಳ ಪೌಷ್ಠಿಕ ಆಹಾರ, ಹಾಜರಾತಿ ಪರಿಶೀಲಿಸಿದರು.

### ಸಜ್ಜನಕೆರೆ ಗ್ರಾಮಕ್ಕೆ ಭೇಟಿ

ನಂತರ ಸಜ್ಜನಕೆರೆ ಗ್ರಾಮಕ್ಕೆ ಭೇಟಿ ನೀಡಿ, ಬೂದುನೀರು ನಿರ್ವಹಣೆಗಾಗಿ ಚರಂಡಿಯಲ್ಲಿ ಸಂಸ್ಕರಿಸುವ ವಿಧಾನ ನಿರ್ಮಾಣದ ಕಾಮಗಾರಿಗಳನ್ನು ಪರಿಶೀಲಿಸಿದರು. ಇಂಗಳದಾಳ್, ಗೋನೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಕುಂಚಿಗನಾಳ್, ಮಲ್ಲಾಪುರ ಗ್ರಾಮದಲ್ಲಿ ಬೂದುನೀರು ನಿರ್ವಹಣೆಗಾಗಿ ಚರಂಡಿಯಲ್ಲಿ ಸಂಸ್ಕರಿಸುವ ವಿಧಾನ ನಿರ್ಮಾಣದ ಕಾಮಗಾರಿಗಳನ್ನು ಪರಿಶೀಲಿಸಿದರು. ಈ ಸಂದರ್ಭದಲ್ಲಿ ಗ್ರಾಮೀಣ ಕುಡಿಯುವ ನೀರು ಕಾರ್ಯಪಾಲಕ ಅಭಿಯಂತರರಾದ ಅಮರನಾಥ್ ಜೈನ್, ಸಹಾಯಕ ಕಾರ್ಯಪಾಲಕ ಅಭಿಯಂತರರಾದ ಶಿವಮೂರ್ತಿ, ಚಿತ್ರದುರ್ಗ ತಾ.ಪಂ ಇಒ ವೈ.ರವಿಕುಮಾರ್, ಜಿಲ್ಲಾ ಐಇಸಿ ಸಮಾಲೋಚಕರಾದ ಬಿ.ಸಿ.ನಾಗರಾಜ್, ಗ್ರಾಮ ಪಂಚಾಯಿತಿ ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು, ಗ್ರಾಮ ಪಂಚಾಯಿತಿ ಸಿಬ್ಬಂದಿ, ಸಾರ್ವಜನಿಕರು ಇದ್ದರು.

### ನೈರ್ಮಲೀಕರಣಕ್ಕೆ ಹೆಚ್ಚಿನ ಒತ್ತು ನೀಡಬೇಕು

**15ನೇ ಹಣಕಾಸು ಯೋಜನೆ, ಗ್ರಾಮ ಪಂಚಾಯಿತಿ ಇತರೆ ಅನುದಾನದಿಂದ ಗ್ರಾಮಪಂಚಾಯಿತಿ ವ್ಯಾಪ್ತಿಯಲ್ಲಿ ಸ್ವಚ್ಛತೆ, ನೈರ್ಮಲೀಕರಣಕ್ಕೆ ಹೆಚ್ಚಿನ ಒತ್ತು ನೀಡಬೇಕು. ಚಿತ್ರದುರ್ಗ ತಾಲ್ಲೂಕಿನ ದೊಡ್ಡಸಿದ್ದವ್ವನಹಳ್ಳಿ, ಜೆ.ಎನ್.ಕೋಟೆ, ಗೋನೂರು, ಸಿದ್ದಾಪುರ ಗ್ರಾಮ ಪಂಚಾಯಿತಿಗಳಿಗೆ, ಪಂಚಾಯಿತಿ ವ್ಯಾಪ್ತಿಯ ವಿವಿಧ ಗ್ರಾಮಗಳಿಗೆ ಭೇಟಿ ನೀಡಿ, ಶಾಲೆ, ಅಂಗನವಾಡಿ, ಪ್ರಾಥಮಿಕ ಆರೋಗ್ಯ ಕೇಂದ್ರಗಳ ಪರಿಶೀಲನೆ ಹಾಗೂ ಬೂದು ನೀರು ನಿರ್ವಹಣೆ ಕಾಮಗಾರಿಗಳ ವೀಕ್ಷಣೆ ಮಾಡಿದರು. ದೊಡ್ಡಸಿದ್ದವ್ವನಹಳ್ಳಿ ಗ್ರಾಮ ಪಂಚಾಯಿತಿ ಭೇಟಿ ವೇಳೆ ಗ್ರಾಮ ಪಂಚಾಯಿತಿ ಸುತ್ತ-ಮುತ್ತ ಸ್ವಚ್ಛತೆ, ಶೌಚಾಲಯ ನಿರ್ವಹಣೆ ಮಾಡಲು ಸೂಚಿಸಿದರು.**

# ಸಿರಿಯಾದಲ್ಲಿ ಇಸ್ಲಾಮಿಕ್ ಸ್ಟೇಟ್‌ನ 35 ನೆಲೆಗಳ ಮೇಲೆ ಅಮೆರಿಕ ವೈಮಾನಿಕ ದಾಳಿ



**ಫ್ಲಾರಿಡಾ:** ಸಿರಿಯಾದಲ್ಲಿರುವ ಇಸ್ಲಾಮಿಕ್ ಸ್ಟೇಟ್ ವಿರುದ್ಧ ಅಮೆರಿಕ ಮಿಲಿಟರಿ ಕಾರ್ಯಾಚರಣೆ ಪ್ರಾರಂಭಿಸಿದೆ. ಅಮೆರಿಕದ ಸೆಂಟ್ರಲ್ ಕಮಾಂಡ್ ಪಡೆಗಳು 'ಆಪರೇಷನ್ ಹಾಕ್ಐ' ಕಾರ್ಯಾಚರಣೆಯ ಭಾಗವಾಗಿ 35ಕ್ಕೂ ಹೆಚ್ಚು ಭಯೋತ್ಪಾದಕ ನೆಲೆಗಳ ಮೇಲೆ ದೊಡ್ಡ ಪ್ರಮಾಣದ ವೈಮಾನಿಕ ದಾಳಿ ನಡೆಸಿವೆ. ಅಮೆರಿಕ ಕಾಲಮಾನದ ಪ್ರಕಾರ ಸುಮಾರು ಮಧ್ಯಾಹ್ನ 12:30ಕ್ಕೆ ದಾಳಿಗಳು ನಡೆದಿವೆ. ಈ ದಾಳಿಗಳು ಸಿರಿಯಾದ ವಿವಿಧ ಪ್ರದೇಶಗಳಲ್ಲಿನ ಇಸ್ಲಾಮಿಕ್ ಸ್ಟೇಟ್ ನೆಲೆಗಳನ್ನು ಗುರಿಯಾಗಿಸಿಕೊಂಡಿವೆ. 90ಕ್ಕೂ ಹೆಚ್ಚು ಆಯುಧಗಳನ್ನು ಬಳಸಿ ಉಗ್ರರ ನೆಲೆಗಳನ್ನು ಧ್ವಂಸ ಮಾಡಲಾಗಿದೆ' ಎಂದು ಅಮೆರಿಕದ ಸೆಂಟ್ರಲ್ ಕಮಾಂಡ್ ತಿಳಿಸಿದೆ.

'ನಮ್ಮದು ಭಯೋತ್ಪಾದನೆಯ ವಿರುದ್ಧದ ದಾಳಿಯಾಗಿದೆ. ಅಮೆರಿಕ ಭಯೋತ್ಪಾದನೆ ವಿರುದ್ಧ ಹೋರಾಡಲು ಬದ್ಧವಾಗಿದೆ. ಭಯೋತ್ಪಾದನೆ ವಿರುದ್ಧ ನಿರಂತರವಾಗಿ ಹೋರಾಟ ಮಾಡುತ್ತಲೇ ಇರುತ್ತದೆ. ಸೇನಾ ಪಡೆಗಳು ಮತ್ತು ಮಿತ್ರ ಪಡೆಗಳ ಮೇಲಿನ ಭಯೋತ್ಪಾದಕ ದಾಳಿಗಳನ್ನು ತಡೆಗಟ್ಟುವುದು ನಮ್ಮ ಉದ್ದೇಶ. ಭವಿಷ್ಯದ ಬೆದರಿಕೆಗಳನ್ನು ಮೆಟ್ಟಿ ನಿಲ್ಲುವುದು, ಈ ಪ್ರದೇಶದಲ್ಲಿ ಭದ್ರತೆಯನ್ನು ಖಚಿತಪಡಿಸುವುದೇ ಇವತ್ತಿನ ದಾಳಿಯ ಗುರಿ ಆಗಿತ್ತು. ನಮ್ಮ ಪಡೆಗಳಿಗೆ ಹಾನಿ ಮಾಡಲು ಪ್ರಯತ್ನಿಸುವ ಯಾರೇ ಆದರೂ, ಎಲ್ಲಿಯೇ ಇದ್ದರೂ ಹೊಸಕಿ ಹಾಕುತ್ತೇವೆ' ಎಂದು ಸೆಂಟ್ರಲ್ ಕಮಾಂಡ್ ಎಚ್ಚರಿಕೆ ನೀಡಿದೆ.

2025ರ ಡಿಸೆಂಬರ್ 13ರಂದು ಸಿರಿಯಾದ ಪಾಲ್ಮೀರಾದಲ್ಲಿ ಐಸಿಸ್ ಉಗ್ರರು ನಡೆಸಿದ ದಾಳಿಯಲ್ಲಿ ಅಮೆರಿಕದ ಇಬ್ಬರು ಸೇನಾ ಸಿಬ್ಬಂದಿ ಮತ್ತು ನಾಗರಿಕರೊಬ್ಬರು ಮೃತಪಟ್ಟಿದ್ದರು. ಇದಕ್ಕೆ ಪ್ರತೀಕಾರ ತೀರಿಸಿಕೊಳ್ಳುವುದಾಗಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಪ್ರತಿಜ್ಞೆ ಮಾಡಿದ್ದರು. ಅದರಂತೆಯೇ ಡಿಸೆಂಬರ್ 19ರಂದು 'ಆಪರೇಷನ್ ಹಾಕ್ಐ' ಕಾರ್ಯಾಚರಣೆ ಪ್ರಾರಂಭಿಸಲಾಗಿತ್ತು.

### ಹತೋಟಿ ತಪ್ಪಿದ ಇರಾನ್, ಅಮೆರಿಕದ ಹಸ್ತಕ್ಷೇಪ ಸಾಧ್ಯತೆ ತಿಳಿದು ಆ್ಯಕ್ಟೀವ್ ಆದ ಇಸ್ರೇಲ್

# ಇರಾನ್‌ನಲ್ಲಿ ಖಮೇನಿ ಆಡಳಿತದ ವಿರುದ್ಧ ಪ್ರತಿಭಟನೆ

**ಟೆಹ್ರಾನ್:** ಇರಾನ್‌ನಲ್ಲಿ ಭುಗಿಲೆದ್ದಿರುವ ಖಮೇನಿ ಆಡಳಿತ ವಿರೋಧಿ ಪ್ರತಿಭಟನೆ, ಮಧ್ಯಪ್ರಾಚ್ಯ ಜಾಗತಿಕ ಸಂಘರ್ಷದ ಕೇಂದ್ರಬಿಂದು ಎಂಬುದನ್ನು ಮತ್ತೊಮ್ಮೆ ಸಾಬೀತುಪಡಿಸಿದೆ. ಇರಾನ್‌ನ ಆಂತರಿಕ ಪ್ರಕ್ಷುಬ್ಧ ಪರಿಸ್ಥಿತಿಗೆ ಅಮೆರಿಕ ಪ್ರತಿಕ್ರಿಯೆ ನೀಡುವ ನಿರ್ಧಾರ ಮಾಡಿದ್ದು, ಮಧ್ಯಪ್ರಾಚ್ಯದ ಪ್ರಮುಖ ದೇಶವೊಂದರ ಆಂತರಿಕ ಬಿಕ್ಕಟ್ಟಿನಲ್ಲಿ ಹಸ್ತಕ್ಷೇಪ ಮಾಡುವ ಸಾಧ್ಯತೆ ದಟ್ಟವಾಗಿದೆ.

**ಆಂತರಿಕ ಬಿಕ್ಕಟ್ಟಿನಲ್ಲಿ ಹಸ್ತಕ್ಷೇಪ**


ಇನ್ನು ಇರಾನ್‌ನಲ್ಲಿ ಅಮೆರಿಕದ ಹಸ್ತಕ್ಷೇಪ ಸಾಧ್ಯತೆಯ ಬಗ್ಗೆ ತಿಳಿಯುತ್ತಿದ್ದಂತೇ, ಇರಾನ್‌ನ ಪರಮಶತ್ರು ರಾಷ್ಟ್ರ ಇಸ್ರೇಲ್ ಹೈಪರ್ ಆ್ಯಕ್ಟೀವ್ ಆಗಿದೆ. ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಇರಾನ್ ಬಿಕ್ಕಟ್ಟಿನಲ್ಲಿ ಮಧ್ಯಪ್ರವೇಶ ಮಾಡುವ ಬಗ್ಗೆ ಪದೇ ಪದೇ ಹೇಳಿಕೆಗಳನ್ನು ನೀಡುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು ಹೆಚ್ಚು ಕ್ರಿಯಾಶೀಲರಾಗಿದ್ದು, ಮಧ್ಯಪ್ರಾಚ್ಯದಲ್ಲಿ ಸಂಭಾವ್ಯ ಪಾತ್ರ ನಿರ್ವಹಣೆಗೆ ಸಜ್ಜಾಗುತ್ತಿದ್ದಾರೆ.

ಡೊನಾಲ್ಡ್ ಟ್ರಂಪ್ ಅವರು ಇರಾನ್ ಪ್ರತಿಭಟನಾಕಾರರ ಪರ ಧ್ವನಿ ಎತ್ತಿದ್ದು, ಒಂದು ವೇಳೆ ಖಮೇನಿ ಆಡಳಿತವು ಪ್ರತಿಭಟನಾಕಾರರ ವಿರುದ್ಧ ಬಲಪ್ರಯೋಗ ಮಾಡಿದ್ದೇ ಆದಲ್ಲಿ ಕೂಡಲೇ ಮಧ್ಯಪ್ರವೇಶ ಮಾಡುವುದಾಗಿ ಇರಾನ್ ಆಡಳಿತಕ್ಕೆ ಎಚ್ಚರಿಕೆ ನೀಡಿದ್ದಾರೆ. ಪ್ರತಿಭಟನಾಕಾರರಿಗೆ ಅಮೆರಿಕ ಸಹಾಯ ಮಾಡಲು ಸಿದ್ಧ ಎಂಬ ಟ್ರಂಪ್ ಹೇಳಿಕೆ, ಜಾಗತಿಕ ಮಟ್ಟದಲ್ಲಿ ಗಮನ ಸೆಳೆದಿದೆ. ಇರಾನ್‌ನಲ್ಲಿ ಅಮೆರಿಕದ ಮಧ್ಯಪ್ರವೇಶದ ಎಚ್ಚರಿಕೆ ನೀಡಿರುವ ಡೊನಾಲ್ಡ್ ಟ್ರಂಪ್, ಇರಾನ್ ಸ್ವಾತಂತ್ರ್ಯ ಬಯಸಿದ್ದು ಅದನ್ನು ಗಳಿಸಲು ಅಮೆರಿಕ ಸಾಧ್ಯವಾದ ಎಲ್ಲಾ ನೆರವನ್ನು ನೀಡಲು ಸಿದ್ಧವಾಗಿದೆ ಎಂದು ತಮ್ಮ ಅಧಿಕೃತ ಟ್ರೂತ್ ಸೋಶಿಯಲ್‌ನಲ್ಲಿ ಪೋಸ್ಟ್ ಮಾಡಿದ್ದಾರೆ. ಟ್ರಂಪ್‌ಅವರ ಈ ಹೇಳಿಕೆಯಿಂದ ಇಸ್ರೇಲ್ ಕೂಡಲೇ ಕಾರ್ಯ ಪ್ರವೃತ್ತವಾಗಿದೆ. ಈ ವಾರಾಂತ್ಯದಲ್ಲಿ ಇಸ್ರೇಲ್ ಸರಣಿ ಭದ್ರತಾ ಸಭೆಗಳನ್ನು ನಡೆಸಿದ್ದು, ಇರಾನ್ ಆಂತರಿಕ ಸಂಘರ್ಷದ ಮೇಲೆ ನಿರಂತರವಾಗಿ ನಿಗಾ ಇಡುವ ನಿರ್ಧಾರ ಕೈಗೊಳ್ಳಲಾಗಿದೆ. ಅಲ್ಲದೇ ಅಮೆರಿಕ ಹಸ್ತಕ್ಷೇಪ ಸಾಧ್ಯತೆಯ ಬಗ್ಗೆಯೂ ಇಸ್ರೇಲ್ ಅವಲೋಕನ ನಡೆಸಿದ್ದು, ಅಂತಹ ಪರಿಸ್ಥಿತಿ ಉದ್ಭವವಾದರೆ ಯಾವ ರೀತಿಯ ಪಾತ್ರ ನಿರ್ವಹಿಸಬೇಕು ಎಂಬುದರ ಬಗ್ಗೆ ಚರ್ಚೆ ನಡೆಸಿದೆ ಎಂದು ಮೂಲಗಳು ಖಚಿತಪಡಿಸಿವೆ. ಈ ಬೆಳವಣಿಗೆ ಮಧ್ಯಪ್ರಾಚ್ಯದಲ್ಲಿ ಹೊಸ ತ್ರಿಕೋನ ಸ್ಪರ್ಧೆಯ ಆತಂಕವನ್ನು ಹುಟ್ಟುಹಾಕಿದೆ. ಇಸ್ರೇಲ್ ಮತ್ತು ಇರಾನ್ 2025ರ ಜೂನ್‌ನಲ್ಲಿ 12 ದಿನಗಳ ಯುದ್ಧದಲ್ಲಿ ಭಾಗವಹಿಸಿದ್ದವು. ಅಮೆರಿಕ ಈ ಯುದ್ಧದಲ್ಲಿ ಇಸ್ರೇಲ್ ಪರವಾಗಿ ಯುದ್ಧರಂಗಕ್ಕೆ ಇಳಿದಿತ್ತು. ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಇಸ್ರೇಲ್-ಇರಾನ್ ಕದನ ವಿರಾಮ ಘೋಷಣೆ ಮಾಡಿದ್ದರು.



**ದೂರವಾಣಿ ಸಂಭಾಷಣೆಯನ್ನು ಖಚಿತ**

**ಇಸ್ರೇಲ್ ಪ್ರಧಾನಿ ಬೆಂಜಮಿನ್ ನೆತನ್ಯಾಹು, ಅಮೆರಿಕದ ವಿದೇಶಾಂಗ ಕಾರ್ಯದರ್ಶಿ ಮಾರ್ಕೊರುಬಿಯೊ ಅವರು ದೂರವಾಣಿಯಲ್ಲಿ ಮಾತನಾಡಿದ್ದು, ಇರಾನ್‌ನಲ್ಲಿ ಅಮೆರಿಕದ ಹಸ್ತಕ್ಷೇಪದ ಸಾಧ್ಯತೆಯ ಕುರಿತು ಚರ್ಚಿಸಿದ್ದಾರೆ ಎಂದು ಈ ಸಂಭಾಷಣೆ ವೇಳೆ ಹಾಜರಿದ್ದ ಇಸ್ರೇಲಿ ಅಧಿಕಾರಿಗಳು ಮಾಹಿತಿ ನೀಡಿದ್ದಾರೆ. ಅಮೆರಿಕದ ಅಧಿಕಾರಿಯೊಬ್ಬರು ಕೂಡ ನೆತನ್ಯಾಹು, ರುಬೊಯೊ ನಡುವಿನ ದೂರವಾಣಿ ಸಂಭಾಷಣೆಯನ್ನು ಖಚಿತಪಡಿಸಿದ್ದು, ಇರಾನ್ ಬಿಕ್ಕಟ್ಟನ್ನು ಜಂಟಿಯಾಗಿ ನಿರ್ವಹಿಸುವ ಬಗ್ಗೆ ಉಭಯ ನಾಯಕರು ಸುದೀರ್ಘವಾಗಿ ಚರ್ಚೆ ನಡೆಸಿದ್ದಾರೆ ಎಂದು ಸ್ಪಷ್ಟಪಡಿಸಿದ್ದಾರೆ.**



**ಮೂರೂ ರಾಷ್ಟ್ರಗಳನ್ನು ಮತ್ತೆ ಒಂದೇ ವೇದಿಕೆಗೆ ಬರುವಂತೆ ಮಾಡಿದೆ**

**ಕಾಲಚಕ್ರ ಒಂದು ಸುತ್ತು ಸುತ್ತುತ್ತದೆ ಅಂತಾರಲ್ಲ, ಅದೆಷ್ಟು ನಿಜ ನೋಡಿ. 2025ರ ಜೂನ್‌ನಲ್ಲಿ ಬರೋಬ್ಬರಿ 12 ದಿನಗಳ ಕಾಲ ಬಡಿದಾಡಿದ್ದ ಇರಾನ್, ಇಸ್ರೇಲ್, ಅಮೆರಿಕ ಮತ್ತೆ ಮಧ್ಯಪ್ರಾಚ್ಯದಲ್ಲಿ ಸೆಂಟರ್ ಆಫ್ ಅಟ್ರ್ಯಾಕ್ಷನ್ ಆಗಿವೆ. ಈ ಬಾರಿ ಮೂರೂ ರಾಷ್ಟ್ರಗಳು ಬಡಿದಾಡುತ್ತಿಲ್ಲವಾದರೂ, ಇರಾನ್‌ನಲ್ಲಿ ಭುಗಿಲೆದ್ದಿರುವ ಖಮೇನಿ ಆಡಳಿತ ವಿರೋಧಿ ಪ್ರತಿಭಟನೆಗಳು, ಮೂರೂ ರಾಷ್ಟ್ರಗಳನ್ನು ಮತ್ತೆ ಒಂದೇ ವೇದಿಕೆಗೆ ಬರುವಂತೆ ಮಾಡಿದೆ. ಇರಾನ್‌ನಲ್ಲಿ ಅಮೆರಿಕದ ಹಸ್ತಕ್ಷೇಪ ಸುದ್ದಿ ಕೇಳಿ ಇಸ್ರೇಲ್ ಕೂಡ ಕ್ರಿಯಾಶೀಲವಾಗಿದೆ.**

## ಮಿನಿ ನ್ಯೂಸ್

### ಭಾರತದ ಮೇಲೆ ನಂಬಿಕೆ ಇಡಿ ಪಿಯೂಷ್ ಗೋಯಲ್ ಪ್ರತಿಕ್ರಿಯೆ

**ನವದೆಹಲಿ:** ಭಾರತದ ಮೇಲೆ ನಂಬಿಕೆ ಇಡಿ ಇದು ಭಾರತ-ಯುಎಸ್ ವ್ಯಾಪಾರ ಒಪ್ಪಂದದ ಕುರಿತು ಕೇಂದ್ರ ಸಚಿವ ಪಿಯೂಷ್ ಗೋಯಲ್ ಪ್ರತಿಕ್ರಿಯೆ ನೀಡಿದ್ದಾರೆ. ಪ್ರಧಾನಿ ನರೇಂದ್ರ ಮೋದಿ ಅವರು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರಿಗೆ ದೂರವಾಣಿ ಕರೆ ಮಾಡದ ಕಾರಣ ಭಾರತ-ಯುಎಸ್ ವ್ಯಾಪಾರ ಒಪ್ಪಂದವು ಕಾರ್ಯರೂಪಕ್ಕೆ ಬರಲು ವಿಫಲವಾಗಿದೆ ಎಂಬ ಊಹಾಪೋಹಗಳನ್ನು ವಿದೇಶಾಂಗ ಸಚಿವಾಲಯ ದೃಢವಾಗಿ ತಿರಸ್ಕರಿಸಿದ ಒಂದು ದಿನದ ನಂತರ ಅವರು ಈ ಹೇಳಿಕೆ ನೀಡಿದ್ದಾರೆ.

ಭಾರತದ ಮೇಲೆ ನಂಬಿಕೆ ಇಡುವಂತೆ ಕೇಂದ್ರ ಸಚಿವ ಪಿಯೂಷ್ ಗೋಯಲ್ ಹೇಳಿದರು. ವಾಷಿಂಗ್ಟನ್ ಇತರ ದೇಶಗಳೊಂದಿಗೆ ಮುಂದುವರಿಯುತ್ತಿರುವಾಗ ಭಾರತದೊಂದಿಗಿನ ಮಾತುಕತೆಗಳು ವಿಫಲವಾಗಿವೆ ಎಂಬ ಅಮೆರಿಕದ ವಾಣಿಜ್ಯ ಕಾರ್ಯದರ್ಶಿ ಹೊವಾರ್ಡ್ ಲುಟ್ನಿಕ್ ಅವರ ಹೇಳಿಕೆಯ ಕುರಿತಾದ ಪ್ರಶ್ನೆಗೆ ಈ ರೀತಿ ಪ್ರತಿಕ್ರಿಯಿಸಿದರು. ಗೋಯಲ್ ಅವರು ನೀವು ನಿಮ್ಮ ದೇಶವನ್ನು, ಮಾತೃಭೂಮಿಯನ್ನು ನಂಬಿರಿ, ವಿದೇಶಿ ಹೇಳಿಕೆಗಳನ್ನಲ್ಲ ಎಂದು ಹೇಳಿದರು.

### ಅಮೆರಿಕ ದಾಳಿ ನಡೆಸಿದರೆ ಪ್ರತಿದಾಳಿ: ಇರಾನ್ ಎಚ್ಚರಿಕೆ

**ಟೆಹರಾನ್:** ಆರ್ಥಿಕ ಕುಸಿತದ ನಡುವೆ ದೇಶದೆಲ್ಲೆಡೆ ಪ್ರತಿಭಟನೆ ವ್ಯಾಪಿಸಿರುವಂತೆಯೇ ಇಸ್ಲಾಮಿಕ್ ರಾಷ್ಟ್ರದ ಮೇಲೆ ಅಮೆರಿಕ ದಾಳಿ ನಡೆಸಿದರೆ ಪ್ರತಿದಾಳಿ ನಡೆವುದಾಗಿ ಇರಾನ್ ಎಚ್ಚರಿಸಿದೆ. ಇರಾನ್‌ನಲ್ಲಿ ಸರ್ಕಾರದ ವಿರುದ್ಧ ನಡೆಯುತ್ತಿರುವ ಪ್ರತಿಭಟನೆಯು ಎರಡು ವಾರಗಳನ್ನು ಪೂರೈಸಿದೆ. ಪ್ರತಿಭಟನೆ ಹಾಗೂ ಹಿಂಸಾಚಾರದಲ್ಲಿ ಈವರೆಗೆ 116 ಮಂದಿ ಮೃತಪಟ್ಟಿದ್ದಾರೆ ಎಂದು ವರದಿಯಾಗಿದೆ. ಅಮೆರಿಕ ಮೂಲದ ಮಾನವ ಹಕ್ಕುಗಳ ಕಾರ್ಯಕರ್ತರ ಸುದ್ದಿ ಸಂಸ್ಥೆಯ ಪ್ರಕಾರ 2,600 ಮಂದಿಯನ್ನು ವಶಕ್ಕೆ ಪಡೆಯಲಾಗಿದೆ. ಇರಾನ್‌ನಲ್ಲಿ ಇಂಟರ್‌ನೆಟ್. ದೂರವಾಣಿ ಸಂಪರ್ಕವನ್ನು ಕಡಿತಗೊಳಿಸಲಾಗಿದೆ. ರಾಜಧಾನಿ ಟೆಹರಾನ್ ಸೇರಿದಂತೆ ಹಲವು ಪ್ರದೇಶಗಳಲ್ಲಿ ವ್ಯಾಪಕ ಪ್ರತಿಭಟನೆಗಳು ಮುಂದುವರಿದಿವೆ. ಪ್ರತಿಭಟನಾಕಾರರಿಗೆ ಬೆಂಬಲ ನೀಡುವುದಾಗಿ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ. ಹಾಗೊಂದು ವೇಳೆ ಇಸ್ಲಾಮಿಕ್ ರಾಷ್ಟ್ರದ ಮೇಲೆ ಅಮೆರಿಕ ದಾಳಿ ನಡೆಸಿದರೆ ಪ್ರತಿದಾಳಿ ನಡೆಸುವುದಾಗಿ ಇರಾನ್ ಸಂಸತ್ತಿನ ಸ್ಪೀಕರ್ ಎಚ್ಚರಿಸಿದ್ದಾರೆ. ಪ್ರತಿಭಟನೆ ನಡೆಸುತ್ತಿರುವವರ ಮೇಲೆ ಕಠಿಣ ಕ್ರಮ ಕೈಗೊಳ್ಳುವುದಾಗಿ ಇರಾನ್‌ನ ಪರಮೋಚ್ಚ ನಾಯಕ ಆಯತೊಲ್ಲಾ ಅಲಿ ಖಮೇನಿ ಎಚ್ಚರಿಸಿದ್ದರು.

### ಪಾಕಿಸ್ತಾನದ ಸಿಂದ್ ಪ್ರಾಂತ್ಯದಲ್ಲಿ ಹಿಂದೂ ರೈತನ ಗುಂಡಿಕ್ಕಿ ಹತ್ಯೆ

**ಕರಾಚಿ:** ಪಾಕಿಸ್ತಾನದ ಸಿಂಥ್ ಪ್ರಾಂತ್ಯದಲ್ಲಿ 23 ವರ್ಷದ ಹಿಂದೂ ರೈತನೊಬ್ಬ ಜಮೀನಿನಲ್ಲಿ ಆಶ್ರಯ ಮನೆ ನಿರ್ಮಿಸಿದ್ದಕ್ಕಾಗಿ ಭೂ ಮಾಲೀಕರು ಗುಂಡಿಕ್ಕಿ ಕೊಂದಿದ್ದಾರೆ. ಘಟನೆ ಖಂಡಿಸಿ ಹಿಂದೂ ಸಮುದಾಯದವರು ಪ್ರತಿಭಟನೆ ನಡೆಸುತ್ತಿದ್ದಾರೆ. ಕೆಲೇಶ್ ಕೊಹ್ಲಿ ಮೃತ ರೈತ. ರಾತ್ರಿ ಹೈದರಾಬಾದ್‌ನಲ್ಲಿ ಭೂಮಾಲೀಕ ಸರ್ಫರಾಜ್ ನಿಜಾಮಾನಿ ಮತ್ತು ಅವರ ಸಹಾಯಕ ಜಫರುಲ್ಲಾ ಖಾನ್ ಅವರನ್ನು ಬಂಧಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಜನವರಿ 4ರಂದು ಸಿಂದ್ ಪ್ರಾಂತ್ಯದ ಬದಿನ್ ಜಿಲ್ಲೆಯ ತಲ್ಹಾರ್ ಗ್ರಾಮದಲ್ಲಿ ನಿಜಾಮಾನಿ ಒಡೆತನದ ಭೂಮಿಯಲ್ಲಿ ಆಶ್ರಯ ತಾಣ ನಿರ್ಮಿಸುತ್ತಿದ್ದ ಆರೋಪದ ಮೇಲೆ ಕೆಲೇಶ್ ಕೊಹ್ಲಿ ಮೇಲೆ ಗುಂಡು ಹಾರಿಸಲಾಗಿದೆ ಎಂದು ಪೊಲೀಸರು ವಿವರಿಸಿದ್ದಾರೆ. ಘಟನೆ ಬೆನ್ನಲ್ಲೇ ಆರೋಪಿಗಳು ತಲೆಮರೆಸಿಕೊಂಡಿದ್ದರು. ಕೆಲೇಶ್ ಕೊಹ್ಲಿ ಸಹೋದರ ಕುಮಾರ್ ಕೊಹ್ಲಿ ದಾಖಲಿಸಿದ್ದ ದೂರು ಆಧರಿಸಿ ಹೈದರಾಬಾದ್‌ನ ಫತೇ ಚೌಕ್ ಪ್ರದೇಶದಲ್ಲಿ ಆರೋಪಿಗಳನ್ನು ಬಂಧಿಸಲಾಗಿದೆ ಎಂದೂ ಅವರು ತಿಳಿಸಿದ್ದಾರೆ. ನೆರೆಯ ಬಾಂಗ್ಲಾದೇಶದಲ್ಲಿ ಅಲ್ಪಸಂಖ್ಯಾತ ಹಿಂದೂ ಸಮುದಾಯದವರ ಮೇಲೆ ನಿರಂತರವಾಗಿ ನಡೆಯುತ್ತಿರುವ ದಾಳಿಗಳ ಬಗ್ಗೆ ತೀವ್ರ ಕಳವಳ ವ್ಯಕ್ತವಾಗಿರುವ ಬೆನ್ನಲ್ಲೇ ಪಾಕ್‌ನಲ್ಲಿ ಹಿಂದೂ ವ್ಯಕ್ತಿಯ ಹತ್ಯೆಯಾಗಿರುವುದು ಆಕ್ರೋಶಕ್ಕೆ ಕಾರಣವಾಗಿದೆ.

### ಕೆಲಸದ ಒತ್ತಡದಿಂದ ಬಿಎಲ್‌ಒ ಆತ್ಮಹತ್ಯೆ: ಕುಟುಂಬಸ್ಥರ ಆರೋಪ

**ಕೋಲ್ಕತ್ತ:** ಪಶ್ಚಿಮ ಬಂಗಾಳದ ಮುರ್ಷಿದಾಬಾದ್ ಜಿಲ್ಲೆಯಲ್ಲಿ ಬೂತ್ ಮಟ್ಟದ ಅಧಿಕಾರಿಯೊಬ್ಬರು ಶಾಲೆಯಲ್ಲಿ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣಾ ಕಾರ್ಯದ ಒತ್ತಡವೇ ಅವರ ಆತ್ಮಹತ್ಯೆಗೆ ಕಾರಣ ಎಂದು ಕುಟುಂಬಸ್ಥರು ಆರೋಪಿಸಿದ್ದಾರೆ. ಹಮೀಮುಲ್ ಇಸ್ಲಾಂ (47) ಮೃತರು. ಅವರು ಬಾಲಕರ ಪ್ರಾಥಮಿಕ ಶಾಲೆ ಶಿಕ್ಷಕರಾಗಿ ಕೆಲಸ ಮಾಡುತ್ತಿದ್ದರು. ಇದರ ಜೊತೆಗೆ ಬಿಎಲ್‌ಒ ಕರ್ತವ್ಯವನ್ನು ನಿಭಾಯಿಸುತ್ತಿದ್ದರು ಎಂದು ಪೊಲೀಸರು ತಿಳಿಸಿದ್ದಾರೆ. ಈ ಎರಡೂ ಜವಾಬ್ದಾರಿಗಳಿಂದಾಗಿ ಹಮೀಮುಲ್ ಇಸ್ಲಾಂ ತೀವ್ರ ಒತ್ತಡಕ್ಕೆ ಒಳಗಾಗಿದ್ದರು. ಎಸ್‌ಐಆರ್‌ನಿಂದ ಹೆಚ್ಚಿನ ಒತ್ತಡ ಉಂಟಾಗಿತ್ತು ಎಂದು ಸಹೋದರ ಆರೋಪಿಸಿದ್ದಾರೆ. ಮೃತದೇಹವನ್ನು ಮರಣೋತ್ತರ ಪರೀಕ್ಷೆಗೆ ಕಳುಹಿಸಿದ್ದು, ತನಿಖೆ ನಡೆಯುತ್ತಿದೆ ಎಂದು ಪೊಲೀಸ್ ಅಧಿಕಾರಿ ತಿಳಿಸಿದ್ದಾರೆ.

# ಕಡಲ್ಗಳ್ಳತನದ ವಿರುದ್ಧ ಹೋರಾಟಕ್ಕೆ ಭಾರತ-ಸಿಂಗಾಪುರ ಒಪ್ಪಂದ

**ಸಿಂಗಾಪುರ:** ಏಷ್ಯಾದಲ್ಲಿ ಹಡಗುಗಳ ವಿರುದ್ಧ ಕಡಲ್ಗಳ್ಳತನ ಮತ್ತು ಸಶಸ್ತ್ರ ದರೋಡೆಯನ್ನು ಎದುರಿಸುವ ಪ್ರಾದೇಶಿಕ ಸಹಕಾರ ಒಪ್ಪಂದದ ಸ್ಥಾಪಕ ಸದಸ್ಯ ಭಾರತ, ಸಿಂಗಾಪುರ ಮೂಲದ ಗುಂಪಿನ ಮಾಹಿತಿ ಹಂಚಿಕೆ ಕೇಂದ್ರದೊಂದಿಗೆ ತನ್ನ ಸಂಬಂಧವನ್ನು ಇನ್ನಷ್ಟು ಗಾಢಗೊಳಿಸಲು ಸಜ್ಜಾಗಿದೆ ಎಂದು ಅದರ ಕಾರ್ಯನಿರ್ವಾಹಕ ನಿರ್ದೇಶಕ ವಿಜಯ್ ಡಿ ಚಾಫೇಕರ್‌ಹೇಳಿದ್ದಾರೆ.

ಏಷ್ಯಾದಲ್ಲಿ ಸುರಕ್ಷಿತ, ಸುಭದ್ರ ಸಮುದ್ರಗಳನ್ನು ಉತ್ತೇಜಿಸಲು ನಾವು ಭಾರತೀಯ ಕೇಂದ್ರಬಿಂದುವಾದ ಸಾಗರ ರಕ್ಷಣಾ ಸಮನ್ವಯ ಕೇಂದ್ರದೊಂದಿಗೆ ನಿಕಟ ಸಹಕಾರವನ್ನು ನಿರೀಕ್ಷಿಸುತ್ತೇವೆ ಎಂದು ಚಾಫೇಕರ್ ಪಿಟಿಐಗೆ ತಿಳಿಸಿದರು. ಭಾರತವು 21 ರಾಷ್ಟ್ರಗಳ ಸ್ಥಾಪಕ ಸದಸ್ಯರಲ್ಲಿ ಒಂದಾಗಿದೆ, ಇದನ್ನು ಕಡಲ ಭದ್ರತೆ ಮತ್ತು ಹಡಗು ಸುರಕ್ಷತೆಯನ್ನು ಹೆಚ್ಚಿಸಲು ಪ್ರಾದೇಶಿಕ, ಸರ್ಕಾರದಿಂದ ಸರ್ಕಾರಕ್ಕೆ ಸಂಸ್ಥೆಯಾಗಿ ಸ್ಥಾಪಿಸಲಾಗಿದೆ.

ಏಷ್ಯಾದ ಆಚೆಗಿನ ದೇಶಗಳಿಂದಲೂ ಈ ಗುಂಪು ಆಸಕ್ತಿಯನ್ನು ಸೆಳೆಯುತ್ತಿದೆ ಎಂದು ಚಾಫೇಕರ್ ಹೇಳಿದರು. ಹಡಗುಗಳ ಮೇಲಿನ ಹೆಚ್ಚಿನ ದಾಳಿಗಳು ಇಂಜಿನ್ ಮತ್ತು ಯಂತ್ರೋಪಕರಣಗಳ ಬಿಡಿಭಾಗಗಳನ್ನು ಕದಿಯುವುದಕ್ಕಾಗಿ ನಡೆಯುತ್ತಿವೆ, ಇದಕ್ಕೆ ಸಮಾನಾಂತರ ಮಾರುಕಟ್ಟೆಗಳಲ್ಲಿ ಬೇಡಿಕೆ ಇದೆ. ಇತ್ತೀಚಿನ ವರ್ಷಗಳಲ್ಲಿ ಸಿಬ್ಬಂದಿಯನ್ನು ಅಪಹರಿಸುವ, ಹಡಗುಗಳನ್ನು ಅಪಹರಿಸುವ ಯಾವುದೇ ಘಟನೆ ನಡೆದಿಲ್ಲ ಎಂದು ಭಾರತೀಯ ಕರಾವಳಿ ಕಾವಲು ಪಡೆಯ ನಿವೃತ್ತ ಹೆಚ್ಚುವರಿ ಮಹಾನಿರ್ದೇಶಕರು ಹೇಳಿದರು.

ತಮ್ಮ ಮೂರು ವರ್ಷಗಳ ಅಧಿಕಾರಾವಧಿಯ ಕಳೆದ ವರ್ಷದಿಂದ ಅನ್ನು ಮುನ್ನಡೆಸುತ್ತಿದ್ದಾರೆ. ಮಾರ್ಚ್‌ನಲ್ಲಿ ಸಿಂಗಾಪುರದಲ್ಲಿ ನಡೆಯಲಿರುವ ತನ್ನ 20 ನೇ ವಾರ್ಷಿಕೋತ್ಸವ ಕಾರ್ಯಕ್ರಮಕ್ಕೆ ತಯಾರಿ ನಡೆಸುತ್ತಿದೆ ಎಂದು ಅವರು ಹೇಳಿದರು, ಅಲ್ಲಿ ಸದಸ್ಯ ರಾಷ್ಟ್ರಗಳ ಪ್ರತಿನಿಧಿಗಳು ಸಂಸ್ಥೆಯ ಭವಿಷ್ಯದ ಯೋಜನೆಗಳನ್ನು ಚರ್ಚಿಸುತ್ತಾರೆ. ಸಿಂಗಾಪುರ ವೇದಿಕೆಯಲ್ಲಿ ಉನ್ನತ ಮಟ್ಟದ ಭಾರತೀಯ ಪ್ರಾತಿನಿಧ್ಯವನ್ನು ನಿರೀಕ್ಷಿಸಲಾಗಿದೆ ಎಂದು ಅವರು ಹೇಳಿದರು. ಒಟ್ಟಾರೆಯಾಗಿ, ಕಾನೂನು ಜಾರಿ ಸಂಸ್ಥೆಗಳೊಂದಿಗೆ ಉತ್ತಮವಾಗಿದೆ, ಹಡಗುಗಳು ಏಷ್ಯಾದ ನೀರಿನ ಮೂಲಕ ಸುರಕ್ಷಿತವಾಗಿ ಸಾಗಲು ಯಶಸ್ವಿ ವ್ಯವಸ್ಥೆ ಜಾರಿಯಲ್ಲಿದೆ, ಆದರೂ ದುರ್ಬಲ ಬಿಂದು ಇನ್ನೂ ಮಲಕ್ಕಾ, ಸಿಂಗಾಪುರ ಜಲಸಂಧಿಯಲ್ಲಿ 2025ರಲ್ಲಿ ಸಮುದ್ರ ದರೋಡೆಗಳು ಹೆಚ್ಚಾಗಿ ಹೆಚ್ಚಿವೆ, ಆದರೂ ಇವು ಹೆಚ್ಚಾಗಿ ಸಣ್ಣ ಕಳ್ಳತನ ಪ್ರಕರಣಗಳಾಗಿವೆ ಎಂದು ಚಾಫೇಕರ್ ಹೇಳಿದರು.

ಭಾರತೀಯ ಲಂಗರು ಹಾಕುವ ಸ್ಥಳಗಳಲ್ಲಿ ಘಟನೆಗಳಲ್ಲಿ ಸ್ವಲ್ಪ ಏರಿಕೆ ಕಂಡುಬಂದಿದೆ ಎಂದು ಅವರು ಗಮನಿಸಿದರು, ಕಾಕಿನಾಡದಲ್ಲಿ ಎರಡು, ಕಾಂಡ್ಲಾದಲ್ಲಿ ಒಂದು ಪ್ರಕರಣ ವರದಿಯಾಗಿದೆ. 2024 ರಲ್ಲಿ, ಭಾರತೀಯ ಲಂಗರು ಹಾಕುವ ಸ್ಥಳಗಳಲ್ಲಿ ಎರಡು ಘಟನೆಗಳು ದಾಖಲಾಗಿವೆ ಎಂದು ದತ್ತಾಂಶ ತಿಳಿಸಿದೆ. ಕಾಕಿನಾಡದಲ್ಲಿ ನಡೆದ ದಾಳಿಯೊಂದರಲ್ಲಿ ದುಷ್ಕರ್ಮಿಗಳ ಬಂಧನವು ಭಾರತದ ಜಲಪ್ರದೇಶದಲ್ಲಿ ಅಂತಹ ಘಟನೆಗಳಲ್ಲಿ ಇಳಿಕೆಗೆ ಕಾರಣವಾಗಿದೆ ಎಂದು ಚಾಫೇಕರ್ ಹೇಳಿದರು. ಕಳೆದ ವರ್ಷ ಏಷ್ಯಾದಲ್ಲಿ ಹಡಗುಗಳ ವಿರುದ್ಧ ಒಟ್ಟು 132 ಕಡಲ್ಗಳ್ಳತನ ಮತ್ತು ಸಶಸ್ತ್ರ ದರೋಡೆ ಘಟನೆಗಳು ವರದಿಯಾಗಿವೆ, ಇದು 2024ರಲ್ಲಿ ವರದಿಯಾದ 107 ಘಟನೆಗಳಿಂದ 23 ಪ್ರತಿಶತದಷ್ಟು ಹೆಚ್ಚಾಗಿದೆ. 2025ರಲ್ಲಿ ವರದಿಯಾದ ಘಟನೆಗಳಲ್ಲಿ ಕೇವಲ ಒಂದು ಭಾರತೀಯ ಧ್ವಜವನ್ನು ಹೊಂದಿರುವ ಹಡಗಿನ ಮೇಲೆ ದಾಳಿ ಮಾಡಲಾಗಿದೆ.


2025ರಲ್ಲಿ 108 ಸಮುದ್ರ ದರೋಡೆ ಘಟನೆಗಳು ವರದಿಯಾಗಿವೆ, ಕಳವಳಕಾರಿ ಕ್ಷೇತ್ರವಾಗಿ ಮುಂದುವರೆದಿದೆ. 2025ರಲ್ಲಿ ನಡೆದ ಘಟನೆಗಳ ಸಂಖ್ಯೆಯಲ್ಲಿನ ತೀವ್ರ ಹೆಚ್ಚಳವು ವಿಶ್ವದ ಅತ್ಯಂತ ಜನನಿಬಿಡ ಹಡಗು ಮಾರ್ಗಗಳಲ್ಲಿ ಒಂದಾದ ಜಲಸಂಧಿಯ ಮೂಲಕ ಹಾದುಹೋಗುವ ಸಮುದ್ರ ವ್ಯಾಪಾರಕ್ಕೆ ಬೆದರಿಕೆಯಲ್ಲಿ ಅನುಗುಣವಾದ ಹೆಚ್ಚಳವನ್ನು ಸೂಚಿಸುವುದಿಲ್ಲ ಎಂದು ಚಾಫೇಕರ್ ಹೇಳಿದರು, ವರದಿಯಾದ ಹೆಚ್ಚಿನ ಘಟನೆಗಳು ಸಣ್ಣ ಕಳ್ಳತನವನ್ನು ಒಳಗೊಂಡಿವೆ ಎಂದು ಹೇಳಿದರು.



**ಇಳಿಕೆ ಪರಿಣಾಮಕಾರಿ ಜಾರಿಯ ಪ್ರತಿಬಂಧಕ ಪರಿಣಾಮ**

**ಸಮುದ್ರ ದರೋಡೆಗಳ ಹೆಚ್ಚಳವು ಜನನಿಬಿಡ ಜಲಮಾರ್ಗಗಳಲ್ಲಿ ನಿರಂತರ ಭದ್ರತಾ ಸವಾಲುಗಳನ್ನು ಒತ್ತಿಹೇಳುತ್ತದೆಯಾದರೂ, ರಿಯಾವು ದ್ವೀಪಗಳ ಪ್ರಾದೇಶಿಕ ಪೊಲೀಸರು ಶಂಕಿತರನ್ನು ಬಂಧಿಸಿದ ನಂತರದ ಘಟನೆಗಳಲ್ಲಿನ ಇಳಿಕೆ ಪರಿಣಾಮಕಾರಿ ಜಾರಿಯ ಪ್ರತಿಬಂಧಕ ಪರಿಣಾಮವನ್ನು ಎತ್ತಿ ತೋರಿಸುತ್ತದೆ ಎಂದು ಅವರು ಹೇಳಿದರು.**

# ಅಮೆರಿಕದಲ್ಲಿ 6 ಜನರನ್ನು ಗುಂಡಿಕ್ಕಿ ಕೊಂದ ಯುವಕ



**ವೆಸ್ಟ್ ಪಾಯಿಂಟ್:** ಅಮೆರಿದ ಮಿಸಿಸಿಪ್ಪಿಯಲ್ಲಿ ಯುಕನೊಬ್ಬ ಗ್ರಾಮೀಣ ಪ್ರದೇಶದಲ್ಲಿ ತನ್ನ ತಂದೆ ಸೇರಿ 6 ಮಂದಿಯನ್ನು ಗುಂಡಿಕ್ಕಿ ಕೊಂದಿದ್ದಾನೆ ತಂದೆ, ಸಹೋದರ, ಚಿಕ್ಕಪ್ಪ, 7 ವರ್ಷದ ಸೋದರ ಸಂಬಂಧಿ ಬಾಲಕ, ಚರ್ಚ್ ಪಾದ್ರಿ ಮತ್ತು ಪಾದ್ರಿಯ ಸಹೋದರನನ್ನು ಭೀಕರವಾಗಿ ಕೊಂದಿದ್ದಾನೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಈಶಾನ್ಯ ಮಿಸಿಸಿಪ್ಪಿ ಪ್ರದೇಶದಲ್ಲಿ ಮಧ್ಯರಾತ್ರಿಯ ಸೀಡರ್ ಬ್ಲಫ್‌ನಲ್ಲಿ ಆರೋಪಿ ಡಾರಿಕಾ ಎಂ ಮೂರ್ (24) ನನ್ನು ಬಂಧಿಸಿದ್ದಾರೆ. ಸೋಮವಾರ ಆರೋಪಿಯನ್ನು ನ್ಯಾಯಾಧೀಶರ ಮುಂದೆ ಹಾಜರುಪಡಿಸುವ ನಿರೀಕ್ಷೆಯಿದೆ ಎಂದು ಜಿಲ್ಲಾ ಅಟಾರ್ನಿ ಸ್ಕಾಟ್ ಕೊಲೊಮ್ ತಿಳಿಸಿದ್ದಾರೆ. ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು ಆರೋಪಿಯೊಬ್ಬನೇ ಗುಂಡು ಹಾರಿಸಿದ್ದಾನೆ ಎಂದು ತಿಳಿಸಿದ್ದಾರೆ. ತನಿಖಾಧಿಕಾರಿಗಳು ಆರೋಪಿ ಮೂರ್‌ನ ವಿಚಾರಣೆ ಮುಂದುವರಿಸಿದ್ದಾರೆ ಆದರೆ ಪ್ರಸ್ತುತ ಘಟನೆಗೆ ಪ್ರೇರೇಪಿಸಿದವರು ಮತ್ತು ಕಾರಣವೇನೆಂದು ತಿಳಿದಿಲ್ಲ ಎಂದು ಅವರು ಹೇಳಿದರು. ಇಂತಹ ಪರಿಸ್ಥಿತಿಯಲ್ಲಿ, ಕುಟುಂಬದ ಸದಸ್ಯರೆ ತಮದೇ ಕುಟುಂಬದ ಮೇಲೆ ದಾಳಿ ಮಾಡಿದ್ದಾರೆ ಎಂದು ಸ್ಕಾಟ್ ಹೇಳಿದರು. ಗುಂಡಿನ ದಾಳಿಗಳು ಜಾಕ್ಸನ್‌ನಿಂದ ಈಶಾನ್ಯಕ್ಕೆ 200 ಕಿ.ಮೀ ದೂರದಲ್ಲಿರುವ ಹೊಲಗಳು, ಕಾಡುಗಳು, ಹೆಚ್ಚಾಗಿ ಸಾಧಾರಣ ಮನೆಗಳ ಪ್ರದೇಶದಲ್ಲಿ ನಡೆದಿದೆ ಮೂರ್ ಮೊದಲು ತನ್ನ ತಂದೆ, ಗ್ಲೆನ್ ಮೂರ್,(67) ಅವರ ಸಹೋದರ, ಕ್ವಿಂಟನ್ ಮೂರ್(33) ಮತ್ತು ಅವರ ಚಿಕ್ಕಪ್ಪ ವಿಲ್ಲಿ ಎಡ್ ಗೈನ್ಸ್ (55) ಅವರನ್ನು ಪಶ್ಚಿಮ ಕ್ಲೇ ಕೌಂಟಿಯ ಮನೆಯಲ್ಲಿ ಕೊಂದಿದ್ದಾನೆ ಎಂದು ತನಿಖಾಧಿಕಾರಿಗಳು ನಂಬಿದ್ದಾರೆ.

ನಂತರ ಮೂರ್ ತನ್ನ ಸಹೋದರನ ಟ್ರಕ್ ಅನ್ನು ಕದ್ದು ಸೋದರಸಂಬಂಧಿಯ ಮನೆಗೆ ಅಲ್ಲಿ ಬಲವಂತವಾಗಿ ಒಳಗೆ ನುಗ್ಗಿ ಲೈಂಗಿಕ ದೌರ್ಜನ್ಯ ಎಸಗಲು ಪ್ರಯತ್ನಿಸಿದನು ಎಂದು ಶೆರಿಫ್ ಹೇಳಿದರು. ಮೂರ್ 7 ವರ್ಷದ ಬಾಲಕಿಯ ತಲೆಗೆ ಬಂದೂಕಿನಿಂದ ಗುಂಡು ಹಾರಿಸಿದ್ದಾನೆ ಎಂದು ಸ್ಕಾಟ್ ಹೇಳಿದ್ದಾರೆ.

ಅದು ಎಷ್ಟು ಹಿಂಸಾತ್ಮಕವಾಗಿತ್ತು ಎಂದು ಹೇಳಲು ಆದದು ಎಂದು ಸ್ಕಾಟ್ ಹೇಳಿದರು. ತಾಯಿ, ಮೂರನೇ ಮಗು ಕೂಡ ಹಾಜರಿದ್ದರು ಎಂದು ಶೆರಿಫ್ ಹೇಳಿದರು. ನಂತರ ಮೂರ್ ಚರ್ಚ್‌ಗೆ ಹೋಗಿ ಪಾದ್ರಿ ನಿವಾಸಕ್ಕೆ ನುಗ್ಗಿ ಆತನನ್ನು ಕೊಂದು ಅವರ ಸಹೋದರನನ್ನು ಹತ್ಯೆ ಮಾಡಿ ಅವರ ವಾಹನಗಳಲ್ಲಿ ಪರಾರಿಯಾದ. ಕೊನೆಯ ಇಬ್ಬರು ಬಲಿಪಶುಗಳಾದ ರೆವರೆಂಡ್ ಬ್ಯಾರಿ ಬ್ರಾಡ್ಲಿ ಮತ್ತು ಎರಡನೇ ಗುಂಡಿನ ದಾಳಿ ನಡೆದ ಸ್ಥಳದ ಬಳಿ ರಾತ್ರಿ 11:24 ಕ್ಕೆ ಮೂರ್ ಸಿಕ್ಕಿಬಿದ್ದಿದ್ದಾನೆ ಎಂದು ಸ್ಕಾಟ್ ಹೇಳಿದರು, ಮೂರ್ ಬಳಿ ರೈಫಲ್, ಹ್ಯಾಂಡ್‌ಗನ್ ಇತ್ತು ಎಂದು ಕೊಲೊಮ್‌ಹೇಳಿದರು. ಮೂರ್ ಬಂದೂಕುಗಳನ್ನು ಎಲ್ಲಿಂದ ಪಡೆದರು ಎಂದು ಅಧಿಕಾರಿಗಳು ತನಿಖೆ ನಡೆಸುತ್ತಿದ್ದಾರೆ ಎಂದು ಸ್ಕಾಟ್ ಹೇಳಿದರು.

# ಡಿಜಿಟಲ್ ಅರೆಸ್ಟ್ ಮಾಡಿ 14 ಕೋಟಿ ದೋಚಿದ ಸೈಬರ್ ವಂಚಕರು

**ನವದೆಹಲಿ:** ವೃದ್ಧ ವೈದ್ಯ ದಂಪತಿಯನ್ನು ಒಂದು ವಾರಗಳ ಕಾಲ ಡಿಜಿಟಲ್ ಅರೆಸ್ಟ್ ಮಾಡಿ 14 ಕೋಟಿ ರೂ.ಗಳನ್ನು ವಂಚಕರು ದೋಚಿರುವ ಘಟನೆ ದಕ್ಷಿಣ ದೆಹಲಿಯ ಗ್ರೇಟರ್ ಕೈಲಾಶ್‌ನಲ್ಲಿ ನಡೆದಿದೆ. ದಕ್ಷಿಣ ದೆಹಲಿಯ ಗ್ರೇಟರ್‌ಕೈಲಾಶ್ ನಲ್ಲಿ ವಾಸಿಸುವ ವೃದ್ಧ ವೈದ್ಯ ದಂಪತಿಯನ್ನು ಸೈಬರ್ ಅಪರಾಧಿಗಳು ಎರಡು ವಾರಗಳಿಗೂ ಹೆಚ್ಚು ಕಾಲ ಡಿಜಿಟಲ್ ಬಂಧನದಲ್ಲಿ ಇರಿಸಿದಾಗ ಸುಮಾರು 14 ಕೋಟಿ ರೂ ಗಳನ್ನು ವಂಚಿಸಲಾಗಿದೆ ಎಂದು ಪೊಲೀಸರು ತಿಳಿಸಿದ್ದಾರೆ.

ಡಿಸೆಂಬರ್ 24, ಜನವರಿ 9 ರ ನಡುವೆ ಈ ವಂಚನೆ ನಡೆದಿದೆ ಎಂದು ಆರೋಪಿಸಲಾಗಿದೆ, ಆರೋಪಿಗಳು ಕಾನೂನು ಜಾರಿ ಅಧಿಕಾರಿಗಳಂತೆ ನಟಿಸಿ ವೃದ್ಧ ದಂಪತಿಗಳನ್ನು ಬಹು ಬ್ಯಾಂಕ್ ಖಾತೆಗಳಿಗೆ ಹಣವನ್ನು ವರ್ಗಾಯಿಸಲು ಒತ್ತಾಯಿಸಿದರು ಎಂದು ಅವರು ಹೇಳಿದರು.

ಆರೋಪಿಗಳ ವಿರುದ್ಧ ಇ-ಎಫ್‌ಐಆರ್ ದಾಖಲಿಸಲಾಗಿದ್ದು, ಅದರ ನಂತರ ದೆಹಲಿ ಪೊಲೀಸರ ಸೈಬರ್ ಅಪರಾಧ ಘಟಕವು ತನಿಖೆಯನ್ನು ಪ್ರಾರಂಭಿಸಿದೆ. ಪೊಲೀಸರ ಪ್ರಕಾರ, ವೈದ್ಯ ದಂಪತಿಗಳು ಅಮೆರಿಕದಿಂದ ಹಿಂದಿರುಗಿದ್ದರು ಮತ್ತು 2016 ರಿಂದ ಗ್ರೇಟರ್ ಕೈಲಾಶ್‌ನಲ್ಲಿ ವಾಸಿಸುತ್ತಿದ್ದರು. ಅವರ ಮಕ್ಕಳು ವಿದೇಶದಲ್ಲಿ ನೆಲೆಸಿದ್ದಾರೆ. ಆರೋಪಿಗಳು ದಂಪತಿಗಳ ಪ್ರತ್ಯೇಕತೆಯನ್ನು ದುರುಪಯೋಗಪಡಿಸಿಕೊಂಡರು, ಬಂಧನ, ಕಾನೂನು ಕ್ರಮ ಕೈಗೊಳ್ಳುವುದಾಗಿ ಪದೇ ಪದೇ ಬೆದರಿಕೆ ಹಾಕಿದರು, ಅವರನ್ನು ನಿರಂತರ ಫೋನ್ ಮತ್ತು ವಿಡಿಯೋ ಕರೆಗಳಲ್ಲಿ ಉಳಿಯುವಂತೆ ಒತ್ತಾಯಿಸಿದರು ಎಂದು ಪೊಲೀಸರು ತಿಳಿಸಿದ್ದಾರೆ.

# ಪೆಹಲ್ಗಾಮ್ ದಾಳಿಯಲ್ಲಿ ಪಾಕ್ ಸೇನೆಯೊಂದಿಗಿನ ನಂಟನ್ನು ಒಪ್ಪಿಕೊಂಡ ಸೂತ್ರಧಾರ



**ಇಸ್ಲಮಾಬಾದ್:** ಪಾಕಿಸ್ತಾನ ಸೇನೆಯು ಎಲ್‌ಇಟಿ ಜೊತೆಗಿನ ಸ್ಪಷ್ಟ ಸಂಬಂಧವನ್ನು ಲಷ್ಕರ್-ಎ-ತೈಬಾದ ನಾಯಕರೊಬ್ಬರು ಒಪ್ಪಿಕೊಂಡಿದ್ದು, ಪಾಕ್ ಸೇನೆಯು ನಡೆಸುವ ಕಾರ್ಯಕ್ರಮಗಳಲ್ಲಿ ಭಾಗವಹಿಸಲು ತನಗೆ ನಿಯಮಿತವಾಗಿ ಆಹ್ವಾನಗಳು ಬರುತ್ತವೆ ಮತ್ತು ತನ್ನ ಸೈನಿಕರ ಅಂತ್ಯಕ್ರಿಯೆಯ ಪ್ರಾರ್ಥನೆಗಳನ್ನು ಮುನ್ನಡೆಸಲು ಅದರಿಂದ ಆಹ್ವಾನ ಪಡೆಯಲಾಗುತ್ತದೆ ಪೆಹಲ್ಗಾಮ್ ದಾಳಿ ರೂವಾರಿ ಸೈಫುಲ್ಲಾ ಕಸೂರಿ ಒಪ್ಪಿಕೊಂಡಿದ್ದಾನೆ ಎಂದು ಹೇಳಿದ್ದಾರೆ.

ಹಫೀಜ್ ಸಯೀದ್ ನೇತೃತ್ವದ ಎಲ್‌ಇಟಿ ಸಂಘಟನೆಯ ಉಪ ಮುಖ್ಯಸ್ಥ ಮತ್ತು ಪೆಹಲ್ಗಾಮ್ ಭಯೋತ್ಪಾದಕ ದಾಳಿಯ ಮಾಸ್ಟರ್ ಮೈಂಡ್ ಸೈಫುಲ್ಲಾ ಕಸೂರಿ ಅವರು ಪಾಕಿಸ್ತಾನದ ಶಾಲೆಯೊಂದರಲ್ಲಿ ಆಯೋಜಿಸಲಾದ ಸಮಾರಂಭದಲ್ಲಿ ಶಾಲಾ ಮಕ್ಕಳನ್ನು ಉದ್ದೇಶಿಸಿ ಮಾತನಾಡುತ್ತಾ ಈ ಹೇಳಿಕೆ ನೀಡಿದ್ದಾರೆ. ನಾನು ಪಾಕ್ ಪರ ಇರುವುದರಿಂದ ಭಾರತ ಭಯಭೀತವಾಗಿದೆ ಪಾಕಿಸ್ತಾನ ಸೇನೆಯು ಆಹ್ವಾನವನ್ನು ಕಳುಹಿಸುವ ಮೂಲಕ ನನ್ನನ್ನು ಆಹ್ವಾನಿಸುತ್ತದೆ. ಪಾಕಿಸ್ತಾನ ಸೇನೆಯು ತನ್ನ ಸೈನಿಕರ ಅಂತ್ಯಕ್ರಿಯೆಯ ಪ್ರಾರ್ಥನೆಗಳನ್ನು ಮುನ್ನಡೆಸಲು ನನ್ನನ್ನು ಆಹ್ವಾನಿಸುತ್ತದೆ ಎಂದು ಕಸೂರಿ ಸಭೆಗೆ ತಿಳಿಸಿದರು ಎನ್ನಲಾದ ವಿಡಿಯೋ ವೈರಲ್ ಆಗಿದೆ.

ಪಾಕಿಸ್ತಾನ ಸರ್ಕಾರವು ತನ್ನ ಗಡಿಯೊಳಗೆ ಕಾರ್ಯನಿರ್ವಹಿಸುತ್ತಿರುವ ಭಯೋತ್ಪಾದಕ ಬಣಗಳ ವಿರುದ್ಧ ಕ್ರಮಗಳ ಕುರಿತು ಜಾಗತಿಕ ನಟರಿಗೆ ಪದೇ ಪದೇ ಹೇಳಿಕೊಳ್ಳುವುದಕ್ಕೆ ವಿರುದ್ಧವಾಗಿವೆ.

ಭಯೋತ್ಪಾದನೆಯನ್ನು ಎದುರಿಸುವ ಬಗ್ಗೆ ಪಾಕಿಸ್ತಾನದ ಪುನರಾವರ್ತಿತ ಹೇಳಿಕೆಗಳ ಸತ್ಯಾಸತ್ಯತೆಯನ್ನು ಬಹಿರಂಗಪಡಿಸುವಾಗ ಕಸೂರಿಯವರ ಸಾರ್ವಜನಿಕ ಒಪ್ಪಿಗೆ, ಮಿಲಿಟರಿ ಮತ್ತು ನಿಷೇಧಿತ ಗುಂಪುಗಳ ನಡುವಿನ ಸಹಕಾರ ಮತ್ತು ಅವುಗಳ ಒಳಗೊಳ್ಳುವಿಕೆಯ ವ್ಯಾಪ್ತಿಯನ್ನು ಸ್ಪಷ್ಟವಾಗಿ ತೋರಿಸುತ್ತದೆ. ಭಾರತ ನನಗೆ ಹೆದರುತ್ತಿದೆ ಎಂದು ನಿಮಗೆ ತಿಳಿದಿದೆಯೇ ಎಂದು ಪ್ರಶ್ನಿಸಿದ ಆತ, ಇದಕ್ಕೂ ಮೊದಲು, ಭಾರತದ ಆಪರೇಷನ್ ಸಿಂಧೂರ್ ಪಾಕಿಸ್ತಾನದಲ್ಲಿ ಭಯೋತ್ಪಾದಕ ಮೂಲಸೌಕರ್ಯವನ್ನು ನಾಶಪಡಿಸಿದೆ ಎಂದು ಒಪ್ಪಿಕೊಂಡಿದ್ದಾರೆ. ಭಾರತ ಭಯೋತ್ಪಾದಕ ಶಿಬಿರಗಳನ್ನು ಗುರಿಯಾಗಿಸಿಕೊಂಡು ತಪ್ಪು ಮಾಡಿದೆ ಎಂದು ಹೇಳಿಕೊಂಡಿದ್ದರು ಮತ್ತು ಕಾಶ್ಮೀರದ ಮೇಲೆ ಸಂಘಟನೆಯ ಗಮನವನ್ನು ಬಹಿರಂಗವಾಗಿ ಪುನರುಚ್ಚರಿಸಿದರು, ಗುಂಪು ಕಾಶ್ಮೀರ ಕಾರ್ಯಾಚರಣೆಯಿಂದ ಎಂದಿಗೂ ಹಿಂದೆ ಸರಿಯುವುದಿಲ್ಲ ಎಂದು ಘೋಷಿಸಿದರು.

ಪೆಹಲ್ಗಾಮ್ ಭಯೋತ್ಪಾದಕ ದಾಳಿಯ ಮಾಸ್ಟರ್ ಮೈಂಡ್ ಎಂದು ನನ್ನನ್ನು ದೂಷಿಸಲಾಯಿತು, ಈಗ ನನ್ನ ಹೆಸರು ಇಡೀ ಜಗತ್ತಿನಲ್ಲಿ ಪ್ರಸಿದ್ಧವಾಗಿದೆ ಎಂದು ಅವರು ಪಂಜಾಬ್ ಪ್ರಾಂತ್ಯದ ಕಸೂರ್‌ನಲ್ಲಿ ನಡೆದ ರ‍್ಯಾಲಿಯಲ್ಲಿ ಹೇಳಿದರು. ಏಪ್ರಿಲ್ 22 ರಂದು 26 ನಾಗರಿಕರನ್ನು ಕೊಂದ ಪೆಹಲ್ಗಾಮ್ ದಾಳಿಗೆ ಪ್ರತೀಕಾರವಾಗಿ ಭಾರತವು ಮೇ 7 ರಂದು ಪಾಕಿಸ್ತಾನ ಮತ್ತು ಪಾಕಿಸ್ತಾನ ಆಕ್ರಮಿತ ಕಾಶ್ಮೀರದಲ್ಲಿನ ಭಯೋತ್ಪಾದಕ ಮೂಲಸೌಕರ್ಯವನ್ನು ಗುರಿ ಆಗಿಸಿಕೊಂಡು ಆಪರೇಷನ್ ಸಿಂಧೂರ್ ಅನ್ನು ಪ್ರಾರಂಭಿಸಿತು. ನಾಲ್ಕು ದಿನಗಳ ತೀವ್ರ ಗಡಿಯಾಚೆಗಿನ ಡ್ರೋನ್ ಮತ್ತು ಕ್ಷಿಪಣಿ ದಾಳಿಯ ನಂತರ, ಹೋರಾಟವನ್ನು ಕೊನೆಗೊಳಿಸಲು ಭಾರತ ಮತ್ತು ಪಾಕಿಸ್ತಾನ ಮೇ 10 ರಂದು ಒಪ್ಪಂದಕ್ಕೆ ಬಂದವು. ನಾಲ್ಕು ದಿನಗಳ ತೀವ್ರ ಗಡಿಯಾಚೆಗಿನ ಡ್ರೋನ್, ಕ್ಷಿಪಣಿ ದಾಳಿಯ ನಂತರ ಸಂಘರ್ಷವನ್ನು ಕೊನೆಗೊಳಿಸಲು ಭಾರತ ಮತ್ತು ಪಾಕಿಸ್ತಾನ ಮೇ 10 ರಂದು ಒಪ್ಪಂದಕ್ಕೆ ಬಂದವು.

# ಸಾವಿರಕ್ಕೂ ಹೆಚ್ಚು ಆತ್ಮಹತ್ಯಾ ಬಾಂಬರ್‌ಗಳು ಸಿದ್ಧ

## ಜೈಶ್ ಮುಖ್ಯಸ್ಥ ಮಸೂದ್ ಅಜರ್‌ನ ಹೊಸ ಆಡಿಯೋ ಬೆದರಿಕೆ, ಆಡಿಯೋ ಕ್ಲಿಪ್‌ನಲ್ಲಿ ಏನಿದೆ?

**ನವದೆಹಲಿ:** ಭಾರತದ ವಿರುದ್ಧ ದಶಕಗಳಿಂದ ಷಡ್ಯಂತ್ರ ರೂಪಿಸುತ್ತಿರುವ ನಿಷೇಧಿತ ಭಯೋತ್ಪಾದಕ ಸಂಘಟನೆ ಜೈಶ್-ಎ-ಮೊಹಮ್ಮದ್ ಮುಖ್ಯಸ್ಥ ಮಸೂದ್ ಅಜರ್‌ನದ್ದೆನ್ನಲಾದ ಹೊಸ ಆಡಿಯೋ ಧ್ವನಿ ಸುರುಳಿಯೊಂದು ಈಗ ಸದ್ದು ಮಾಡುತ್ತಿದೆ. ಈ ಆಡಿಯೋದಲ್ಲಿ ಆತ ಭಾರತದ ಮೇಲೆ ದಾಳಿ ಮಾಡಲು ಸಾವಿರಾರು ಆತ್ಮಹತ್ಯಾ ಬಾಂಬರ್‌ಗಳು ತುದಿಗಾಲಿನಲ್ಲಿ ನಿಂತಿದ್ದಾರೆ ಎಂಬ ಆತಂಕಕಾರಿ ಹೇಳಿಕೆ ನೀಡಿದ್ದಾನೆ.

**ಒಬ್ಬರಲ್ಲ, ಇಬ್ಬರಲ್ಲ, ಸಾವಿರಕ್ಕೂ ಹೆಚ್ಚು ಮಂದಿ:** ವೈರಲ್‌ಆಗಿರುವ ಆಡಿಯೋ ರೆಕಾರ್ಡಿಂಗ್‌ನಲ್ಲಿ ಮಸೂದ್ ಅಜರ್ ಹೀಗೆ ಹೇಳಿರುವುದು ಕೇಳಿಬಂದಿದೆ.ಈ ಆತ್ಮಹತ್ಯಾ ಬಾಂಬರ್‌ಗಳು ಒಬ್ಬರಲ್ಲ, ಇಬ್ಬರಲ್ಲ, ನೂರಲ್ಲ ಅಥವಾ ಸಾವಿರವೂ ಅಲ್ಲ. ಒಂದು ವೇಳೆ ನಾನು ಅವರ ಪೂರ್ಣ ಸಂಖ್ಯೆಯನ್ನು ಬಹಿರಂಗಪಡಿಸಿದರೆ, ನಾಳೆ ಇಡೀ ವಿಶ್ವದ ಮಾಧ್ಯಮಗಳಲ್ಲಿ ದೊಡ್ಡ ಹಂಗಾಮಾವೇ ಸೃಷ್ಟಿಯಾಗುತ್ತದೆ... ತನ್ನ ಸಂಘಟನೆಯ ಹೋರಾಟಗಾರರು ಯಾವುದೇ ಕ್ಷಣದಲ್ಲಾದರೂ ಭಾರತಕ್ಕೆ ನುಗ್ಗಿ ದಾಳಿ ಮಾಡಲು ಸಿದ್ಧರಿದ್ದಾರೆ ಮತ್ತು ಅವರೆಲ್ಲರೂ ಕೇವಲ ಹುತಾತ್ಮ ಆಗುವ ಉದ್ದೇಶ ಹೊಂದಿದ್ದಾರೆ ಎಂದು ಆತ ಹೇಳಿಕೊಂಡಿದ್ದಾನೆ. ಆದಾಗ್ಯೂ, ಈ ಆಡಿಯೋದ ಅಸಲಿಯತ್ತು ಅಥವಾ ಇದು ಯಾವಾಗ ರೆಕಾರ್ಡ್ ಆಗಿದೆ ಎಂಬ ಬಗ್ಗೆ ಅಧಿಕೃತ ಮಾಹಿತಿ ಲಭ್ಯವಾಗಿಲ್ಲ.

**ಪಾಕಿಸ್ತಾನದಲ್ಲಿ ತಲೆ ಮರೆಸಿಕೊಂಡಿರುವ ಮಸೂದ್:** ಕಳೆದ ಕೆಲವು ವರ್ಷಗಳಿಂದ ಮಸೂದ್ ಅಜರ್ ಸಾರ್ವಜನಿಕವಾಗಿ ಕಾಣಿಸಿಕೊಂಡಿಲ್ಲ. 2019ರಲ್ಲಿ ಪಾಕಿಸ್ತಾನದ ಬಹವಾಲ್ಪುರದಲ್ಲಿ ನಡೆದ ಸ್ಫೋಟವೊಂದರ ನಂತರ ಆತ ತಲೆಮರೆಸಿಕೊಂಡಿದ್ದಾನೆ ಎನ್ನಲಾಗಿದೆ. ಈ ಹೊಸ ಬೆದರಿಕೆಯು ಭಾರತವು ಇತ್ತೀಚೆಗೆ ನಡೆಸಿದ ಪ್ರಬಲ ದಾಳಿಯ ನಂತರ ಬಂದಿದೆ. ಕಳೆದ ವರ್ಷದ ಏಪ್ರಿಲ್ 22 ರಂದು ಜಮ್ಮು-ಕಾಶ್ಮೀರದ ಪೆಹಲ್ಗಾಮ್‌ಪ್ರವಾಸಿಗರ ಮೇಲೆ ನಡೆದ ಭೀಕರ ದಾಳಿಯಲ್ಲಿ 26 ಜನರು ಸಾವನ್ನಪ್ಪಿದ್ದರು. ಇದಕ್ಕೆ ಪ್ರತಿಕಾರವಾಗಿ ಭಾರತೀಯ ಸೇನೆಯು ಪಾಕಿಸ್ತಾನದ ಬಹವಾಲ್ಪುರದಲ್ಲಿರುವ ಜೈಶ್‌ಸಂಘಟನೆಯ ಪ್ರಧಾನ ಕಚೇರಿಯ ಮೇಲೆ ಭೀಕರ ದಾಳಿ ನಡೆಸಿತ್ತು ಈ ದಾಳಿಯಲ್ಲಿ ಮಸೂದ್ ಅಜರ್‌ನ ಆಪ್ತರು, ಸಂಬಂಧಿಕರು ಹತರಾಗಿದ್ದರು ಎಂದು ವರದಿಯಾಗಿದೆ.



**ಮಸೂದ್ ಅಜರ್ ಯಾರು?**

**ವಿಶ್ವಸಂಸ್ಥೆಯಿಂದ ಘೋಷಿತ ಭಯೋತ್ಪಾದಕ, ಪಠಾಣ್‌ಕೋಟ್ (2016), ಪುಲ್ವಾಮಾ (2019) ದಾಳಿಗಳ ಸಂಚುಗಾರನಾದ ಮಸೂದ್ ಅಜರ್, 2019 ರಿಂದ ಸಾರ್ವಜನಿಕವಾಗಿ ಎಲ್ಲಿಯೂ ಕಾಣಿಸಿಕೊಂಡಿಲ್ಲ. ಜೈಶ್-ಎ-ಮೊಹಮ್ಮದ್ ಸಂಘಟನೆಯ ಮುಖ್ಯಸ್ಥನಾದ ಈತ, ಬಹವಾಲ್ಪುರದಲ್ಲಿ ನಡೆದ ಸ್ಫೋಟದ ನಂತರ ತಲೆಮರೆಸಿಕೊಂಡಿದ್ದು, ಸದ್ಯ ಪಾಕಿಸ್ತಾನ ಆಕ್ರಮಿತ ಪ್ರದೇಶಗಳಲ್ಲಿ ಅಥವಾ ಅಫ್ಘಾನಿಸ್ತಾನದ ಗಡಿ ಭಾಗಗಳಲ್ಲಿ ಅಡಗಿರಬಹುದು ಎಂದು ಗುಪ್ತಚರ ವರದಿಗಳು ಶಂಕಿಸಿವೆ. ಭಾರತದ ವಿರುದ್ಧ ನಿರಂತರವಾಗಿ ಷಡ್ಯಂತ್ರ ರೂಪಿಸುತ್ತಿರುವ ಈತ, ಇತ್ತೀಚಿನ ಆಡಿಯೋ ಸಂದೇಶಗಳ ಮೂಲಕ ಮತ್ತೆ ವಿಧ್ವಂಸಕ ಕೃತ್ಯಗಳ ಬೆದರಿಕೆ ಹಾಕುತ್ತಿದ್ದು, ಭಾರತೀಯ ಭದ್ರತಾ ಸಂಸ್ಥೆಗಳು ಆತನ ಚಲನವಲನದ ಮೇಲೆ ತೀವ್ರ ನಿಗಾ ಇರಿಸಿವೆ.**

**ದೆಹಲಿ ಸ್ಫೋಟದೊಂದಿಗೆ ನಂಟು**

**ಇತ್ತೀಚೆಗೆ ದೆಹಲಿಯಲ್ಲಿ ನಡೆದ ಸ್ಫೋಟ ಪ್ರಕರಣದಲ್ಲಿ ಕನಿಷ್ಠ 15 ಜನರು ಸಾವನ್ನಪ್ಪಿದ್ದರು. ಈ ಘಟನೆಯ ತನಿಖೆ ನಡೆಸುತ್ತಿರುವ ದೆಹಲಿ ಪೊಲೀಸರು, ಸ್ಫೋಟದ ಶಂಕಿತ ಉಮರ್ ಮೊಹಮ್ಮದ್ ಪಾಕಿಸ್ತಾನ ಮೂಲದ ಜೈಶ್-ಎ-ಮೊಹಮ್ಮದ್ ಸಂಘಟನೆಯೊಂದಿಗೆ ಸಂಪರ್ಕ ಹೊಂದಿದ್ದ ಎಂದು ಪತ್ತೆಹಚ್ಚಿದ್ದಾರೆ. ಈ ಘಟನೆಗಳ ಬೆನ್ನಲ್ಲೇ ಮಸೂದ್ ಅಜರ್‌ನ ಈ ಬೆದರಿಕೆ ಆಡಿಯೋ ಮುನ್ನೆಲೆಗೆ ಬಂದಿರುವುದು ಭದ್ರತಾ ಸಂಸ್ಥೆಗಳ ಆತಂಕಕ್ಕೆ ಕಾರಣವಾಗಿದೆ.**

# ಅಂತೂ ಇಂತೂ ಕಾಣಿಸಿಕೊಂಡ ರಕ್ಷಿತ್ ಶೆಟ್ಟಿ! ಇನ್ನಾದ್ರೂ ಬರ್ತಾನಾ 'ರಿಚರ್ಡ್ ಆ್ಯಂಟನಿ'?

ನಟ ಸಿಂಪಲ್ ಸ್ಟಾರ್ ರಕ್ಷಿತ್ ಶೆಟ್ಟಿ ಏನ್ ಮಾಡ್ತಿದ್ದಾರೆ? ಎಲ್ಲಿ ಹೋದ್ರು? ಎಂಬ ಮಾತುಗಳು ಅದೆಷ್ಟೋ ದಿನಗಳಿಂದ ಕೇಳಿಬರುತ್ತಿತ್ತು. ಸಪ್ತ ಸಾಗರದಾಚೆ ಎಲ್ಲೋ ಸಿನಿಮಾ ಬಳಿಕ ರಕ್ಷಿತ್ ಶೆಟ್ಟಿ ಬೇರೆ ಎಲ್ಲೂ ಕಾಣಿಸಿಕೊಳ್ಳಲೇ ಇಲ್ಲ. ಶೂಟಿಂಗ್ ನಲ್ಲಿ ಬ್ಯುಸಿ ಆಗಿದ್ದರೋ ಅಥವಾ ಬೇರೆ ಯಾವುದಾದರೂ ದೊಡ್ಡ ಪ್ಲ್ಯಾನ್ ಮುಖಾಂತರವೇ ಪರದೆ ಮುಂದೆ ಕಾಣಿಸಿಕೊಳ್ಳಲಿದ್ದಾರೋ ಎಂಬ ಮಾತುಗಳು ಹರಿದಾಡಿತ್ತು. ಈ ಮಧ್ಯೆ ಇದೀಗ ರಕ್ಷಿತ್ ಶೆಟ್ಟಿ ಮತ್ತೆ ಪ್ರತ್ಯಕ್ಷ ಆಗಿದ್ದಾರೆ.



**ಮತ್ತೆ ಕಾಣಿಸಿಕೊಂಡ ಶೆಟ್ರು:** ಹೌದು ಇದೇನು ಮೊದಲಲ್ಲ ರಕ್ಷಿತ್ ಶೆಟ್ಟಿ ಪ್ರತೀ ಬಾರಿಯೂ ಹೀಗೆ, ತಮ್ಮ ಒಂದು ಸಿನಿಮಾ ಬಳಿಕ ಮಾಯ ಆಗ್ತಾರೆ. ಆಮೇಲೆ ಎರಡು ವರ್ಷಗಳ ಬಳಿಕ ಮತ್ತೊಂದು ದೊಡ್ಡ ಮಟ್ಟದಲ್ಲೇ ಸಿನಿಮಾ ಜೊತೆ ತೆರೆಮೇಲೆ ಕಾಣಿಸಿ ಕೊಳ್ಳುತ್ತಾರೆ ಎಂಬ ಮಾತು ಸಾಮಾಜಿಕ ಜಾಲತಾಣಗಳಲ್ಲಿ ಕೇಳಿ ಬರುತಿತ್ತು. ಈ ಮಧ್ಯೆ ರಕ್ಷಿತ್ ಶೆಟ್ಟಿ ಮತ್ತೆ ಕಾಣಿಸಿಕೊಂಡಿದ್ದಾರೆ.

**ನೇಮೋತ್ಸವದಲ್ಲಿ ರಕ್ಷಿತ್ ಶೆಟ್ಟಿ:** ಹೌದು ರಕ್ಷಿತ್ ಶೆಟ್ಟಿ ಇದೀಗ ಊರಿನ ನೇಮೋತ್ಸವದಲ್ಲಿ ಭಾಗಿಯಾಗಿದ್ದಾರೆ. ಉಡುಪಿ ತಾಲ್ಲೂಕಿನ ಅಲೆವೂರಿನ ಕಲ್ಯಾಣ ನಗರದಲ್ಲಿ ನೇಮೋತ್ಸವ ನಡೆದಿದೆ. ಅಲೆವೂರು ದೊಡ್ಡಮನೆ ಮನೆತನದವರು ನಿರ್ವಹಿಸುವ ನೇಮೋತ್ಸವ ಇದು. ಅಲೆವೂರು ದೊಡ್ಡ ಮನೆ ಕುಟುಂಬದ ಕುಡಿ ಆಗಿರುವ ರಕ್ಷಿತ್ ಶೆಟ್ಟಿ ಅವರು ವೈದ್ಯನಾಥ ಬಬ್ಬುಸ್ವಾಮಿ ದೈವದ ನೇಮೋತ್ಸವದಲ್ಲಿ ಪಾಲ್ಗೊಂಡಿದ್ದಾರೆ.

**ರಿಚರ್ಡ್ ಆ್ಯಂಟನಿ ಯಾವಾಗ?:** ಅದೆಷ್ಟೋ ದಿನಗಳ ಇದೀಗ ರಕ್ಷಿತಾ ಶೆಟ್ಟಿ ಕಾಣಿಸಿಕೊಂಡ ಕಾರಣ ಫ್ಯಾನ್ಸ್ ಬಹಳ ಉತ್ಸುಕರಾಗಿದ್ದಾರೆ. ಯಾಕಂದ್ರೆ, ರಕ್ಷಿತಾ ಅಭಿನಯದ ಬಹು ನಿರೀಕ್ಷಿತ ಸಿನಿಮಾ 'ರಿಚರ್ಡ್ ಆ್ಯಂಟನಿ ಸಿನಿಮಾ ಕೆಲಸ ಮುಗಿಸಿಕೊಂಡ್ರಾ, ಶೆಟ್ರು, ರಿಲೀಸ್‌ಗೆ ರೆಡಿ ಆಯ್ತಾ ಸಿನಿಮಾ? ಅಂತ ಪ್ರಶ್ನೆಗಳು ಫ್ಯಾನ್ಸ್‌ಗೆ ಮೂಡಿದೆ.

# ಬುಕ್ ಮೈ ಶೋ ರೇಟಿಂಗ್ ನಿಷೇಧಿಸಿದ ಚಿರಂಜೀವಿ ಸಿನಿಮಾ



ಮೆಗಾ ಸ್ಟಾರ್ ಚಿರಂಜೀವಿ ನಟನೆಯ 'ಮನ ಶಂಕರ ವರಪ್ರಸಾದ್ ಗಾರು' ಸಿನಿಮಾ ಜನವರಿ 12ರಂದು ಬಿಡುಗಡೆ ಆಗುತ್ತಿದೆ. ಸಂಕ್ರಾಂತಿ ಪ್ರಯುಕ್ತ ಈ ಚಿತ್ರವನ್ನು ನೋಡಲು ಚಿರಂಜೀವಿ ಫ್ಯಾನ್ಸ್ ಕಾತರದಿಂದ ಕಾದಿದ್ದಾರೆ. ಫಸ್ಟ್ ಡೇ ಫಸ್ಟ್ ಶೋ ಈ ಚಿತ್ರವನ್ನು ನೋಡಿ ತಮ್ಮ ಅನಿಸಿಕೆ ತಿಳಿಸಬೇಕು ಎಂಬುದು ಅಭಿಮಾನಿಗಳ ಆಸೆ. ಆದರೆ 'ಬುಕ್ ಮೈ ಶೋ' ಮೂಲಕ ಯಾರೂ ಕೂಡ ಈ ಸಿನಿಮಾಗೆ ರೇಟಿಂಗ್ ನೀಡುವಂತಿಲ್ಲ, ವಿಮರ್ಶೆ ತಿಳಿಸುವಂತಿಲ್ಲ! ಈ ರೀತಿ ನ್ಯಾಯಾಲಯದ ಆದೇಶ ಇದೆ. ಈ ಮೊದಲು ಕನ್ನಡದ 'ದಿ ಡೆವಿಲ್', 'ಮಾರ್ಕ್' '45' ಸಿನಿಮಾಗಳು ಕೂಡ ಇದೇ ಹಾದಿಯನ್ನು ಅನುಸರಿಸಿದ್ದವು. ದರ್ಶನ್ ಅಭಿನಯದ 'ದಿ ಡೆವಿಲ್', ಕಿಚ್ಚ ಸುದೀಪ್ ನಟನೆಯ 'ಮಾರ್ಕ್', ಶಿವರಾಜ್‌ಕುಮಾರ್ ಅಭಿನಯದ '45' ಸಿನಿಮಾಗಳು ಬಿಡುಗಡೆ ಆಗುವಾಗ ಫ್ಯಾನ್ಸ್ ವಾರ್ ನಡೆಯುತ್ತಿತ್ತು. ಆಗ ಕೆಲವರು ಬೇಕಂತಲೇ ಈ ಸಿನಿಮಾಗಳಿಗೆ ನೆಗೆಟಿವ್ ಪ್ರಚಾರ ಮಾಡುವ ಸಾಧ್ಯತೆ ಇತ್ತು. ಅದನ್ನು ತಪ್ಪಿಸಲು ಕೋರ್ಟ್ ಮೊರೆ ಹೋಗಲಾಗಿತ್ತು. 'ಬುಕ್ ಮೈ ಶೋ' ರೀತಿಯ ಪ್ಲಾಟ್ ಫಾರ್ಮ್ ಮೂಲಕ ಜನರು ವಿಮರ್ಶೆ ಅಥವಾ ರೇಟಿಂಗ್ ನೀಡುವುದನ್ನು ತಡೆಯಲಾಗಿತ್ತು. ಚಿರಂಜೀವಿ ಅಭಿನಯದ 'ಮನ ಶಂಕರ ವರಪ್ರಸಾದ್ ಗಾರು' ಸಿನಿಮಾ ಸಹ ಕೋರ್ಟ್ ಮೊರೆ ಹೋಗಿದೆ. ಈ ಸಿನಿಮಾಗೆ ರಿವ್ಯೂ ಮತ್ತು ರೇಟಿಂಗ್ ನೀಡುವ ಆಯ್ಕೆಯನ್ನು ತೆಗೆದುಹಾಕಲಾಗಿದೆ. ಕೋರ್ಟ್ ಆದೇಶದ ಮೇರೆಗೆ ಈ ರೀತಿ ಮಾಡಲಾಗಿದೆ ಎಂದು 'ಬುಕ್ ಮೈ ಶೋ' ಪ್ರಕಟಿಸಿದೆ. ಸ್ಟಾರ್ ನಟರ ಸಿನಿಮಾಗಳು ಈ ನಿರ್ಧಾರ ತೆಗೆದುಕೊಳ್ಳುತ್ತಿರುವುದರ ಬಗ್ಗೆ ಸೋಶಿಯಲ್ ಮೀಡಿಯಾದಲ್ಲಿ ಚರ್ಚೆ ಆಗುತ್ತಿದೆ. ಸಿನಿಮಾಗಳ ವಿರುದ್ಧ ಅಪಪ್ರಚಾರ ಮಾಡಲು ಕೆಲವು ಕಿಡಿಗೇಡಿಗಳು 'ಬುಕ್ ಮೈ ಶೋ' ರೀತಿಯ ವೇದಿಕೆಗಳನ್ನು ಬಳಸಿಕೊಳ್ಳುತ್ತಾರೆ. ಅದರಿಂದಾಗಿ ಸಿನಿಮಾಗಳಿಗೆ ಹೊಡೆತ ಬೀಳುತ್ತದೆ. ಅದೇ ರೀತಿ, ಕೆಲವರು ಅತಿಯಾಗಿ ಸಿನಿಮಾವನ್ನು ಹೊಗಳುತ್ತಾರೆ. ಹಣ ಪಡೆದು ಉತ್ತಮ ರೇಟಿಂಗ್ ನೀಡಲಾಗುತ್ತದೆ. ಇದರಿಂದ ಪ್ರೇಕ್ಷಕರಿಗೆ ಮೋಸ ಆದಂತೆ ಆಗುತ್ತದೆ. ಇಂಥ ಸಮಸ್ಯೆಗಳನ್ನು ತಪ್ಪಿಸಲು ವಿಮರ್ಶೆ ಮತ್ತು ರೇಟಿಂಗ್ ನೀಡುವ ಆಯ್ಕೆಯನ್ನೇ ಚಿತ್ರತಂಡಗಳು ತೆಗೆದು ಹಾಕುತ್ತಿವೆ.

# ಹೆಮ್ಮೆಯಿಂದ ತಾಳಿ ಧರಿಸಿ ಓಡಾಡುತ್ತಿರುವ ನಟಿ ಸಮಂತಾ ರುತ್ ಪ್ರಭು



ನಟಿ ಸಮಂತಾ ರುತ್ ಪ್ರಭು ಅವರು ಈಗ ತುಂಬಾ ಖುಷಿಯಾಗಿದ್ದಾರೆ. ಇತ್ತೀಚೆಗೆ ಅವರ ಬಾಳಿನಲ್ಲಿ ಹೊಸ ಅಧ್ಯಾಯ ಆರಂಭ ಆಯಿತು. ನಿರ್ದೇಶಕ ರಾಜ್ ನಿಡಿಮೋರು ಜೊತೆ ಸಮಂತಾ ಅವರು ಕಳೆದ ವರ್ಷ ಡಿಸೆಂಬರ್ 1ರಂದು ಎರಡನೇ ಮದುವೆ ಆದರು. ಮದುವೆ ನಂತರ ಅವರ ಮುಖದಲ್ಲಿ ನಗು ಅರಳಿದೆ. ಪತಿ ರಾಜ್ ನಿಡಿಮೋರು ಜೊತೆ ಸಮಂತಾ ರುತ್ ಪ್ರಭು ಅವರು ಹೈದರಾಬಾದ್ ವಿಮಾನ ನಿಲ್ದಾಣದಲ್ಲಿ ಕಾಣಿಸಿಕೊಂಡಿದ್ದಾರೆ. ಆಗ ಅವರ ಕತ್ತಿನಲ್ಲಿ ಕಾಣಿಸಿದ ಮಂಗಳಸೂತ್ರ ನೋಡಿ ಅಭಿಮಾನಿಗಳಿಗೆ ಖುಷಿ ಆಗಿದೆ. ಅನೇಕರು ಮದುವೆ ಆಗಿದ್ದರೂ ಮಂಗಳಸೂತ್ರ ಧರಿಸುವುದಿಲ್ಲ. ಆದರೆ ಸಮಂತಾ ಅವರು ಬಹಳ ಹೆಮ್ಮೆಯಿಂದ ತಾಳಿ ಧರಿಸಿದ್ದಾರೆ. ಬಹಳ ಸ್ಪಷ್ಟವಾಗಿ ಮಂಗಳಸೂತ್ರ ಕಾಣಿಸುವ ರೀತಿಯಲ್ಲಿ ಡ್ರೆಸ್ ಮಾಡಿಕೊಂಡಿದ್ದಾರೆ. ಇದನ್ನು ಫ್ಯಾನ್ಸ್ ಗಮನಿಸಿದ್ದಾರೆ. ಅಲ್ಲದೇ, ಸಮಂತಾ ಖುಷಿಯಾಗಿ ಕಾಲ ಕಳೆಯುತ್ತಿರುವುದನ್ನು ನೋಡಿ ಫ್ಯಾನ್ಸ್ ಕೂಡ ಖುಷಿಯಾಗಿದ್ದಾರೆ. ರಾಜ್ ನಿಡಿಮೋರು ಅವರಿಗೆ ಕೂಡ ಇದು ಎರಡನೇ ಮದುವೆ. ಮೊದಲ ಪತ್ನಿಗೆ ವಿಚ್ಛೇದನ ನೀಡಿ ಅವರು ಈಗ ಸಮಂತಾ ಜೊತೆ ವೈವಾಹಿಕ ಜೀವನ ಆರಂಭಿಸಿದ್ದಾರೆ. ಸಮಂತಾ ಅವರು ಈ ಮೊದಲು ನಾಗ ಚೈತನ್ಯ ಜೊತೆ ಮದುವೆ ಆಗಿದ್ದರು. ಪರಸ್ಪರ ಪ್ರೀತಿಸಿ ಮದುವೆ ಆದ ಅವರ ಸಂಸಾರದಲ್ಲಿ ಬಿರುಕು ಮೂಡಿತ್ತು. ವಿಚ್ಛೇದನದಲ್ಲಿ ಆ ವಿವಾಹ ಅಂತ್ಯವಾಯ್ತು.

# ಯಶ್ ಜೊತೆ ಕಾರಿನಲ್ಲಿದ್ದ ಯುವತಿ ಯಾರು? ಖಾತ್ರಿ ಪಡಿಸಿದ ನಿರ್ದೇಶಕಿ




ಯಶ್ ನಟಿಸಿರುವ 'ಟಾಕ್ಸಿಕ್' ಸಿನಿಮಾದ ಟೀಸರ್ ಕೆಲವೇ ದಿನಗಳ ಹಿಂದಷ್ಟೆ ಬಿಡುಗಡೆ ಆಗಿದ್ದು, ಟೀಸರ್ ಬಗ್ಗೆ ಸಾಮಾಜಿಕ ಜಾಲತಾಣಗಳಲ್ಲಿ, ಸುದ್ದಿ ವಾಹಿನಿಗಳಲ್ಲಿಯೂ ಸಹ ಚರ್ಚೆ ನಡೆಯುತ್ತಿದೆ. ಇದೀಗ ಬಿಡುಗಡೆ ಆಗಿರುವ 'ಟಾಕ್ಸಿಕ್' ಸಿನಿಮಾದ ಟೀಸರ್ ಹಾಲಿವುಡ್ ಮಾದರಿಯಲ್ಲಿದೆ. ಮೂರು ನಿಮಿಷವೂ ಇಲ್ಲದ ಈ ಟೀಸರ್ ಅನ್ನು ವಿಶ್ವದಾದ್ಯಂತ 30 ಕೋಟಿಗೂ ಹೆಚ್ಚು ಮಂದಿ ಈಗಾಗಲೇ ವೀಕ್ಷಿಸಿದ್ದಾರೆ. ಟೀಸರ್‌ನಲ್ಲಿರುವ ಹಾಟ್ ದೃಶ್ಯದ ಬಗ್ಗೆ ಪರ ವಿರೋಧ ಚರ್ಚೆಗಳು ನಡೆಯುತ್ತಲೇ ಇದೆ.

ಇದು ಹೀಗಿರುವಾಗ, ಟೀಸರ್‌ನಲ್ಲಿ ಯಶ್ ಜೊತೆ ಕಾರಿನಲ್ಲಿರುವ ಯುವತಿ ಯಾರೆಂಬುದನ್ನು ಪತ್ತೆ ಹಚ್ಚುವ ಕಾರ್ಯವನ್ನು ನೆಟ್ಟಿಗರು ಮಾಡಿದ್ದಾರೆ. ಬಹುತೇಕರು, 'ಟಾಕ್ಸಿಕ್' ಟೀಸರ್‌ನಲ್ಲಿ ಯಶ್ ಜೊತೆಗಿರುವ ಯುವತಿ ನಟಿ ನಟೇಲಾ ಬರ್ನ್ ಎನ್ನಲಾಗಿತ್ತು. ಹಲವು ಹಾಲಿವುಡ್ ಸಿನಿಮಾಗಳಲ್ಲಿ ನಟಿಸಿರುವ ನಟೇಲಿ ಬರ್ನ್, 'ಟಾಕ್ಸಿಕ್' ಸಿನಿಮಾದ ಟೀಸರ್ ಹಂಚಿಕೊಂಡಿದ್ದರು. ಅಲ್ಲದೆ, ಅವರ ವಿಕಿಪೀಡಿಯಾ ಪೇಜ್ ನಲ್ಲಿಯೂ ನಟೇಲಿ ಬರ್ನ್, 'ಟಾಕ್ಸಿಕ್' ಸಿನಿಮಾನಲ್ಲಿ ನಟಿಸುತ್ತಿರುವುದಾಗಿ ಮಾಹಿತಿ ಇತ್ತು. ಇದೇ ಕಾರಣಕ್ಕೆ ಎಲ್ಲರೂ 'ಟಾಕ್ಸಿಕ್' ಸಿನಿಮಾದ ಟೀಸರ್‌ನಲ್ಲಿ ಯಶ್ ಜೊತೆಗೆ ಹಾಟ್ ದೃಶ್ಯದಲ್ಲಿ ಕಾಣಿಸಿಕೊಂಡಿರುವ ವಿದೇಶಿ ನಟಿ ನಟೇಲಿ ಬರ್ನ್ ಎಂದುಕೊಂಡಿದ್ದರು. ಆದರೆ ಇದನ್ನು ಗಮನಿಸಿದ 'ಟಾಕ್ಸಿಕ್' ಸಿನಿಮಾದ ನಿರ್ದೇಶಕಿ ಗೀತು ಮೋಹನ್‌ದಾಸ್, 'ಟಾಕ್ಸಿಕ್' ಸಿನಿಮಾ ಟೀಸರ್‌ನಲ್ಲಿ ಇದ್ದ ನಟಿಯನ್ನು ಸಾಮಾಜಿಕ ಜಾಲತಾಣದ ಮೂಲಕ ಪರಿಚಯಿಸಿದ್ದಾರೆ. ಟೀಸರ್‌ನಲ್ಲಿರುವುದು ನಟೇಲಿ ಬರ್ನ್ ಅಲ್ಲ ಬದಲಿಗೆ ನಟಿ ಬಿಯಾತ್ರೀಜ್ ಟಾಫೆಬಾಕ್. ನಟಿಯ ಚಿತ್ರ ಹಂಚಿಕೊಂಡಿರುವ ಗೀತು ಮೋಹನ್‌ದಾಸ್, 'ಈಕೆಯೇ ನನ್ನ ಸಿಮೆಟ್ರಿ (ಸ್ಮಶಾನ)ದ ಹುಡುಗಿ' ಎಂದಿದ್ದಾರೆ. ಅವರ ಇನ್‌ಸ್ಟಾಗ್ರಾಂ ಖಾತೆಯನ್ನು ಸಹ ಗೀತು ಮೋಹನ್ ದಾಸ್ ಹಂಚಿಕೊಂಡಿದ್ದಾರೆ.

# ತೀವ್ರವಾಗಿ ಕುಸಿದ 'ದಿ ರಾಜಾ ಸಾಬ್' ಸಿನಿಮಾ ಕಲೆಕ್ಷನ್

**ಇದು ಹಾರರ್ ಸಿನಿಮಾ**



ಪ್ರಭಾಸ್ ಜತೆ ಸ್ಟಾರ್ ಕಲಾವಿದರು ನಟಿಸಿದ್ದರೂ ಕೂಡ 'ದಿ ರಾಜಾ ಸಾಬ್' ಚಿತ್ರದ ಕಲೆಕ್ಷನ್ 2ನೇ ದಿನ ಕಡಿಮೆ ಆಗಿದೆ. ಪ್ರಭಾಸ್ ಅಭಿಮಾನಿಗಳು 'ದಿ ರಾಜಾ ಸಾಬ್' ಸಿನಿಮಾ ಮೇಲೆ ಸಾಕಷ್ಟು ನಿರೀಕ್ಷೆ ಇಟ್ಟುಕೊಂಡಿದ್ದರು. ಆದರೆ ಆ ನಿರೀಕ್ಷೆಗೆ ತಕ್ಕಂತೆ ಸಿನಿಮಾ ಮೂಡಿಬಂದಿಲ್ಲ. ಬಾಕ್ಸ್ ಆಫೀಸ್‌ನಲ್ಲಿ ಕೇವಲ 2ನೇ ದಿನಕ್ಕೆ ಕಲೆಕ್ಷನ್ ಕುಸಿತ ಕಂಡಿರುವುದು ಈ ಮಾತಿಗೆ ಸಾಕ್ಷಿ. ಇದು ಹಾರರ್ ಸಿನಿಮಾ. ಇದೇ ಮೊದಲ ಬಾರಿಗೆ ಪ್ರಭಾಸ್ ಅವರು ಹಾರರ್ ಸಿನಿಮಾ ಮಾಡಿದ್ದಾರೆ. ಆ ಕಾರಣದಿಂದಲೂ ಹೈಪ್ ಇತ್ತು. ಆದರೆ ಪ್ರೇಕ್ಷಕರಿಗೆ ಈ ಸಿನಿಮಾ ಅಷ್ಟೇನೂ ಇಷ್ಟ ಆಗಿಲ್ಲ. ಆದ್ದರಿಂದ 2ನೇ ದಿನವೇ ಕಲೆಕ್ಷನ್ ಕುಸಿದಿದೆ. ಮುಂದಿನ ದಿನಗಳಲ್ಲಿ 'ದಿ ರಾಜಾ ಸಾಬ್' ಸಿನಿಮಾದ ಬಾಕ್ಸ್ ಆಫೀಸ್ ಗಳಿಕೆ ಇನ್ನಷ್ಟು ಕಡಿಮೆ ಆಗಲಿದೆ. ಪ್ರಭಾಸ್ ಅವರಿಗೆ ಇರುವ ಫ್ಯಾನ್ ಫಾಲೋಯಿಂಗ್ ದೊಡ್ಡದು. ಪ್ಯಾನ್ ಇಂಡಿಯಾ ಮಟ್ಟದಲ್ಲಿ ಅವರು ಫೇಮಸ್ ಆಗಿದ್ದಾರೆ. ಹಾಗಾಗಿ ಮೊದಲ ದಿನ ಅವರ ಎಲ್ಲಾ ಸಿನಿಮಾಗಳು ಒಳ್ಳೆಯ ಓಪನಿಂಗ್ ಪಡೆಯುತ್ತವೆ. 'ದಿ ರಾಜಾ ಸಾಬ್' ಸಿನಿಮಾದ ವಿಚಾರದಲ್ಲೂ ಹಾಗೆಯೇ ಆಯಿತು. ಪ್ರೀಮಿಯರ್ ಶೋ ಮತ್ತು ಮೊದಲ ದಿನದ ಶೋಗಳು ಹೌಸ್‌ಫುಲ್ ಆದವು. 2ನೇ ದಿನ ಹವಾ ತಗ್ಗಿತು. 'ದಿ ರಾಜಾ ಸಾಬ್' ಸಿನಿಮಾಗೆ ಪ್ರೀಮಿಯರ್ ಶೋನಿಂದ 9.15 ಕೋಟಿ ರೂಪಾಯಿ ಕಲೆಕ್ಷನ್ ಆಯಿತು. ಮೊದಲ ದಿನ ಅಭಿಮಾನಿಗಳು ಮುಗಿಬಿದ್ದು ಸಿನಿಮಾ ನೋಡಿದ್ದರಿಂದ 53.75 ಕೋಟಿ ರೂಪಾಯಿ ಕಲೆಕ್ಷನ್ ಆಯಿತು.

# ಭಾರತ ತಂಡದಿಂದ ಹೊರಬಿದ್ದ ರಿಷಭ್ ಪಂತ್: ಯುವ ಆಟಗಾರ ಆಯ್ಕೆ



ಭಾರತ ಮತ್ತು ನ್ಯೂಝಿಲೆಂಡ್ ನಡುವಣ ಮೂರು ಪಂದ್ಯಗಳ ಏಕದಿನ ಸರಣಿಯ ಆರಂಭಕ್ಕೂ ಮುನ್ನ ಟೀಮ್ ಇಂಡಿಯಾಗೆ ಆಘಾತ ಎದುರಾಗಿದೆ. ತಂಡದ ಪ್ರಮುಖ ಆಟಗಾರ ರಿಷಭ್ ಪಂತ್ ಗಾಯಗೊಂಡು ಸರಣಿಯಿಂದ ಹೊರಬಿದ್ದಿದ್ದಾರೆ. ಅವರ ಬದಲಿಗೆ ಯುವ ಆಟಗಾರನಿಗೆ ತಂಡಕ್ಕೆ ಬುಲಾವ್ ನೀಡಲಾಗಿದೆ.

ಭಾರತ ಮತ್ತು ನ್ಯೂಝಿಲೆಂಡ್ ನಡುವಣ ಮೂರು ಪಂದ್ಯಗಳ ಏಕದಿನ ಸರಣಿಯು ಶುರುವಾಗಲಿದೆ. ಈ ಸರಣಿಯಿಂದ ಟೀಮ್ ಇಂಡಿಯಾದ ವಿಕೆಟ್ ಕೀಪರ್ ಬ್ಯಾಟರ್ ರಿಷಭ್ ಪಂತ್ ಹೊರಬಿದ್ದಿದ್ದಾರೆ.

ವಡೋದರಾದ ಬಿಸಿಎ ಕ್ರೀಡಾಂಗಣದಲ್ಲಿ ಮಧ್ಯಾಹ್ನ ನಡೆದ ಭಾರತ ತಂಡದ ಅಭ್ಯಾಸ ಅವಧಿಯಲ್ಲಿ ನೆಟ್‌ನಲ್ಲಿ ಬ್ಯಾಟಿಂಗ್ ಮಾಡುವಾಗ ವಿಕೆಟ್ ಕೀಪರ್ ರಿಷಭ್ ಪಂತ್ ಅವರ ಬಲ ಪಾರ್ಶ್ವದ ಹೊಟ್ಟೆಯ ಭಾಗಕ್ಕೆ ಚೆಂಡು ತಗುಲಿ ಗಾಯವಾಗಿದೆ. ಇದರಿಂದ ಅಸ್ವಸ್ಥತೆಗೊಳಗಾದ ಅವರನ್ನು ಆಸ್ಪತ್ರೆಗೆ ಕರೆದೊಯ್ಯಲಾಗಿತ್ತು.

ವೈದ್ಯಕೀಯ ಪರೀಕ್ಷೆ ವೇಳೆ ರಿಷಭ್ ಪಂತ್ ಅವರಿಗೆ ಪಾರ್ಶ್ವಸ್ನಾಯು ನೋವು (ಓಬ್ಲಿಕ್ ಮಸಲ್ ಟಿಯರ್) ಇರುವುದು ಪತ್ತೆಯಾಗಿದ್ದು, ವೈದ್ಯರು ವಿಶ್ರಾಂತಿ ಸೂಚಿಸಿದ್ದಾರೆ. ಹೀಗಾಗಿ ಅವರನ್ನು ನ್ಯೂಝಿಲೆಂಡ್ ವಿರುದ್ಧದ ಮೂರು ಪಂದ್ಯಗಳ ಏಕದಿನ ಸರಣಿಯಿಂದ ಕೈ ಬಿಡಲಾಗಿದೆ.

ಇನ್ನು ರಿಷಭ್ ಪಂತ್ ಬದಲಿಯಾಗಿ ಯುವ ವಿಕೆಟ್ ಕೀಪರ್ ಬ್ಯಾಟರ್ ಧ್ರುವ್ ಜುರೆಲ್ ಅವರನ್ನು ಭಾರತ ತಂಡಕ್ಕೆ ಆಯ್ಕೆ ಮಾಡಲಾಗಿದೆ. ಸದ್ಯ ವಿಜಯ ಹಝಾರೆ ಟೂರ್ನಿಯಲ್ಲಿ ಉತ್ತರ ಪ್ರದೇಶ್ ಪರ ಕಣಕ್ಕಿಳಿಯುತ್ತಿರುವ ಧ್ರುವ್ ಜುರೆಲ್ ಶ್ರೀಘ್ರದಲ್ಲೇ ಭಾರತ ತಂಡವನ್ನು ಕೂಡಿಕೊಳ್ಳಲಿದ್ದಾರೆ.

**ಭಾರತ ಏಕದಿನ ತಂಡ:** ಶುಭ್‌ಮನ್ ಗಿಲ್ (ನಾಯಕ), ರೋಹಿತ್ ಶರ್ಮಾ, ವಿರಾಟ್ ಕೊಹ್ಲಿ, ಕೆಎಲ್ ರಾಹುಲ್ (ವಿಕೆಟ್ ಕೀಪರ್), ಶ್ರೇಯಸ್ ಅಯ್ಯರ್, ವಾಷಿಂಗ್ಟನ್ ಸುಂದರ್, ರವೀಂದ್ರ ಜಡೇಜಾ, ಮೊಹಮ್ಮದ್ ಸಿರಾಜ್, ಹರ್ಷಿತ್ ರಾಣಾ, ಪ್ರಸಿದ್ಧ್ ಕೃಷ್ಣ, ಅರ್ಷದೀಪ್ ಸಿಂಗ್, ಕುಲ್ದೀಪ್ ಯಾದವ್, ನಿತೀಶ್ ಕುಮಾರ್ ರೆಡ್ಡಿ, ಯಶಸ್ವಿ ಜೈಸ್ವಾಲ್, ಧ್ರುವ್ ಜುರೆಲ್ (ವಿಕೆಟ್ ಕೀಪರ್).

# ನ್ಯೂಜಿಲೆಂಡ್ ವಿರುದ್ಧ ಭಾರತಕ್ಕೆ 4 ವಿಕೆಟ್‌ಗಳ ಜಯ: 1-0 ಅಂತರದಲ್ಲಿ ಮುನ್ನಡೆ



**ಶತಕದಂಚಿನಲ್ಲಿ ಎಡವಿದ ವಿರಾಟ್**

ವಡೋದರಾದಲ್ಲಿ ನಡೆದ ಭಾರತ ಹಾಗೂ ನ್ಯೂಜಿಲೆಂಡ್ ನಡುವಿನ ಮೂರು ಪಂದ್ಯಗಳ ಏಕದಿನ ಸರಣಿಯ ಮೊದಲ ಪಂದ್ಯವನ್ನು 4 ವಿಕೆಟ್‌ಗಳಿಂದ ಗೆದ್ದುಕೊಳ್ಳುವ ಮೂಲಕ ಆತಿಥೇಯ ಟೀಂ ಇಂಡಿಯಾ ಸರಣಿಯಲ್ಲಿ ಗೆಲುವಿನ ಶುಭಾರಂಭ ಮಾಡಿದೆ. ಸುಮಾರು 15 ವರ್ಷಗಳ ನಂತರ ವಡೋದರಾದಲ್ಲಿ ಏಕದಿನ ಪಂದ್ಯವನ್ನಾಡಿದ ಟೀಮ್ ಇಂಡಿಯಾ ಮತ್ತೊಮ್ಮೆ ವಿರಾಟ್ ಕೊಹ್ಲಿ ಅವರ ಅದ್ಭುತ ಬ್ಯಾಟಿಂಗ್‌ನಿಂದ 301 ರನ್‌ಗಳ ಗುರಿಯನ್ನು ಇನ್ನೊಂದು ಓವರ್ ಬಾಕಿ ಇರುವಂತೆಯೇ ಬೆನ್ನಟ್ಟಿ ಸರಣಿಯಲ್ಲಿ 1-0 ಮುನ್ನಡೆ ಸಾಧಿಸಿತು. ಆದಾಗ್ಯೂ ಕೊಹ್ಲಿ ಕೇವಲ 7 ರನ್‌ಗಳಿಂದ ಶತಕ ವಂಚಿತರಾದರೂ ತಂಡದ ಗೆಲುವಿಗೆ ಅಡಿಪಾಯ ಹಾಕಿದರು.

**ಮೊದಲ ವಿಕೆಟ್ ಗೆ 117 ರನ್‌ಗಳ ಜೊತೆಯಾಟ:** ಮೊದಲು ಬ್ಯಾಟಿಂಗ್ ಮಾಡಿದ ನ್ಯೂಜಿಲೆಂಡ್ 50 ಓವರ್‌ಗಳಲ್ಲಿ 8 ವಿಕೆಟ್‌ಗಳ ನಷ್ಟಕ್ಕೆ 300 ರನ್ ಗಳಿಸಿತು. ತಂಡಕ್ಕೆ ಉತ್ತಮ ಆರಂಭ ಒದಗಿಸಿಕೊಟ್ಟ ಆರಂಭಿಕ ಜೋಡಿ ಹೆನ್ರಿ ನಿಕೋಲ್ಸ್ ಮತ್ತು ಡೆವೊನ್ ಕಾನ್ವೇ 21 ಓವರ್‌ಗಳಲ್ಲಿ 117 ರನ್‌ಗಳ ಜೊತೆಯಾಟ ಹಂಚಿಕೊಂಡರು. ಇದರ ಜೊತೆಗೆ ಇಬ್ಬರೂ ಅರ್ಧಶತಕವನ್ನು ಪೂರೈಸಿದರು. ಹರ್ಷಿತ್ ರಾಣಾ ಈ ಪಾಲುದಾರಿಕೆಯನ್ನು ಮುರಿಯುವಲ್ಲಿ ಯಶಸ್ವಿಯಾದರು. ಈ ಇಬ್ಬರ ವಿಕೆಟ್ ಪತನದ ಬಳಿಕ ಒಂದು ತುದಿಯಲ್ಲಿ ಸ್ಥಿರವಾಗಿ ನಿಂತ ಡ್ಯಾರಿಲ್ ಮಿಚೆಲ್ ಕೂಡ ಭಾರತದ ವಿರುದ್ಧ ಮತ್ತೊಂದು ಅರ್ಧಶತಕ ಪೂರೈಸಿದರು.


ಆದಾಗ್ಯೂ ಶತಕದಂಚಿನಲ್ಲಿ ಎಡವಿದ ಮಿಚೆಲ್ 84 ರನ್ ಗಳಿಸಿ ಔಟಾದರು. ಕೊನೆಯ ಓವರ್‌ನಲ್ಲಿ, ಟೈಲೆಂಡರ್‌ಗಳು 14 ರನ್ ಗಳಿಸಿ ತಂಡದ ಮೊತ್ತವನ್ನು 300 ರನ್‌ಗಳಿಗೆ ಕೊಂಡೊಯ್ದರು. ಭಾರತ ಪರ ಸಿರಾಜ್, ಹರ್ಷಿತ್ ಮತ್ತು ಪ್ರಸಿದ್ ಕೃಷ್ಣ ತಲಾ ಎರಡು ವಿಕೆಟ್ ಪಡೆದರು.

ಆದಾಗ್ಯೂ, ಅತ್ಯಂತ ಪರಿಣಾಮಕಾರಿಯಾಗಿ ಬೌಲಿಂಗ್ ಮಾಡಿದ ಸಿರಾಜ್ ಎಂಟು ಓವರ್‌ಗಳಲ್ಲಿ ಕೇವಲ 40 ರನ್ ನೀಡಿ ಎರಡು ವಿಕೆಟ್‌ಗಳನ್ನು ಪಡೆದರು.

**ಶತಕದಂಚಿನಲ್ಲಿ ಎಡವಿದ ವಿರಾಟ್, ಭಾರತಕ್ಕೆ ಗೆಲುವು:** ಗಿಲ್ ವಿಕೆಟ್ ಬಳಿಕವೂ ತಮ್ಮ ಎಂದಿನ ಆಟವನ್ನು ಮುಂದುವರೆಸಿದ ಕೊಹ್ಲಿ ಅರ್ಧಶತಕವನ್ನು ಪೂರೈಸಿದರು. ಕೊಹ್ಲಿ ಜೊತೆಗೂಡಿದ ಶ್ರೇಯಸ್ ಅಯ್ಯರ್ ತಂಡವನ್ನು 200 ರನ್‌ಗಳ ಗಡಿ ದಾಟಿಸಿದರು. ಕೊಹ್ಲಿಯ ಶತಕ ಮತ್ತು ಟೀಮ್ ಇಂಡಿಯಾದ ಗೆಲುವು ಖಚಿತವೆಂದು ತೋರುತ್ತಿದ್ದ ಸಮಯದಲ್ಲೇ ತಂಡದ ವಿಕೆಟ್ ಪತನ ಶುರುವಾಯಿತು. ಇದಕ್ಕೆ ನಾಂದಿ ಹಾಡಿದ ವಿರಾಟ್ ಕೊಹ್ಲಿ 93 ರನ್‌ಗಳಿಸಿ ಜೇಮಿಸನ್‌ಗೆ ವಿಕೆಟ್ ಒಪ್ಪಿಸಿದರು. ಅದೇ ಓವರ್‌ನಲ್ಲಿ ಜಡೇಜಾ ಔಟಾದರೆ, ಅರ್ಧಶತಕದಂಚಿನಲ್ಲಿದ್ದ ಶ್ರೇಯಸ್ ಕೂಡ ಜೇಮಿಸನ್‌ಗೆ ಬಲಿಯಾದರು. ಸತತ ವಿಕೆಟ್‌ಗಳ ಪತನದಿಂದ ಟೀಂ ಇಂಡಿಯಾ ಸಂಕಷ್ಟದಲ್ಲಿ ಸಿಲುಕಿದಂತೆ ಕಂಡುಬಂದಿತು. ಆದಾಗ್ಯೂ, ಕೆಎಲ್ ರಾಹುಲ್ ಮತ್ತು ಹರ್ಷಿತ್ ರಾಣಾ 37 ರನ್‌ಗಳ ಜೊತೆಯಾಟವನ್ನಾಡುವ ಮೂಲಕ ತಂಡವನ್ನು ಗೆಲುವಿನ ಸಮೀಪಕ್ಕೆ ತಂದರು. ನಂತರ ರಾಹುಲ್ ಅಂತಿಮವಾಗಿ ಸಿಕ್ಸ್ ಬಾರಿಸಿ 49 ಓವರ್‌ಗಳಲ್ಲಿ ತಂಡವನ್ನು ಗೆಲುವಿನತ್ತ ಕೊಂಡೊಯ್ದರು.

**28000 ರನ್ ಪೂರೈಸಿದ ಕೊಹ್ಲಿ:** ಈ ಗುರಿ ಬೆನ್ನಟ್ಟಿದ ಭಾರತಕ್ಕೆ ಸಾಧಾರಣ ಆರಂಭ ಸಿಕ್ಕಿತು. ಮಾಜಿ ನಾಯಕ ರೋಹಿತ್ ಶರ್ಮಾ ಎರಡು ಸಿಕ್ಸರ್ ಮತ್ತು ಬೌಂಡರಿ 26 ರನ್‌ಗಳಿಗೆ ವಿಕೆಟ್ ಒಪ್ಪಿಸಿದರು. ಇತ್ತ ನಾಯಕ ಶುಭ್‌ಮನ್ ಗಿಲ್ ರನ್ ಗಳಿಸಲು ಹೆಣಗಾಡುತ್ತಿದ್ದ ಸಮಯದಲ್ಲಿ ಕ್ರೀಸ್‌ಗೆ ಬಂದ ವಿರಾಟ್ ಕೊಹ್ಲಿ ತಕ್ಷಣವೇ ಬೌಂಡರಿಗಳನ್ನು ಹೊಡೆಯಲು ಪ್ರಾರಂಭಿಸಿ ಅಂತರರಾಷ್ಟ್ರೀಯ ಕ್ರಿಕೆಟ್‌ನಲ್ಲಿ 28,000 ರನ್‌ಗಳನ್ನು ಪೂರ್ಣಗೊಳಿಸಿದರು. ಮಾತ್ರವಲ್ಲದೆ ಗಿಲ್ ಜೊತೆಗೆ 118 ರನ್‌ಗಳ ಜೊತೆಯಾಟವನ್ನು ಹಂಚಿಕೊಂಡರು. ಆದರೆ ನಾಯಕ ಶುಭ್ ಮನ್ ಗಿಲ್ ಅರ್ಧಶತಕ ಬಾರಿಸಿ ಔಟಾಗುವ ಮೂಲಕ ಈ ಜೊತೆಯಾಟ ಅಂತ್ಯವಾಯಿತು.

# ಆಮೆಗತಿಯ ಬ್ಯಾಟಿಂಗ್; ಬಾಬರ್-ರಿಜ್ವಾನ್ ನಡುವೆ ಜಿದ್ದಾಜಿದ್ದಿನ ಪೈಪೋಟಿ




ಆಸ್ಟ್ರೇಲಿಯಾದ ಬಿಗ್ ಬ್ಯಾಷ್ ಲೀಗ್‌ನಲ್ಲಿ ಪಾಕಿಸ್ತಾನಿ ಆಟಗಾರರ ಕಳಪೆ ಪ್ರದರ್ಶನ ಮುಂದುವರೆದಿದೆ. ಬಾಬರ್ ಆಝಂ ಮತ್ತು ಮೊಹಮ್ಮದ್ ರಿಜ್ವಾನ್‌ರಂತಹ ಸ್ಟಾರ್ ಆಟಗಾರರ ಪ್ರದರ್ಶನ ತೀರ ಕಳಪೆಯಾಗಿದೆ. ಟಿ20 ಕ್ರಿಕೆಟ್‌ನಲ್ಲಿ, ಈ ಇಬ್ಬರು ಬ್ಯಾಟ್ಸ್‌ಮನ್‌ಗಳು ತಮ್ಮ ಏಕದಿನ ಮತ್ತು ಟೆಸ್ಟ್ ತರಹದ ಬ್ಯಾಟಿಂಗ್‌ನಿಂದ ಎಲ್ಲರನ್ನೂ ಆಶ್ಚರ್ಯಚಕಿತಗೊಳಿಸಿದ್ದಾರೆ. ಇದಕ್ಕೆ ಇತ್ತೀಚಿನ ಉದಾಹರಣೆ ಸಿಡ್ನಿ ಸಿಕ್ಸರ್ಸ್ ವರ್ಸಸ್ ಹೋಬಾರ್ಟ್ ಹರಿಕೇನ್ಸ್ ಪಂದ್ಯದಲ್ಲಿ ಕಂಡುಬಂದಿತು. ಜನವರಿ 11 ರ ಭಾನುವಾರದಂದು ನಡೆದ ಈ ಪಂದ್ಯ ಕೇವಲ ಐದು ಓವರ್ ಮಾತ್ರ ನಡೆಯಿತು. ಮೊದಲು ಬ್ಯಾಟಿಂಗ್ ಮಾಡಿದ ಸಿಡ್ನಿ ಪರ ಬಾಬರ್ ಮತ್ತು ಸ್ಟೀವ್ ಸ್ಮಿತ್ ಇನ್ನಿಂಗ್ಸ್ ಆರಂಭಿಸಿದರು. ಆದಾಗ್ಯೂ, ಪವರ್‌ಪ್ಲೇ ಮುಗಿಯುವ ಮೊದಲೇ ಮಳೆ ಬಂದ ಕಾರಣ ಪಂದ್ಯವನ್ನು ಸ್ಥಗಿತಗೊಳಿಸಲಾಯಿತು. ಆದಾಗ್ಯೂ ಮಳೆಯಿಂದ ಪಂದ್ಯ ನಿಲ್ಲುವುದಕ್ಕೂ ಮುನ್ನ ಸಿಡ್ನಿ ತಂಡ ಐದು ಓವರ್‌ಗಳಲ್ಲಿ ವಿಕೆಟ್ ಕಳೆದುಕೊಳ್ಳದೆ 32 ರನ್ ಗಳಿಸಿತ್ತು. ಈ ಪಂದ್ಯದಲ್ಲೂ ನಿದಾನಗತಿಯ ಬ್ಯಾಟಿಂಗ್ ಮಾಡಿದ ಬಾಬರ್ ಆಝಂ 14 ಎಸೆತಗಳಲ್ಲಿ ಒಂದು ಬೌಂಡರಿ ಸೇರಿದಂತೆ ಕೇವಲ 9 ರನ್ ಕಲೆಹಾಕಿದರು. ಬಾಬರ್ ಈ ಲೀಗ್ ಆರಂಭದಿಂದಲೂ ಆಡುತ್ತಿದ್ದು, ಆಕ್ರಮಣಕಾರಿಯಾಗಿ ಬ್ಯಾಟಿಂಗ್ ಮಾಡುವಲ್ಲಿ ವಿಫಲರಾಗಿದ್ದಾರೆ. ಇದಕ್ಕೆ ವ್ಯತಿರಿಕ್ತವಾಗಿ, ಮೂರು ದಿನಗಳ ಹಿಂದೆ ಟೆಸ್ಟ್ ಸರಣಿಯಿಂದ ಹಿಂತಿರುಗಿದ ಸ್ಟೀವ್ ಸ್ಮಿತ್, ಬಾಬರ್‌ಗಿಂತಲೂ ಆಕ್ರಮಣಕಾರಿಯಾಗಿ ಬ್ಯಾಟಿಂಗ್ ಮಾಡಿ 16 ಎಸೆತಗಳಲ್ಲಿ 19 ರನ್ ಗಳಿಸಿದರು. ಮೇಲೆ ಹೇಳಿದಂತೆ ಬಾಬರ್ ಈ ಪಂದ್ಯದಲ್ಲಿ ಮಾತ್ರವಲ್ಲ, ಬದಲಿಗೆ ಪಂದ್ಯಾವಳಿಯ ಉದ್ದಕ್ಕೂ ರನ್ ಗಳಿಸಲು ಹೆಣಗಾಡಿದ್ದಾರೆ.

# 2 ಶತಕಗಳೊಂದಿಗೆ ಹೊಸ ಇತಿಹಾಸ ಬರೆದ ರಯಾನ್ ರಿಕೆಲ್ಟನ್

**60 ಎಸೆತ 9 ಸಿಕ್ಸ್ ಹಾಗೂ 8 ಫೋರ್**





ಸೌತ್ ಆಫ್ರಿಕಾ ಟಿ20 ಲೀಗ್‌ನ ಸೀಸನ್‌ವೊಂದರಲ್ಲಿ ಎರಡು ಶತಕಗಳನ್ನು ಬಾರಿಸುವ ಮೂಲಕ ರಯಾನ್ ರಿಕೆಲ್ಟನ್ ಹೊಸ ಇತಿಹಾಸ ನಿರ್ಮಿಸಿದ್ದಾರೆ. ಜೋಹಾನ್ಸ್ ಬರ್ಗ್‌ನಲ್ಲಿ ನಡೆದ ಈ ಟೂರ್ನಿಯ 20ನೇ ಪಂದ್ಯದಲ್ಲಿ ಎಂಐ ಕೇಪ್ ಟೌನ್ ಹಾಗೂ ಜೋಬರ್ಗ್ ಸೂಪರ್ ಕಿಂಗ್ಸ್ ತಂಡಗಳು ಮುಖಾಮುಖಿಯಾಗಿದ್ದವು. ಈ ಮ್ಯಾಚ್‌ನಲ್ಲಿ ಟಾಸ್ ಗೆದ್ದು ಮೊದಲು ಬ್ಯಾಟ್ ಮಾಡಿದ ಎಂಐ ಕೇಪ್‌ಟೌನ್ ಪರ ಆರಂಭಿಕನಾಗಿ ಕಣಕ್ಕಿಳಿದ ರಯಾನ್ ರಿಕೆಲ್ಟನ್ 60 ಎಸೆತಗಳಲ್ಲಿ 9 ಸಿಕ್ಸ್ ಹಾಗೂ 8 ಫೋರ್‌ಗಳೊಂದಿಗೆ ಅಜೇಯ 113 ರನ್ ಬಾರಿಸಿದರು. ಈ ಶತಕದ ನೆರವಿನೊಂದಿಗೆ ಎಂಐ ಕೇಪ್‌ಟೌನ್ ತಂಡವು 20 ಓವರ್‌ಗಳಲ್ಲಿ 234 ರನ್ ಕಲೆಹಾಕಿತು. ಈ ಗುರಿಯನ್ನು ಬೆನ್ನತ್ತಿದ ಜೋಬರ್ಗ್ ಸೂಪರ್ ಕಿಂಗ್ಸ್ ತಂಡವು 20 ಓವರ್‌ಗಳಲ್ಲಿ 5 ವಿಕೆಟ್ ಕಳೆದುಕೊಂಡು 198 ರನ್‌ಗಳಿಸಲಷ್ಟೇ ಶಕ್ತರಾದರು. ಈ ಮೂಲಕ ಎಂಐ ಕೇಪ್‌ಟೌನ್ ತಂಡವು 36 ರನ್‌ಗಳ ಜಯ ಸಾಧಿಸಿದೆ.

ಇನ್ನು ಈ ಪಂದ್ಯದಲ್ಲಿ ಸೆಂಚುರಿ ಸಿಡಿಸುವ ಮೂಲಕ ರಯಾನ್ ರಿಕೆಲ್ಟನ್ ಸೌತ್ ಆಫ್ರಿಕಾ ಟಿ20 ಲೀಗ್‌ನ ಸೀಸನ್‌ವೊಂದರಲ್ಲಿ 2 ಶತಕ ಬಾರಿಸಿದ ಮೊದಲ ಬ್ಯಾಟರ್ ಎನಿಸಿಕೊಂಡಿದ್ದಾರೆ. ಇದಕ್ಕೂ ಮುನ್ನ ಡರ್ಬನ್ ಸೂಪರ್ ಜೈಂಟ್ಸ್ ವಿರುದ್ಧದ ಪಂದ್ಯದಲ್ಲಿ 113 ರನ್‌ಗಳ ಇನಿಂಗ್ಸ್ ಆಡಿದ್ದರು. ಈ ಮೂಲಕ ರಯಾನ್ ರಿಕೆಲ್ಟನ್ ಸೌತ್ ಆಫ್ರಿಕಾ ಟಿ20 ಲೀಗ್ ಸೀಸನ್‌ವೊಂದರಲ್ಲಿ 2 ಶತಕ ಬಾರಿಸಿದ ಮೊದಲ ಬ್ಯಾಟರ್ ಎಂಬ ದಾಖಲೆಯನ್ನು ತಮ್ಮದಾಗಿಸಿಕೊಂಡಿದ್ದಾರೆ.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru - 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru - 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news

ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966